ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 26 ಶುಕ್ರವಾರ 2023

ಸಂಪುಟ: 44 | ಸಂಚಿಕೆ: 40 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*

₹4

ಲೋಕಸಭಾ ಚುನಾವಣೆ ಬಳಿಕ ಕಾಂಗ್ರೆಸ್ ಸರ್ಕಾರದ ಭವಿಷ್ಯ ಏನು ಬೇಕಾದರೂ ಆಗಬಹುದು

● ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಗಂಭೀರ ಹೇಳಿಕೆ ● ಬೆಂಗಳೂರು ಅರಮನೆ ಮೈದಾನದಲ್ಲಿ 'ಜೆಡಿಎಸ್ ಆತ್ಮಾವಲೋಕನ ಸಭೆ' ● ಜೆಡಿಎಸ್ ಹಿನ್ನಡೆಗೆ ಕಾಂಗ್ರೆಸ್ ಕಾರಣ; ಬಿಜೆಪಿ ಜೊತೆ ಹೋಗ್ತಾರೆ ಎಂಬ ಅಪಪ್ರಚಾರ ● ಮ್ಯಾಚ್ ಫಿಕ್ಸಿಂಗ್ ಮಾಡಿಕೊಂಡವರು ನಿಮ್ಮ ದಾರಿ ನೀವು ನೋಡಿಕೊಳ್ಳಿ; ನಮಗೆ ಪಕ್ಷ ನಿಷ್ಠರು ಬೇಕು!



ಬೆಂಗಳೂರು, ಮೇ 25(ಕೆಎಂಶಿ)– ಲೋಕಸಭಾ ಚುನಾವಣೆ ಬಳಿಕ ಕಾಂಗ್ರೆಸ್ ಸರ್ಕಾರದ ಭವಿಷ್ಯ ಏನು ಬೇಕಾದರೂ ಆಗಬಹುದು ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.

ಕುಮಾರಸ್ವಾಮಿ ನೀಡಿದ ಹೇಳಿಕೆ ಬೆನ್ನಲ್ಲೇ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸುದ್ದಿಗಾರರೊಂದಿಗೆ ಮಾತನಾಡಿ, ಮುಂದಿನ ನಾಲ್ಕೈದು ತಿಂಗಳಲ್ಲೇ ರಾಜ್ಯ ರಾಜಕೀಯ ಚಿತ್ರಣವೇ ಬದಲಾಗುತ್ತದೆ ನೋಡಿ ಎಂದು ● 9ನೇ ಪುಟಕ್ಕೆ

ಸುಳ್ಳು ಗ್ಯಾರಂಟಿಗಳ ವಿರುದ್ಧ ಹೋರಾಟ

ಕಾಂಗ್ರೆಸ್ ಸರ್ಕಾರದ ಸುಳ್ಳು ಗ್ಯಾರಂಟಿಗಳ ವಿರುದ್ಧ ಹೋರಾಟ ಮಾಡುವಂತೆ ಜೆಡಿಎಸ್ ಮುಖಂಡರಿಗೆ ಎಚ್.ಡಿ.ಕುಮಾರಸ್ವಾಮಿ ರಣವೀಳ್ಯ ನೀಡಿದ್ದಾರೆ. ಐದು ಗ್ಯಾರಂಟಿ ಜಾರಿ ಮಾಡುತ್ತೇವೆ ಎಂದು ಭರವಸೆ ನೀಡಿದ್ದ ಸರಕಾರ ಈಗ ಷರತ್ತು ಅನ್ವಯ ಅನ್ನುತ್ತಿದೆ. ನಂಗೂ ಫ್ರೀ ನಿಂಗೂ ಫ್ರೀ ಎಂದವರು ಈಗ ಕಂಡಿಷನ್ ಬಗ್ಗೆ ಮಾತನಾಡುತ್ತಿದ್ದಾರೆ. ● 9ನೇ ಪುಟಕ್ಕೆ

ಶನಿವಾರ ಇಲ್ಲವೇ ಭಾನುವಾರ ಸಂಪುಟ ವಿಸ್ತರಣೆ

● ಸಚಿವರ ಪಟ್ಟಿ ಅಂತಿಮ ಸಂಬಂಧ ವರಿಷ್ಠರೊಂದಿಗೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಚರ್ಚೆ ● ಇಂದು ಪಟ್ಟಿಯೊಂದಿಗೆ ಬೆಂಗಳೂರಿಗೆ ಮರಳುವ ಸಾಧ್ಯತೆ

ಬೆಂಗಳೂರು, ಮೇ 25(ಕೆಎಂಶಿ)– ನೂತನ ಸಚಿವರ ಪಟ್ಟಿ ಬಹುತೇಕ ಪೂರ್ಣಗೊಂಡಿದ್ದು, ಶನಿವಾರ ಇಲ್ಲವೇ ಭಾನುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂತ್ರಿಮಂಡಲ ವಿಸ್ತರಿಸಲಿದ್ದಾರೆ.

ಸಂಪುಟ ವಿಸ್ತರಣೆ ಸಂಬಂಧ ದೆಹಲಿಗೆ ಆಗಮಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಳೆದ ಎರಡು ದಿನದಿಂದ ದೆಹಲಿಯಲ್ಲೇ ಬೀಡು ಬಿಟ್ಟಿದ್ದು, ನಾಳೆ (ಶುಕ್ರವಾರ) ನೂತನ ಸಚಿವರ ಪಟ್ಟಿಯೊಂದಿಗೆ ಬೆಂಗಳೂರಿಗೆ ಹಿಂತಿರುಗಲಿದ್ದಾರೆ. ಇದೇ ವೇಳೆ ಖಾತೆ ಹಂಚಿಕೆಯ ವಿಚಾರ ಕೂಡ




ಅಂತಿಮವಾಗಲಿದೆ ಎಂದು ತಿಳಿದು ಬಂದಿದೆ. ಈ ಸಂಬಂಧ ಇಂದು ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಶನಿವಾರ ಇಲ್ಲವೇ ಭಾನುವಾರ ಮಂತ್ರಿಮಂಡಲ ವಿಸ್ತರಿಸುವುದಾಗಿ ತಿಳಿಸಿದರು. ನಾಳೆ ಸಂಜೆ ವೇಳೆಗೆ ಪ್ರಕ್ರಿಯೆ ಪೂರ್ಣಗೊಳ್ಳಲಿದ್ದು, ● 9ನೇ ಪುಟಕ್ಕೆ

22 ಸಂಭವನೀಯ ಸಚಿವರಿವರು...

ಸಂಪುಟ ವಿಸ್ತರಣೆ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿಯಲ್ಲಿ ಬೀಡು ಬಿಟ್ಟಿದ್ದು, ನೂತನ ಸಚಿವರ ಪಟ್ಟಿಗೆ ಹೈಕಮಾಂಡ್‌ನಿಂದ ಅನುಮತಿ ಪಡೆಯುವ ಪ್ರಯತ್ನದಲ್ಲಿದ್ದಾರೆ. ಶನಿವಾರ ಇಲ್ಲವೇ ಭಾನುವಾರ ಸಂಪುಟ ವಿಸ್ತರಣೆ ನಡೆಯಲಿದ್ದು, ಈಗಾಗಲೇ ಕಾಂಗ್ರೆಸ್ ಹೈಕಮಾಂಡ್ 22 ಶಾಸಕರನ್ನು ● 9ನೇ ಪುಟಕ್ಕೆ

ಸಂಸತ್ ಭವನ ಉದ್ಘಾಟನೆಗೆ ಹೋಗುತ್ತೇನೆ; ಹೋಗದೆ ಇರುವುದಕ್ಕೆ ಅದೇನು ಬಿಜೆಪಿ, ಆರೆಸ್ಸೆಸ್ ಕಚೇರಿಯೇ...!

ಮಾಜಿ ಪ್ರಧಾನಿ ದೇವೇಗೌಡರ ತೀಕ್ಷ್ಣ ಪ್ರಶ್ನೆ



ಬೆಂಗಳೂರು: ಸಂಸತ್ ಭವನದ ನೂತನ ಕಟ್ಟಡ ಉದ್ಘಾಟನೆ ಕಾರ್ಯಕ್ರಮಕ್ಕೆ ನಾನು ಹಾಜರಾಗುತ್ತಿದ್ದೇನೆ. ಅದು ದೇಶದ ಆಸ್ತಿ. ಯಾರೊಬ್ಬರ ವೈಯಕ್ತಿಕ ವಿಷಯಕ್ಕೆ ಸಂಬಂಧಿಸಿದ್ದು ಅದಲ್ಲ ಎಂದು ಮಾಜಿ ಪ್ರಧಾನಿಗಳಾದ ಹೆಚ್.ಡಿ.ದೇವೇಗೌಡ ಅವರು ಹೇಳಿದರು. ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದ ಪಕ್ಷದ ಆತ್ಮಾವಲೋಕನ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಮಾಜಿ ಪ್ರಧಾನಮಂತ್ರಿಗಳು, ಅದು ಯಾರ ವೈಯಕ್ತಿಕ ಕಾರ್ಯಕ್ರಮ ಅಲ್ಲ, ದೇಶದ ಕಾರ್ಯಕ್ರಮ ಎಂದರು. ಆ ಭವ್ಯ ಕಟ್ಟಡ ದೇಶದ ಜನರ ತೆರಿಗೆ ಹಣದಿಂದ ನಿರ್ಮಾಣವಾಗಿದೆ. ಅದು ದೇಶಕ್ಕೆ ಸೇರಿದು. ● 6ನೇ ಪುಟಕ್ಕೆ

ಅಂತೂ 8 ತಿಂಗಳ ಬಳಿಕ ಪಾಲಿಕೆ ಸ್ಥಾಯಿ ಸಮಿತಿಗಳ ಅಧ್ಯಕ್ಷರ ಆಯ್ಕೆ

● ಮೂರು ಸಮಿತಿ ಜೆಡಿಎಸ್ ತೆಕ್ಕೆಗೆ ● ಒಂದು ಸ್ಥಾಯಿ ಸಮಿತಿ ಕಾಂಗ್ರೆಸ್ ಪಾಲಿಗೆ

ಮೈಸೂರು,ಮೇ 25(ಎಂಟಿವೈ)– ಮೈಸೂರು ಮಹಾನಗರ ಪಾಲಿಕೆ ಸ್ಥಾಯಿ ಸಮಿತಿಗಳ ಅಧ್ಯಕ್ಷರ ಆಯ್ಕೆ ಕಗ್ಗಂಟು 8 ತಿಂಗಳ ಸುದೀರ್ಘ ಅವಧಿ ಬಳಿಕ ಸುಸೂತ್ರವಾಗಿ ಬಗೆಹರಿದಿದ್ದು, 4 ಸ್ಥಾಯಿ ಸಮಿತಿಗಳಲ್ಲಿ ಮೂರು ಜೆಡಿಎಸ್ ಪಾಲಾದರೆ, ಉಳಿದ ಒಂದು ಸ್ಥಾಯಿ ಸಮಿತಿಯನ್ನು ಬಿಜೆಪಿ–ಜೆಡಿಎಸ್ ಮೈತ್ರಿಕೂಟದಿಂದ ಕಸಿದುಕೊಳ್ಳುವಲ್ಲಿ ಕಾಂಗ್ರೆಸ್ ಯಶಸ್ವಿಯಾಗಿದೆ.

ಮೈಸೂರು ಮಹಾನಗರ ಪಾಲಿಕೆಯ ಇತಿಹಾಸದಲ್ಲಿಯೇ ಇದೇ ಮೊದಲ ಬಾರಿಗೆ ಸ್ಥಾಯಿಸಮಿತಿಗಳಿಗೆ 8 ತಿಂಗಳು ಅಧ್ಯಕ್ಷರಿರಲಿಲ್ಲ. ಪಾಲಿಕೆಯ ಅಧಿಕಾರದ ಗದ್ದುಗೆಯಲ್ಲಿ ಇದೇ ಮೊದಲ ಬಾರಿಗೆ ಮೇಯರ್ ಹಾಗೂ ಉಪಮೇಯರ್ ಹುದ್ದೆ ಬಿಜೆಪಿ ಪಾಲಾಗಿದೆ. ಆದರೂ, ಸ್ಥಾಯಿ ಸಮಿತಿಗಳ ಅಧ್ಯಕ್ಷರ ಆಯ್ಕೆಗೆ ● 6ನೇ ಪುಟಕ್ಕೆ



ಮೈಸೂರು ಮಹಾನಗರ ಪಾಲಿಕೆಯ ವಿವಿಧ ಸ್ಥಾಯಿ ಸಮಿತಿಗಳ ನೂತನ ಅಧ್ಯಕ್ಷರುಗಳನ್ನು ಮೇಯರ್ ಶಿವಕುಮಾರ್, ಉಪಮೇಯರ್ ಡಾ.ರೂಪ ಹಾಗೂ ಇನ್ನಿತರರು ಹೂಗುಚ್ಛ ನೀಡಿ ಅಭಿನಂದಿಸಿದರು.

ಸಭೆ ಕರೆದು ಬಜೆಟ್ ಕುರಿತು ಚರ್ಚಿಸಲಾಗುವುದು

"ಮೈಸೂರು ಮಹಾನಗರ ಪಾಲಿಕೆಯ ನಾಲ್ಕು ಸ್ಥಾಯಿ ಸಮಿತಿಗಳಿಗೆ ಅಧ್ಯಕ್ಷರ ಆಯ್ಕೆ ನಡೆದಿದೆ. ಶೀಘ್ರದಲ್ಲಿಯೇ ನಾಲ್ಕು ಸ್ಥಾಯಿ ಸಮಿತಿಗಳ ಸಭೆ ನಡೆಯಲಿದೆ. ತೆರಿಗೆ ನಿರ್ಧಾರಣೆ, ಹಣಕಾಸು ಮತ್ತು ಅಪೀಲುಗಳ ಸ್ಥಾಯಿ ಸಮಿತಿಯಲ್ಲಿ ಬಜೆಟ್ ಕುರಿತು ಚರ್ಚೆ ನಡೆಯಲಿದೆ. ಬಳಿಕ ಮಾಸಾಂತ್ಯದಲ್ಲಿ ಬಜೆಟ್ ಮಂಡಿಸಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಪಾಲಿಕೆ ಕೌನ್ಸಿಲ್ ಸಭೆಯಲ್ಲಿ ವಿರೋಧ ಪಕ್ಷದ ಸ್ಥಾನವನ್ನು ಯಾರಿಗೆ ನೀಡಬೇಕು ಎಂದು ಇನ್ನೂ ತೀರ್ಮಾನಿಸಿಲ್ಲ. ಈ ಕುರಿತು ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು.

–ಶಿವಕುಮಾರ್, ಮೇಯರ್

ಹಿಂದಿನ ಬಸವರಾಜ ಬೊಮ್ಮಾಯಿ ಸರ್ಕಾರ ಕೊನೆ ಗಳಿಗೆಯಲ್ಲಿ ಅನುಮೋದಿಸಿದ 20 ಸಾವಿರ ಕೋಟಿಯ ಗುತ್ತಿಗೆ ಕಾಮಗಾರಿ



ಬೆಂಗಳೂರು, ಮೇ 25(ಕೆಎಂಶಿ)–ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರದ ಆಡಳಿತದ ಕೊನೆಯ ಅವಧಿಯಲ್ಲಿ ತೆಗೆದುಕೊಂಡ 20 ಸಾವಿರ ಕೋಟಿ ರೂ.ಗೂ ಹೆಚ್ಚು ಗುತ್ತಿಗೆ ಕಾಮಗಾರಿಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ರದ್ದುಪಡಿಸಿದ್ದಾರೆ. ಹಿಂದಿನ ಸರ್ಕಾರದ ಅವಧಿಯಲ್ಲಿ ಅನೇಕ ನೀರಾವರಿ ಕಾಮಗಾರಿಗಳು ಹಣಕಾಸಿನ ಸೂಕ್ತ ಅನುದಾನವಿಲ್ಲದೆ, ಕಾಮಗಾರಿಗಳ ಟೆಂಡರ್‌ಗಳನ್ನು ಕರೆದಿದ್ದು, ಇಲಾಖೆಯ ನಿಗಮಗಳಾದ ವಿಜೆಎನ್‌ಎಲ್, ಕೆಎನ್‌ಎನ್‌ಎಲ್, ಸಿಎನ್‌ಎನ್‌ಎಲ್, ಕೆಬಿಜೆಎನ್‌ಎಲ್, ಇಂಧನ ಮತ್ತು ಲೋಕೋಪಯೋಗಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಜಲ ಜೀವನ್ ಮಿಷನ್ ಕರಾರು ಪತ್ರ ಕೂಡ ಆಗಿರುತ್ತವೆ.

ಹಣಕಾಸು, ಭೂ ಸ್ವಾಧೀನ ತೊಂದರೆಯಿದ್ದರೂ, ಹೊಸದಾಗಿ ತರಾತುರಿಯಲ್ಲಿ ಟೆಂಡರ್ ನಿಯಮ ಗಳನ್ನು ಉಲ್ಲಂಘಿಸಿ ಕರೆದಿರುವ ಟೆಂಡರ್‌ಗಳಿಗೆ ಸುಮಾರು 20 ಸಾವಿರ ಕೋಟಿ ರೂ.ಗಳ ಅನು ಮೋದನೆ ಅಗತ್ಯ ಇರುತ್ತದೆ. ಈ ಕಾಮಗಾರಿಗಳು ಅವೈಜ್ಞಾನಿಕವಾಗಿರುತ್ತವೆ ಎಂಬ ವ್ಯಾಪಕ ದೂರು ಗಳಿವೆ ಕೆಲವು ಕಾಮಗಾರಿಗಳಲ್ಲಿ ಅಕ್ರಮಗಳು ನಡೆದಿದೆ ಎಂಬ ದೂರುಗಳು ಸಹ ಇವೆ. ಇವುಗಳನ್ನು ಸೂಕ್ತವಾಗಿ ಪರಿಶೀಲಿಸಬೇಕಾಗಿರು ವುದರಿಂದ ಮುಂದಿನ ಆದೇಶದವರೆಗೆ ಪ್ರಾರಂಭ ಆಗದಿರುವ ಕಾಮಗಾರಿಗಳನ್ನು ಕೂಡಲೇ ಸ್ಥಗಿತಗೊಳಿಸಲಾಗುವುದು ಹಾಗೂ ಈಗಾಗಲೇ ಕರೆದಿರುವ ಟೆಂಡರ್‌ಗಳನ್ನು ಸ್ಥಗಿತಗೊಳಿಸಲು ಮುಖ್ಯಮಂತ್ರಿಯವರು ಆದೇಶಿಸಿದ್ದಾರೆ.

ಮೈಸೂರು–ಬೆಂಗಳೂರು ಹೈವೇ ರಿಂಗ್ ರೋಡ್ ಜಂಕ್ಷನ್‌ನ ಫ್ಲೈ ಓವರ್ ಪ್ರಸ್ತಾವನೆಗೆ ಶೀಘ್ರವೇ ಅನುಮೋದನೆ

ಅನುಮತಿ ದೊರೆತ ಕೂಡಲೇ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ಕಾಮಗಾರಿ: ಸ್ಥಳ ಪರಿಶೀಲನೆ ನಂತರ ಸಂಸದ ಪ್ರತಾಪ್ ಸಿಂಹ ಮಾಹಿತಿ



ಮೈಸೂರು, ಮೇ 25 (ಆರ್‌ಕೆ)– ವಾಹನಗಳ ಸುಗಮ ಸಂಚಾರಕ್ಕೆ ಮೈಸೂರು –ಬೆಂಗಳೂರು ಹೆದ್ದಾರಿಯ ರಿಂಗ್ ರೋಡ್ ಜಂಕ್ಷನ್‌ನಲ್ಲಿ ನಿರ್ಮಿಸಲು ಉದ್ದೇಶಿಸಿರುವ ಫ್ಲೈ ಓವರ್ ಯೋಜನೆಗೆ ಶೀಘ್ರವೇ ಅನುಮೋದನೆ ದೊರೆಯುವ ವಿಶ್ವಾಸವನ್ನು ಸಂಸದ ಪ್ರತಾಪ್ ಸಿಂಹ ವ್ಯಕ್ತಪಡಿಸಿದ್ದಾರೆ.

ಎಕ್ಸ್‌ಪ್ರೆಸ್‌ವೇ ಸಂಚಾರಕ್ಕೆ ಮುಕ್ತವಾದ ನಂತರ ವಾಹನ ದಟ್ಟಣೆಯಿಂದ ಸಮಸ್ಯೆ ಸೃಷ್ಟಿಯಾಗಿದ್ದ ಮೈಸೂರಿನ ಮಣಿಪಾಲ್ ಆಸ್ಪತ್ರೆ ಬಳಿಯ ಕೆಂಪೇಗೌಡ ಸರ್ಕಲ್‌ಗೆ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ನಮ್ಮ ಸರ್ಕಾರವು ಮೈಸೂರು–ಬೆಂಗಳೂರು ನಡುವೆ ಎಕ್ಸ್‌ಪ್ರೆಸ್ ಕಾರಿಡಾರ್ ನಿರ್ಮಿಸಿದ ಬಳಿಕ ಈ ಮಾರ್ಗದಲ್ಲಿ ಸಂಚರಿಸುವ ವಾಹನಗಳ ಸಂಖ್ಯೆ ಹೆಚ್ಚಾಗಿದೆ ವಾರಾಂತ್ಯ, ರಜಾ ದಿನಗಳಲ್ಲಿ ವಾಹನ ದಟ್ಟಣೆಯಿಂದಾಗಿ ಈ ಜಂಕ್ಷನ್ ಬಳಿ ಟ್ರಾಫಿಕ್ ಜಾಮ್ ಆಗಿ ಗಂಟೆಗಟ್ಟಲೆ ಕಾಯುವಂತಾಗುತ್ತಿತ್ತು ಎಂದರು. ಅದೇ ಕಾರಣಕ್ಕಾಗಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ● 9ನೇ ಪುಟಕ್ಕೆ

ಗ್ಯಾರಂಟಿಗಳಿಗೆ ಕಂಡೀಷನ್ ಹಾಕಿದರೆ ಜೂ.1 ರಿಂದಲೇ ಹೋರಾಟ

● ಸಂಸದ ಪ್ರತಾಪ್ ಸಿಂಹ ಎಚ್ಚರಿಕೆ
● ನಾವು ಸೋತಿದ್ದೇವೆ ಅಷ್ಟೇ, ಸತ್ತಿಲ್ಲ

ಮೈಸೂರು: ಚುನಾವಣಾ ಪ್ರಣಾಳಿಕೆಯಲ್ಲಿ ಕಾಂಗ್ರೆಸ್‌ನವರು ನೀಡಿರುವ ಗ್ಯಾರಂಟಿ ಯೋಜನೆಗಳಿಗೆ ಷರತ್ತು ವಿಧಿಸಿದರೆ ಜೂ.1 ರಿಂದಲೇ ಹೋರಾಟ ಮಾಡುತ್ತೇವೆ ಎಂದು ಸಂಸದ ಪ್ರತಾಪ್‌ಸಿಂಹ ಎಚ್ಚರಿಸಿದ್ದಾರೆ. ಮೈಸೂರು – ಬೆಂಗಳೂರು ರಾಷ್ಟ್ರೀಯ ಹೆದ್ದಾರಿ ರಿಂಗ್ ರೋಡ್ ಜಂಕ್ಷನ್ ಪರಿಶೀಲಿಸಿದ ಬಳಿಕ ಸಮೀಪದ ಹೋಟೆಲ್‌ನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಲವು ಗ್ಯಾರಂಟಿಗಳನ್ನು ನೀಡಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಕಂಡಿಷನ್ ಅಪ್ಲೈ ಆಗುತ್ತೆ ಎಂದು ಎಲ್ಲೂ ಹೇಳಿಲ್ಲ. ಅದರಂತೆ ಎಲ್ಲಾ ಕುಟುಂಬಗಳ ● 6ನೇ ಪುಟಕ್ಕೆ

ಇಂದು ಚಾಮುಂಡೇಶ್ವರಿ ದೇವಸ್ಥಾನದ ಕುಂಭಾಭಿಷೇಕ



ಮೈಸೂರು, ಮೇ 25–ಮೈಸೂರಿನ ರೇಸ್ ಕೋರ್ಸ್ ರಸ್ತೆ, ಹರಿಶ್ಚಂದ್ರ ರಸ್ತೆ ಪಕ್ಕದಲ್ಲಿರುವ ಲಾರಿ ತಂಗುದಾಣದ ಆವರಣದಲ್ಲಿ ನಿರ್ಮಿಸಿರುವ ಶ್ರೀ ಚಾಮುಂಡೇಶ್ವರಿ ದೇವಸ್ಥಾನದ ಕುಂಭಾಭಿಷೇಕ ನಾಳೆ (ಮೇ 26) ಬೆಳಗ್ಗೆ 9ರಿಂದ 10 ಗಂಟೆವರೆಗೆ ನಡೆಯಲಿದೆ. ಅಂದು ಪ್ರಾತಃಕಾಲ ಜೀವನ್ಯಾಸ, ತತ್ವನ್ಯಾಸ, ಪ್ರಾಣಪ್ರತಿಷ್ಠೆ, ಮೂಲ ಹೋಮಗಳು, ಕಲಶಾರ್ಚನೆ, ನಾಡಿ ಸಂಧಾನ, ಕಲಾತತ್ವ ಹೋಮ, ಪೂರ್ಣಾಹುತಿ, ದಶದಾನ, ಕುಂಭೋದ್ವಾಸನೆ, ಕುಂಭಾಭಿಷೇಕ, ಮಹಾಮಂಗಳಾರತಿ, ಆಚಾರ್ಯಾದಿ ಋತ್ವಿಕ್ ಪೂಜೆ, ಯಾಗ ಫಲ ಸ್ವೀಕಾರ ಆಶೀರ್ವಾದ ನಡೆಯಲಿದೆ. ಬೆಳಗ್ಗೆ 9ರಿಂದ 10ರವರೆಗೆ ಸಲ್ಲುವ ಶುಭ ಮುಹೂರ್ತದಲ್ಲಿ ನೂತನವಾಗಿ ನಿರ್ಮಿಸಿರುವ ಗೋಪುರ, ಶ್ರೀ ಮಹಾಗಣಪತಿ, ಶ್ರೀ ಚಾಮುಂಡೇಶ್ವರಿ, ಶ್ರೀ ಆಂಜನೇಯ ದೇವರುಗಳ ಪ್ರತಿಷ್ಠಾ ಕುಂಭಾಭಿಷೇಕ ಹಾಗೂ ಜೀರ್ಣೋದ್ಧಾರವನ್ನು ಚಾಮುಂಡಿಬೆಟ್ಟದ ಆಗಮಾಚಾರ್ಯರಾದ ಡಾ.ಎನ್.ಶಶಿಶೇಖರ ದೀಕ್ಷಿತ್ ನೆರವೇರಿಸುವರು ಎಂದು ಪ್ರಕಟಣೆ ತಿಳಿಸಿದೆ.

ಬಿ.ಎಂ.ರೋಹಿಣಿಯವರ ಕೃತಿಗೆ ಡಾ.ವಿಜಯಾ ದಬ್ಬೆ ಸಾಹಿತ್ಯ ಪ್ರಶಸ್ತಿ

ಮೈಸೂರು, ಮೇ 25–ಮಂಗಳೂರಿನ 'ಆಕೃತಿ ಆಶಯ' ಪ್ರಕಾಶನ 2022ರಲ್ಲಿ ಪ್ರಕಟಿಸಿದ ಲೇಖಕಿ, ಸಂಶೋಧಕಿ ಬಿ.ಎಂ.ರೋಹಿಣಿ ಅವರ 'ವೇಶ್ಯಾವಾಟಿಕೆಯ ಕಥೆ–ವ್ಯಥೆ' ಸಂಶೋಧನಾ ಕೃತಿ 2023ನೇ ಸಾಲಿನ ಡಾ.ವಿಜಯಾ ದಬ್ಬೆ ಸಾಹಿತ್ಯ ಪ್ರಶಸ್ತಿಗೆ ಆಯ್ಕೆಯಾಗಿದೆ.



ಬಿ.ಎಂ.ರೋಹಿಣಿ

ಮೈಸೂರಿನ ಸಮತಾ ಅಧ್ಯಯನ ಕೇಂದ್ರವು ಸ್ಥಾಪಿಸಿರುವ ಈ ಪ್ರಶಸ್ತಿಗೆ 2019–2022ರ ಅವಧಿಯಲ್ಲಿ ಮಹಿಳೆಯರಿಂದ ಪ್ರಕಟವಾದ 'ವಿಮರ್ಶೆ ಮತ್ತು ಸಂಶೋಧನಾ ಕೃತಿಗಳನ್ನು' ಆಹ್ವಾನಿಸಲಾಗಿತ್ತು. 46 ಲೇಖಕಿಯರು ತಮ್ಮ ಕೃತಿಗಳನ್ನು ಕಳುಹಿಸಿದ್ದರು. ಅವುಗಳನ್ನು ಅವಲೋಕಿಸಿದ ಡಾ.ಎಂ.ಉಷಾ, ಡಾ.ಸೆಲ್ವಕುಮಾರಿ ಮತ್ತು ಡಾ.ಆರ್.ಸುನಂದಮ್ಮ ಅವರನ್ನೊಳಗೊಂಡ ಆಯ್ಕೆ ಸಮಿತಿ ಸಂಶೋಧನೆಯ ವಸ್ತು, ವ್ಯಾಪ್ತಿ, ವಿಷಯ ಮತ್ತು ಒಳನೋಟಗಳನ್ನು ಪರಿಗಣಿಸಿ ರೋಹಿಣಿಯವರ ಕೃತಿಯನ್ನು ಆಯ್ಕೆ ಮಾಡಿದೆ. 25,000 ರೂ. ನಗದು ಬಹುಮಾನ, ಫಲಕವನ್ನು ಪ್ರಶಸ್ತಿ ಒಳಗೊಂಡಿದೆ. ಎಪ್ಪತ್ತೊಂಬತ್ತರ ಹರೆಯದಲ್ಲೂ ಓದು, ಸಂಶೋಧನೆ, ಸಂಘಟನೆ, ಸಮಾಲೋಚನೆಗಳಲ್ಲಿ ಕ್ರಿಯಾಶೀಲರಾಗಿರುವ ರೋಹಿಣಿಯವರನ್ನು ಹಲವು ಸಂಘ ಸಂಸ್ಥೆಗಳು ಗೌರವಿಸಿವೆ. ಸಮತಾ ಅಧ್ಯಯನ ಕೇಂದ್ರವು ವಿಜಯಾ ದಬ್ಬೆ ಹೆಸರಿನಲ್ಲಿ ಸ್ಥಾಪಿಸಿರುವ ಪ್ರಶಸ್ತಿಯನ್ನು ಮೊದಲನೆಯ ವರ್ಷವೇ ಈ ಹಿರಿಯಕ್ಕನಿಗೆ ನೀಡಲು ಹೆಮ್ಮೆಪಡುತ್ತದೆ.

ಮೇ 28, 'ಕಲಾಂಕುರ' ಭರತನಾಟ್ಯ ಪ್ರದರ್ಶನ



ಮೈಸೂರು, ಮೇ 25 (ಪಿಎಂ)– ಜೋಯಿಸ್ ಕಲಾ ಪ್ರತಿಷ್ಠಾನ ಸಾಂಸ್ಕೃತಿಕ ಟ್ರಸ್ಟ್‌ನ ವಾರ್ಷಿಕೋತ್ಸವ ಪ್ರಯುಕ್ತ ಮೇ 28ರಂದು 'ಕಲಾಂಕುರ' ಶೀರ್ಷಿಕೆಯಡಿ ಭರತನಾಟ್ಯ ನೃತ್ಯ ಪ್ರದರ್ಶನ ಏರ್ಪಡಿಸಲಾಗಿದೆ ಎಂದು ಟ್ರಸ್ಟ್‌ನ ಟ್ರಸ್ಟಿ ಸುಬ್ರಮಣ್ಯ ರಾಜೇ ಅರಸ್ ತಿಳಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕುವೆಂಪುನಗರದ ಗಾನಭಾರತಿ ರಮಾಗೋವಿಂದ ಕಲಾವೇದಿಕೆಯಲ್ಲಿ ಸಂಜೆ 5.30ಕ್ಕೆ ನೃತ್ಯ ಪ್ರದರ್ಶನ ನಡೆಯಲಿದೆ ಎಂದರು.

ಮುಖ್ಯ ಅತಿಥಿಗಳಾಗಿ ಮಳವಳ್ಳಿ ಮತ್ತು ಹೊನ್ನಾಯಕನಹಳ್ಳಿ ಮಠಗಳ ಮಠಾಧಿಪತಿಗಳಾದ ಶ್ರೀ ವರ್ಚಸ್ವಿ ಸಿದ್ದಲಿಂಗ ರಾಜೇ ಅರಸು, ಜಯಚಾಮರಾಜೇಂದ್ರ ಎಜುಕೇಷನಲ್ ಟ್ರಸ್ಟ್ ಉಪಾಧ್ಯಕ್ಷೆ ಡಾ.ಎಂ.ಆರ್.ಭಾರತಿ ಶ್ರೀಧರ ರಾಜೇ ಅರಸು, ನೃತ್ಯಗಿರಿ ನಿರ್ದೇಶಕಿ ಡಾ.ಕೃಪಾ ಫಡ್ಕೆ, ಕರ್ನಾಟಕ ಶಾಸ್ತ್ರೀಯ ಸಂಗೀತ ಗಾಯಕಿ ವಿದುಷಿ ರಂಜಿನಿ ಕೌಶಿಕ್ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಟ್ರಸ್ಟ್ ಸಂಸ್ಥಾಪಕಿ ವಿದುಷಿ ನಮ್ರತಾ ಜೋಯಿಸ್ ಮಾತನಾಡಿ, ನಮ್ಮ ಸಂಸ್ಥೆಯಲ್ಲಿ ಒಂದು ವರ್ಷದಿಂದ ನೃತ್ಯ ತರಬೇತಿ ಪಡೆಯುತ್ತಿರುವ 5 ರಿಂದ 15 ವರ್ಷದೊಳಗಿನ 28 ಹೆಣ್ಣು ಮಕ್ಕಳು ಒಂದೂವರೆ ಗಂಟೆ ಕಾಲ ಭರತನಾಟ್ಯ ಪ್ರದರ್ಶನ ನೀಡಲಿದ್ದಾರೆ ಎಂದು ಹೇಳಿದರು. ಟ್ರಸ್ಟಿನ ಟ್ರಸ್ಟಿ ಸಾಧನಾ ಜೋಯಿಸ್, ಖಜಾಂಚಿ ಕವಿತಾ ಅರಸ್ ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಮೈಸೂರು ಪೈಂಟ್ಸ್ & ವಾರ್ನಿಷ್ ಎಂಪ್ಲಾಯಿಸ್ ಯೂನಿಯನ್‌ಗೆ ಪದಾಧಿಕಾರಿಗಳ ಆಯ್ಕೆ

ಮೈಸೂರು, ಮೇ 25–ಮೈಸೂರು ಪೈಂಟ್ಸ್ ಅಂಡ್ ವಾರ್ನಿಷ್ ಎಂಪ್ಲಾಯಿಸ್ ಯೂನಿಯನ್ ಅಧ್ಯಕ್ಷರಾಗಿ ಹೆಚ್.ದೇವರಾಜ್ ಆಯ್ಕೆಯಾಗಿದ್ದಾರೆ.

ಯೂನಿಯನ್ ಕಾರ್ಯದರ್ಶಿ ಜಿ.ಶ್ರೀನಿವಾಸ್ ಅಧ್ಯಕ್ಷತೆಯಲ್ಲಿ ನಡೆದ ಸರ್ವ ಸದಸ್ಯರ ಸಭೆಯಲ್ಲಿ ಪದಾಧಿಕಾರಿಗಳನ್ನು ಆಯ್ಕೆ ಮಾಡಿಕೊಳ್ಳಲಾಯಿತು ಎಂದು ಯೂನಿಯನ್ ಪ್ರಕಟಣೆ ತಿಳಿಸಿದೆ.

ಕಾರ್ಯದರ್ಶಿಯಾಗಿ ಜಿ.ಶ್ರೀನಿವಾಸ್, ಸಹ ಕಾರ್ಯದರ್ಶಿ ಮತ್ತು ಖಜಾಂಚಿಯಾಗಿ ಸುರೇಶ್, ಕಾರ್ಯಕಾರಿ ಸಮಿತಿ ಸದಸ್ಯರಾಗಿ ಎನ್.ಲಲಿತಾ, ಕಾವ್ಯ, ಸಲೀಂ ಪಾಷ, ಎಸ್.ಪುಟ್ಟಸ್ವಾಮಿ, ಸೋಮು, ಪುರುಷೋತ್ತಮ ಮತ್ತು ರಾಜ ಆಯ್ಕೆಯಾಗಿದ್ದಾರೆ. ಎನ್.ಪುಟ್ಟಯ್ಯ ಅವರನ್ನು ಗೌರವ ಸಲಹೆಗಾರರನ್ನಾಗಿ, ಎಸ್.ಎಸ್.ಪ್ರಸನ್ನಕುಮಾರ್ ಮತ್ತು ಕುಮಾರ್ ಅವರನ್ನು ಗೌರವ ಅಧ್ಯಕ್ಷ ಸಲಹೆಗಾರರನ್ನಾಗಿ ನೇಮಕ ಮಾಡಲಾಗಿದೆ.

ಆರೋಗ್ಯದ ಮೇಲೆ ಗಮನ ಇರಲಿ

ನಂಜನಗೂಡು ತಾಪಂ ಇಓ ಶ್ರೀನಿವಾಸ್ ಸಲಹೆ



ಮೈಸೂರು,ಮೇ 25–ಪ್ರತಿನಿತ್ಯದ ಜೀವನದಲ್ಲಿ ಒತ್ತಡವೇ ಹೆಚ್ಚಿರುವ ಈ ಕಾಲಘಟ್ಟದಲ್ಲಿ ಆರೋಗ್ಯದ ಮೇಲೆ ಹೆಚ್ಚು ಗಮನ ಹರಿಸಬೇಕು ಎಂದು ನಂಜನಗೂಡು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶ್ರೀನಿವಾಸ್ ತಿಳಿಸಿದರು.

ನರೇಗಾ ಕೂಲಿ ಕಾರ್ಮಿಕರ ಆರೋಗ್ಯ ಕಾಳಜಿ ವಹಿಸುವ ನಿಟ್ಟಿನಲ್ಲಿ ಆರಂಭವಾದ ಗ್ರಾಮ ಆರೋಗ್ಯ ಅಭಿಯಾನದ ಅಂಗವಾಗಿ ಕಳಲೆ ಗ್ರಾಮ ಪಂಚಾಯಿತಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಆಯೋಜಿಸಿದ್ದ ಆರೋಗ್ಯ ಶಿಬಿರ ಉದ್ಘಾಟಿಸಿ ಮಾತನಾಡಿದರು. ಗ್ರಾಮೀಣ ಭಾಗದ ಜನರು ತಮ್ಮ ಕೆಲಸದ ನಡುವೆ ಆರೋಗ್ಯದ ಮೇಲೆ ಕಾಳಜಿಯೇ ವಹಿಸುವುದಿಲ್ಲ. ಪ್ರತಿಯೊಬ್ಬರು ಒತ್ತಡದ ಕೆಲಸದ ನಡುವೆ ತಮ್ಮ ಆರೋಗ್ಯಕ್ಕೆ ಸಮಯವನ್ನು ನೀಡಬೇಕು. ಈ ನಿಟ್ಟಿನಲ್ಲಿ ಕೆಹೆಚ್‌ಪಿಟಿ ಅವರ ಸಹಯೋಗದಲ್ಲಿ ಎಲ್ಲಾ ಗ್ರಾಪಂ ವ್ಯಾಪ್ತಿಯಲ್ಲಿ ಪ್ರತಿ ತಿಂಗಳು ಆರೋಗ್ಯ ಶಿಬಿರ ಹಮ್ಮಿಕೊಳ್ಳಲಾಗಿದೆ. ಇತ್ತೀಚಿನ ದಿನಗಳಲ್ಲಿ ರಕ್ತದೊತ್ತಡ, ಮಧುಮೇಹ, ರಕ್ತಹೀನತೆಯು ಎಲ್ಲಾ ವಯೋಮಾನದವರಲ್ಲೂ ಕಂಡುಬರುತ್ತಿದೆ. ಉತ್ತಮ ಆಹಾರ ಸೇವಿಸುವುದು ಮತ್ತು ಕಾಲಕಾಲಕ್ಕೆ ಆರೋಗ್ಯ ಪರೀಕ್ಷಿಸಿಕೊಳ್ಳುವುದು ಮುಖ್ಯವಾದದ್ದು. ಆದ್ದರಿಂದ ಆರೋಗ್ಯ ಶಿಬಿರವನ್ನು ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಿದರು. ಕಾರ್ಯಕ್ರಮದಲ್ಲಿ ಗ್ರಾಪಂ ಅಧ್ಯಕ್ಷೆ ರಾಜಮ್ಮ, ಉಪಾಧ್ಯಕ್ಷೆ ರತ್ನಮ್ಮ, ಪಿಡಿಓ ಮಹೇಶ್, ವೈದ್ಯಾಧಿಕಾರಿ ಶಶಿಕಲಾ, ಜಿಪಿಎಎ ಸಂಯೋಜಕರಾದ ಶಿವಣ್ಣ, ಸುರೇಶ್ ಉಪಸ್ಥಿತರಿದ್ದರು.

ನಿಧನ




ಶಿವಮ್ಮ

ನಂಜನಗೂಡು, ಮೇ 25– ತಾಲೂಕಿನ ಅಹಲ್ಯಾ ಗ್ರಾಮದ ಹಿರಿಯರಾದ ಶ್ರೀಮತಿ ಶಿವಮ್ಮ (77) ಅವರು ಬುಧವಾರ ಮಧ್ಯಾಹ್ನ ತಮ್ಮ ನಿವಾಸದಲ್ಲಿ ನಿಧನ ರಾದರು. ಮೃತರು ಮೂವರು ಪುತ್ರರು, ಮೂವರು ಸೊಸೆಯಂದಿರು, ಮೊಮ್ಮಕ್ಕಳು, ಅಪಾರ ಬಂಧು ವರ್ಗ ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಗುರುವಾರ ಮಧ್ಯಾಹ್ನ ಅವರ ಜಮೀನಿನಲ್ಲಿ ನೆರವೇರಿತು.

ಶರಣರು, ವಚನಕಾರರು ವೇದ ಸಾಹಿತ್ಯದ ವಿರೋಧಿಗಳಲ್ಲ

ಕನ್ನಡ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ.ನಂದೀಶ ಎಸ್.ಎಂ.ಹಂಚೆ ಅಭಿಮತ



ಮೈಸೂರು,ಮೇ 25 (ಸಿಎನ್)– ಶರಣ ಸಾಹಿತ್ಯ, ಶರಣ ಪರಂಪರೆ ಕುರಿತು ನಿರಂತರವಾಗಿ ವಿಚಾರ ಸಂಕಿರಣ ನಡೆಸುತ್ತಾ ಬಂದಿದ್ದೇವೆ. ಆಯಾ ಕಾಲಘಟ್ಟದಲ್ಲಿ, ವೀರಶೈವ, ಲಿಂಗಾಯತ, ಶರಣ ಸಂಸ್ಕೃತಿಯ ಭವಿಷ್ಯ ದೃಷ್ಟಿಯಿಂದ ವಚನಾಕಾರರನ್ನು ಬಣ್ಣಿಸಲಾಗಿದೆಯೇ ಹೊರತು ಶರಣರಾಗಲಿ, ವಚನಕಾರರಾಗಲಿ ವೇದ ಸಾಹಿತ್ಯದ ವಿರೋಧಿಗಳಲ್ಲ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ನಂದೀಶ ಎಸ್.ಎಂ.ಹಂಚೆ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಎಂಜಿ ರಸ್ತೆಯ ಡಾ.ರಾಜೇಂದ್ರ ಭವನದಲ್ಲಿ ಶರಣ ದರ್ಶನ 100ನೇ ಕಾರ್ಯಕ್ರಮವನ್ನು ಶರಣ ಸಾಹಿತ್ಯ ಪರಿಷತ್ತಿನಿಂದ ಆಯೋಜಿಸಲಾಗಿದ್ದ 'ದತ್ತಿ ಕಾರ್ಯಕ್ರಮ ಮತ್ತು ಸ್ಮರಣೀಯರು ಕೃತಿ ಲೋಕಾರ್ಪಣೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಚನಕಾರರು ಸಂಪೂರ್ಣ ವೇದ ಶಾಸ್ತ್ರದ ವಿರೋಧಿಗಳಲ್ಲ. ವೇದದಲ್ಲಿರುವ ಕೆಲ ಮೌಢ್ಯದ ವಿರುದ್ಧ ಧ್ವನಿ ಎತ್ತಿ ಅದರ ಲೋಪದೋಷದ ಬಗ್ಗೆ ವಚನಗಳ ಮೂಲಕ ತಿಳಿಹೇಳುವ ಕಾಯಕಕ್ಕೆ ಮುಂದಾಗಿದ್ದರು. ಕ್ರಿ.ಪೂ.1100ರಿಂದ 1300ರ ಇಸವಿ ನಡುವೆ ವೈದಿಕಯುಗ ಉಗಮವಾಗಿದ್ದು, ಆ ಕಾಲದ ಸಂದರ್ಭದ ಅನುಸಾರ ವೇದಗಳು ರಚನೆ ಆಗಿವೆ. ಅದನ್ನು ಈಗಿನ ಪ್ರಚಲಿತ ಸಾಹಿತ್ಯಕ್ಕೆ ತಕ್ಕಹಾಗೇ ರೂಪಾಂತರಿಸಿ, ಅಳವಡಿಸುವ ಮೂಲಕ ಈಗಿನ ಪೀಳಿಗೆಗೆ ವೇದಶಾಸ್ತ್ರದ ಬಗ್ಗೆ ಅರಿವು ಮೂಡಿಸುವ ಅಗತ್ಯವಿದೆ ಎಂದರು.

12ನೇ ಶತಮಾನದಲ್ಲಿ ಬಸವಣ್ಣನವರು, ಅಲ್ಲಮ ಮಹಾಪ್ರಭು, ಅಕ್ಕ ಮಹಾದೇವಿ, ಚನ್ನಬಸವಣ್ಣ, ಪ್ರಭುದೇವ, ಸಿದ್ಧರಾಮ ರಂತಹ ಪ್ರಸಿದ್ಧ ಶರಣರು ವೇದವನ್ನು ದೂಷಿಸಿರಬಹುದು, ಆದರೆ ತಿರಸ್ಕರಿಸಿರಲಿಲ್ಲ. ಹಾಗಾಗಿ ಈಗಿನ ಪೀಳಿಗೆಗೆ ವೇದಾಭ್ಯಾಸದ ಅವಶ್ಯಕತೆ ಇದೆ. ವೇದದಲ್ಲಿ ಮೌಢ್ಯದ ಉಲ್ಲೇಖವಿರುವ ಭಾಗಗಳನ್ನು ತಿದ್ದುಪಡಿ ಮಾಡಿ ಮತ್ತೊಮ್ಮೆ ಮರು ವ್ಯಾಖ್ಯಾನಿಸುವ ಅಗತ್ಯವಿದೆ ಎಂದು ಹೇಳಿದರು.

ಇದಕ್ಕೂ ಮುನ್ನ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಮ.ಗು.ಸದಾನಂದಯ್ಯ ಮಾತನಾಡಿ, ಶರಣ ದರ್ಶನ ಕಾರ್ಯಕ್ರಮ ಕೋವಿಡ್ ಸಂದರ್ಭದಲ್ಲಿ ಪ್ರಾರಂಭವಾಗಿದ್ದು, ಪರಿಚಿತರಲ್ಲದ ಶರಣರನ್ನು ಪರಿಚಯಿಸುವ ಉದ್ದೇಶದಿಂದ ಶರಣ ದರ್ಶನ ಕಾರ್ಯಕ್ರಮ ನಡೆಸುತ್ತಾ ಬಂದಿದ್ದೇವೆ. ಇದುವರೆಗೂ ಆನ್ಲೈನ್ ಮೂಲಕ ಬರೋಬ್ಬರಿ 99 ಕಾರ್ಯಕ್ರಮವನ್ನು ನಡೆಸಲಾಗಿದೆ. ಇದೀಗ 100ನೇ ಕಾರ್ಯ ಕ್ರಮವನ್ನು ವೇದಿಕೆಯಲ್ಲಿ ಆಯೋಜನೆ ಮಾಡಿರುವುದು ಸಂತಸ ತಂದಿದೆ. ದತ್ತಿ ದಾನಿಗಳಿಂದ ಕಾರ್ಯಕ್ರಮ ಯಶಸ್ವಿಯಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ದತ್ತಿದಾನಿಗಳಾದ ಡಾ.ಹೆಚ್. ಮುದ್ದುಮಲ್ಲೇಶ್, ಮಲ್ಲಿಕಾರ್ಜುನ ಸಮಂತ್ರಿ, ನಿರೂಪಣೆಕಾರ ಪ್ರೊ.ಡಿ.ಎಸ್.ಸದಾಶಿವ ಮೂರ್ತಿ ಇದ್ದರು. ಕೃತಿಕಾರ ನಗರ್ಲೆ ಶಿವಕುಮಾರ್ ರಚಿಸಿದ 'ಸ್ಮರಣೀಯರು' ಎಂಬ ಕೃತಿಯನ್ನು ಕೇಂದ್ರ ಸಾಹಿತ್ಯ ಅಕಾಡೆಮಿ ಪುರಸ್ಕೃತ ಪ್ರೊ.ಹೆಚ್.ವಿ.ನಾಗರಾಜರಾವ್ ಲೋಕಾರ್ಪಣೆಗೊಳಿಸಿದರು.



ಯುಪಿಎಸ್‌ಸಿ ಪರೀಕ್ಷೆಯಲ್ಲಿ 390ನೇ ರ್‍ಯಾಂಕ್ ಪಡೆದ ಮೈಸೂರು ಕುವೆಂಪುನಗರದ ಪೂಜಾ ಅವರನ್ನು ಮುಡಾ ಮಾಜಿ ಸದಸ್ಯೆ ಲಕ್ಷ್ಮಿದೇವಿ ಸಿಹಿ ತಿನಿಸಿ, ಅಭಿನಂದಿಸಿದರು. ಬಿಜೆಪಿ ಮುಖಂಡರಾದ ಉಪೇಂದ್ರ, ಅಭಿಷೇಕ್, ಕುಸುಮ, ಕೇಬಲ್ ಸೋಮು ಇನ್ನಿತರರಿದ್ದಾರೆ.

ಇಂದು ಮೈಸೂರಲ್ಲಿ ಮೈ ರಿಯಾಲಿಟಿ ಪ್ರಾಪರ್ಟಿ ಎಕ್ಸ್‌ಪೋ ಪ್ರಾರಂಭ

ಮೈಸೂರು,ಮೇ 25–ಮೈಸೂರು ಬಿಲ್ಡರ್ಸ್ ಅಸೋಸಿಯೇಷನ್ (ಬಿಎಐ) ಹಾಗೂ ಕ್ರೆಡಾಯ್ ಸಂಸ್ಥೆ ಸಹಯೋಗದಲ್ಲಿ ನಾಳೆಯಿಂದ ಮೇ 29ರವರೆಗೆ ಮೈಸೂರಿನ ಸ್ಕೌಟ್ ಮತ್ತು ಗೈಡ್ಸ್ ಮೈದಾನದಲ್ಲಿ ಮೈ ರಿಯಾಲಿಟಿ ಮೆಗಾ ಪ್ರಾಪರ್ಟಿ ಎಕ್ಸ್‌ಪೋ ಆಯೋಜಿಸಲಾಗುತ್ತಿದೆ. ಇದರಲ್ಲಿ ತಲಾ 4 ಪ್ಲಾಟಿನಂ, ಗೋಲ್ಡ್, ಸಿಲ್ವರ್ ಮಳಿಗೆ ಹಾಗೂ 26 ಸಾಮಾನ್ಯ ಮಳಿಗೆಗಳನ್ನು ತೆರೆಯಲಾಗುತ್ತಿದೆ. ಇವುಗಳಲ್ಲಿ ರಿಯಲ್ ಎಸ್ಟೇಟ್‌ಗೆ ಸಂಬಂಧಿಸಿದ ಮಾಹಿತಿಗಳು ಲಭ್ಯವಿರುತ್ತದೆ. ಪ್ರತಿದಿನ ಬೆಳಗ್ಗೆ 10ರಿಂದ ರಾತ್ರಿ 8.30ರವರೆಗೆ ತೆರೆದಿರುತ್ತದೆ. ಮೇಳದಲ್ಲಿ ಮೈಸೂರು ಡಿಸಿ ಡಾ.ಕೆ.ವಿ.ರಾಜೇಂದ್ರ ಮುಖ್ಯ ಅತಿಥಿಗಳಾಗಿರುವರು. ಕರ್ನಾಟಕ ಕ್ರೆಡಾಯ್ ಅಧ್ಯಕ್ಷ ಪ್ರದೀಪ್ ಡಿ.ರಾಯ್ಕರ್, ಬಿಎಐ ರಾಷ್ಟ್ರೀಯ ಉಪಾಧ್ಯಕ್ಷ ಎನ್.ಎಸ್.ಮುರಳೀಧರ್ ಗೌರವ ಅತಿಥಿಗಳಾಗಿರುವರು.

ಮಮತಾ ಹತ್ಯೆ ಆರೋಪಿ ಬಂಧನ



ಮೈಸೂರು, ಮೇ 25(ಆರ್‌ಕೆ)– ಅಂಗನವಾಡಿ ಕಾರ್ಯಕರ್ತೆ ಮಮತಾಳನ್ನು ಹತ್ಯೆಗೈದಿದ್ದ ಆರೋಪಿಯನ್ನು ಮೇಟಗಳ್ಳಿ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಮೈಸೂರು ತಾಲೂಕು ಸಿದ್ದಲಿಂಗಪುರ ವಾಸಿ ಮೋಹನ್(26) ಬಂಧಿತ ಕೊಲೆ ಆರೋಪಿ. ಕಳೆದ ಮೂರು ವರ್ಷಗಳಿಂದ ಸಿದ್ದಲಿಂಗಪುರದ ಹೆದ್ದಾರಿ ಪಕ್ಕದಲ್ಲಿ ಬೇಕರಿಯೊಂದನ್ನು ನಡೆಸುತ್ತಿದ್ದ ಆತ, ಮಮತಾಳೊಂದಿಗೆ ಸಂಪರ್ಕ ಹೊಂದಿದ್ದು, ತನ್ನ ಉದ್ದಿಮೆಗೆ ಆಕೆಯಿಂದಲೂ ಹಣ ತೊಡಗಿಸಿಕೊಂಡಿದ್ದ.

ಪಾಂಡವಪುರ ತಾಲೂಕು, ಕೆರೆ ತೊಣ್ಣೂರು ಗ್ರಾಮದಲ್ಲಿ ಅಂಗನವಾಡಿ ಕಾರ್ಯಕರ್ತೆಯಾಗಿ ಕೆಲಸ ಮಾಡುತ್ತಿದ್ದ ಆಕೆ, ಚೀಟಿ ವ್ಯವಹಾರವನ್ನು ನಡೆಸುತ್ತಿದ್ದಳು. ಆಗಿಂದಾಗ್ಗೆ ಸಿದ್ದಲಿಂಗಪುರಕ್ಕೆ ಬಂದು ಮೋಹನ್ ಜೊತೆ ಬೇಕರಿ ವ್ಯಾಪಾರದಲ್ಲೂ ತೊಡಗಿಸಿಕೊಳ್ಳುತ್ತಿದ್ದರು. ಬುಧವಾರವೂ ಬಂದಾಗ ಹಣಕಾಸು ವಿಷಯದ ಸಂಬಂಧ ಮಾತಿಗೆ ಮಾತು ಬೆಳೆದು ಮೋಹನ್ ಪಫ್ಸ್ ಮಾಡಲು ಬಳಸುತ್ತಿದ್ದ ಕಬ್ಬಿಣದ ರಾಡ್‌ನಿಂದ ತಲೆಗೆ ಹೊಡೆದು ಮಮತಾಳನ್ನು ಹತ್ಯೆಗೈದಿದ್ದ.

ಪ್ರಕರಣ ದಾಖಲಿಸಿಕೊಂಡಿದ್ದ ಮೇಟಗಳ್ಳಿ ಠಾಣೆ ಪೊಲೀಸರು ಇಂದು ಬೆಳಗ್ಗೆ ಮೋಹನ್‌ನನ್ನು ಬಂಧಿಸಿ ವಿಚಾರಣೆ ನಡೆಸಿದ ನಂತರ ಸಂಜೆ ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಗಿ ಆತನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ದಲಿತ ಸಮುದಾಯಕ್ಕೆ 8ರಿಂದ 10 ಸಚಿವ ಸ್ಥಾನ ನೀಡಿ; ದಸಂಸ ಒತ್ತಾಯ



ಮೈಸೂರು,ಮೇ 25(ಪಿಎಂ)– ಈ ಬಾರಿಯ ಚುನಾವಣೆಯಲ್ಲಿ ದಲಿತ ಸಮುದಾಯದ (ಎಸ್‌ಸಿ, ಎಸ್‌ಟಿ) ಶೇ.76ರಷ್ಟು ಮತಗಳು ಕಾಂಗ್ರೆಸ್‌ಗೆ ಚಲಾವಣೆಯಾಗಿದ್ದು, ಆ ಮೂಲಕ ಕಾಂಗ್ರೆಸ್ ಅಧಿಕಾರಕ್ಕೆ ಬರಲು ದಲಿತ ಸಮುದಾಯ ಮಹತ್ವದ ಪಾತ್ರ ವಹಿಸಿದೆ. ಹೀಗಾಗಿ ಸಮುದಾಯಕ್ಕೆ 8ರಿಂದ 10 ಸಚಿವ ಸ್ಥಾನಗಳನ್ನು ನೀಡಬೇಕು. ಜೊತೆಗೆ ಮುಂದಿನ ಸಂಪುಟ ವಿಸ್ತರಣೆಯಲ್ಲೇ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ದಸಂಸ) ಒತ್ತಾಯಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ದಸಂಸ ಮುಖಂಡ ದೇವಗಳ್ಳಿ ಸೋಮಶೇಖರ್, ರಾಜ್ಯದಲ್ಲಿ ಬಿಜೆಪಿಯನ್ನು ಬೇರುಸಮೇತ ಕಿತ್ತೊಗೆಯಬೇಕೆಂಬ ಉದ್ದೇಶದಿಂದ ದಲಿತ ಸಮುದಾಯ ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿದೆ. ದಲಿತ ಸಂಘಟನೆಗಳು ಒಕ್ಕೊರಲಿನಿಂದ ಕಾಂಗ್ರೆಸ್ ಪರ ಪ್ರಚಾರ ಮಾಡಿದ್ದೇ ಇದಕ್ಕೆ ಕಾರಣ. ಎಲ್ಲಾ ದಲಿತ ಸಂಘಟನೆಗಳು ಒಗ್ಗೂಡಿ ಕಾಂಗ್ರೆಸ್ ಪರ ಕೆಲಸ ಮಾಡಲು ಪ್ರೇರೇಪಿಸಿದವರು ಡಾ.ಹೆಚ್.ಸಿ.ಮಹದೇವಪ್ಪ. ಇದರ ಪರಿಣಾಮ ಇಂದು ಕಾಂಗ್ರೆಸ್ ಅಧಿಕಾರಕ್ಕೆ ಬರಲು ಸಾಧ್ಯವಾಗಿದೆ. ಪಕ್ಷಕ್ಕಾಗಿ ಶ್ರಮಿಸಿದ ಅವರಿಗೆ ಸಚಿವ ಸ್ಥಾನ ನೀಡದಿರುವುದು ಅನ್ಯಾಯ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಡಾ.ಹೆಚ್.ಸಿ.ಮಹದೇವಪ್ಪನವರು ಒಬ್ಬ ಪ್ರಬುದ್ಧ ರಾಜಕಾರಣಿಯಾಗಿದ್ದು, ಮುಖ್ಯಮಂತ್ರಿ ಆಗಲೂ ಅರ್ಹರಾಗಿದ್ದಾರೆ. ಇಂತಹ ಒಬ್ಬ ನಾಯಕನಿಗೆ ಸಚಿವ ಸ್ಥಾನ ನೀಡದಿದ್ದರೆ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಹಿನ್ನಡೆಯಾಗಲಿದೆ. ಈ ಚುನಾವಣೆಯಲ್ಲಿ ದೇಶದ ಹಿತದೃಷ್ಟಿಯಿಂದ ದಲಿತ ಸಮುದಾಯ ಕಾಂಗ್ರೆಸ್ ಬೆಂಬಲಿಸಿದೆಯೇ ಹೊರತು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರ ಮುಖ ನೋಡಿಯಲ್ಲ. ಮಹದೇವಪ್ಪರನ್ನು ಸಚಿವ ಸಂಪುಟಕ್ಕೆ ಸೇರ್ಪಡೆ ಮಾಡದಿರಲು ಯಾರು ಕಾರಣ ಎಂಬುದು ಗೊತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಮಹದೇವಪ್ಪರಿಗೆ ಸಚಿವ ಸ್ಥಾನ ನೀಡಲು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ರಾಷ್ಟ್ರೀಯ ನಾಯಕ ರಾಹುಲ್ ಗಾಂಧಿ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಕ್ರಮ ತೆಗೆದುಕೊಳ್ಳಬೇಕು. ಭವಿಷ್ಯದಲ್ಲಿ ದಲಿತ ಸಮುದಾಯಕ್ಕೆ ಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ದನಿ ಎತ್ತಲಿದ್ದೇವೆ ಎಂದು ತಿಳಿಸಿದರು. ದಸಂಸ ಮುಖಂಡರಾದ ಜೋಗಿ ಮಹೇಶ್, ಬೆಲವತ್ತ ರಾಮಚಂದ್ರ, ಅಹಿಂದ ಸಂಘಟನೆಯ ಚಿಕ್ಕಜವರಪ್ಪ ಗೋಷ್ಠಿಯಲ್ಲಿದ್ದರು.

ಜಿಲ್ಲಾ ಅಭಿವೃದ್ಧಿ ಸಮನ್ವಯ; ಉಸ್ತುವಾರಿ ಸಮಿತಿ ಸಭೆ

ಮೈಸೂರು, ಮೇ 25 –ಮೇ 29ರ ಬೆಳಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ 2023–24ನೇ ಸಾಲಿನ ಮೊದಲನೇ ತ್ರೈಮಾಸಿಕ ಜಿಲ್ಲಾ ಅಭಿವೃದ್ಧಿ ಸಮನ್ವಯ ಹಾಗೂ ಉಸ್ತುವಾರಿ ಸಮಿತಿ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ಲೋಕಸಭಾ ಸದಸ್ಯ ಪ್ರತಾಪ್ ಸಿಂಹ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಜಿಪಂನ ಯೋಜನಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ವಿದ್ಯುತ್ ನಿಲುಗಡೆ

ಮೈಸೂರು, ಮೇ 25 –ಮೇ 27ರ ಬೆಳಗ್ಗೆ 10ರಿಂದ ಸಂಜೆ 5.30ರವರೆಗೆ ನಿರ್ವಹಣಾ ಕಾಮಗಾರಿ ನಿಮಿತ್ತ ರಮ್ಮನಹಳ್ಳಿ, ಕಾಳಿಸಿದ್ದನಹುಂಡಿ, ಹಂಚ್ಯ, ಸಾತಗಳ್ಳಿ, ಗಳಿಗರಹುಂಡಿ, ನೆಹರು ನಗರ, ಸಾತಗಳ್ಳಿ ಗ್ರಾಮ, ಡಿ.ಟಿ.ಎಸ್. ರಾವ್‌ನಗರ, ವಿಟಿಯೂ ಕಾಲೇಜು ಎದುರು, ಸನ್‌ಪ್ಯೂರ್ ಬಡಾವಣೆ, ಸಾತಗಳ್ಳಿ ಬಿ.ಜೋನ್, ವಿಟಿಯೂ ಕಾಲೇಜು, ಭಾರತ್‌ನಗರ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.



ಮೈಸೂರು ಪಾಲಿಕೆ ಆರೋಗ್ಯ, ಶಿಕ್ಷಣ–ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ಆಯ್ಕೆಯಾದ ಪಾಲಿಕೆ 44ನೇ ವಾರ್ಡ್‌ನ ಕಾರ್ಪೊರೇಟರ್ ಸವಿತಾ ಸುರೇಶ್ ಅವರನ್ನು ವಾರ್ಡಿನ ಮುಖಂಡರು, ಅಭಿಮಾನಿಗಳು ಸನ್ಮಾನಿಸಿದರು. ಈ ವೇಳೆ ತಮ್ಮ ಆಯ್ಕೆಗೆ ಕಾರಣಕರ್ತರಾದ ಶಾಸಕರಾದ ಜಿ.ಟಿ.ದೇವೇಗೌಡ, ಜಿ.ಡಿ.ಹರೀಶ್‌ಗೌಡ ಹಾಗೂ ಲಲಿತಾ ಜಿ.ಟಿ.ದೇವೇಗೌಡ ಅವರಿಗೆ ಸವಿತಾ ಸುರೇಶ್ ಕೃತಜ್ಞತೆ ಸಲ್ಲಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

26.5.2023 ಶುಕ್ರವಾರ, ಮಳೆ ನಕ್ಷತ್ರ: ರೋಹಿಣಿ, 25.05.2023 ರಿಂದ 07.06.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಶುಕ್ಲ ಪಕ್ಷ,
ತಿಥಿ: ಸಪ್ತಮಿ, ನಕ್ಷತ್ರ: ಆಶ್ಲೇಷ, ರಾಹುಕಾಲ: ಬೆಳಗ್ಗೆ 10.30 ರಿಂದ 12 ರವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ** ಸುವರ್ಣಪ್ರಾಶನ ಅಭಿಯಾನ, ಸ್ಥಳ: ಆಸ್ಪತ್ರೆ ಆವರಣ, ಬೆಳಗ್ಗೆ 8ರಿಂದ.
- **ಜೆಎಸ್‌ಎಸ್ ಮೈಸೂರ್ ಅರ್ಬನ್ ಹಾತ್, ಮೈಸೂರು:** ಗುಜರಾತ್ ಹ್ಯಾಂಡಿಕ್ರಾಫ್ಟ್ ಉತ್ಸವ. ಸ್ಥಳ ಅರ್ಬನ್ ಹಾತ್ ಆವರಣ, ಹೆಬ್ಬಾಳು ಕೈಗಾರಿಕ ಪ್ರದೇಶ, ರಿಂಗ್ ರೋಡ್. ಬೆಳಗ್ಗೆ 10ರಿಂದ ರಾತ್ರಿ 8 ಗಂಟೆವರೆಗೆ.
- **ಜೆಎಸ್‌ಎಸ್ ಮಹಿಳಾ ಪಾಲಿಟೆಕ್ನಿಕ್:** ವಿದ್ಯಾರ್ಥಿ ಸಂಘದ ವಾರ್ಷಿಕೋತ್ಸವ, ಸಾನ್ನಿಧ್ಯ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಮುಖ್ಯ ಅತಿಥಿಗಳು: ನಿಜ ವೆಂಚರ್ ಇಂಪ್ಯಾಕ್ಟ್ಸ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪಾಲೆಕಂಡ ನಂಜುಂಡ ಪ್ರತಾಪ್, ಉಜ್ವಲ ವಾರ್ಷಿಕ ಸಂಚಿಕೆ ಬಿಡುಗಡೆ: ಇನ್‌ಫೋಸಿಸ್ ಸೀನಿಯರ್ ಬಿಸಿನೆಸ್ ಮ್ಯಾನೇಜರ್ ಎಸ್.ಮೀನಾಕ್ಷಿ, ಹಿರಿಯ ವಿದ್ಯಾರ್ಥಿನಿ ರೋಷನಿ ದಿನಕರ್, ಅಧ್ಯಕ್ಷತೆ: ನಿರ್ದೇಶಕ ಕೆ.ಆರ್.ಸಂತಾನಂ, ಸ್ಥಳ: ಕರ್ನಾಟಕ ಕಲಾಮಂದಿರ, ಬೆಳಗ್ಗೆ 10.30ಕ್ಕೆ.
- **ವಿಶ್ವಮಾನವ ಮೈಸೂರು ವಿಶ್ವವಿದ್ಯಾನಿಲಯ ನೌಕರರ ವೇದಿಕೆ:** ನೂತನ ಶಾಸಕ ಕೆ.ಹರೀಶ್‌ಗೌಡರಿಗೆ ಅಭಿನಂದನಾ ಸಮಾರಂಭ, ಉಪಸ್ಥಿತರು: ಪೊಲೀಸ್ ಅಧೀಕ್ಷಕಿ ಸೀಮಾ ಲಾಟ್ಕರ್, ಡಾ.ಬಿ.ಜೆ.ವಿಜಯಕುಮಾರ್, ಅಂಶಿ ಪ್ರಸನ್ನಕುಮಾರ್, ರಶ್ಮಿಕೋಟಿ, ಡಾ.ಬಸವರಾಜ್, ಪ್ರೊ.ಶಿವರಾಜಪ್ಪ, ಡಾ.ಸಿ.ಎ.ಶ್ರೀಧರ್, ಪ್ರೊ.ಹೆಚ್.ಸೋಮಶೇಖರಪ್ಪ, ಡಾ.ಹೆಚ್.ಪಿ.ಜ್ಯೋತಿ, ಡಾ.ಎಂ.ಎಸ್.ಸಪ್ನಾ, ಪ್ರೊ. ದಿವಾಕರ್ ಚಾಂಡಿ, ಡಾ.ಸಿ.ಡಿ.ಪರಶುರಾಮ್, ಉಮೇಶ್, ಸ್ಥಳ : ವಿ.ವಿ. ಸಂಜೆ ಕಾಲೇಜು ಮುಂಭಾಗ, ಬೆಳಗ್ಗೆ 10.30ಕ್ಕೆ.
- **ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಮಹಾವಿದ್ಯಾಲಯ, ಕನ್ನಡ ಸಾಹಿತ್ಯ ಪರಿಷತ್, ಮೈಸೂರು ನಗರ ಘಟಕ :** ಯುವ ಕವಿಗೋಷ್ಠಿ, ಅಧ್ಯಕ್ಷತೆ : ಮಹಾವಿದ್ಯಾಲಯ ಪ್ರಾಂಶುಪಾಲ ಪ್ರೊ.ಸಾಯಿನಾಥ್ ಮಲ್ಲಿಗೆಮಾಡು, ಉದ್ಘಾಟನೆ : ಕನ್ನಡ ಸಾಹಿತ್ಯ ಪರಿಷತ್ ನಗರ ಘಟಕ ಅಧ್ಯಕ್ಷ ಕೆ.ಎಸ್.ಶಿವರಾಮು, ಮುಖ್ಯ ಅತಿಥಿಗಳು : ವಿಮರ್ಶಕ ಡಾ. ನೀ.ಗೂ. ರಮೇಶ್, ಉಪಸ್ಥಿತರು: ಪ್ರೊ.ಎನ್.ಭಾರತಿ, ಪ್ರೊ.ಕೆ.ಎಸ್.ಸುಕೃತ, ಡಾ.ವಿನೋದ, ಸ್ಥಳ: ಕಾಲೇಜು ಸಭಾಂಗಣ, ಬೆಳಗ್ಗೆ 10.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ–ಡಾ.ಸಿ.ನಾಗಣ್ಣ, 6.15 ಗೀತಾರಾಧನ, 6.35 ಇಂಜಿನಿಯರಿಂಗ್ ವಿದ್ಯಾವಿಕಾಸ, ಪ್ರಾಯೋಜಕರು–ವಿದ್ಯಾವಿಕಾಸ ಇಂಜಿನಿಯರಿಂಗ್ ಕಾಲೇಜು, ಮೈಸೂರು, 6.40 ಪದಸಂಸ್ಕೃತಿ– ಕನ್ನಡ ಪದಗಳ ಬಳಕೆ– ಕಲಿಕೆಯ ವಿಶಿಷ್ಟ ಬಾನುಲಿ ಸರಣಿ ಪ್ರಸ್ತುತಿ–ಡಾ.ಟಿ.ವಿ.ಸತ್ಯನಾರಾಯಣ, 7.15 ಭಾವಗೀತೆಗಳು, 9.00 ನಾರಾಯಣ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ಆರೋಗ್ಯ ಕಾರ್ಯಕ್ರಮ, 10.00 ಶ್ರೀರಾಂಭಟ್–ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ. **ಮಧ್ಯಾಹ್ನ:** 12.30 ದೇವರನಾಮ, 12.45 ಕಾದಂಬರಿ ವಿಹಾರ–ಡಾ.ಎಸ್.ಎಲ್.ಭೈರಪ್ಪನವರ ದೂರ ಸರಿದರು ಕಾದಂಬರಿಯ ಬಾನುಲಿ ಓದು ಪ್ರಸ್ತುತಿ–ಉಮೇಶ್, 1.20 ಭಾವಗೀತೆ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.50 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ– ಜಿ.ಕೆ.ರವೀಂದ್ರಕುಮಾರ್, 3.00 ಮೌನದಾಚೆಯ ಬೆಳಕು– ಸದಾಶಿವ ಬ್ರಹ್ಮೇಂದ್ರರ ಜೀವನ ಹಾಗೂ ರಚನೆಗಳನ್ನಾಧರಿಸಿದ ವಿಶೇಷ ಕಾರ್ಯಕ್ರಮ ಸರಣಿ, 4.00 ಮಹಿಳಾ ರಂಗ–"ಸಖೀ ಸಂವಾದ", ಪ್ರಸ್ತುತಿ–ಕೆ.ಬಿ.ಮೀನಾ, 4.30 ವೃತ್ತಿ ಮಾರ್ಗದರ್ಶನ–ಜೀವ ರಸಾಯನಶಾಸ್ತ್ರ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಡಾ.ಕೆ.ವಿ.ಹರೀಶ ಪ್ರಶಾಂತ್ ಅವರೊಂದಿಗೆ ಮಾತುಕತೆ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಕಿಸಾನ್‌ವಾಣಿ–ಕಾಡಂಚಿನಲ್ಲಿ ವಿವಿಧ ಕೃಷಿ ಮಾಡುತ್ತಿರುವ ರೈತರ ಅನಿಸಿಕೆಗಳು, 8.00 ಸಂಧ್ಯಾರಾಗ, 9.15 ಜನಪದಸಂಗೀತ– ಮಂಚಮ್ಮ ಮತ್ತು ಸಂಗಡಿಗರು, 10.30 ವಾದ್ಯವೃಂದ–ನಿಲಯದ ಕಲಾವಿದರಿಂದ, 10.30 ಸವಿನೆನಪು.

- **ಗೃಹ ಶೋಭೆ:** ಟ್ರೇಡ್ ಫೇರ್. ಸ್ಥಳ: ಮಹಾರಾಜ ಕಾಲೇಜು ಮೈದಾನ. ಬೆಳಗ್ಗೆ 11ರಿಂದ ರಾತ್ರಿ 9ರವರೆಗೆ.
- **ಪುಣ್ಯಕೋಟಿ ಸೇವಾ ಟ್ರಸ್ಟ್, ಐಶ್ವರ್ಯ ಫೌಂಡೇಷನ್, ವಿ.ಎನ್. ಡೆವಲಪರ್ಸ್, ಎಸ್‌ಎಲ್‌ವಿ ಬುಕ್ ಏಜೆನ್ಸಿ, ಲಲಿತ ಇನ್ಫ್ರಾ ಸೆಲ್ಯೂಷನ್, ವಿಜಯನಗರ 1ನೇ ಹಂತ :** ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ನೂತನ ಶಾಸಕರಿಗೆ ಅಭಿನಂದನಾ ಸಮಾರಂಭ, ಸ್ಥಳ: ಶ್ರೀ ಯೋಗನರಸಿಂಹಸ್ವಾಮಿ ದೇವಸ್ಥಾನ ಎದುರು, ವಿಜಯನಗರ 1ನೇ ಹಂತ, ಸಂಜೆ 5.30ಕ್ಕೆ.
- **ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ, ಕದಳಿ ಮಹಿಳಾ ವೇದಿಕೆ, ಜೆ.ಪಿ.ನಗರ ಶರಣ ವೇದಿಕೆ, ಅರಿವಿನ ಮನೆ ಮಹಿಳಾ ಬಳಗ, ಜೆ.ಪಿ.ನಗರ:** ಕದಳಿ ಯಾತ್ರೆ ಕಾರ್ಯಕ್ರಮ, ಸಾನ್ನಿಧ್ಯ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸ್ಥಳ: ಪಂಡಿತ್ ಪುಟ್ಟರಾಜ ಗವಾಯಿಗಳ ಕ್ರೀಡಾಂಗಣ, ಜೆ.ಪಿ.ನಗರ, ಸಂಜೆ 7ಕ್ಕೆ.
- **ಶ್ರೀ ರಾಘವೇಂದ್ರಸ್ವಾಮಿ ಸೇವಾ ಸಮಿತಿ:** ವಿದ್ವಾನ್ ಮುಕುಂದಾಚಾರ್ಯ ಪಾಚ್ಚಾಪುರ, ಮುಂಬೈ ಅವರಿಂದ ಭಗವದ್ಗೀತೆ ಪ್ರವಚನ– 9ನೇ ಅಧ್ಯಾಯ, ಸ್ಥಳ: ಶ್ರೀ ರಾಯರ ಮಠ, ಜಯಲಕ್ಷ್ಮಿಪುರಂ, ಸಂಜೆ 5ಕ್ಕೆ.
- **ಗಾನಭಾರತೀ:** ದಿವಂಗತ ಬಿ.ಎನ್.ರಾಮಾನುಜ ಅಯ್ಯಂಗಾರ್ ಸಂಸ್ಮರಣಾ ಕಾರ್ಯಕ್ರಮ, ವಿದುಷಿ ಅದಿತಿ ಕೃಷ್ಣಪ್ರಕಾಶ್ ಅವರಿಂದ ಪಿಟೀಲು ವಾದನ, ವಿದ್ವಾನ್ ಜಿ.ಎಸ್. ರಾಮಾನುಜನ್–ಮೃದಂಗ, ವಿದ್ವಾನ್ ಶರತ್ ಕೌಶಿಕ್–ಘಟ, ಸ್ಥಳ: ವೀಣೆ ಶೇಷಣ್ಣ ಭವನ, ಕುವೆಂಪುನಗರ, ಸಂಜೆ 6ಕ್ಕೆ.
- **ಶ್ರೀ ಉತ್ತರಾದಿ ಮಠ, ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನ :** ವಿದ್ವಾನ್ ಮುಕುಂದಾಚಾರ್ಯ ಪಾಚ್ಚಾಪುರ, ಮುಂಬೈ ಅವರಿಂದ ಭಗವದ್ಗೀತೆ ಪ್ರವಚನ– 9ನೇ ಅಧ್ಯಾಯ, ಸ್ಥಳ: ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನ, ಶ್ರೀ ಉತ್ತರಾದಿ ಮಠ, ಅಗ್ರಹಾರ, ಸಂಜೆ 6.30ಕ್ಕೆ.

ಸಬ್ ರಿಜಿಸ್ಟ್ರಾರ್ ಕಚೇರಿ ಸರ್ವರ್ ಸಮಸ್ಯೆಗಿನ್ನು ಸಿಕ್ಕಿಲ್ಲ ಪರಿಹಾರ; ಸಾರ್ವಜನಿಕರ ಹಿಡಿಶಾಪ



ಸಂಗ್ರಹ ಚಿತ್ರ

ಮೈಸೂರು,ಮೇ 25(ಎಸ್‌ಬಿಡಿ)–ಉಪ ನೋಂದಣಿ ಕಚೇರಿ ಸೇವೆಗೆ ಹೊಸ ತಂತ್ರಾಂಶ ಅಳವಡಿಸಿದ್ದರೂ 'ಸರ್ವರ್ ಸಮಸ್ಯೆ'ಗೆ ಮಾತ್ರ ಪರಿಹಾರ ಕಂಡುಕೊಂಡಿಲ್ಲ ಎಂದು ಸಾರ್ವಜನಿಕರು ದೂರಿದ್ದಾರೆ.

ಅಗತ್ಯ ದಾಖಲಾತಿಗಳೊಂದಿಗೆ ನಿಗದಿತ ದಿನಾಂಕ ಹಾಗೂ ಸಮಯಕ್ಕೆ ಉಪ ನೋಂದಣಾಧಿಕಾರಿಗಳ(ಸಬ್ ರಿಜಿಸ್ಟ್ರಾರ್) ಕಚೇರಿಗೆ ಹೋದರೆ ದೊಡ್ಡ ಆಘಾತ ಕಾದಿರುತ್ತದೆ. ಇಂದು ಯಾವುದೇ ನೋಂದಣಿ ಮಾಡಲಾಗದು ಎಂದು ಅಲ್ಲಿನ ಸಿಬ್ಬಂದಿ ಹೇಳುತ್ತಾರೆ. ಕಾರಣ ಕೇಳಿದರೆ 'ಸರ್ವರ್ ಸಮಸ್ಯೆ' ಎಂಬ ಸಿದ್ಧ ಉತ್ತರ ನೀಡುತ್ತಾರೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಸ್ಥಳೀಯರು ಮಾತ್ರವಲ್ಲದೆ ಬೆಂಗಳೂರು, ಮುಂಬೈ, ಚೆನ್ನೈ, ಕೋಲ್ಕತ್ತಾ, ನವದೆಹಲಿ ಹೀಗೆ ಹೊರ ರಾಜ್ಯಗಳಿಂದಲೂ ಉಪನೋಂದಣಾಧಿಕಾರಿಗಳ ಕಚೇರಿಗೆ ಬರುತ್ತಾರೆ. ಆಯಾ ಕಚೇರಿ ವ್ಯಾಪ್ತಿಯ ಆಸ್ತಿ ನೋಂದಣಿಗಾಗಿ ಕೆಲಸ ಕಾರ್ಯ ಬಿಟ್ಟು ದೂರದಿಂದ ಬಂದವರನ್ನು 'ಸರ್ವರ್ ಸಮಸ್ಯೆ' ಎಂದು ವಾಪಸ್ಸು ಕಳುಹಿಸುತ್ತಾರೆ. ಯಾವಾಗ ಸರಿಹೋಗಬಹುದು, ನಾವು ಮತ್ತೆ ಯಾವಾಗ ಬರಬೇಕು ಎಂದು ಕೇಳಿದರೆ ಸರಿಯಾಗಿ ಸ್ಪಂದಿಸುವುದಿಲ್ಲ. ಅತ್ಯಾಧುನಿಕ ತಂತ್ರಜ್ಞಾನವಿದ್ದಾಗ್ಯೂ ಹೀಗೆ ಸರ್ವರ್ ಸಮಸ್ಯೆ ಎಂದರೆ ಇದಕ್ಕೆ ಮುಕ್ತಿ ಯಾವಾಗ? ಎಂದು ಸಾರ್ವಜನಿಕರು ಪ್ರಶ್ನಿಸಿದ್ದಾರೆ.

ಮೈಸೂರು ನಗರದಲ್ಲಿರುವ ಪೂರ್ವ, ಪಶ್ಚಿಮ, ಉತ್ತರ ಹಾಗೂ ದಕ್ಷಿಣ ಉಪ ನೋಂದಣಾಧಿಕಾರಿ ಕಚೇರಿಗಳಲ್ಲೂ ಗುರುವಾರ ಮಧ್ಯಾಹ್ನ ಸರ್ವರ್ ಸಮಸ್ಯೆಯಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿತ್ತು. ನೋಂದಣಿಗಾಗಿ ನಿಗದಿತ ಸಮಯಕ್ಕೆ ಬಂದವರು ತಾಸು ಗಟ್ಟಲೆ ಕಾಯುವಂತಾಯ್ತು. ಈ ಗಂಭೀರ ಸಮಸ್ಯೆಯತ್ತ ಸಂಸದರು, ಶಾಸಕರು ಗಮನ ಹರಿಸಬೇಕು. ಜನರನ್ನು ಈ ಸರ್ವರ್ ಕಂಟಕದಿಂದ ಪಾರು ಮಾಡುವ ನಿಟ್ಟಿನಲ್ಲಿ ಪರಿಣಾಮಕಾರಿ ಕ್ರಮಕ್ಕೆ ಮುಂದಾಗಬೇಕು ಎಂದು ಆಗ್ರಹಿಸಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿದ ಅಧಿಕಾರಿಯೊಬ್ಬರು, ಹಿಂದೆ ಜಿಲ್ಲಾ ಹಂತದಲ್ಲಿ ಸರ್ವರ್ ನಿರ್ವಹಣೆಯಾಗುತ್ತಿತ್ತು. ಹೊಸ ತಂತ್ರಾಂಶ ಅಳವಡಿಸಿದ ಬಳಿಕ ಸರ್ವರ್ ವ್ಯವಸ್ಥೆಯನ್ನು ಕೇಂದ್ರೀಕೃತಗೊಳಿಸಲಾಗಿದೆ. ಹೊಸ ತಂತ್ರಾಂಶವಾಗಿರುವುದರಿಂದ ಏನಾದರೂ ಅಪ್ಡೇಟ್(ಸುಧಾರಣೆ) ಮಾಡುವಾಗ ಇಡೀ ರಾಜ್ಯದಲ್ಲಿ ಸರ್ವರ್ ಡೌನ್ ಆಗುತ್ತದೆ. ಹಾಗೆಯೇ ಮಧ್ಯಾಹ್ನ ಸರ್ವರ್ ಸಮಸ್ಯೆಯಾಗಿತ್ತು. ಕೆಲ ಗಂಟೆಗಳ ಬಳಿಕ ಸರಿಪಡಿಸಲಾಗಿದೆ ಎಂದು ತಿಳಿಸಿದರು.

ಹೊಸ ತಂತ್ರಾಂಶ; ಹಳೆ ಸಮಸ್ಯೆ: ನೋಂದಣಿ ಮತ್ತು ಮುದ್ರಾಂಕ ಇಲಾಖೆಯು, ಉಪ ನೋಂದಣಿ ಕಚೇರಿ ಸೇವೆಯಲ್ಲಿನ ಲೋಪದೋಷಗಳನ್ನು ಸರಿಪಡಿಸುವ ಉದ್ದೇಶದಿಂದ ಕಾವೇರಿ 2.0 ತಂತ್ರಾಂಶವನ್ನು ಜೂ.1ರಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲು ಮುಂದಾಗಿದೆ. ಈ ನಿಟ್ಟಿನಲ್ಲಿ ಈಗಾಗಲೇ ಮೈಸೂರು, ಮಂಡ್ಯ, ರಾಮನಗರ ಸೇರಿದಂತೆ ಹಲವು ಜಿಲ್ಲೆಗಳ ಕಚೇರಿಗಳಲ್ಲಿ ಪ್ರಾಯೋಗಿಕವಾಗಿ ಜಾರಿಗೆ ತರಲಾಗಿದೆ. ಆದರೆ ಹೊಸ ತಂತ್ರಾಂಶ ಅಳವಡಿಸಿದರೂ ಹಳೆಯ ಸರ್ವರ್ ಸಮಸ್ಯೆ ಮಾತ್ರ ಇನ್ನೂ ಕಾಡುತ್ತಿದೆ. ಹಂತ ಹಂತವಾಗಿ ಜಾರಿಗೊಳಿಸುವ ಬದಲು ರಾಜ್ಯಾದ್ಯಂತ ಏಕಕಾಲಕ್ಕೆ ಅನುಷ್ಠಾನಗೊಳಿಸಲು ಸಿದ್ಧತೆ ನಡೆಸಿರುವುದರಿಂದ ಸರ್ವರ್ ಸಮಸ್ಯೆ ಉಂಟಾಗುತ್ತಿದೆ ಎಂದು ಹೇಳಲಾಗುತ್ತಿದೆ.

ಹೊಸ ತಂತ್ರಾಂಶದಲ್ಲಿ ಬಹುತೇಕ ಎಲ್ಲಾ ಪ್ರಕ್ರಿಯೆಗಳೂ ಆನ್‌ಲೈನ್ ಮೂಲಕವೇ ನಡೆಯುತ್ತದೆ. ಕಾವೇರಿ ವೆಬ್‌ಸೈಟ್‌ನಲ್ಲಿ ಇ–ಮೇಲ್ ಐಡಿ ಮೂಲಕ ಲಾಗಿನ್ ಆಗಿ ಪಾಸ್‌ವರ್ಡ್ ಸಿದ್ಧಪಡಿಸಿಕೊಂಡು ಅಗತ್ಯ ದಾಖಲೆಗಳನ್ನು ಅಪ್‌ಲೋಡ್ ಮಾಡಬೇಕು. ಅದನ್ನು ಉಪ ನೋಂದಣಾಧಿಕಾರಿ ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಿದ ಬಳಿಕ ಸರಿ ಇದೆಯೇ? ಇಲ್ಲವೇ ಎಂದು ಅರ್ಜಿದಾರರಿಗೆ ಮಾಹಿತಿ ಕಳುಹಿಸುತ್ತಾರೆ. ಸರಿಯಾಗಿರುವ ಅರ್ಜಿಯನ್ನು ಸ್ವೀಕರಿಸಿದ ಬಳಿಕ ನೋಂದಣಿ ಮತ್ತು ಮುದ್ರಾಂಕ ಶುಲ್ಕವನ್ನು ಕ್ರೆಡಿಟ್, ಡೆಬಿಟ್ ಅಥವಾ ಆನ್‌ಲೈನ್‌ನಲ್ಲಿ ಪಾವತಿಸಿ, ದಿನಾಂಕ ಹಾಗೂ ಸಮಯ ನಿಗದಿ ಮಾಡಬೇಕು. ಅದನ್ನು ಉಪನೋಂದಣಾಧಿಕಾರಿ ಓಕೆ ಮಾಡಿ, ಕಂಪ್ಯೂಟರ್ ಆಪರೇಟರ್ ಒಬ್ಬರನ್ನು ನಿಗದಿಪಡಿಸುತ್ತಾರೆ. ಹೀಗೆ ನಿಗದಿತ ಸಮಯಕ್ಕೆ ಹೋದರೆ ದಾಖಲೆ ಪರಿಶೀಲಿಸಿ, ಫೋಟೋ, ಬೆರಳಚ್ಚು ಪಡೆದು ನೋಂದಣಿ ಪ್ರಕ್ರಿಯೆ ಪೂರ್ಣಗೊಳಿಸಲಾಗುತ್ತದೆ.

ಸಾಮಾನ್ಯರಿಗೆ ಸಮಸ್ಯೆ

ಹೊಸ ತಂತ್ರಾಂಶದಲ್ಲಿ ಇ–ಮೇಲ್ ಐಡಿ, ನೆಟ್ ಬ್ಯಾಂಕಿಂಗ್, ದಾಖಲೆ ಅಪ್ಲೋಡ್ ಇನ್ನಿತರ ನಿಯಮಗಳಿಂದ ಸಾರ್ವಜನಿಕರಿಗೆ ಕ್ಲಿಷ್ಟವಾಗಬಹುದು. ಸರ್ವರ್ ಜೊತೆಗೆ ಫೋಟೋ, ಬೆರಳಚ್ಚು ಪಡೆಯುವುದು ಹಾಗೂ ಮುದ್ರಣ ಆಗುವುದರಲ್ಲಿನ ಸಮಸ್ಯೆಗಳು ಹೆಚ್ಚಾಗಿವೆ. ಡಿಜಿಟಲ್ ಸಹಿ ಪಡೆಯುವಲ್ಲೂ ವ್ಯತ್ಯಾಸವಾಗುತ್ತಿದೆ. ಸಾಮಾನ್ಯ ಜನ ದಾಖಲೆ ಅಪ್ಲೋಡ್ ಮಾಡುವುದು, ದಿನಾಂಕ ಹಾಗೂ ಸಮಯ ನಿಗದಿಪಡಿಸಿಕೊಳ್ಳುವುದು, ಉಪ ನೋಂದಣಾಧಿಕಾರಿಗಳ ಪ್ರತಿಕ್ರಿಯೆ ಇನ್ನಿತರ ಮಾಹಿತಿ ತಿಳಿಯಲು ಸೈಬರ್ ಸೆಂಟರ್ ಮೊರೆ ಹೋಗಬೇಕಾಗುತ್ತದೆ. ಹಲವು ತಾಂತ್ರಿಕ ಸಮಸ್ಯೆಗಳಿಂದ ನೋಂದಣಿ ಸಂಖ್ಯೆಯೂ ಕಡಿಮೆಯಾಗಿದೆ. ಸಾರ್ವಜನಿಕರು ಹಾಗೂ ಅಧಿಕಾರಿಗಳ ಹಿತ ದೃಷ್ಟಿಯಿಂದ ಹೊಸ ತಂತ್ರಾಂಶದಲ್ಲಿ ಸುಧಾರಣೆ ತಂದು ಪ್ರಕ್ರಿಯೆಯನ್ನು ಸರಳೀಕರಣಗೊಳಿಸಬೇಕಿದೆ ಎಂಬ ಅಭಿಪ್ರಾಯ ವ್ಯಕ್ತವಾಗುತ್ತಿದೆ.

ವಿವಿಗಳ ಸಿಂಡಿಕೇಟ್ ಸದಸ್ಯರು, ವಿವಿಧ ನೇಮಕಾತಿಗಳು ರದ್ದು

ಬೆಂಗಳೂರು: ರಾಜ್ಯದಲ್ಲಿ ಅಸ್ತಿತ್ವಕ್ಕೆ ಬಂದಿರುವಂತಹ ನೂತನ ಕಾಂಗ್ರೆಸ್ ಸರ್ಕಾರವು, ಬಿಜೆಪಿ ಸರ್ಕಾರದ ಅವಧಿಯಲ್ಲಿ ವಿಶ್ವವಿದ್ಯಾಲಯಗಳಲ್ಲಿ ನೇಮಕ ಮಾಡಿದ್ದ ಸಿಂಡಿಕೇಟ್ ಸದಸ್ಯರು ಸೇರಿದಂತೆ ವಿವಿಧ ನೇಮಕಾತಿ ರದ್ದುಗೊಳಿಸಿ ಆದೇಶಿಸಿದೆ. ಈ ಕುರಿತಂತೆ ಉನ್ನತ ಶಿಕ್ಷಣ ಇಲಾಖೆ ಸರ್ಕಾರದ ಅಧೀನ ಕಾರ್ಯದರ್ಶಿ ಅಧಿಸೂಚನೆ ಹೊರಡಿಸಿದ್ದಾರೆ.

ಆದೇಶದಲ್ಲಿ ಉನ್ನತ ಶಿಕ್ಷಣ ಅಡಿಯಲ್ಲಿ ಬರುವ ಸಾರ್ವಜನಿಕ ವಿವಿಗಳಿಗೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ವಿವಿ ಅಧಿನಿಯಮ 2000 ಹಾಗೂ ಇತರೆ ಪ್ರತ್ಯೇಕ ಅಧಿನಿಯಮಗಳಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸರ್ಕಾರವು ಈ ಹಿಂದೆ 22–05–2023 ರವರೆಗೆ ವಿವಿಧ ಸಾರ್ವಜನಿಕ ವಿವಿಗಳ ಸಿಂಡಿಕೇಟ್, ಕಾರ್ಯಕಾರಿ ಪರಿಷತ್, ಸಮಿತಿ, ವ್ಯವಸ್ಥಾಪನಾ ಮಂಡಳಿ, ಪ್ರಶಾಸನ ಸಭೆ, ವಿದ್ಯಾವಿಷಯಕ ಪರಿಷತ್ ಮತ್ತು ಪ್ರತಿಷ್ಠಾ ಪರಿಷತ್ತು ಪ್ರಾಧಿಕಾರಿಗಳಿಗೆ ಮಾಡಿರುವ ಎಲ್ಲಾ ಅಧಿಕಾರೇತರ ಸದಸ್ಯರ ನಾಮ ನಿರ್ದೇಶನಗಳನ್ನು ರದ್ದುಗೊಳಿಸಿರುವುದಾಗಿ ತಿಳಿಸಿದ್ದಾರೆ.

ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿಗೆ ಮಾಡಿರುವ ಎಲ್ಲಾ ಅಧಿಕಾರೇತರ ಸದಸ್ಯರ ನಾಮ ನಿರ್ದೇಶನಗಳನ್ನು, ಸಾರ್ವಜನಿಕ ವಿವಿಗಳಲ್ಲಿ ಸ್ಥಾಪಿಸಿರುವ ಅಧ್ಯಯನ ಪೀಠಗಳಿಗೆ ಮಾಡಿರುವ ಅಧಿಕಾರೇತರ ಸದಸ್ಯರ ನಾಮನಿರ್ದೇಶನ ಹಾಗೂ ಉನ್ನತ ಶಿಕ್ಷಣ ಇಲಾಖೆ ಅಡಿ ಬರುವ ಖಾಸಗಿ ವಿವಿಗಳಿಗೆ ಸಂಬಂಧಿಸಿದಂತೆ ಪ್ರಬಂಧಕ ಮಂಡಳಿಗಳಿಗೆ ಮಾಡಿರುವ ಎಲ್ಲಾ ಅಧಿಕಾರೇತರ ಸದಸ್ಯರ ನಾಮನಿರ್ದೇಶನಗಳನ್ನು ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ.

ಮಂಡ್ಯ ಜಿಲ್ಲೆಗೆ ಹಸಿರೆಲೆ ಬೀಜ ಪೂರೈಸಿ, ಸಬ್ಸಿಡಿ ನೀಡಿ

ರಾಜ್ಯ ಸರ್ಕಾರಕ್ಕೆ ಎಂಎಲ್‌ಸಿ ದಿನೇಶ್ ಗೂಳಿಗೌಡ ಮನವಿ


ದಿನೇಶ್ ಗೂಳಿಗೌಡ

ಮೈಸೂರು,ಮೇ 25(ಪಿಎಂ)–ಭತ್ತ ನಾಟಿಗೂ ಮುನ್ನ ಮಣ್ಣಿನ ಫಲವತ್ತತೆ ಹೆಚ್ಚಿಸಲು ನಾಟಿ ಮಾಡುವ ಹಸಿರೆಲೆ ಬೀಜವನ್ನು (ಚಂಬೆ ಬೀಜ) ಮಂಡ್ಯ ಜಿಲ್ಲೆಗೆ ಪೂರೈಸಿ, ಸಬ್ಸಿಡಿಯಲ್ಲಿ ರೈತರಿಗೆ ನೀಡಬೇಕೆಂದು ರಾಜ್ಯ ಸರ್ಕಾರಕ್ಕೆ ಮಂಡ್ಯ ಸ್ಥಳೀಯ ಸಂಸ್ಥೆಗಳಿಂದ ಆಯ್ಕೆಯಾಗಿರುವ ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಮನವಿ ಮಾಡಿದ್ದಾರೆ.

ಮಂಡ್ಯ ಜಿಲ್ಲೆಯಲ್ಲಿ ಭತ್ತ ಪ್ರಧಾನ ಬೆಳೆ. ಇದೇ ಬೆಳೆ ನಂಬಿ ಸಾವಿರಾರು ಕುಟುಂಬಗಳು ಜೀವನ ನಡೆಸುತ್ತಿವೆ. ಜಿಲ್ಲೆಯ 7 ತಾಲೂಕುಗಳಲ್ಲಿನ 65 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಭತ್ತ ಬೆಳೆಯಲಾಗುತ್ತದೆ. ಈ ಪ್ರದೇಶದಲ್ಲಿ ಭತ್ತ ನಾಟಿಗೂ ಮುನ್ನ ಮಣ್ಣಿನ ಫಲವತ್ತತೆಗಾಗಿ ಹಸಿರೆಲೆ ಬೀಜ (ಚಂಬೆ ಬೀಜ) ಬಿತ್ತನೆ ಮಾಡಲಾಗುತ್ತದೆ. ಇದೀಗ ಸುಮಾರು ಎರಡೂವರೆ ಸಾವಿರ ಕ್ವಿಂಟಾಲ್ ನಷ್ಟು ಈ ಹಸಿರೆಲೆ ಬೀಜದ ಅಗತ್ಯತೆ ಜಿಲ್ಲೆಯ ರೈತರ ಅಗತ್ಯವಾಗಿದೆ.

ಇಳುವರಿ ಹೆಚ್ಚಳದ ದೃಷ್ಟಿಯಿಂದ ಕೃಷಿಯಲ್ಲಿ ರಾಸಾಯನಿಕ ಗೊಬ್ಬರ ಬಳಕೆ ಹೆಚ್ಚಾಗಿದ್ದು, ಮೊದಲಿಗೆ ಇದರಿಂದ ಉತ್ತಮ ಇಳುವರಿ ಬಂದರೂ ಅತಿಯಾದ ಬಳಕೆಯಿಂದ ಭೂಮಿಯ ಫಲವತ್ತತೆ ಕಳೆದು ಹೋಗಲಿದೆ. ಜೊತೆಗೆ ಆಹಾರವೂ ವಿಷಮಯವಾಗುತ್ತದೆ. ಈ ನಡುವೆ ನಮ್ಮ ಭಾಗದ ರೈತರು ರಾಸಾಯನಿಕ ಮುಕ್ತ ಬೆಳೆ ಬೆಳೆಯುವ ನಿಟ್ಟಿಯಲ್ಲಿ ಪರ್ಯಾಯ ಹಾಗೂ ಹಳೇ ಪದ್ಧತಿಯಾದ ಹಸಿರೆಲೆ ಬೀಜ ನಾಟಿಗೆ ಆದ್ಯತೆ ನೀಡಿರುವುದು ನಮಗೆ ಹೆಮ್ಮೆಯೇ ಸರಿ.

ಆದರೆ ಈಗ ಮಂಡ್ಯ ಜಿಲ್ಲೆಯಲ್ಲಿ ಚಂಬೆ ಬೀಜದ ಕೊರತೆ ಉಂಟಾಗಿದೆ. ಅಗತ್ಯಕ್ಕೆ ತಕ್ಕಷ್ಟು ಇದನ್ನು ಪೂರೈಸುವ ಮೂಲಕ ರಾಸಾಯನಿಕ ಗೊಬ್ಬರ ಬಳಕೆ ತಪ್ಪಿಸಬಹುದು ಇಲ್ಲವೇ ತಗ್ಗಿಸಬಹುದಾಗಿದೆ. ಈ ನಿಟ್ಟಿನಲ್ಲಿ ಒಂದು ವಾರದೊಳಗೆ ಹಸಿರೆಲೆ ಬೀಜವನ್ನು ಮಂಡ್ಯ ಜಿಲ್ಲೆಗೆ ಪೂರೈಸಿ, ಕೆಜಿ 30 ರೂ.ನಂತೆ ಸಬ್ಸಿಡಿ ದರದಲ್ಲಿ (ಕೆಜಿಗೆ 60 ರೂ.) ರೈತರಿಗೆ ನೀಡಿದರೆ ಅನುಕೂಲವಾಗಲಿದೆ ಎಂದು ಹೇಳಿದ್ದಾರೆ.

ಜೂನ್ ತಿಂಗಳ ಆರಂಭಕ್ಕೆ ಒಂದು ವಾರವಷ್ಟೇ ಬಾಕಿಯಿರುವ ಹಿನ್ನೆಲೆಯಲ್ಲಿ ರೈತರು ಕೃಷಿ ಚಟುವಟಿಕೆಗೆ ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ. ಹೀಗಾಗಿ ತುರ್ತಾಗಿ ಕ್ರಮ ವಹಿಸುವ ಮೂಲಕ ರೈತರ ನೆರವಿಗೆ ಧಾವಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಕೃಷಿ ಇಲಾಖೆ ಆಯುಕ್ತರಲ್ಲಿ ದಿನೇಶ್ ಗೂಳಿಗೌಡ ಮನವಿ ಮಾಡಿದ್ದಾರೆ.

ಪ್ರಾಥಮಿಕ ಶಾಲೆಗಳಿಗೆ 27 ಸಾವಿರ ಅತಿಥಿ ಶಿಕ್ಷಕರ ನೇಮಕಕ್ಕೆ ಅನುಮತಿ

ಬೆಂಗಳೂರು: ರಾಜ್ಯದಲ್ಲಿ ಶಾಲೆಗಳು ಆರಂಭವಾಗುವ ಮುನ್ನವೇ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ ಅನುಗುಣವಾಗಿ 27 ಸಾವಿರ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಶಾಲಾ ಶಿಕ್ಷಣ ಇಲಾಖೆ ಅನುಮತಿ ನೀಡಿದೆ.

2023–24ನೇ ಶೈಕ್ಷಣಿಕ ವರ್ಷವು ಮೇ 29ರಿಂದ ಆರಂಭವಾಗುತ್ತಿದೆ. ಈ ಹಿನ್ನೆಲೆಯಲ್ಲಿ 6ರಿಂದ 8ನೇ ತರಗತಿಗೆ ನೇಮಕ ಮಾಡಿರುವ 13,352 ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕವಾಗುವ ತನಕ ಅಥವಾ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಎಂಬ ಷರತ್ತು ವಿಧಿಸಿ ನೇಮಕ ಮಾಡಿಕೊಳ್ಳುವಂತೆ ಜಿಲ್ಲಾ ಉಪ ನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಇಲಾಖೆ ಆಯುಕ್ತರು ಸೂಚನೆ ನೀಡಿದ್ದಾರೆ. 2022–23ನೇ ಸಾಲಿನಲ್ಲಿ ಅಗತ್ಯತೆ/ಹೆಚ್ಚುವರಿ ಶಿಕ್ಷಕರ ಹುದ್ದೆಗಳನ್ನು ಗುರುತಿಸುವ ಮತ್ತು ಮರು ಹೊಂದಾಣಿಕೆ ಪ್ರಕ್ರಿಯೆಯನ್ನು ಈಗಾಗಲೇ ಜಿಲ್ಲಾ ಹಂತದಲ್ಲಿ ನಿಯಮಾನುಸಾರ ಕೈಗೊಳ್ಳಲಾಗಿದೆ. ಇದರ ಆಧಾರದಲ್ಲಿ ಖಾಲಿ ಹುದ್ದೆಗಳಿರುವ ಕಡೆ ಅತಿಥಿ ಶಿಕ್ಷಕರನ್ನು ಆಯ್ಕೆ ಮಾಡಿಕೊಳ್ಳಲು ಸೂಚಿಸಲಾಗಿದೆ. ಆದ್ಯತೆ ಮೇರೆಗೆ ತ್ವರಿತವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಲು ಜಿಲ್ಲಾ ಉಪ ನಿರ್ದೇಶಕರು ತಾಲೂಕುವಾರು ಹುದ್ದೆಗಳ ಮರು ಹಂಚಿಕೆಯನ್ನು ಮೇ 26ರೊಳಗೆ ಕಡ್ಡಾಯವಾಗಿ ಪೂರ್ಣಗೊಳಿಸಬೇಕು. ಅತಿಥಿ ಶಿಕ್ಷಕರ ಆಯ್ಕೆಯನ್ನು ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರ ಮೂಲಕವೇ ಮಾಡಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಖಾಲಿ ಇರುವ ಶಾಲೆಗಳಿಗೆ ಮತ್ತು ಶಿಕ್ಷಕರಹಿತ ಶಾಲೆಗಳಿಗೆ ಮೊದಲ ಆದ್ಯತೆಯಾಗಿ ಪರಿಗಣಿಸಲು ಸೂಚಿಸಿದೆ. ಕರ್ನಾಟಕ ಪಬ್ಲಿಕ್ ಶಾಲೆಗಳು ಹಾಗೂ ಆದರ್ಶ ವಿದ್ಯಾಲಯಗಳಲ್ಲಿ ಶೇ.100 ಅತಿಥಿ ಶಿಕ್ಷಕರನ್ನು ಆದ್ಯತೆ ಮೇರೆಗೆ ನೇಮಕಾತಿ ಮಾಡಬೇಕು. ಕನಿಷ್ಠ ವಿದ್ಯಾರ್ಹತೆ ಪರಿಗಣಿಸಿ ಮೆರಿಟ್ ಆಧಾರದಲ್ಲಿ ಆಯ್ಕೆ ಮಾಡಬೇಕು. ಆಯ್ಕೆ ಮಾಡಿಕೊಂಡ ವಿವರಗಳನ್ನು ಜೂ.10ರೊಳಗೆ ಇಲಾಖೆಗೆ ಸಲ್ಲಿಸುವಂತೆ ಸೂಚಿಸಿದ್ದಾರೆ.

+254, +84, +63, –9197ರಿಂದ ಆರಂಭವಾಗುವ ನಂಬರ್ ಕರೆಗಳ ಸ್ವೀಕರಿಸಬೇಡಿ: ಪೊಲೀಸರ ಎಚ್ಚರಿಕೆ

ಮೈಸೂರು,ಮೇ 25(ಆರ್‌ಕೆ)–ಇತ್ತೀಚೆಗೆ ಸೈಬರ್ ಮಾದರಿಯ ಅಪರಾಧಗಳು ಹೆಚ್ಚಾಗುತ್ತಿದ್ದು, ಇಂಟರ್ನೆಟ್ ಪೋರ್ಟಲ್, ಇಂಟರ್‌ನ್ಯಾಷನಲ್ ನಂಬರ್ ಹಾಗೂ ಇನ್ನಿತರ ಸಂಶಯಾಸ್ಪದ ನಂಬರ್‌ಗಳ ಮೊಬೈಲ್ ಫೋನ್ ಕಾಲ್‌ಗಳನ್ನು ರಿಸೀವ್ ಮಾಡಬೇಡಿ ಎಂದು ಪೊಲೀಸರು ಎಚ್ಚರಿಕೆ ನೀಡಿದ್ದಾರೆ.

+254, +84, +63, –9197 ಸಂಖ್ಯೆಯಿಂದ ಆರಂಭವಾಗುವ ವಾಟ್ಸಾಪ್ ನಂಬರ್ ಇಂಟರ್ನೆಟ್ ಪೋರ್ಟಲ್ ಅಥವಾ ಇಂಟರ್ ನ್ಯಾಷನಲ್ ನಂಬರ್‌ಗಳ ಕರೆಗಳನ್ನು ಸ್ವೀಕರಿಸಬೇಡಿ. ಮಿಸ್‌ಕಾಲ್ ಅಥವಾ ವಾಟ್ಸಾಪ್ ಮೆಸೇಜ್‌ಗಳಿಗೆ ಪ್ರತಿಕ್ರಿಯೆ ನೀಡಿ ಮೋಸ ಹೋಗಬೇಡಿ ಎಂದು ಸೆನ್ ಕ್ರೈಂ ಠಾಣೆ ಪೊಲೀಸರು ತಿಳಿಸಿದ್ದಾರೆ.

ಸಾಮಾನ್ಯವಾಗಿ ಬೆಳಗ್ಗೆ 6ರಿಂದ 7 ಗಂಟೆ ಅಥವಾ ತಡರಾತ್ರಿ ಇಂತಹ ಕರೆಗಳು ಬರಲಿದ್ದು, ನಿಮ್ಮ ಪರಿಚಯ, ಆರ್ಥಿಕ ಸ್ಥಿತಿ, ಸಮಾಜದಲ್ಲಿ ನಿಮ್ಮ ಸ್ಥಾನಮಾನಗಳ ಬಗ್ಗೆ ತಿಳಿದುಕೊಂಡು ಹಲವಾರು ಬಗೆಯ ಹಣಕಾಸು ವಹಿವಾಟುಗಳ ಬಗ್ಗೆ ಗಮನ ಸೆಳೆದು ಹಣ ಕಸಿದು ಮೋಸ ಮಾಡುವುದುಂಟು. ಅವರ ಮಾತಿಗೆ, ಆಮಿಷಕ್ಕೆ ಓಗೊಟ್ಟು ಪ್ರತಿಕ್ರಿಯೆ ನೀಡಿದರೆ ನೀವು ವಂಚನೆಗೊಳಗಾಗುವುದು ನಿಶ್ಚಿತ ಎಂದು ಪೊಲೀಸರು ಎಚ್ಚರಿಸಿದ್ದಾರೆ.

ಆದ್ದರಿಂದ ಅಂತಹ ಕರೆಗಳು ಬಂದಾಗ ರಿಸೀವ್ ಮಾಡುವುದಾಗಲೀ, ಮಿಸ್ಡ್‌ಕಾಲ್, ಮೆಸೇಜ್‌ಗೆ ಪ್ರತಿಕ್ರಿಯಿಸದೇ ನಿರ್ಲಕ್ಷಿಸಬೇಕು. ಅಂತಹ ಕರೆಗಳು ಕೇವಲ ಮೊದಲ 4 ಸಂಖ್ಯೆಗಳು ಮಾತ್ರ ಡಿಸ್ಪ್ಲೇ ಆಗುತ್ತವೆಯೇ ಹೊರತು, ಎಲ್ಲಾ 10 ನಂಬರ್‌ಗಳೂ ಕಾಣಿಸುವುದಿಲ್ಲವಾದ್ದರಿಂದ ತಕ್ಷಣಕ್ಕೆ ಪೊಲೀಸರಿಗೆ ಸುಳಿವು ನೀಡಲು ಸಾಧ್ಯವಾಗುವುದಿಲ್ಲ ಎಂದು ತಿಳಿಸಿದ್ದಾರೆ.

ಇಂತಹ ನಂಬರ್‌ಗಳಿಂದ ಬರುವ ಕರೆಗಳಲ್ಲಿ ಹೆಚ್ಚಾಗಿ ಹಿಂದಿ–ಇಂಗ್ಲಿಷ್ ಭಾಷೆಯಲ್ಲಿ ಮಾತನಾಡುತ್ತಾರೆ. ಕೆಲವೇ ಕರೆಗಳು ಮಾತ್ರ ಸ್ಥಳೀಯ ಭಾಷೆಗಳಲ್ಲಿ ಸಂಭಾಷಣೆ ಮಾಡುತ್ತಾರೆ. ಆದ್ದರಿಂದ ನಾಗರಿಕರು +254, +84, +63ಗಳಿಂದ ಆರಂಭವಾಗುವ ಇಂಟರ್ ನ್ಯಾಷನಲ್ ಕಾಲ್‌ಗಳು, ಇಂಟರ್‌ನೆಟ್ ಪೋರ್ಟಲ್ ಕಾಲ್‌ಗಳನ್ನು ರಿಸೀವ್ ಮಾಡದಿರುವುದು ಒಳಿತು ಎಂದು ಸೆನ್ ಠಾಣೆ ಪೊಲೀಸರು ಸಲಹೆ ನೀಡಿದ್ದಾರೆ.

ಬೆಂಗಳೂರಲ್ಲಿ ಕಾಂಗ್ರೆಸ್ ಕಾರ್ಯಕರ್ತನ ಬರ್ಬರ ಹತ್ಯೆ

ಬೆಂಗಳೂರು: ಕಾಂಗ್ರೆಸ್ ಕಾರ್ಯಕರ್ತನ ಬರ್ಬರ ಹತ್ಯೆಯಾಗಿರುವ ಘಟನೆ ಬೆಂಗಳೂರಲ್ಲಿ ನಡೆದಿದೆ. ಮೃತನನ್ನು ರವಿ ಅಲಿಯಾಸ್ ಮತ್ತಿರವಿ (42) ಎಂದು ಗುರುತಿಸಲಾಗಿದ್ದು, ಕಾಂಗ್ರೆಸ್ ಕಾರ್ಯಕರ್ತರಾಗಿದ್ದರು. ಲಗ್ಗೆರೆ ಬಳಿಕ ಚೌಡೇಶ್ವರಿನಗರದ ಹಳ್ಳಿರುಚಿ ಹೋಟೆಲ್ ಬಳಿ ಕೊಲೆ ನಡೆದಿದೆ. ನಿನ್ನೆ ರಾತ್ರಿ ಕಾಂಗ್ರೆಸ್ ಕಾರ್ಯಕರ್ತ ರವಿ ಅಲಿಯಾಸ್ ಮತ್ತಿರವಿ(42) ಎಂಬುವವರನ್ನು ಬೈಕ್‌ಗಳಲ್ಲಿ ಬಂದ ಐದಾರು ದುಷ್ಕರ್ಮಿಗಳು ಹತ್ಯೆ ಮಾಡಿ ಎಸ್ಕೇಪ್ ಆಗಿದ್ದಾರೆ.

ಸಿಎಂಹೆಚ್ ಬಾರ್ ಬಳಿಯಿಂದ ರವಿಯನ್ನು ಅಟ್ಟಾಡಿಸಿದ ಕಿರಾತಕರು ಹಲ್ಲೆ ನಡೆಸಿದ್ದಾರೆ. ನಂತರ ಅವರು ಹಳ್ಳಿರುಚಿ ಹೋಟೇಲ್ ಬಳಿ ಮಾರಕಾಸ್ತ್ರಗಳಿಂದ ಕೊಚ್ಚಿದ್ದು ಕೊನೆಗೆ ತಲೆಯ ಮೇಲೆ ಸೈಜ್ ಕಲ್ಲು ಎತ್ತಿಹಾಕಿ ಕೊಲೆ ಮಾಡಿದ್ದಾರೆ. ರವಿ ಕೊಲೆ ಮಾಡಿದ ಹಂತಕರು ಕೊಲೆಗೂ ಮುನ್ನ ಏರಿಯಾದಲ್ಲಿ ಹಾಕಿದ್ದ ರವಿ ಅವರ ಫ್ಲೆಕ್ಸ್ ಹರಿದು ಹಾಕಿದ್ದಾರೆ. ಬಳಿಕ ರವಿ ಮನೆ ಮುಂದೆ ಬಂದು ಕಾದು ಕುಳಿತಿದ್ದರು. ಮೇ 24ರಂದು ಕಾಂಗ್ರೆಸ್ ಮುಖಂಡ ಹಾಗೂ ಫೈನಾನ್ಷಿಯರ್ ಕೃಷ್ಣಮೂರ್ತಿ ಹುಟ್ಟುಹಬ್ಬ ಇತ್ತು. ಈ ಹಿನ್ನೆಲೆ ಕಾರ್ಯಕ್ರಮಕ್ಕೆ ನೂರಾರು ಕಾರ್ಯಕರ್ತರು ಆಗಮಿಸಿದ್ದರು. ಅಲ್ಲಿಗೆ ರವಿ ಕೂಡ ಖುಷಿ ಖುಷಿಯಿಂದ ಮನೆಯಿಂದ ಆಚೆ ಬಂದಾಗ ದುಷ್ಕರ್ಮಿಗಳು ಅಟ್ಯಾಕ್ ಮಾಡಿದ್ದಾರೆ. ನಂದಿನಿ ಲೇಔಟ್ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಹಂತಕರ ಪತ್ತೆಗೆ ಬಲೆ ಬೀಸಿದ್ದಾರೆ.


ಕೇಂದ್ರ ಲೋಕಸೇವಾ ಆಯೋಗ (ಯುಪಿಎಸ್‌ಸಿ) ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ 390ನೇ ರ್‍ಯಾಂಕ್ ಗಳಿಸಿ ಮೈಸೂರಿಗೆ ಕೀರ್ತಿ ತಂದಿರುವ ಕುವೆಂಪುನಗರದ ಎಂ.ಪೂಜಾ ಅವರನ್ನು ಗುರುವಾರ ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಮೈಸೂರು ಪೇಟ ತೊಡಿಸಿ, ಶಾಲು ಹೊದಿಸಿ ಆತ್ಮೀಯವಾಗಿ ಅಭಿನಂದಿಸಿದರು. ಈ ವೇಳೆ ಮೇಯರ್ ಶಿವಕುಮಾರ್, ನಗರಪಾಲಿಕೆ ಸದಸ್ಯ ಬಿ.ವಿ.ಮಂಜುನಾಥ್, ಬಿಜೆಪಿ ಪ್ರಧಾನ ಕಾರ್ಯದರ್ಶಿ ವಾಣೀಶ್ ಕುಮಾರ್, ವಿ.ಸೋಮಸುಂದರ್, ಪ್ರದೀಪ್‌ಕುಮಾರ್, ಕೆ.ಜೆ.ರಮೇಶ್ ಇನ್ನಿತರರು ಹಾಜರಿದ್ದರು.

ರೋಗಿಗಳಿಗೆ ಆಶ್ರಯ ಶೆಲ್ಟರ್ ಉದ್ಘಾಟನೆ



ಮೈಸೂರು, ಮೇ 25(ಎಂಕೆ)– ರೋಟರಿ ಮೈಸೂರು ಮಿಡ್‌ಟೌನ್ ವತಿಯಿಂದ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಆವರಣದಲ್ಲಿನ ಶವಾಗಾರದ ಸಮೀಪದಲ್ಲಿ ಶೌಚಾಲಯ, ಕುಡಿಯುವ ನೀರಿನ ಘಟಕ ಹಾಗೂ ಚೆಲುವಾಂಬ ಆಸ್ಪತ್ರೆಯ ಗರ್ಭಿಣಿ ಸ್ತ್ರೀಯರ ತಪಾಸಣೆ ವಿಭಾಗದ ಎದುರು ನಿರ್ಮಿಸಿರುವ ಶೆಲ್ಟರ್ ಅನ್ನು ಬುಧವಾರ ಉದ್ಘಾಟಿಸಲಾಯಿತು.

ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ನಿರ್ದೇಶಕಿ ಡಾ.ಕೆ.ಆರ್.ದಾಕ್ಷಾಯಿಣಿ, ರೋಟರಿ ಜಿಲ್ಲಾ ಗೌರ್ನರ್ ಪಿ.ಕೆ.ರಾಮಕೃಷ್ಣ ಉದ್ಘಾಟಿಸಿದರು. ಬಳಿಕ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ನಿರ್ದೇಶಕಿ ಡಾ.ಕೆ.ಆರ್.ದಾಕ್ಷಾಯಿಣಿ ಮಾತನಾಡಿ, ಕಳೆದ ಬಾರಿ ಶವಾಗಾರದ ಬಳಿ ಶೆಲ್ಟರ್ ನಿರ್ಮಿಸಿಕೊಟ್ಟಿದ್ದ ರೋಟರಿ ಮೈಸೂರು ಮಿಡ್‌ಟೌನ್ ಸಂಸ್ಥೆಯವರು ಈ ಬಾರಿ ಶೌಚಾಲಯ, ನೀರಿನ ಘಟಕ ಹಾಗೂ ಗರ್ಭಿಣಿ ಸ್ತ್ರೀಯರ ವಿಶ್ರಾಂತಿಗಾಗಿ ಶೆಲ್ಟರ್ ನಿರ್ಮಿಸಿಕೊಟ್ಟಿದ್ದಾರೆ. ಎಂಎಂಸಿಆರ್‌ಐನ ಪರವಾಗಿ ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಚೆಲುವಾಂಬ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ.ರಾಜೇಂದ್ರ, ರೋಟರಿ ಮೈಸೂರು ಮಿಡ್‌ಟೌನ್ ಅಧ್ಯಕ್ಷ ಎಂ.ಪಿ.ನವೀನ್ ಚಂದ್ರ ಸೇರಿದಂತೆ ರೋಟರಿ ಮೈಸೂರು ಮಿಡ್‌ಟೌನ್ ಪದಾಧಿಕಾರಿಗಳು ಉಪಸ್ಥಿತರಿದ್ದರು.

ನಕ್ಕರೆ ಅದೇ ಸ್ವರ್ಗ

ಅಧಿಕಾರಿ : "ನೀನು ಒಡೆದ ಫ್ಲವರ್ ವಾಜ್ 5000 ವರ್ಷಗಳಷ್ಟು ಹಳೆಯದು ಗೊತ್ತೇನು ನಿನಗೆ?"

ಆಫೀಸ್ ಬಾಯ್ : "ಸದ್ಯ ನಾನೆಲ್ಲೊ ಹೊಸದು ಅಂತ ತಿಳಿದಿದ್ದೆ!"

ಮೈಸೂರು ಮಿತ್ರ
ಶುಕ್ರವಾರ, 26 ಮೇ 2023
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........

ಜೀವನದಲ್ಲಿ ತೃಪ್ತಿ ಎನ್ನುವುದು ಸಕಲ ಸುಖಕ್ಕೆ ಮೂಲ – ಎ.ವಿ.ಕೂಪರ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ನಂಯಾ ಇದ್ದಲ್ಲಿ ಭಂಯಾ ಇಲ್ಲ

ನಿಮ್ಮ ಪತ್ರಗಳು

ದರ್ಶನ್ ಧ್ರುವನಾರಾಯಣ್‌ಗೆ ರಾಜಕೀಯದಲ್ಲಿ ಯಶಸ್ಸು ಸಿಗಲಿ

ಮಾನ್ಯರೆ,



ಇತ್ತೀಚೆಗೆ ವಿಧಾನಸೌಧದಲ್ಲಿ ನಂಜನಗೂಡು ಕ್ಷೇತ್ರದ ಶಾಸಕರಾಗಿ ಪ್ರಮಾಣವಚನ ಸ್ವೀಕರಿಸಿದ ದಿವಂಗತ ಆರ್.ಧ್ರುವನಾರಾಯಣ ಅವರ ಪುತ್ರರಾದ ದರ್ಶನ್ ಧ್ರುವ ನಾರಾಯಣ್ ಅವರಿಗೆ ಅಭಿನಂದನೆಗಳು. ಅತೀ ಕಿರಿಯ ವಯಸ್ಸಿನ ದರ್ಶನ್ ಅವರನ್ನು ಶಾಸಕರಾಗಿ ನಂಜನಗೂಡು ಕ್ಷೇತ್ರದ ಜನರು ಆಯ್ಕೆ ಮಾಡಿದ್ದಾರೆ. ಆದರೆ ಕ್ಷೇತ್ರದ ಅಭಿವೃದ್ಧಿಗೆ ರಾಜಕೀಯದ ಅನುಭವ ತುಂಬಾ ಪ್ರಮುಖ ವಾಗಿದೆ. ಹಾಗಾಗಿ ಕಾಂಗ್ರೆಸ್ ಸರ್ಕಾರದ ಮುಖ್ಯಮಂತ್ರಿ ಗಳು, ಉಪಮುಖ್ಯಮಂತ್ರಿಗಳು, ಹಿರಿಯ ಶಾಸಕರ ರಾಜಕೀಯ ಅನುಭವ ಅವರಿಗೆ ಸಹಾಯವಾಗುತ್ತದೆ. ಹಾಗಾಗಿ ಮುಂದಿನ ಐದು ವರ್ಷಗಳಲ್ಲಿ ನಂಜನಗೂಡು ಕ್ಷೇತ್ರವನ್ನು ಉತ್ತಮ ಅಭಿವೃದ್ಧಿಯ ಕಡೆ ಕೊಂಡೊಯ್ಯಲಿ ಎಂಬುದೇ ನಂಜನಗೂಡು ಕ್ಷೇತ್ರದ ಜನರ ಆಸೆಯಾಗಿದೆ ಹಾಗೂ ಅವರ ತಂದೆಯ ರೀತಿ ಜನಪ್ರಿಯ ರಾಜಕಾರಣಿಯಾಗಿ ದರ್ಶನ್ ಧ್ರುವನಾರಾಯಣ್ ಅವರು ಬೆಳೆಯಲಿ ಎಂಬುದು ಆರ್. ಧ್ರುವನಾರಾಯಣ್ ಅವರ ಅಭಿಮಾನಿಗಳ ಆಸೆಯಾಗಿದೆ. ಮುಂದಿನ ರಾಜಕೀಯ ಜೀವನದಲ್ಲಿ ಅವರಿಗೆ ಒಳ್ಳೆಯ ಯಶಸ್ಸು ಸಿಗಲಿ ಎಂದು ಆಶಿಸುತ್ತೇನೆ.

– ಬಾ.ಮ.ಗಿರೀಶ್, ಬಾಡಗ, ಸರಗೂರು ತಾಲೂಕು

ರಾಷ್ಟ್ರಪತಿಗಳು ಹೆಚ್ಚು ಕ್ರಿಯಾಶೀಲರಾಗಲಿ

ಮಾನ್ಯರೆ,



ದೇಶದ ರಾಜಧಾನಿ ನವದೆಹಲಿಯಲ್ಲಿ ನಿರ್ಮಾಣ ಗೊಂಡಿರುವ ನೂತನ ಸಂಸತ್ ಭವನದ ಉದ್ಘಾಟನಾ ಕಾರ್ಯಕ್ರಮಕ್ಕೆ ದೇಶದ ಪ್ರಥಮ ಪ್ರಜೆಯಾದ ರಾಷ್ಟ್ರಪತಿಯನ್ನು ಆಹ್ವಾನಿಸದೇ ಇರುವ ಬಗ್ಗೆ ವ್ಯಾಪಕ ಟೀಕೆಗಳು ವ್ಯಕ್ತವಾಗುತ್ತಿವೆ. ದೇಶದ ಸಾಂವಿಧಾನಿಕ ಮುಖ್ಯಸ್ಥರಾದ ರಾಷ್ಟ್ರಪತಿಗಳು ಸಂಸತ್ತಿನ ಒಂದು ಭಾಗವೂ ಆಗಿದ್ದಾರೆ. ಪ್ರಧಾನಮಂತ್ರಿ ಸೇರಿದಂತೆ ಇತರ ಉನ್ನತ ಹುದ್ದೆಗಳ ನೇಮಕಾತಿಯೂ ಅವರಿಂದಲೇ ನಡೆಯುತ್ತದೆ. ಕೇಂದ್ರ ಸರ್ಕಾರದ ಎಲ್ಲಾ ಕೆಲಸ ಕಾರ್ಯಗಳು ಅವರ ಹೆಸರಿನಲ್ಲಿಯೇ ನಡೆಯುತ್ತವೆ. ರಾಷ್ಟ್ರಪತಿಗಳು ನಾಮ ಮಾತ್ರ ಕಾರ್ಯಾಂಗದ ಮುಖ್ಯಸ್ಥರಾದರೂ ಸಹ ಕ್ಲಿಷ್ಟಕರವಾದ ಸಂದರ್ಭಗಳಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸಿ ದೇಶದ ಸಂವಿಧಾನವನ್ನು ರಕ್ಷಿಸುತ್ತಾರೆ. ಹೀಗಾಗಿಯೇ ಅವರನ್ನು "ದೇಶದ ಸಂವಿಧಾನದ ಸಂರಕ್ಷಕ" ಎಂದು ಕರೆಯಲಾಗುತ್ತದೆ.

ಕೇಂದ್ರದಲ್ಲಿ ಎನ್‌ಡಿಎ ಅಧಿಕಾರಕ್ಕೆ ಬಂದ ಮೇಲೆ ರಾಷ್ಟ್ರಪತಿಗಳ ಮಹತ್ವ ಕಡಿಮೆಯಾಗುತ್ತಿದೆ ಎನ್ನಬಹುದು. ರಾಮನಾಥ ಕೋವಿಂದ್, ಕೇವಲ ಅಲಂಕಾರಿಕ ರಾಷ್ಟ್ರಪತಿಗಳಾಗಿದ್ದರೆ ವಿನಃ ಕ್ರಿಯಾಶೀಲ ರಾಷ್ಟ್ರಪತಿಯಾಗಲಿಲ್ಲ. ಪ್ರಸ್ತುತ ರಾಷ್ಟ್ರಪತಿಗಳು ಸಹಾ ಅದೇ ಹಾದಿಯಲ್ಲಿ ಸಾಗಿದ್ದಾರೆ. ರಾಷ್ಟ್ರಪತಿಯಾಗಿ ಪಾದರಸದಂತೆ, ದೇಶಾದ್ಯಂತ ಸುತ್ತಾಡಿ, ರಾಜ್ಯದ ಯುವ ಜನತೆಯನ್ನು ಬಡಿದೆಬ್ಬಿಸಿದ್ದ ಡಾ.ಅಬ್ದುಲ್ ಕಲಾಂ, ದೇಶದ ಓರ್ವ ಕ್ರಿಯಾಶೀಲ ರಾಷ್ಟ್ರಪತಿಯಾಗಿದ್ದರು. ಇನ್ನು ಮುಂದೆಯಾದರೂ ರಾಷ್ಟ್ರಪತಿಗಳು ಹೆಚ್ಚು ಕ್ರಿಯಾಶೀಲರಾಗಿ ತಮ್ಮ ಕರ್ತವ್ಯಗಳನ್ನು ನಿರ್ವಹಿಸಲಿ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು.

ಯುವನಿಧಿ ಮಾನದಂಡ ಸರಿಯೇ?

ಮಾನ್ಯರೆ,

2023ರ ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವು 5 ಗ್ಯಾರಂಟಿಗಳನ್ನು ಮುಂದೆ ಇಟ್ಟು ಜನರನ್ನು ತನ್ನತ್ತ ಸೆಳೆದು ಅಧಿಕಾರ ಗಿಟ್ಟಿಸಿಕೊಂಡಿದೆ. ಜನರ ಆಶೀರ್ವಾದವನ್ನು ಉಳಿಸಿ–ಬೆಳೆಸಿಕೊಂಡು ಹೋಗುವುದು ಈ ಸರ್ಕಾರದ ಜವಾಬ್ದಾರಿ. ಕಾಂಗ್ರೆಸ್ ಪಕ್ಷದ 5 ಗ್ಯಾರಂಟಿಗಳಲ್ಲಿ ಪ್ರಮುಖವಾಗಿ ಒಂದಾದ "ಯುವ ನಿಧಿ" ಯೋಜನೆಯಡಿಯಲ್ಲಿ ಪ್ರಸಕ್ತ ಸಾಲಿನಲ್ಲಿ ಅಂದರೆ 2022–23 ಪಾಸಾದ ಪದವೀಧರರು ನಿರುದ್ಯೋಗ ಭತ್ಯೆ ಪಡೆಯಲು ಫಲಾನುಭವಿಗಳು ಎಂದು ಹೇಳಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಪಾಸಾದವರು ಹೇಗೆ ನಿರುದ್ಯೋಗಿಗಳಾಗುತ್ತಾರೆ? ಮಾನದಂಡವಾದರೂ ಏನು ಇದರ ಬಗ್ಗೆ ಬಲ್ಲವರೇ ಉತ್ತರಿಸಬೇಕು?

ಸುಮಾರು 8 ರಿಂದ 10 ವರ್ಷಗಳ ಹಿಂದೆಯೇ ಪದವಿಗಳನ್ನು ಪಡೆದು ತಮ್ಮ ಆತ್ಮ ಗೌರವವನ್ನು ಬಿಟ್ಟು ಉದ್ಯೋಗಕ್ಕಾಗಿ ಬೀದಿ ಬೀದಿ ಅಲೆದಾಡುವ, ಸರ್ಕಾರದ ನೌಕರಿಯ ಆಸೆಗಾಗಿ ಹಗಲು ರಾತ್ರಿಯನ್ನದೆ ಓದಲು ಶ್ರಮವಹಿಸುತ್ತಿರುವ, ಮೂರು–ನಾಲ್ಕು ಪದವಿಗಳನ್ನು ಪಡೆದರು ಬದುಕನ್ನು ಕಟ್ಟಿಕೊಳ್ಳಲು ಹೆಣಗಾಡುತ್ತಿರುವ ಯುವಕರೇ "ಯುವ ನಿಧಿ" ಯೋಜನೆಯ ನಿಜವಾದ ಫಲಾನುಭವಿಗಳು. ಬಡತನ ರೇಖೆಗಿಂತ ಕೆಳಗಿನವರು, ದೀನ– ದುರ್ಬಲ, ಮೂಲ ಸೌಕರ್ಯ ವಂಚಿತ, ಮುಂತಾದ ಮಾನದಂಡಗಳನ್ನು ಇಟ್ಟುಕೊಂಡು ಇಂದಿನ ರಾಜ್ಯ ಸರ್ಕಾರ ಯುವ ನಿಧಿ ಯೋಜನೆಯ ಮಾನದಂಡ ರೂಪಿಸಬಹುದೇ?

–ಹೆಚ್.ಪಿ.ಮಹದೇವಸ್ವಾಮಿ, ಹೊರಳಹಳ್ಳಿ, ತಿ.ನರಸೀಪುರ ತಾ.

ನಗೆಯು ಬರುತಿದೆ...!

ಮಾನ್ಯರೆ,

ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತಿದ್ದಂತೆಯೇ ಸಚಿವ ಸ್ಥಾನ ಗಿಟ್ಟಿಸಿಕೊಳ್ಳಲು ಹಾತೊರೆಯುವ ಶಾಸಕರ ಸಂಖ್ಯೆ ಹೆಚ್ಚಾಗುತ್ತಿದೆ.

ಈ ಹಿಂದೆ ಸಚಿವರಾಗಿದ್ದವರೂ ನನಗೆ ಮತ್ತೆ ಸಚಿವ ಸಂಪುಟದಲ್ಲಿ ಸ್ಥಾನ ಕೊಡಿ ಎಂದು ಕೇಳುತ್ತಿದ್ದರೆ ಮತ್ತೆ ಸ್ವಲ್ಪ ಮರ್ಯಾದಸ್ಥರು ತಾವೇ ಬಾಯಿ ಬಿಟ್ಟು ಕೇಳದೇ ತಮ್ಮ ಅಭಿಮಾನಿಗಳನ್ನು ಛೂ ಬಿಟ್ಟು ತಮ್ಮ ಪರ ಲಾಬಿ ಮಾಡುತ್ತಿದ್ದಾರೆ.

ಹಿರಿಯರು ಈಗಾಗಲೇ ಹಲವು ಸಲ ಸಚಿವರಾಗಿದ್ದವರು ಸಚಿವ ಸ್ಥಾನಕ್ಕೆ ಹಾತೊರೆಯದೇ ಕಿರಿಯ ಮಧ್ಯ ವಯಸ್ಸಿನ ಶಾಸಕರುಗಳಿಗೆ ಸಚಿವ, ನಿಗಮ ಮಂಡಳಿಗಳ ಅಧ್ಯಕ್ಷ ಸ್ಥಾನ ಮೊದಲಾದವುಗಳನ್ನು ನೀಡುವ ಸಲುವಾಗಿ ಹಿಂದೆ ಸರಿದು ನಿಂತರೆ ಅವರಿಗೆ ಜನಮನ್ನಣೆ, ಗೌರವ ಹೆಚ್ಚಾಗುತ್ತದೆ.

ಸಚಿವರಾಗಿದ್ದವರೇ ಪದೇ... ಪದೇ... ಅಧಿಕಾರ ಬೇಕೆಂದರೆ ಹೇಗೆ?

–ಕೊ.ಸು.ನರಸಿಂಹಮೂರ್ತಿ, ಹಿರಿಯ ನಾಗರಿಕ, ಮೈಸೂರು

ನಮ್ಮಲ್ಲಿ ಗ್ಯಾರಂಟಿ ವರ್ಕ್‌ಔಟ್ ಆಗಿಲ್ಲ

-ಟಿ.ಎಸ್.ಶ್ರೀವತ್ಸ



ಟಿ.ಎಸ್.ಶ್ರೀವತ್ಸ
ಕೃಷ್ಣರಾಜ ಕ್ಷೇತ್ರದ ಶಾಸಕರು

> "ಕೆ.ಆರ್.ಕ್ಷೇತ್ರದಲ್ಲಿನ ಪ್ರಮುಖ ಐದಾರು ಸಮಸ್ಯೆಗಳ ಬಗ್ಗೆ ಪಟ್ಟಿ ಮಾಡಿಕೊಂಡಿದ್ದೇನೆ. ಖಾತೆ ಬದಲಾವಣೆ, ದೊಡ್ಡ ಮೋರಿ, ಸಿವೇಜ್ ಫಾರಂ, ಕುಡಿಯುವ ನೀರಿನ ಸಮಸ್ಯೆಗಳು ಹತ್ತಾರು ವರ್ಷಗಳಿಂದಿವೆ ಎಂದು ಜನ ಹೇಳುತ್ತಿದ್ದಾರೆ. ಒಂದೊಂದು ಸಮಸ್ಯೆಗೆ ಪ್ರತ್ಯೇಕ ಸಮಯ ನಿಗದಿ ಮಾಡಿಕೊಂಡು ಸಾಧ್ಯವಾದಷ್ಟು ತ್ವರಿತವಾಗಿ ಬಗೆಹರಿಸುವ ಯೋಜನೆಯನ್ನು ರೂಪಿಸಿದ್ದೇನೆ. ನಿಗದಿತ ಸಮಯದಲ್ಲೇ ಸಮಸ್ಯೆ ಬಗೆಹರಿಸಬೇಕು ಎಂಬುದು ನನ್ನ ಉದ್ದೇಶ. ಆಸ್ಪತ್ರೆಗಳಿಗೆ ಭೇಟಿ ಮಾಡಿ, ಅಲ್ಲಿರುವ ನ್ಯೂನತೆಗಳನ್ನು ಅರಿತು ಸರಿಪಡಿಸುವುದು. ದುಸ್ಥಿತಿಯಲ್ಲಿರುವ ಅಂಗನವಾಡಿ ಕೇಂದ್ರಗಳನ್ನು ಖಾಸಗಿ ಸಂಸ್ಥೆಗಳ ಸಹಭಾಗಿತ್ವದೊಂದಿಗೆ ಅಭಿವೃದ್ಧಿ ಮಾಡುವ ಚಿಂತನೆ ನಡೆಸಿದ್ದೇನೆ. ಒಟ್ಟಾರೆ ಕೆ.ಆರ್.ಕ್ಷೇತ್ರ ಎಲ್ಲಾ ನಿಟ್ಟಿನಲ್ಲಿಯೂ ಮಾದರಿ ಕ್ಷೇತ್ರವಾಗಬೇಕು.

■ ಸಂದರ್ಶನ: ಮೋಹನ್ ಕಾಯಕ

ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಪೀಪಲ್ ಫ್ರೆಂಡ್ಲಿ ಎಂಎಲ್‌ಎ ಆಗಬೇಕು ಎಂದು ಬಯಸಿದ್ದೇನೆ. ಎಲ್ಲಾ ನಾಯಕರ, ಕಾರ್ಯಕರ್ತರ ಸಹಕಾರದೊಂದಿಗೆ ಕ್ಷೇತ್ರದಲ್ಲಿ ಯಾವುದೇ ಸಮಸ್ಯೆಗಳು ಎದುರಾದರೂ ಸ್ಪಂದಿಸುವ ಹಾಗೂ ಕ್ಷೇತ್ರದ ಅಭಿವೃದ್ಧಿಗಾಗಿ ಕೆಲಸ ಮಾಡಬೇಕು ಎಂದುಕೊಂಡಿದ್ದೇನೆ ಎಂದು ಕೆ.ಆರ್.ಕ್ಷೇತ್ರದ ನೂತನ ಶಾಸಕರಾಗಿ ಆಯ್ಕೆಯಾಗಿರುವ ಟಿ.ಎಸ್.ಶ್ರೀವತ್ಸ ವಿಶ್ವಾಸದಿಂದ ನುಡಿದಿದ್ದಾರೆ.

ಕಾಂಗ್ರೆಸ್ ಗ್ಯಾರಂಟಿ ಅಲೆಯ ನಡುವೆ ಮೈಸೂರು ಭಾಗದಲ್ಲಿ ವಿಜೇತರಾದ ಬಿಜೆಪಿಯ ಏಕೈಕ ಅಭ್ಯರ್ಥಿ ಎನಿಸಿರುವ ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ, ವಿಧಾನಸೌಧಕ್ಕೆ ಪ್ರವೇಶ ಮಾಡಿದ ಮೊದಲ ದಿನದ ಅನುಭವ, ಚುನಾವಣೆಯಲ್ಲಿ ಗೆಲುವು ಸಾಧಿಸಿದ ಬಗೆ ಹಾಗೂ ತಮ್ಮ ಮುಂದಿನ ಕಾರ್ಯಯೋಜನೆಗಳನ್ನು 'ಮೈಸೂರು ಮಿತ್ರ'ನೊಂದಿಗೆ ಮುಕ್ತವಾಗಿ ಹಂಚಿಕೊಂಡಿದ್ದಾರೆ.

ಮೈಸೂರು ಮಿತ್ರ: *ಶಾಸಕರಾಗಿ ಶಕ್ತಿ ಸೌಧ(ವಿಧಾನಸೌಧ)ದಲ್ಲಿ ಕಳೆದ ಮೊದಲ ದಿನದ ಅನುಭವ ಹೇಗಿತ್ತು?*

ಟಿ.ಎಸ್.ಶ್ರೀವತ್ಸ: ಮೊದಲ ಬಾರಿಗೆ ಸೋಮವಾರ(ಮೇ 22) ವಿಧಾನಸೌಧದ ಮೆಟ್ಟಿಲು ಹತ್ತುವಾಗ ಮನಸ್ಸಿನಲ್ಲಿ ಹಲವು ಭಾವನಾತ್ಮಕ ಚಿಂತನೆಗಳು ಮೂಡಿದವು. ನನ್ನ ಜೀವನದಲ್ಲಿ ಶಾಸಕನಾಗಿ ವಿಧಾನಸೌಧದ ಮೆಟ್ಟಿಲು ಹತ್ತುತ್ತೇನೆ, ಒಳಗಡೆ ಕೂರುತ್ತೇನೆ ಎಂದುಕೊಂಡಿರಲಿಲ್ಲ. ವಿಧಾನಸೌಧದ ಒಳಗೆ ಪ್ರವೇಶ ಮಾಡುತ್ತಿದ್ದಂತೆ ಮಹದಾಸೆ ಇಟ್ಟುಕೊಂಡು ಚುನಾವಣೆ ಎದುರಿಸಿದ್ದ ದಿನಗಳು ಕಣ್ಣ ಮುಂದೆ ಬಂದವು. ಮಕ್ಕಳಿಗೆ ದಿಢೀರನೆ ಬಹುಮಾನ ಕೊಟ್ಟಾಗ ಹೇಗೆ ಸಂತೋಷದಿಂದ ವರ್ತಿಸುತ್ತಾರೆಯೋ ಹಾಗೆಯೇ ನನ್ನ ಮನಸ್ಸಿಗೂ ಆನಂದವಾಗುತ್ತಿತ್ತು. ಮಹಾತ್ಮ ಗಾಂಧೀಜಿ, ಡಾ.ಬಿ.ಆರ್.ಅಂಬೇಡ್ಕರ್, ಸರ್ದಾರ್ ವಲ್ಲಭಬಾಯಿ ಪಟೇಲ್, ನೆಹರು ಸೇರಿದಂತೆ ಅನೇಕ ಗಣ್ಯರ ಫೋಟೊಗಳನ್ನು ನೋಡಿದಾಗ ಬಹಳ ಖುಷಿ ಎನಿಸಿತು. ಮೊದಲ ಇಡೀ ದಿನ ನಮ್ಮ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಎಸ್.ಟಿ.ಸೋಮಶೇಖರ್ ಅವರು, ನನ್ನನ್ನು ಕರೆದುಕೊಂಡು ನಾನೆಲ್ಲಿ ಕೂರಬೇಕು ಎಂಬುದೆಲ್ಲವನ್ನೂ ತೋರಿಸಿ ಕೊಟ್ಟರು. ಮೊದಲ ದಿನ ಬಹಳ ಖುಷಿ ಆಯಿತು.

ಮಿತ್ರ: *ಚುನಾವಣೆಯಲ್ಲಿ ತಮ್ಮ ಗೆಲುವು ಸಾಧ್ಯವಾಗಿದ್ದು ಹೇಗೆ?*

ಶ್ರೀವತ್ಸ: ಕೆ.ಆರ್.ಕ್ಷೇತ್ರದ ಅಭ್ಯರ್ಥಿಯಾಗುತ್ತಿದ್ದಂತೆಯೇ ನನ್ನಲ್ಲಿ ಗೆಲ್ಲುವ ವಿಶ್ವಾಸ ಮೂಡಿತ್ತು. ಕ್ಷೇತ್ರದಲ್ಲಿ ಮೊದಲಿನಿಂದಲೂ ಭಾರತೀಯ ಜನತಾ ಪಾರ್ಟಿಗೆ ಮತದಾರರ ಒಲವಿದೆ. 2 ಬಾರಿ ಹೆಚ್.ಗಂಗಾಧರ್, 4 ಬಾರಿ ಎಸ್.ಎ.ರಾಮದಾಸ್ ಅವರನ್ನು ಗೆಲ್ಲಿಸಿಕೊಟ್ಟಿರುವ ಕ್ಷೇತ್ರವಿದು. ಮುಖ್ಯವಾಗಿ ಬಿಜೆಪಿ ಐಡಿಯಾಲಜಿಯನ್ನು ಒಪ್ಪಿಕೊಂಡಿರುವ ಮತದಾರಿರುವ ಕ್ಷೇತ್ರ ಇದಾಗಿದೆ. ಅಲ್ಲದೆ ಮೊದಲಿನಿಂದಲೂ ಸಂಘಟನೆ ಚೆನ್ನಾಗಿದೆ. ಬೂತ್ ಮಟ್ಟದಲ್ಲಿ ಕಾರ್ಯಕರ್ತರಿದ್ದಾರೆ. 1994ರ ಚುನಾವಣೆಯಲ್ಲಿ ದೊಡ್ಡ ದೊಡ್ಡ ಅಭ್ಯರ್ಥಿಗಳೇ ಇದ್ದರೂ ರಾಮದಾಸ್ ಅವರನ್ನು ಗೆಲ್ಲಿಸಿಕೊಟ್ಟಿದ್ದು ಕೆ.ಆರ್.ಕ್ಷೇತ್ರ. ಹಾಗೆಯೇ ಮತದಾರರು ಬಿಜೆಪಿ ಅಭ್ಯರ್ಥಿ ಬಗ್ಗೆ ಯಾವ ಸಂಶಯವನ್ನು ಇಟ್ಟುಕೊಳ್ಳಲಿಲ್ಲ. ಬಿಜೆಪಿಯಿಂದ ಯಾರೇ ಅಭ್ಯರ್ಥಿಯಾದರೂ ಅವರನ್ನು ಗೆಲ್ಲಿಸುವ ನಿರ್ಣಯ ಮಾಡಿದ್ದರು. ಇದೆಲ್ಲದರ ಫಲವಾಗಿ ನನ್ನ ಗೆಲುವು ಸಾಧ್ಯವಾಯಿತು.

ಮಿತ್ರ: *ಕೃಷ್ಣರಾಜ ಕ್ಷೇತ್ರ ಬ್ರಾಹ್ಮಣ ಸಮುದಾಯದ ಪ್ರಾಬಲ್ಯ ಕ್ಷೇತ್ರ ಎನ್ನುತ್ತಾರೆ. ನಿಮ್ಮ ಪ್ರಕಾರ ಅದು ನಿಜವೇ?*

ಶ್ರೀವತ್ಸ: ಹೆಚ್ಚು ಸಂಖ್ಯೆಯಲ್ಲಿ ಬ್ರಾಹ್ಮಣ ಸಮುದಾಯದ ಮತದಾರರನ್ನು ಹೊಂದಿರುವ ಕ್ಷೇತ್ರವಿದು. ಸರಿ ಸುಮಾರು ಅಂದಾಜಿನ ಪ್ರಕಾರ ಬ್ರಾಹ್ಮಣ ಮತದಾರರೆ ಹೆಚ್ಚಾಗಿದ್ದಾರೆ ಎಂಬ ಲೆಕ್ಕಾಚಾರವೂ ಇದೆ. 2ನೇ ಸ್ಥಾನದಲ್ಲಿ ಲಿಂಗಾಯತರು ಹಾಗೂ ಪರಿಶಿಷ್ಟ ಜಾತಿ ಸಮುದಾಯದ ಮತದಾರರಿದ್ದಾರೆ. ಒಂದೇ ಜಾತಿಯ ಮತದಾರರು ಮತದಾನ ಮಾಡಿದರೆ ಗೆಲ್ಲಬಹುದು ಎನ್ನಲು ಸಾಧ್ಯವಿಲ್ಲ. ಸಣ್ಣ–ಸಣ್ಣ ಸಮುದಾಯಗಳ ಮತದಾರರು ನನ್ನ ಗೆಲುವಿಗೆ ಬೆಂಬಲ ನೀಡಿದ್ದಾರೆ. ಆದ್ದರಿಂದ ಬ್ರಾಹ್ಮಣ ಸಮುದಾಯದ ಪ್ರಾಬಲ್ಯವುಳ್ಳ ಕ್ಷೇತ್ರ ಎನ್ನುವುದು ಕಷ್ಟ.

ಮಿತ್ರ: *ಕಾಂಗ್ರೆಸ್‌ನ ಗ್ಯಾರಂಟಿ ಯೋಜನೆಗಳು ಕೆಆರ್.ಕ್ಷೇತ್ರದಲ್ಲಿ ಪರಿಣಾಮ ಬೀರಲಿಲ್ಲವೆ?*

ಶ್ರೀವತ್ಸ: ನಮಗಿರುವ ಮಾಹಿತಿ ಪ್ರಕಾರ ಕಾಂಗ್ರೆಸ್‌ನ ಗ್ಯಾರಂಟಿ ಕಾರ್ಡ್‌ಗಳನ್ನು ಇಡೀ ರಾಜ್ಯದಲ್ಲಿ ಹೊರಗುತ್ತಿಗೆಯವರ ಮೂಲಕ ಹಂಚಿದ್ದಾರೆ. ಕಾಂಗ್ರೆಸ್‌ನಲ್ಲಿ ಕಾರ್ಯಕರ್ತರಿಗಿಂತ ಹೊರಗಿನವರೇ ಮನೆ ಮನೆಗೆ ಹೋಗಿ ಕಾರ್ಡ್ ಹಂಚಿಕೆ ಮಾಡಿ, ಮತದಾರರನ್ನು ಮಾತನಾಡಿಸಿದ್ದಾರೆ. ಅದರಂತೆ ಕೆ.ಆರ್.ಕ್ಷೇತ್ರದಲ್ಲಿಯೂ ಗ್ಯಾರಂಟಿ ಕಾರ್ಡ್‌ಗಳನ್ನು ಕೊಟ್ಟಿದ್ದಾರೆ. ಆದರೆ ನಮ್ಮ ಕಾರ್ಯಕರ್ತರು ಮನೆ ಮನೆಗೂ ಹೋಗಿ ಕಾಂಗ್ರೆಸ್ ಗ್ಯಾರಂಟಿ ಕಾರ್ಡ್‌ಗಳಿಂದ ಯಾವ ಪ್ರಯೋಜನವೂ ಆಗುವುದಿಲ್ಲ. ಈ ಪರಿಸ್ಥಿತಿಯಲ್ಲಿ ಉಚಿತ ಯೋಜನೆಗಳನ್ನು ಜಾರಿಗೊಳಿಸಲು ಸಾಧ್ಯವಿಲ್ಲ ಎಂಬುದನ್ನು ಮನವರಿಕೆ ಮಾಡಿಕೊಟ್ಟಿದ್ದಾರೆ. ಅಲ್ಲದೆ ಮೊದಲೇ ಹೇಳಿದಂತೆ ಕೃಷ್ಣರಾಜ ಕ್ಷೇತ್ರದಲ್ಲಿ ಮತದಾರರೇ ಬಿಜೆಪಿ ಜೊತೆಗಿದ್ದಾರೆ. ಆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಗ್ಯಾರಂಟಿ ಕೆ.ಆರ್.ಕ್ಷೇತ್ರದಲ್ಲಿ ವರ್ಕ್‌ಔಟ್ ಆಗಿಲ್ಲ. ಆದರೂ ಗೆಲುವಿನ ಅಂತರ ಕಡಿಮೆ ಇರುವುದನ್ನು ಗಮನಿಸಿದರೆ ಕೆಲವೆಡೆ ಪರಿಣಾಮ ಉಂಟಾಗಿರಬಹುದು ಎನ್ನಿಸುತ್ತದೆ. ಇದರ ಬಗ್ಗೆ ಅಧ್ಯಯನ ಮಾಡಿ, ಬಿಜೆಪಿ ಮತದಾರರ ಸಂಖ್ಯೆಯನ್ನು ಮತ್ತಷ್ಟು ಹೆಚ್ಚಿಸುವ ಕೆಲಸ ಮಾಡುತ್ತೇನೆ.

ಮಿತ್ರ: *ಮೈಸೂರು ಭಾಗದಲ್ಲಿ ಬಿಜೆಪಿ ಏಕೈಕ ಕ್ಷೇತ್ರದಲ್ಲಿ ಗೆಲುವು ಪಡೆದಿದೆ. ಇದರ ಬಗ್ಗೆ ತಮ್ಮ ಅಭಿಪ್ರಾಯವೇನು?*

ಶ್ರೀವತ್ಸ: ಇಡೀ ರಾಜ್ಯದಲ್ಲಿ ಸುಮಾರು 32 ಕ್ಷೇತ್ರಗಳಲ್ಲಿ ಸಣ್ಣ ಅಂತರದಲ್ಲಿ ಸೋತಿದ್ದೇವೆ. 65ಕ್ಕೆ 32 ಸೇರಿಸಿದ್ದರೆ ಅಂಕಿ ಜಾಸ್ತಿಯಾಗುತ್ತಿತ್ತು. ಸೋತಿರುವವರೆಲ್ಲರೂ ಪಕ್ಷದ ಪ್ರಮುಖರು ಹಾಗೂ ನಾಯಕರಾಗಿದ್ದಾರೆ. ಮೈಸೂರು ಭಾಗದಲ್ಲಿ ಹರ್ಷವರ್ಧನ್, ನಿರಂಜನ್‌ಕುಮಾರ್, ಎನ್.ಮಹೇಶ್, ವಿಜಯ್ ಶಂಕರ್ ಸೋಲುತ್ತಾರೆ ಎಂದು ಊಹಿಸಿರಲಿಲ್ಲ. ನನಗಿಂತ ಹಿರಿಯರು, ಭರವಸೆ ನಾಯಕರು ಸೋತಿದ್ದಾರೆ. ಅದಾಗ್ಯೂ ಉತ್ತಮ ಮತಗಳನ್ನು ಪಡೆದಿದ್ದಾರೆ. ಕವೀಶ್‌ಗೌಡ 50 ಸಾವಿರ ಮತಗಳನ್ನು ಪಡೆದಿರುವುದು ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಬಿಜೆಪಿ ಪ್ರಾಬಲ್ಯ ಹೆಚ್ಚಿರುವುದಕ್ಕೆ ಸಾಕ್ಷಿ.

ಮಿತ್ರ: *ಕೆ.ಆರ್.ಕ್ಷೇತ್ರದ ಅಭಿವೃದ್ಧಿಗಾಗಿ ತಮ್ಮ ಮುಂದಿನ ಯೋಜನೆಗಳೇನು?*

ಶ್ರೀವತ್ಸ: ಕೆ.ಆರ್.ಕ್ಷೇತ್ರದಲ್ಲಿನ ಪ್ರಮುಖ ಐದಾರು ಸಮಸ್ಯೆಗಳ ಬಗ್ಗೆ ಪಟ್ಟಿ ಮಾಡಿಕೊಂಡಿದ್ದೇನೆ. ಖಾತೆ ಬದಲಾವಣೆ, ದೊಡ್ಡ ಮೋರಿ, ಸಿವೇಜ್ ಫಾರಂ, ಕುಡಿಯುವ ನೀರಿನ ಸಮಸ್ಯೆಗಳು ಹತ್ತಾರು ವರ್ಷಗಳಿಂದಿವೆ ಎಂದು ಜನ ಹೇಳುತ್ತಿದ್ದಾರೆ. ಒಂದೊಂದು ಸಮಸ್ಯೆಗೆ ಪ್ರತ್ಯೇಕ ಸಮಯ ನಿಗದಿ ಮಾಡಿಕೊಂಡು ಸಾಧ್ಯವಾದಷ್ಟು ತ್ವರಿತವಾಗಿ ಬಗೆಹರಿಸುವ ಯೋಜನೆಯನ್ನು ರೂಪಿಸಿದ್ದೇನೆ. ನಿಗದಿತ ಸಮಯದಲ್ಲೇ ಸಮಸ್ಯೆ ಬಗೆಹರಿಸಬೇಕು ಎಂಬುದು ನನ್ನ ಗುರಿಯಾಗಿದೆ. ಆಸ್ಪತ್ರೆಗಳಿಗೆ ಭೇಟಿ ಮಾಡಿ, ಅಲ್ಲಿರುವ ನ್ಯೂನತೆಗಳನ್ನು ಅರಿತು ಸರಿಪಡಿಸುವುದು. ದುಸ್ಥಿತಿಯಲ್ಲಿರುವ ಅಂಗನವಾಡಿ ಕೇಂದ್ರಗಳನ್ನು ಖಾಸಗಿ ಸಂಸ್ಥೆಗಳ ಸಹಭಾಗಿತ್ವದೊಂದಿಗೆ ಅಭಿವೃದ್ಧಿ ಮಾಡುವ ಚಿಂತನೆ ನಡೆಸಿದ್ದೇನೆ. ಒಟ್ಟಾರೆ ಕೆ.ಆರ್.ಕ್ಷೇತ್ರ ಎಲ್ಲಾ ನಿಟ್ಟಿನಲ್ಲಿಯೂ ಮಾದರಿ ಕ್ಷೇತ್ರವಾಗಬೇಕು.


ಮಿತ್ರ: *ನಿಮಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸ್ಪಂದನೆ ದೊರಕಲಿದೆಯೇ?*

ಶ್ರೀವತ್ಸ: ಮುಖ್ಯಮಂತ್ರಿಯವರು ನಮ್ಮ ಜಿಲ್ಲೆಯವರೇ. ಆಡಳಿತಾತ್ಮಕವಾಗಿ ಸ್ಪಂದನೆ ನೀಡಲಿದ್ದಾರೆ ಎಂಬ ವಿಶ್ವಾಸವಿದೆ. ಸ್ವತಃ ನಾನು ನೋಡಿದಂತೆ ಅಭಿವೃದ್ಧಿ ವಿಚಾರದಲ್ಲಿ ಸಿದ್ದರಾಮಯ್ಯ ಅವರು, ಇಲ್ಲ ಎನ್ನುವುದಿಲ್ಲ. ಆ ಹಿನ್ನೆಲೆಯಲ್ಲಿ ಕೆಲಸಗಳಾಗಲಿವೆ. ಮುಖ್ಯವಾಗಿ ನಾವೆಷ್ಟು ಒತ್ತಡ ತರುತ್ತೇವೆ ಎಂಬುದರ ಮೇಲೆ ಕೆಲಸಗಳಾಗುತ್ತವೆ.

ಮಿತ್ರ: *ಬಹು ಸಮಯ ಬಿಜೆಪಿ ಕಚೇರಿಯಲ್ಲೇ ಇರುತ್ತಿದ್ದ ತಮ್ಮನ್ನು ಕ್ಷೇತ್ರದ ಜನರು ಭೇಟಿಯಾಗುವುದೇಗೆ?*

ಶ್ರೀವತ್ಸ: ನಗರಾಧ್ಯಕ್ಷನಾಗಿದ್ದಾಗ ಕಾರ್ಯಕರ್ತರು ಪಕ್ಷದ ಕಚೇರಿಗೆ ಬೆಳಗ್ಗೆ 8.30ಕ್ಕೆ ಬರಬೇಕು ಎನ್ನುತ್ತಿದ್ದೆ. ಆಗ ನಾನು ಕಾರ್ಯಕರ್ತರಿಗೆ ಸುಲಭವಾಗಿ ಸಿಗಬೇಕಾಗಿತ್ತು. ಈಗ ಶಾಸಕನಾಗಿದ್ದೇನೆ. ವಾರದಲ್ಲಿ 3–4 ದಿನ ಬೆಳಗ್ಗೆ 8 ಗಂಟೆಯಿಂದ ಸಂಜೆಯವರೆಗೂ ಶಾಸಕರ ಕಚೇರಿಯಲ್ಲಿ ಇರಲು ನಿರ್ಧರಿಸಿದ್ದೇನೆ. ವಾರದಲ್ಲಿ ಒಂದು ದಿನ ಬಿಜೆಪಿ ಕಚೇರಿಯಲ್ಲಿ ಸಿಗಲಿದ್ದೇನೆ. ಅಲ್ಲದೆ ಎಲ್ಲಾ ಬೂತ್ ಅಧ್ಯಕ್ಷರ ಮನೆ ಎದುರು ದೂರು ಪೆಟ್ಟಿಗೆ ಇಡಬೇಕು ಎಂದುಕೊಂಡಿದ್ದೇನೆ. ಇದರಿಂದ ಸಣ್ಣ–ಪುಟ್ಟ ಸಮಸ್ಯೆಗಳು ಅಲ್ಲಿಯೇ ಪರಿಹಾರವಾಗಲಿವೆ. ಜಿಲ್ಲಾ ಮಂತ್ರಿ ಯಾರಾಗುತ್ತಾರೆ ಎಂಬುದನ್ನು ನೋಡಿ ಮುನ್ನಡೆಯುತ್ತೇನೆ. ಯಾವುದೇ ಸಮಸ್ಯೆಯಾದರೂ ಸ್ಪಂದಿಸುತ್ತೇನೆ. ಶಾಸಕರ ಕಚೇರಿ ತೆರೆಯುತ್ತಿದ್ದಂತೆ ಜನರ ಕೈಗೆ ಸಿಗುತ್ತೇನೆ. ಒಟ್ಟಾರೆ ಪೀಪಲ್ ಫ್ರೆಂಡ್ಲಿ ಎಂಎಲ್‌ಎ ಆಗಬೇಕು ಎಂದು ಬಯಸುತ್ತೇನೆ.

ಸಿಬಿಐ ನಿರ್ದೇಶಕರಾಗಿ ಪ್ರವೀಣ್ ಸೂದ್ ಅಧಿಕಾರ ಸ್ವೀಕಾರ



ನವದೆಹಲಿ: ಕೇಂದ್ರೀಯ ತನಿಖಾ ದಳದ ನಿರ್ದೇಶಕರಾಗಿ ಕರ್ನಾಟಕದ ಡಿಜಿಪಿ ಆಗಿದ್ದ ಪ್ರವೀಣ್ ಸೂದ್ ಅವರು ಗುರುವಾರ ಅಧಿಕಾರ ವಹಿಸಿಕೊಂಡರು. ಸಿಬಿಐ ಕೇಂದ್ರ ಕಚೇರಿಯಲ್ಲಿ ನಿರ್ಗಮಿತ ನಿರ್ದೇಶಕ ಸುಬೋಧ್‌ಕುಮಾರ್ ಜೈಸ್ವಾಲ್ ಅವರು ಪ್ರವೀಣ್ ಸೂದ್ ಅವರಿಗೆ ಉಸ್ತುವಾರಿಯನ್ನು ಹಸ್ತಾಂತರಿಸಿದರು. ಮುಂದಿನ ಎರಡು ವರ್ಷಗಳ ಕಾಲ ಅವರು ಸಿಬಿಐ ನಿರ್ದೇಶಕರಾಗಿ ಕಾರ್ಯನಿರ್ವಹಿಸಲಿದ್ದಾರೆ.

ಹಿರಿಯ ಅಧಿಕಾರಿ ಪ್ರವೀಣ್ ಸೂದ್ 1986ನೇ ಬ್ಯಾಚ್‌ನ ಕರ್ನಾಟಕ ಕೇಡರ್‌ನ ಐಪಿಎಸ್ ಅಧಿಕಾರಿಯಾಗಿದ್ದಾರೆ. ಸಿಬಿಐ ನೂತನ ನಿರ್ದೇಶಕರ ಹುದ್ದೆಗೆ ಡಿಜಿ–ಐಜಿಪಿ ಪ್ರವೀಣ್ ಸೂದ್ ಅವರನ್ನು ನೇಮಕ ಮಾಡಿ ಮೇ 14ರಂದು ಕೇಂದ್ರ ಸರ್ಕಾರ ಆದೇಶಿಸಿತ್ತು. ಪ್ರಧಾನಿ ನರೇಂದ್ರ ಮೋದಿ, ಭಾರತದ ಮುಖ್ಯ ನ್ಯಾಯಮೂರ್ತಿ ಡಿ.ವೈ ಚಂದ್ರಚೂಡ್ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ಅಧೀರ್ ರಂಜನ್ ಚೌಧರಿ ಅವರನ್ನೊಳಗೊಂಡ ಸಮಿತಿ ಪ್ರವೀಣ್ ಸೂದ್ ಅವರ ಹೆಸರನ್ನು ಸಿಬಿಐ ನಿರ್ದೇಶಕ ಸ್ಥಾನಕ್ಕೆ ಅಂತಿಮಗೊಳಿಸಲಾಗಿತ್ತು.

2024ರ ಮೇನಲ್ಲಿ ನಿವೃತ್ತಿ ಆಗಬೇಕಾಗಿದ್ದ ಪ್ರವೀಣ್ ಸೂದ್, ಸಿಬಿಐ ನಿರ್ದೇಶಕ ಹುದ್ದೆ ವಹಿಸಿಕೊಂಡ ಹಿನ್ನೆಲೆಯಲ್ಲಿ 2025ರ ಮೇವರೆಗೂ ಮುಂದುವರಿಯಲಿದ್ದಾರೆ. ಸಿಬಿಐ ನಿರ್ದೇಶಕರ ಹುದ್ದೆಗೆ ಕರ್ನಾಟಕ ಕೇಡರ್ ಐಪಿಎಸ್‌ಗಳು ನೇಮಕ ಆದವರಲ್ಲಿ 3ನೆಯವರು ಎಂಬ ಖ್ಯಾತಿಗೆ ಪ್ರವೀಣ್ ಸೂದ್ ಒಳಗಾಗಿದ್ದಾರೆ.

ಭಾರತೀಯ ವಿದ್ಯಾಭವನದ ಪ್ರಶಸ್ತಿಗೆ ಮೂವರು ಸಾಧಕಿಯರ ಆಯ್ಕೆ



ಡಾ. ವನಮಾಲಾ



ಎಚ್.ಎಂ. ವನಿತಾ



ಪ್ರಿನ್ಸಿ ಬ್ಯೂಲಾ

ಬೆಂಗಳೂರು: ಭಾರತೀಯ ವಿದ್ಯಾ ಭವನದ ಪ್ರಸಕ್ತ ಸಾಲಿನ ಝಾಕಿಯಾ ಶಂಕರ್ ಪಾಠಕ್ ಪ್ರಶಸ್ತಿಗೆ ಮೂವರು ಸಾಧಕಿಯರನ್ನು ಆಯ್ಕೆ ಮಾಡಲಾಗಿದೆ.

ಇಂಗ್ಲಿಷ್ ಸಾಹಿತ್ಯಕ್ಕೆ ನೀಡಿದ ಕೊಡುಗೆಗಾಗಿ ಹಿರಿಯ ವಿದ್ವಾಂಸರಾದ ಡಾ.ವನಮಾಲಾ ವಿಶ್ವನಾಥ್, ಶಿಕ್ಷಣ ಸಂಸ್ಥೆಗಳಲ್ಲಿ ಇಂಗ್ಲಿಷ್ ಭಾಷಾ ಕಲಿಕೆಗೆ ಉತ್ತೇಜನ ನೀಡಿದ್ದಕ್ಕಾಗಿ ವಿಜಯನಗರ ಜಿಲ್ಲಾ ಹಗರಿ ಬೊಮ್ಮನಹಳ್ಳಿ ತಾಲೂಕು ಬನ್ನಿಗೋಳ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕಿ ಎಚ್.ಎಂ. ವನಿತಾ ಮತ್ತು ಸಿಬಿಎಸ್‌ಇ ಇಂಗ್ಲಿಷ್ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಭಾರತೀಯ ವಿದ್ಯಾಭವನ–ಬಿಬಿಎಂಪಿ ಶಾಲೆಯ ವಿದ್ಯಾರ್ಥಿನಿ ಪ್ರಿನ್ಸಿ ಬ್ಯೂಲಾ ಅವರು ಈ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಬೆಂಗಳೂರಿನ ಭಾರತೀಯ ವಿದ್ಯಾ ಭವನದಲ್ಲಿ ಮೇ 27ರಂದು ಬೆಳಗ್ಗೆ 11ಕ್ಕೆ ನಡೆಯಲಿರುವ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಯುನೆಸ್ಕೊ ಮಾಜಿ ರಾಯಭಾರಿ ಚಿರಂಜೀವಿ ಸಿಂಗ್, ಕೆ.ಆರ್.ನರಸಿಂಹ ಮೂರ್ತಿ ಭಾಗವಹಿಸಲಿದ್ದಾರೆ

ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಅಗತ್ಯ ಕ್ರಮ: ಶ್ರೀವತ್ಸ ಭರವಸೆ



ಮೈಸೂರು, ಮೇ 25– ಕೃಷ್ಣರಾಜ ಕ್ಷೇತ್ರದ ವ್ಯಾಪ್ತಿಗೆ ಬರುವ 49ನೇ ವಾರ್ಡ್‌ನಲ್ಲಿ ಉಂಟಾಗಿರುವ ನೀರಿನ ಸಮಸ್ಯೆಯನ್ನು ಸೋಮವಾರದೊಳಗೆ ಪರಿಹರಿಸುವಂತೆ ಶಾಸಕ ಟಿ.ಎಸ್.ಶ್ರೀವತ್ಸ ಸೂಚಿಸಿದರು.

ಗುರುವಾರ ಅಧಿಕಾರಿಗಳು ಮತ್ತು ಪಾಲಿಕೆ ಸದಸ್ಯರೊಂದಿಗೆ ವಿವಿಧ ಸ್ಥಳಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಸಾರ್ವಜನಿಕರು ನೀರಿನ ಸಮಸ್ಯೆಯನ್ನು ಹೇಳಿಕೊಂಡರು. ಈ ವೇಳೆ ಅಧಿಕಾರಿಗಳಿಂದ ವಿವರಣೆ ಪಡೆದುಕೊಂಡು ನಗರಕ್ಕೆ ನೀರು ವಿತರಣೆಯಾದರೂ ಸರಬರಾಜಿನಲ್ಲಿ ವ್ಯತ್ಯಯ ಆಗುತ್ತಿದೆ. ತಕ್ಷಣವೇ ಗಮನ ಹರಿಸಿ ಸೋಮವಾರದಿಂದ ಎಲ್ಲಾ ಮನೆಗಳಿಗೂ ನೀರು ತಲುಪುವಂತೆ ಮಾಡಬೇಕು ಎಂದರು. ಕೃಷ್ಣರಾಜ ಕ್ಷೇತ್ರದಲ್ಲಿ ಯಾವುದೇ ಬಡಾವಣೆಯಲ್ಲಿ ನೀರಿನ ಪೂರೈಕೆಯಲ್ಲಿ ಸಮಸ್ಯೆ ಬರಬಾರದು. ಅಧಿಕಾರಿಗಳು ಮತ್ತು ಸಿಬ್ಬಂದಿ ಪರಿಶೀಲಿಸಬೇಕು. ಈ ವಿಚಾರದಲ್ಲಿ ನಿರ್ಲಕ್ಷ್ಯ ಮಾಡಬಾರದು ಎಂದು ಸಲಹೆ ನೀಡಿದರು. ಮೇಯರ್ ಶಿವಕುಮಾರ್, ಪಾಲಿಕೆ ಸದಸ್ಯರಾದ ಸೌಮ್ಯ ಉಮೇಶ್, ಮಾಧ್ಯಮ ಸಂಚಾಲಕ ಪ್ರದೀಪ್‌ಕುಮಾರ್ ಇನ್ನಿತರರಿದ್ದರು.

ಸ್ವಯಂವರ ಪಾರ್ವತಿ ಹೋಮ

ಮೈಸೂರು, ಮೇ 25– ಮೈಸೂರು ದೇವರಾಜ ಮೊಹಲ್ಲಾದ ಶ್ರೀ ಅಮೃತೇಶ್ವರ ಸ್ವಾಮಿ ದೇವಸ್ಥಾನದಲ್ಲಿ ನಾಳೆ (ಶುಕ್ರವಾರ) ಬೆಳಗ್ಗೆ 7.30ಕ್ಕೆ ಸ್ವಯಂವರ ಪಾರ್ವತಿ ಹೋಮ ಹಾಗೂ ಮಾಂಗಲ್ಯ ಮಂಗಳಾ ಚಂಡಿಕಾ ಹೋಮವನ್ನು ಏರ್ಪಡಿಸಲಾಗಿದೆ. ಅವಿವಾಹಿತ ವಧು ವರರು ಇದರಲ್ಲಿ ಭಾಗವಹಿಸಿ, ಪ್ರತ್ಯೇಕವಾದ ಸಂಕಲ್ಪದೊಂದಿಗೆ ಪೂಜೆ ಹಾಗೂ ಹೋಮ ಮಾಡಿಸಬಹುದು.

ಆಸಕ್ತರು ಹೆಚ್ಚಿನ ಮಾಹಿತಿಗೆ ಮೈ.ಕುಮಾರ್, ಜಾತಕ ವಿಮರ್ಶಕರು ಇವರನ್ನು ಮೊ. 9845183399, 9342183392 ಮೂಲಕ ಸಂಪರ್ಕಿಸಬಹುದು.

ಪೊಲೀಸ್ ಕೇಸರೀಕರಣ ಚರ್ಚೆ; ಇಲಾಖೆ, ಸರ್ಕಾರದ ಆಂತರಿಕ ವಿಷಯ

ಬೆಂಗಳೂರು: ಕಳೆದ ಕೆಲವು ವರ್ಷಗಳಿಂದ ಪೊಲೀಸರು ಬಿಜೆಪಿ ಪರ ಇದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಆರೋಪ ಮಾಡಿರುವುದಕ್ಕೆ ಸಂಬಂಧಿಸಿದಂತೆ ಉಂಟಾಗಿರುವ ವಿವಾದಕ್ಕೆ ತೇಪೆ ಹಚ್ಚಲು ಇತ್ತೀಚೆಗಷ್ಟೇ ಡಿಜಿ ಮತ್ತು ಐಜಿಪಿಯಾಗಿ ಅಧಿಕಾರ ವಹಿಸಿಕೊಂಡ ಅಲೋಕ್ ಮೋಹನ್ ಮುಂದಾಗಿದ್ದಾರೆ.

ಕೇಸರೀಕರಣದ ಬಗ್ಗೆ ಚರ್ಚೆಯಾಗಿರುವುದು ರಾಜ್ಯ ಸರ್ಕಾರ ಮತ್ತು ಪೊಲೀಸ್ ಇಲಾಖೆಯ ಆಂತರಿಕ ವಿಷಯ ಎಂದು ಗುರುವಾರ ಹೇಳಿದ್ದಾರೆ. ಪೊಲೀಸರು ಮತ್ತು ಸರ್ಕಾರದ ನಡುವಿನ ಸಭೆಯ ಬಗ್ಗೆ ನಾನು ಏನನ್ನೂ ಹೇಳಲಾರೆ ಎಂದು ಪ್ರತಿಕ್ರಿಯಿಸಿದ್ದಾರೆ.

ಅಲೋಕ್ ಮೋಹನ್ ಅವರು ಗುರುವಾರ ಬೆಳಗ್ಗೆ ಎಲ್ಲಾ ಶ್ರೇಣಿಯ ಪೊಲೀಸ್ ಸಿಬ್ಬಂದಿಯೊಂದಿಗೆ ಸಭೆ ನಡೆಸಿದರು ಮತ್ತು ನಗರದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ತಮ್ಮ ಕಾರ್ಯಯೋಜನೆಯ ಬಗ್ಗೆ ಚರ್ಚಿಸಿದರು. ಸಭೆಯ ನಂತರ ಮಾಧ್ಯಮದವರನ್ನು ಉದ್ದೇಶಿಸಿ ಮಾತನಾಡಿದ ಅವರು, ನಗರದಲ್ಲಿ ರೌಡಿ ಚಟುವಟಿಕೆಗಳನ್ನು ನಾವು ಸಹಿಸುವುದಿಲ್ಲ ಎಂದು ಹೇಳಿದ್ದಾರೆ.



ನಗರದಲ್ಲಿ ಡ್ರಗ್ಸ್ ಹಾವಳಿ ಕುರಿತು ಪ್ರತಿಕ್ರಿಯಿಸಿದ ಅವರು, ಬೆಂಗಳೂರು ನಗರವನ್ನು ಡ್ರಗ್ಸ್ ಮುಕ್ತ ಮಾಡುವುದು ನಮ್ಮ ಗುರಿ. ಡ್ರಗ್ಸ್ ಹಾವಳಿ ನಿಯಂತ್ರಿಸಲು ಪ್ರದೇಶವಾರು ಕಾರ್ಯಾಚರಣೆ ನಡೆಸುವ ಮೂಲಕ ಅದನ್ನು ಮಟ್ಟಹಾಕಲು ನಾವು ಯೋಜನೆ ರೂಪಿಸುತ್ತೇವೆ ಎಂದು ಅಲೋಕ್ ಮೋಹನ್ ಹೇಳಿದ್ದಾರೆ.

ನಗರದಲ್ಲಿ ಟ್ರಾಫಿಕ್ ಸಮಸ್ಯೆ ಕುರಿತು ಮಾತನಾಡಿ, ವಾಹನ ಸಂಚಾರವನ್ನು ಸಮರ್ಥವಾಗಿ ನಿರ್ವಹಿಸಲು ಸ್ಥಳೀಯ ಪೊಲೀಸರನ್ನು ತೊಡಗಿಸಿಕೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ.

ಪೊಲೀಸರು ಸಾರ್ವಜನಿಕ ಸ್ನೇಹಿಯಾಗಿ ಕಾರ್ಯ ನಿರ್ವಹಿಸಲಿದ್ದಾರೆ ಎಂದು ಭರವಸೆ ನೀಡಿದ್ದಾರೆ.

ಪೊಲೀಸ್ ಇಲಾಖೆಯ ಕೇಸರಿಕರಣ ವಿಚಾರವಾಗಿ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಉನ್ನತ ಪೊಲೀಸ್ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡಿರುವುದು ರಾಜಕೀಯ ವಾಕ್ಸಮರಕ್ಕೆ ಕಾರಣವಾಗಿತ್ತು. ಮಂಗಳೂರಿನಲ್ಲಿ ಪೊಲೀಸರೇ ಕೇಸರಿ ಶಾಲು ಹಾಕುತ್ತೀರಿ ಅಂದರೆ ಹೇಗೆ? ಈ ಸಭೆಗೂ ಕೇಸರಿ ಶಾಲು ಹಾಕಿಕೊಂಡೇ ಬರಬೇಕಾಗಿತ್ತು ನಮ್ಮ ಸರ್ಕಾರದಲ್ಲಿ ಪೊಲೀಸ್ ಇಲಾಖೆಯನ್ನು ಕೇಸರೀಕರಣ ಮಾಡಲು ನಾವು ಬಿಡುವುದಿಲ್ಲ ಎಂದು ಡಿಕೆ ಶಿವಕುಮಾರ್ ಇತ್ತೀಚೆಗೆ ಪೊಲೀಸರಿಗೆ ಎಚ್ಚರಿಕೆ ನೀಡಿದ್ದರು.

ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದ ಬಿಜೆಪಿ ನಾಯಕ ಆರಗ ಜ್ಞಾನೇಂದ್ರ, ಕಾಂಗ್ರೆಸ್ ಸರ್ಕಾರವು ಪೊಲೀಸ್ ಇಲಾಖೆಯನ್ನು ಕಾಂಗ್ರೆಸ್ಸೀಕರಣ ಮಾಡಲು ಹೊರಟಿದೆ ಎಂದು ಟೀಕಿಸಿದ್ದರು.

ಸಂವಿಧಾನಾತ್ಮಕವಾಗಿ ಎಲ್ಲಾ ಇಲಾಖೆಗಳಲ್ಲೂ ಪ್ರತೀ ನಾಗರಿಕನಿಗೂ ಧರ್ಮದ ಅನುಷ್ಠಾನದ ಹಕ್ಕಿದೆ. ಹತ್ತಾರು ವರ್ಷಗಳಿಂದ ಎಲ್ಲಾ ಇಲಾಖೆಗಳಲ್ಲೂ ಧಾರ್ಮಿಕ ಆಧಾರದಲ್ಲಿ ಪೂಜೆಗಳು ನಡೆಯುತ್ತಿವೆ. ಇವತ್ತು ಇದನ್ನು ತಡೆಯುವ ಕೆಲಸವನ್ನು ಕಾಂಗ್ರೆಸ್ ಮಾಡುತ್ತಾ ಇದೆ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್ ಟೀಕಿಸಿದ್ದರು. ಇನ್ನೂ ಅನೇಕ ಬಿಜೆಪಿ ನಾಯಕರು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರು. ಇದಕ್ಕೆ ಸಂಬಂಧಿಸಿದಂತೆ ಇದೀಗ ಪ್ರತಿಕ್ರಿಯಿಸಿರುವ ಅಲೋಕ್ ಮೋಹನ್, ಆಂತರಿಕ ವಿಷಯ ಎಂದು ಹೇಳಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಜಿಲ್ಲಾ ಕಸಾಪ ಆವರಣದಲ್ಲಿ ಶ್ರಮದಾನ



ಮೈಸೂರು,ಮೇ 25(ಸಿಎನ್)–ಅದಮ್ಯ ರಂಗಶಾಲೆ ಸಹಭಾಗಿತ್ವದಲ್ಲಿ ನಗರದ ಊಟಿ ರಸ್ತೆಯ ಜೆಎಸ್ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆಯ ವಿದ್ಯಾರ್ಥಿಗಳು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಆವರಣವನ್ನು ಸ್ವಚ್ಛಗೊಳಿಸುವ ಮುಖಾಂತರ ಶ್ರಮದಾನ ಮಾಡಿದರು.

ನಿರಂತರ ಮಳೆಯಿಂದಾಗಿ ಸಾಹಿತ್ಯ ಭವನದ ಆವರಣದಲ್ಲಿ ಗಿಡಗಂಟಿ ಬೆಳೆದು, ತ್ಯಾಜ್ಯದಿಂದಾಗಿ ತೊಂದರೆ ಉಂಟಾಗಿತ್ತು. ಜೆ.ಎಸ್.ಎಸ್. ಕಾಲೇಜಿನ ಎನ್.ಎಸ್.ಎಸ್. ತಂಡ ಸ್ವಚ್ಛತಾ ಕಾರ್ಯ ಕೈಗೊಂಡು ತ್ಯಾಜ್ಯ ತೆರವುಗೊಳಿಸಿ ಸ್ವಚ್ಛಗೊಳಿಸಿದರು. ಅದಲ್ಲದೇ ವಿದ್ಯಾರ್ಥಿಗಳು, ಸಾರ್ವಜನಿಕರಿಗೆ ನೈರ್ಮಲ್ಯದ ಕುರಿತು ಅರಿವು ಮೂಡಿಸಿದರು.

ಸ್ವಚ್ಛತಾ ಕಾರ್ಯದಲ್ಲಿ ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಜೆ.ಎಸ್.ಎಸ್. ಕಾಲೇಜಿನ ರಾಷ್ಟ್ರೀಯ ಸ್ವಯಂಸೇವಾ ಅಧಿಕಾರಿ ಸಂತೋಷ್‌ಕುಮಾರ್, ಅದಮ್ಯ ರಂಗಶಾಲೆ ಸಂಸ್ಥಾಪಕ ಕಾರ್ಯದರ್ಶಿ ಚಂದ್ರು ಮಂಡ್ಯ ಹಾಗೂ ವಿವಿಧ ವಿಭಾಗದ 20ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗಿಯಾಗಿದ್ದರು.

ಪರಿಸರ ಸಂರಕ್ಷಣೆ ಜಾಗೃತಿ ಅಭಿಯಾನ



ಮೈಸೂರು,ಮೇ 25(ಸಿಎನ್)– ಕೇಂದ್ರ ಅಂಚೆ ಇಲಾಖೆ ಸಹಯೋಗದಲ್ಲಿ, ಅಂಚೆ ಪ್ರಶಿಕ್ಷಣ ಕೇಂದ್ರದಿಂದ 'ಮಿಷನ್ ಲೈಫ್ – ಪರಿಸರಕ್ಕಾಗಿ ಜೀವನಶೈಲಿ' ಪರಿಸರ ಕಾಳಜಿ ದೃಷ್ಟಿಯಿಂದ, ಪರಿಸರ ಸಂರಕ್ಷಣೆ ಹಾಗೂ ಪ್ಲಾಸ್ಟಿಕ್ ನಿಷೇಧ ಕುರಿತು ಜಾಥಾ ಹಾಗೂ ಸ್ವಚ್ಛತಾ ಅಭಿಯಾನದ ಮೂಲಕ ಜಾಗೃತಿ ಮೂಡಿಸಿದರು.

ನಗರದ ನಜರಾಬಾದ್‌ನ ಅಂಚೆ ಪ್ರಶಿಕ್ಷಣ ಕೇಂದ್ರದ ಮುಂಭಾಗ ಪ್ರಾರಂಭಗೊಂಡ ಅಭಿಯಾನಕ್ಕೆ, ಪ್ರಶಿಕ್ಷಣ ಕೇಂದ್ರ ನಿರ್ದೇಶಕ ಡಾ.ಆಶೀಶ್‌ಸಿಂಗ್ ಠಾಕೂರ್ ಹಸಿರು ನಿಶಾನೆ ತೋರಿದರು. ವಿದ್ಯಾರ್ಥಿಗಳು ಹಾಗೂ ಜಾಥಾದಲ್ಲಿ ಭಾಗಿಯಾಗಿದ್ದವರು ರಸ್ತೆಬದಿ ಬಿದ್ದಿದ್ದ ಕಸದ ರಾಶಿ ತೆರವುಗೊಳಿಸಿದರು. ಇಲ್ಲಿಂದ ಹೊರಟ ಜಾಥ ಮೃಗಾಲಯದ ಮುಂಭಾಗ ಮುಕ್ತಾಯವಾಯಿತು.

ಬಳಿಕ ಪ್ರಶಿಕ್ಷಣ ಕೇಂದ್ರ ನಿರ್ದೇಶಕ ಡಾ.ಆಶೀಶ್‌ಸಿಂಗ್ ಠಾಕೂರ್ ಮಾತನಾಡಿ, 2023ರ ವಿಶ್ವ ಪರಿಸರ ದಿನವನ್ನು ಕೇಂದ್ರ ಸರ್ಕಾರ 'ಮಿಷನ್ ಲೈಫ್' ಮೇಲೆ ಕೇಂದ್ರೀಕರಿಸಿ ಆಚರಿಸುವಂತೆ ಸೂಚಿಸಿದೆ. ಮಿಷನ್ ಲೈಫ್ ಪರಿಸರ ಪ್ರಜ್ಞೆಯ ಜೀವನಶೈಲಿಯ ಸಾಮೂಹಿಕ ಚಳವಳಿಯಾಗಿದೆ. ಬುದ್ಧಿಹೀನ ಮತ್ತು ವಿನಾಶಕಾರಿ ಬಳಕೆಗೆ ಬದಲಾಗಿ, ಉದ್ದೇಶಪೂರ್ವಕ ಬಳಕೆಗಾಗಿ ಅರಿವು ಮೂಡಿಸುವ ಅಗತ್ಯವಿದೆ ಎಂದರು.

ಕೆಲವರು ಎಸಿ ತಾಪಮಾನ 17 ಡಿಗ್ರಿಗೆ ಇಳಿಸಲು ಬಯಸುತ್ತಾರೆ, ಇದು ಪರಿಸರದ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತದೆ. ಜಿಮ್‌ಗಳಿಗೆ ಹೋಗುವಾಗ ಸೈಕಲ್‌ಗಳನ್ನು ಬಳಸಿ, ನಮ್ಮ ಜೀವನಶೈಲಿಯನ್ನು ಬದಲಾಯಿಸಿದರೆ ಪರಿಸರಕ್ಕೆ ಸಹಾಯವಾಗುತ್ತದೆ. ಜೊತೆಗೆ ನಿಗದಿತ ಸ್ಥಳಗಳಲ್ಲೇ ತ್ಯಾಜ್ಯ ಹಾಕಬೇಕು, ಎಲ್ಲೆಂದರಲ್ಲಿ ಬಿಸಾಡುವುದರಿಂದ ಪರಿಸರ, ಜಾನುವಾರು, ಪ್ರಾಣಿಗಳಿಗೆ ತೊಂದರೆಯಾಗಲಿದೆ ಎಂದು ತಿಳಿಸಿದರು. ಅಭಿಯಾನದಲ್ಲಿ ಡಾ.ಆಶೀಶ್‌ಸಿಂಗ್ ಠಾಕೂರ್, ಉಪ ನಿರ್ದೇಶಕ ಎಲ್.ಎನ್.ಮೂರ್ತಿ, ಸಹಾಯಕ ನಿರ್ದೇಶಕ ಪ್ರಕಾಶ್, ಪರ್ವಿನ್, ತರಬೇತುದಾರರು ಹಾಗೂ ಪ್ರಶಿಕ್ಷಣಾರ್ಥಿಗಳು ಭಾಗಿಯಾಗಿದ್ದರು.

60ನೇ ವಯಸ್ಸಿನಲ್ಲಿ ಎರಡನೇ ಮದುವೆಯಾದ ಆಶಿಶ್ ವಿದ್ಯಾರ್ಥಿ

ಪಶ್ಚಿಮ ಬಂಗಾಳ, ಮೇ 25– ಬಹುಭಾಷಾ ನಟ ಆಶಿಶ್ ವಿದ್ಯಾರ್ಥಿ ತನ್ನ 60ನೇ ವಯಸ್ಸಿನಲ್ಲಿ ಎರಡನೇ ಮದುವೆಯಾಗಿದ್ದಾರೆ. ಜೂನ್ 19,1962 ರಲ್ಲಿ ದೆಹಲಿಯಲ್ಲಿ ಹುಟ್ಟಿದ ಅವರು 1986ರಲ್ಲಿ ನಟನಾ ಲೋಕಕ್ಕೆ ಕಾಲಿಟ್ಟರು. ಹಿಂದಿ, ತೆಲುಗು, ತಮಿಳು, ಕನ್ನಡ, ಮಲಯಾಳಂ, ಇಂಗ್ಲಿಷ್, ಒಡಿಯಾ, ಮರಾಠಿ ಮತ್ತು ಬೆಂಗಾಲಿ ಸೇರಿದಂತೆ ಸುಮಾರು 11 ಭಾಷೆಯಲ್ಲಿ 300 ಕ್ಕೂ ಹೆಚ್ಚಿನ ಚಿತ್ರಗಳಲ್ಲಿ ಆಶಿಶ್ ನಟಿಸಿದ್ದಾರೆ.



1995ರಲ್ಲಿ ಬಂದ ದ್ರೋಹ್ಕಾಲ್ ಸಿನಿಮಾದಲ್ಲಿನ ಅವರ ಪೋಷಕ ನಟನೆಗಾಗಿ ಆಶಿಶ್ ಅವರಿಗೆ ನ್ಯಾಷನಲ್ ಅವಾರ್ಡ್ ಸಿಕ್ಕಿತ್ತು ಬಹುತೇಕ ಖಳನಟನ ಪಾತ್ರದಲ್ಲಿ ಕಾಣಿಸಿಕೊಂಡ ಅವರು ಅಸ್ಸಾಂ ಮೂಲದ ಫ್ಯಾಷನ್ ಉದ್ಯಮಿ ರೂಪಾಲಿ ಬರುವಾ ಅವರನ್ನು ತನ್ನ 60ನೇ ವಯಸ್ಸಿನಲ್ಲಿ ವರಿಸಿದ್ದಾರೆ. ಆತ್ಮೀಯರ ಸಮ್ಮುಖದಲ್ಲಿ ಕೋಲ್ಕತ್ತಾದಲ್ಲಿ ಈ ಮದುವೆ ಸಮಾರಂಭ ನೆರವೇರಿದ್ದು, ವಧು–ವರರ ಸ್ನೇಹಿತರು ಪಾಲ್ಗೊಂಡಿಗೊಂಡಿದ್ದಾರೆ. ನಟ ಈ ಹಿಂದೆ ಆಶಿಶ್ ಗಾಯಕಿ ಮತ್ತು ರಂಗಭೂಮಿ ಕಲಾವಿದ ರಾಜೋಶಿ ವಿದ್ಯಾರ್ಥಿ ಅವರನ್ನು ವಿವಾಹವಾಗಿದ್ದರು.

ಬಡವರ ಹಸಿವು ನೀಗಿಸುವ ಇಂದಿರಾ ಕ್ಯಾಂಟಿನ್‌ಗಳ ಪುನಶ್ಚೇತನಕ್ಕೆ ಸಿದ್ದತೆ



ಮೈಸೂರು, ಮೇ 25(ಎಂಕೆ)– ಭಣ ಗುಡುತ್ತಿದ್ದ 'ಇಂದಿರಾ ಕ್ಯಾಂಟಿನ್'ಗಳಿಗೆ ಮತ್ತೆ ಜೀವಕಳೆ ನೀಡಲು ತಯಾರಿ ನಡೆದಿದೆ.

ರಾಜ್ಯ ಸರ್ಕಾರದ ಸೂಚನೆ ಮೇರೆಗೆ ಐದತ್ತು ರೂಪಾಯಿಯಲ್ಲಿ ಮತ್ತೆ ಬಡವರಿಗೆ ಊಟ ಬಡಿಸಲು ಸಿದ್ಧವಾಗುತ್ತಿರುವ ಇಂದಿರಾ ಕ್ಯಾಂಟಿನ್‌ಗಳಲ್ಲಿ ಮೂಲ ಸೌಕರ್ಯಗಳ ಪರಿಶೀಲನೆ, ನಿತ್ಯ ಖಾದ್ಯಗಳ ಪಟ್ಟಿಯಲ್ಲಿ ಬದಲಾವಣೆ, ಸಿಸಿ ಕ್ಯಾಮರಾ ಸೇರಿದಂತೆ ಹಲವು ಮಾರ್ಪಾಡುಗಳ ಮೂಲಕ ಹೊಸ ರೂಪ ನೀಡಲು ತಯಾರಿ ನಡೆಸಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತವರು ಜಿಲ್ಲೆಯಾದ ಮೈಸೂರು ನಗರದಲ್ಲಿ 11 ಇಂದಿರಾ ಕ್ಯಾಂಟಿನ್‌ಗಳಿದ್ದು, ಕಳೆದೊಂದು ವರ್ಷದಿಂದ ಬಿಲ್ ಆಗದಿದ್ದರೂ ಗುತ್ತಿಗೆದಾರರ ಸಹಕಾರದೊಂದಿಗೆ ಕುಂಟುತ್ತಾ ಸಾಗುತ್ತಿವೆ. ಸದ್ಯ ಮತ್ತೆ ಇಂದಿರಾ ಕ್ಯಾಂಟಿನ್‌ಗಳ ಪುನರಾರಂಭಕ್ಕೆ ಸರ್ಕಾರ ಗ್ರೀನ್ ಸಿಗ್ನಲ್ ನೀಡಿರುವ ಹಿನ್ನಲೆ ಇಂದಿರಾ ಕ್ಯಾಂಟಿನ್‌ನಲ್ಲಿ ಕಾರ್ಯನಿರ್ವಹಿಸುವವರ ಮೊಗದಲ್ಲಿ ಸಂತಸ ಮೂಡಿದ್ದು, ಊಟ–ಉಪಹಾರ ಸೇವಿಸಲು ಬರುವ ಜನರ ನಿರೀಕ್ಷೆಯಲ್ಲಿದ್ದಾರೆ.

ನಗರದಲ್ಲಿರುವ 11 ಕ್ಯಾಂಟಿನ್‌ಗಳಲ್ಲಿ ಕುಂಬಾರಕೊಪ್ಪಲು ಹಾಗೂ ಆಲನಹಳ್ಳಿಯಲ್ಲಿರುವ ಊಟ ತಯಾರಿಕಾ ಘಟಕಗಳಿಂದ ಪೂರೈಕೆ ಮಾಡಲಾಗುತ್ತಿದ್ದು, ಆಲನಹಳ್ಳಿ ಘಟಕದಿಂದ 6 ಇಂದಿರಾ ಕ್ಯಾಂಟಿನ್‌ಗಳಿಗೆ ಹಾಗೂ ಕುಂಬಾರಕೊಪ್ಪಲು ಘಟಕದಿಂದ 5 ಇಂದಿರಾ ಕ್ಯಾಂಟಿನ್‌ಗಳಿಗೆ ಆಹಾರ ಪೂರೈಕೆ ಮಾಡಲಾಗುತ್ತಿದೆ. ಕೆ.ಆರ್. ಆಸ್ಪತ್ರೆ, ಆಲನಹಳ್ಳಿ, ಕುಂಬಾರಕೊಪ್ಪಲು (ಜಯದೇವ ಆಸ್ಪತ್ರೆ ಎದುರು), ಗ್ರಾಮಾಂತರ ಬಸ್‌ನಿಲ್ದಾಣದ ಸಮೀಪದಲ್ಲಿರುವ ಇಂದಿರಾ ಕ್ಯಾಂಟಿನ್‌ಗಳಲ್ಲಿ ಹೆಚ್ಚಿನ ಜನರು ಊಟ ಸವಿಯುತ್ತಿದ್ದು, ಉಳಿದ ಇಂದಿರಾ ಕ್ಯಾಂಟಿನ್‌ಗಳಿಗೆ ಭೇಟಿ ನೀಡುವವರ ಸಂಖ್ಯೆ ತೀರಾ ಕಡಿಮೆಯಾಗಿದೆ.

ಹಸಿದವರಲ್ಲಿ ಆಶಾಭಾವ



ಇಂದಿರಾ ಕ್ಯಾಂಟಿನ್‌ಗಳ ನಿರ್ವಹಣೆ ಸಂಬಂಧ ನಗರದಲ್ಲಿನ ಎಲ್ಲಾ ಇಂದಿರಾ ಕ್ಯಾಂಟಿನ್‌ಗಳಿಗೂ ಭೇಟಿ ನೀಡಿ ಪರಿಶೀಲನೆ ನಡೆಸಿ, ವರದಿಯನ್ನು ಸಿದ್ದಪಡಿಸಿ ಸರ್ಕಾರಕ್ಕೆ ನೀಡಲಾಗಿದೆ. ಸದ್ಯದಲ್ಲಿಯೇ ಇಂದಿರಾ ಕ್ಯಾಂಟಿನ್‌ಗಳಲ್ಲಿ ಎಲ್ಲಾ ಬಗೆಯ ಮೂಲಸೌಕರ್ಯ ಒದಗಿಸುವ ಕುರಿತು ಕ್ರಮ ಕೈಗೊಳ್ಳಲಾಗುವುದು. ಹಾಗೆಯೇ ಗುಣಮಟ್ಟದ ಆಹಾರ ಪೂರೈಕೆ ಮಾಡುವಂತೆ ಇಂದಿರಾ ಕ್ಯಾಂಟಿನ್ ನಿರ್ವಹಣೆ ಮಾಡುವವರಿಗೂ ಸೂಚಿಸಲಾಗಿದೆ. ಕ್ಯಾಂಟಿನ್ ಸುತ್ತಲೂ ಸ್ವಚ್ಛತೆ ಕಾಪಾಡಿಕೊಳ್ಳುವಂತೆಯೂ ತಿಳಿಸಲಾಗಿದೆ.
– ಡಾ.ನಾಗರಾಜು, ಆರೋಗ್ಯಾಧಿಕಾರಿ, ನಗರ ಪಾಲಿಕೆ

ಏನೇನಾಗಬೇಕು: 11 ಇಂದಿರಾ ಕ್ಯಾಂಟಿನ್‌ಗಳಲ್ಲಿ ಶೌಚಾಲಯದ ಬಾಗಿಲುಗಳ ಚಿಲಕಗಳು ಮುರಿದು ಬಿದ್ದಿದ್ದು ಭದ್ರತೆಯೇ ಇಲ್ಲದಂತಾಗಿದೆ. ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆ, ಶುಚಿ ವಾತಾವರಣ, ಕುಟ್ಟಿಡಗಳಿಗೆ ಪೇಂಟಿಂಗ್, ಹಾಳಾಗಿರುವ ಕಿಟಕಿ ಗಾಜುಗಳ ದುರಸ್ಥಿ ಕಾರ್ಯವಾಗಬೇಕಾಗಿದೆ. ಹಾಗೆಯೇ ಸಮಯಕ್ಕೆ ತಕ್ಕಂತೆ ಬಾಕಿ ಇರುವ ಬಿಲ್ ಸಹಿತ ಮುಂದಿನ ಬಿಲ್‌ಗಳು ಕೂಡ ಸರ್ಕಾರದ ಮಟ್ಟದಲ್ಲಿ ಆಗಬೇಕಾಗಿದೆ.

ಸಾವಿರದಿಂದ ನೂರಕ್ಕೆ ಇಳಿಕೆ: ಇಂದಿರಾ ಕ್ಯಾಂಟಿನ್‌ಗಳ ಆರಂಭದಲ್ಲಿ ಪ್ರತಿನಿತ್ಯ ಸಾವಿರಾರು ಮಂದಿ ಬೆಳಗಿನ ಉಪಹಾರ, ಮಧ್ಯಾಹ್ನ ಹಾಗೂ ರಾತ್ರಿ ಊಟ ಮಾಡಲು ಬರುತ್ತಿದ್ದರು. ಕೆ.ಆರ್.ಆಸ್ಪತ್ರೆ ಒಂದೇ ಸ್ಥಳದಲ್ಲಿ ಸುಮಾರು 13–14 ಸಾವಿರ ರೂ. ಕಲೆಕ್ಷನ್ ಆಗುತ್ತಿತ್ತು. ಆದರೆ ನಂತರದ ದಿನಗಳಲ್ಲಿ ಇಂದಿರಾ ಕ್ಯಾಂಟಿನ್ ಬಂದ್ ಆಗಿವೆ ಎಂದು ಸುದ್ದಿಯಾದಂತೆ ಬರುವವರ ಸಂಖ್ಯೆ ಕಡಿಮೆಯಾಗಿದೆ. ಸದ್ಯಕ್ಕೆ ಪ್ರತಿನಿತ್ಯ 400–500 ಮಂದಿಯಷ್ಟೇ ಇಂದಿರಾ ಕ್ಯಾಂಟಿನ್‌ಗೆ ಬರುತ್ತಿದ್ದಾರೆ ಎಂದು ಇಂದಿರಾ ಕ್ಯಾಂಟಿನ್‌ನ ಮ್ಯಾನೇಜರ್ ಒಬ್ಬರು 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದರು.



5 ರೂ. ಬೆಳಗಿನ ತಿಂಡಿ, 10 ರೂ.ಗೆ ಮಧ್ಯಾಹ್ನ ಹಾಗೂ ರಾತ್ರಿ ಅನ್ನ, ಸಾಂಬರ್ ಹಾಗೂ ಮೊಸರನ್ನ ನೀಡಲಾಗುತ್ತಿದೆ. ನಿರಂತರವಾಗಿ ನಡೆಸಿಕೊಂಡು ಬಂದಿದ್ದರೆ ಇಂದಿರಾ ಕ್ಯಾಂಟಿನ್‌ಗಳಿಗೆ ಬೇಡಿಕೆ ಹೆಚ್ಚಾಗುತ್ತಿತ್ತು. ಆದರೆ ಸ್ಥಗಿತಗೊಳಿಸುತ್ತೇವೆ ಎಂಬ ಸರ್ಕಾರದ ಸುದ್ದಿಗಳಿಂದಾಗಿ ಬರುವವರ ಸಂಖ್ಯೆ ಕಡಿಮೆಯಾಗುವುದರ ಜೊತೆಗೆ ಕಡಿಮೆ ದುಡ್ಡಿನಲ್ಲಿ ಹೊಟ್ಟೆ ತುಂಬಿಸಿಕೊಳ್ಳುತ್ತಿದ್ದವರಿಗೆ ತೊಂದರೆಯಾಯಿತು ಎಂದು ಬೇಸರ ವ್ಯಕ್ತಪಡಿಸಿದರು.

ಇನ್ನೆರಡು ವಾರದಲ್ಲಿ ಬರಲಿದ್ದಾರಂತೆ: ರಾಜ್ಯ ಸರ್ಕಾರ ಇಂದಿರಾ ಕ್ಯಾಂಟಿನ್‌ಗಳಿಗೆ ಪುನಶ್ಚೇತನ ನೀಡಲು ನಿರ್ಧರಿಸಿದ ನಂತರ ಬೆಂಗಳೂರಿನಿಂದ ಈಗಾಗಲೇ ಕೆಲವು ಭೇಟಿ ನೀಡಿ, ಪರಿಶೀಲನೆ ನಡೆಸುತ್ತಿದ್ದಾರೆ. ಇನ್ನೆರಡು ವಾರದಲ್ಲಿ ದುರಸ್ತಿ ಕಾರ್ಯಗಳನ್ನು ಕೈಗೊಳ್ಳಲಿದ್ದೇವೆ ಎಂದು ತಿಳಿಸಿದ್ದಾರೆ. ಎಲ್ಲದರ ಫಲವಾಗಿ ಮತ್ತೊಮ್ಮೆಲೆನುತೆ ಇಂದಿರಾ ಕ್ಯಾಂಟಿನ್‌ಗಳು ಜನರಿಂದ ತುಂಬಿರಬೇಕು ಎಂದು ಆಶಾಭಾವನೆ ವ್ಯಕ್ತಪಡಿಸಿದರು.

ಮೈಸೂರಿನಲ್ಲಿ ನಿಲ್ಲಿಸಿಲ್ಲ: ರಾಜ್ಯದಲ್ಲಿ ಹಲವೆಡೆ ಇಂದಿರಾ ಕ್ಯಾಂಟಿನ್‌ಗಳನ್ನು ಮುಚ್ಚಲಾಗಿದೆ ಎನ್ನಲಾಗುತ್ತಿದೆ. ಆದರೆ ಮೈಸೂರಿನಲ್ಲಿ ಮಾತ್ರ ನಡೆಸುತ್ತಲೇ ಇದ್ದೇವೆ. ಸುಮಾರು ಕಳೆದ ಒಂದು ವರ್ಷದಿಂದಲೂ ಬಿಲ್ ಆಗದಿದ್ದರೂ ಬೇಡಿಕೆಗೆ ಅನುಗುಣವಾಗಿ ಗುತ್ತಿಗೆದಾರರು ಇಂದಿರಾ ಕ್ಯಾಂಟಿನ್ ನಡೆಸುತ್ತಿದ್ದಾರೆ. ಈಗ ರಾಜ್ಯ ಸರ್ಕಾರದಿಂದ ಪುನರಾರಂಭಿಸುವ ಸೂಚನೆ ಬಂದಿರುವ ಹಿನ್ನಲೆ ನಗರದಲ್ಲಿನ ಎಲ್ಲಾ ಇಂದಿರಾ ಕ್ಯಾಂಟಿನ್‌ಗಳಿಗೂ ಭೇಟಿ ಪರಿಶೀಲನೆ ನಡೆಸಲಾಗುತ್ತಿದೆ. ಅಲ್ಲದೆ ಮೂಲ ಸೌಕರ್ಯಗಳನ್ನು ಒದಗಿಸುವುದು ಸೇರಿದಂತೆ ಕೆಲ ಬದಲಾವಣೆಗಳನ್ನು ತರಲು ಚಿಂತಿಸಲಾಗಿದೆ ಎಂದು ಮೈಸೂರು ನಗರಪಾಲಿಕೆ ಆರೋಗ್ಯಾಧಿಕಾರಿ ಡಾ.ನಾಗರಾಜು ತಿಳಿಸಿದರು.

ಹಾಗೆಯೇ ಉದಯಗಿರಿಯಲ್ಲಿ ನಿರ್ಮಾಣಗೊಂಡು ಉದ್ಘಾಟನೆಯಾಗದಿರುವ ಇಂದಿರಾ ಕ್ಯಾಂಟಿನ್ ಅನ್ನು ತೆರೆಯಲು ಪೂರ್ವ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಗುತ್ತಿಗೆದಾರರಿಗೆ ಬಾಕಿ ಇರುವ ಬಿಲ್‌ಗಳು ಪಾವತಿಯಾಗಬೇಕು. ಇದರ ಕಡೆಗೂ ಗಮನ ಹರಿಸಲಾಗುವುದು ಎಂದು ಹೇಳಿದರು.

'ಮಿತ್ರ'ನ ವರದಿ ಫಲಶ್ರುತಿ

ರಸ್ತೆಗಳಲ್ಲಿ ನಿಂತ ಮಳೆ ನೀರು ತೆರವಿಗೆ ಕ್ರಮ ಕೈಗೊಂಡ ಪಾಲಿಕೆ ಸಿಬ್ಬಂದಿ

ಮೈಸೂರು, ಮೇ 25(ಎಂಕೆ)– ಮಳೆ ಬಂದರೆ ನೀರಿನ ಹೊಂಡಗಳಾಗುತ್ತಿದ್ದ ಮೈಸೂರಿನ ಪ್ರಮುಖ ರಸ್ತೆಗಳಲ್ಲಿ ಕಾರ್ಯಾಚರಣೆಗಿಳಿದಿರುವ ನಗರಪಾಲಿಕೆ ಸಿಬ್ಬಂದಿ ಜೆಸಿಬಿಗಳ ಮೂಲಕ ರಸ್ತೆಯಲ್ಲಿ ನಿಲ್ಲುತ್ತಿದ್ದ ಮಳೆ ನೀರನ್ನು ಚರಂಡಿಗೆ ಹರಿಸಲು ಕ್ರಮಕೈಗೊಂಡಿದ್ದಾರೆ.

ಮೇ 25ರಂದು 'ಮೈಸೂರು ಮಿತ್ರ'ನಲ್ಲಿ 'ಸಾಧಾರಣ ಮಳೆಗೂ ನೀರಿನ ಹೊಂಡಗಳಾಗುತ್ತಿವೆ ಮೈಸೂರು ರಸ್ತೆಗಳು' ಶೀರ್ಷಿಕೆಯಡಿ ಸುದ್ದಿ ಪ್ರಕಟವಾದ ಬೆನ್ನಲ್ಲೇ ಎಚ್ಚೆತ್ತುಕೊಂಡಿರುವ ಪಾಲಿಕೆ ಅಧಿಕಾರಿ–ಸಿಬ್ಬಂದಿ ರಸ್ತೆಯಲ್ಲಿ ನೀರು ನಿಲ್ಲುತ್ತಿದ್ದ ಸ್ಥಳಗಳನ್ನು ಗುರ್ತಿಸಿ, ಹಾನಿ ಸರಿಪಡಿಸುವ ಕಾರ್ಯಕ್ಕೆ ಮುಂದಾಗಿದ್ದಾರೆ.

ಸಯ್ಯಾಜಿರಾವ್ ರಸ್ತೆಯ ತಿಲಕ್‌ನಗರ ಸಿಗ್ನಲ್, ನಜರ್‌ಬಾದ್ ಮುಖ್ಯ ರಸ್ತೆ (ಶಾಂತವೇರಿ ಗೋಪಾಲ್‌ಗೌಡ ಆಸ್ಪತ್ರೆ ಹಾಗೂ ಸಾಯಿಬಾಬ ಗುಡಿ ಎದುರು),



ಮೈಸೂರು–ಬೆಂಗಳೂರು ರಸ್ತೆ(ಎಲ್‌ಐಸಿ ಕಚೇರಿ ಸಮೀಪ), ಬನ್ನೂರು ಮುಖ್ಯರಸ್ತೆ (ಜಿಲ್ಲಾಧಿಕಾರಿಗಳ ಹೊಸ ಕಚೇರಿ ಎದುರು), ನಗರದೊಳಗಿರುವ ಅಂಡರ್ ಬ್ರಿಡ್ಜ್‌ಗಳು ಹಾಗೂ ವಿವಿಧ ಬಡಾವಣೆಗಳ ಪ್ರಮುಖ ರಸ್ತೆಗಳಲ್ಲಿ ಪರಿಶೀಲನೆ ನಡೆಸಿ, ರಸ್ತೆಯಲ್ಲಿ ಮಳೆ ನೀರು ನಿಲ್ಲದಂತೆ ಸೂಕ್ತ ಕ್ರಮ ಕೈಗೊಂಡಿದ್ದಾರೆ.

ಫುಟ್‌ಪಾತ್‌ನ ಟೈಲ್ಸ್‌ಗಳ ತಳಭಾಗದಲ್ಲಿ ಪೈಪ್‌ಲೈನ್ ಮಾದರಿಯಲ್ಲಿದ್ದ ಜಾಗದಲ್ಲಿ ತುಂಬಿದ್ದ ಮಣ್ಣು, ಕಸವನ್ನು ತೆರವುಗೊಳಿಸುವುದು ಹಾಗೂ ಪೈಪ್‌ಲೈನ್ ಮುಚ್ಚಿಹೋಗಿದ್ದರೆ ಅಗತ್ಯವಿದ್ದಷ್ಟು ಫುಟ್‌ಪಾತ್ ತೆರವುಗೊಳಿಸಿ ರಸ್ತೆಗೆ ಬಿದ್ದ ಮಳೆ ನೀರು ನೇರವಾಗಿ ಚರಂಡಿಗೆ ಹರಿಯುವಂತೆ ವ್ಯವಸ್ಥೆ ಮಾಡಲಾಗುತ್ತಿದೆ. ಹಾಗೆಯೇ ಸ್ಲಾಬ್‌ಗಳನ್ನು ತೆಗೆದು ಚರಂಡಿ ಸ್ವಚ್ಛಗೊಳಿಸುತ್ತಿದ್ದಾರೆ.

ಡಾ.ಹೆಚ್.ಸಿ.ಎಂ.ಗೆ ಸಚಿವ ಸ್ಥಾನ ನೀಡಿ: ದಲಿತ ಮಹಾಸಭಾ ಒತ್ತಾಯ



ಮೈಸೂರು,ಮೇ 25(ಪಿಎಂ)– ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಮ್ಮ ಸಚಿವ ಸಂಪುಟದಲ್ಲಿ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ಸಂಪುಟ ದರ್ಜೆ ಸಚಿವ ಸ್ಥಾನ ನೀಡಬೇಕೆಂದು ದಲಿತ ಮಹಾಸಭಾ ಒತ್ತಾಯಿಸಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಮಹಾಸಭಾದ ಅಧ್ಯಕ್ಷ ಎಸ್.ರಾಜೇಶ್, ಐದು ಬಾರಿ ಶಾಸಕರು, ಮೂರು ಬಾರಿ ಸಚಿವರಾಗಿ ಡಾ.ಹೆಚ್.ಸಿ.ಮಹದೇವಪ್ಪ ಉತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ. ತಮ್ಮ ಬದುಕಿನ ಉದ್ದಕ್ಕೂ ಜನಪರವಾಗಿಯೇ ನಡೆದುಕೊಂಡಿದ್ದಾರೆ ಎಂದರು.

ಲೋಕೋಪಯೋಗಿ ಸಚಿವರಾಗಿದ್ದ ಸಂದರ್ಭದಲ್ಲಿ ಟಿ.ನರಸೀಪುರ ಕ್ಷೇತ್ರಕ್ಕೆ ಸಾವಿರಾರು ಕೋಟಿ ರೂ. ಅನುದಾನ ತಂದು ಕ್ಷೇತ್ರದ ಅಭಿವೃದ್ಧಿ ಮಾಡಿದ್ದಾರೆ. ಈ ಬಾರಿಯ ಚುನಾವಣೆಯಲ್ಲಿ ದಲಿತ ಸಮುದಾಯ ಭಾರೀ ಪ್ರಮಾಣದಲ್ಲಿ ಕಾಂಗ್ರೆಸ್‌ಗೆ ಬೆಂಬಲ ನೀಡಿದ್ದು, ಇದಕ್ಕೆ ಕಾರಣ ಮಹದೇವಪ್ಪ ಅವರ ಸಂಘಟನೆಯಾಗಿದೆ. ಅವರಿಗೆ ಈಗಾಗಲೇ ಸಚಿವ ಸ್ಥಾನ ನೀಡಬೇಕಿತ್ತು. ಆದರೆ ಕಡೆಗಣಿಸಲಾಗಿದ್ದು, ಇದನ್ನು ಸಹಿಸಲು ಸಾಧ್ಯವಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮಹದೇವಪ್ಪರಿಗೆ ಸಂಪುಟ ದರ್ಜೆ ಸಚಿವ ಸ್ಥಾನ ನೀಡಲು ಶೀಘ್ರದಲ್ಲಿಯೇ ತೀರ್ಮಾನ ಕೈಗೊಳ್ಳದಿದ್ದರೆ ಪ್ರತಿಭಟನೆ ನಡೆಸಲಿದ್ದೇವೆ ಎಂದು ಎಚ್ಚರಿಕೆ ನೀಡಿದರು. ಕೆಪಿಸಿಸಿ ಎಸ್‌ಸಿ ಘಟಕದ ಕಾರ್ಯಕಾರಿಣಿ ಸದಸ್ಯ ರಾಜಶೇಖರ್, ಮೈಸೂರು ನಗರ ಎಸ್‌ಸಿ ಘಟಕದ ಸಂಚಾಲಕ ರಂಗಸ್ವಾಮಿ, ಕಾಂಗ್ರೆಸ್ ಮುಖಂಡ ಕೆ.ಎಂ.ಕುಮಾರಸ್ವಾಮಿ, ವಕೀಲ ಬನ್ನೂರು ಶಿವಮೂರ್ತಿ ಗೋಷ್ಠಿಯಲ್ಲಿದ್ದರು.

ಹಸಿರು ನಮ್ಮ ಉಸಿರು

ತ್ವರಿತ ನ್ಯಾಯ ನಿರ್ಣಯಕ್ಕೆ ಎಲ್ಲರೂ ಶ್ರಮಿಸಬೇಕಿದೆ

● ಸುಪ್ರೀಂಕೋರ್ಟ್ ನ್ಯಾಯಮೂರ್ತಿ ಸಿ.ಟಿ.ರವಿಕುಮಾರ್ ಕಿವಿಮಾತು
● ಮೈಸೂರು ವಕೀಲರ ಸಂಘದಲ್ಲಿ ನ್ಯಾಯಮೂರ್ತಿಗಳಿಗೆ ಆತ್ಮೀಯ ಅಭಿನಂದನೆ



ಮೈಸೂರು ವಕೀಲರ ಸಂಘದಲ್ಲಿ ಸುಪ್ರೀಂಕೋರ್ಟ್ ನ್ಯಾಯಮೂರ್ತಿ ಸಿ.ಟಿ.ರವಿಕುಮಾರ್ ಹಾಗೂ ಅವರ ಪತ್ನಿ, ವಕೀಲೆ ಸೈರಾ ರವಿಕುಮಾರ್ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು.

ಮೈಸೂರು, ಮೇ 25(ಎಸ್‌ಬಿಡಿ)– ಕಕ್ಷಿದಾರರಿಗೆ ತ್ವರಿತ ಗತಿಯಲ್ಲಿ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಎಲ್ಲರೂ ಶ್ರಮಿಸಬೇಕಿದೆ ಎಂದು ಸುಪ್ರೀಂಕೋರ್ಟ್ ನ್ಯಾಯಮೂರ್ತಿ ಸಿ.ಟಿ.ರವಿಕುಮಾರ್ ಕರೆ ನೀಡಿದರು.

ಮೈಸೂರು ವಕೀಲರ ಸಂಘಕ್ಕೆ ಗುರುವಾರ ಭೇಟಿದ್ದ ವೇಳೆ ವಕೀಲರನ್ನುದ್ದೇಶಿಸಿ ಮಾತನಾಡಿದ ಅವರು, ಸಾಕಷ್ಟು ಪ್ರಕರಣಗಳು ಬಾಕಿಯಿರುವ ಬಗ್ಗೆ ನಾವೆಲ್ಲಾ ಯೋಚಿಸಬೇಕು. ನ್ಯಾಯ ಬಯಸಿ ನ್ಯಾಯಾಲಯಕ್ಕೆ ಬರುವ ಜನರ ಪರವಾಗಿ ಎಲ್ಲರೂ ಕೆಲಸ ಮಾಡಬೇಕು. ಸಮಯ ವ್ಯರ್ಥವಾಗಬಾರದು. ಕಕ್ಷಿದಾರರಿಗೆ ತ್ವರಿತ ಗತಿಯಲ್ಲಿ ನ್ಯಾಯ ಒದಗಿಸಿಕೊಡಲು ಪ್ರತಿಯೊಬ್ಬರೂ ಶ್ರಮಿಸಬೇಕೆಂದು ಕಿವಿಮಾತು ಹೇಳಿದರು.

ಇದೇ ವೇಳೆ ಮೈಸೂರು ವಕೀಲರ ಸಂಘಕ್ಕೆ ಭೇಟಿ ನೀಡಿದ್ದಕ್ಕೆ ಸಂತಸ ವ್ಯಕ್ತಪಡಿಸಿದರಲ್ಲದೆ, ಈ ಹಿಂದೆ ತಾವೂ ಬಾರ್ ಅಸೋಸಿಯೇಷನ್‌ನಲ್ಲಿ ಕಾರ್ಯನಿರ್ವಹಿಸಿದ್ದನ್ನು ಸ್ಮರಿಸಿಕೊಂಡರು.

ಈ ವೇಳೆ ನ್ಯಾಯಮೂರ್ತಿ ಸಿ.ಟಿ.ರವಿಕುಮಾರ್ ಹಾಗೂ ಅವರ ಪತ್ನಿ, ಹಿರಿಯ ವಕೀಲೆ ಸೈರಾ ರವಿಕುಮಾರ್ ದಂಪತಿಯನ್ನು ಮೈಸೂರು ವಕೀಲರ ಸಂಘದ ವತಿಯಿಂದ ಆತ್ಮೀಯವಾಗಿ ಅಭಿನಂದಿಸಲಾಯಿತು.

ಮೈಸೂರು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಜಿ.ಎಸ್.ಸಂಗ್ರೇಶಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವಕೀಲರ ಸಂಘದ ಅಧ್ಯಕ್ಷ ಮಹದೇವಸ್ವಾಮಿ, ಕಾರ್ಯದರ್ಶಿ ಉಮೇಶ್, ರಾಜ್ಯ ವಕೀಲರ ಪರಿಷತ್ ಸದಸ್ಯ ಚಂದ್ರಮೌಳಿ ಹಾಗೂ ಉಪಾಧ್ಯಕ್ಷ ಪುಟ್ಟ ಸಿದ್ದೇಗೌಡ ಮತ್ತಿತರರು ಉಪಸ್ಥಿತರಿದ್ದರು.


ಇತಿಹಾಸ ತಿರುಚಿ ಜನರ ದಿಕ್ಕು ತಪ್ಪಿಸುವ ಸಂಚು ಹೆಚ್ಚಾಗಿದೆ: ಜಗದೀಶ ಕೊಪ್ಪ

ಮೈಸೂರು,ಮೇ 25(ಎಂಟಿವೈ)– ಸಂಸ್ಕೃತಿಯ ಹೆಸರಿನಲ್ಲಿ ನಮ್ಮ ನೆಲಮೂಲ ಸಂಸ್ಕೃತಿಯನ್ನು ಭಿನ್ನವಾಗಿಸಿ ಅಸಾಂಸ್ಕೃತಿಕ ಎಂದು ಬಿಂಬಿಸುವ ಸಂಚು ನಡೆಸಲಾಗುತ್ತಿದೆ ಎಂದು ಸಾಹಿತಿಗಳೂ ಆದ ಹಿರಿಯ ಪತ್ರಕರ್ತ ಜಗದೀಶ ಕೊಪ್ಪ ವಿಷಾದಿಸಿದ್ದಾರೆ.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ರೋಟರಿ ಸಭಾಂಗಣದಲ್ಲಿ ಭಾರತೀಯ ಜನಕಲಾ ಸಮಿತಿ ಜಿಲ್ಲಾ ಸಮಿತಿಯ 80ನೇ ವಾರ್ಷಿಕೋತ್ಸವದ ಅಂಗವಾಗಿ ನಡೆದ ಸಾಂಸ್ಕೃತಿಕ ಲೋಕದ ಸಮಸ್ಯೆಗಳು ಮತ್ತು ಸವಾಲುಗಳ ಕುರಿತು ವಿಚಾರ ಸಂಕಿರಣದಲ್ಲಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಇತಿಹಾಸ ತಿರುಚಿ, ತಮಗೆ ಬೇಕಾದಂತೆ ಮಾರ್ಪಡಿಸಿಕೊಳ್ಳುವ ಹುನ್ನಾರ ನಿರಂತರವಾಗಿ ನಡೆಸಲಾಗುತ್ತಿದೆ. ನಮ್ಮ ಕಣ್ಣ ಮುಂದೆಯೇ 200 ವರ್ಷಗಳ ಇತಿಹಾಸವಿರುವ ಟಿಪ್ಪು ಸುಲ್ತಾನ್ ಬಗ್ಗೆ ಇತಿಹಾಸ ತಿರುಚಿ ಪುಸ್ತಕ ಬರೆದು ಜನರನ್ನು ದಿಕ್ಕು ತಪ್ಪಿಸುವ ಸಂಚು ನಡೆಸಲಾಯಿತು. ಕಪೋಲ ಕಲ್ಪಿತ ಉರಿಗೌಡ–ನಂಜೇಗೌಡ ಪಾತ್ರಧಾರಿಗಳನ್ನು ಸೃಷ್ಟಿಸಿ ನಾಟಕ ಪ್ರದರ್ಶಿಸಿರುವುದು ದುರಂತ. ಇಂತಹ ಮನಸ್ಥಿತಿಯುಳ್ಳವರು ಸಾಮಾಜಿಕ ವ್ಯವಸ್ಥೆಯನ್ನು ಹಾಳುಗೆಡುವ ಪ್ರಯತ್ನ ಮಾಡಿದ್ದರು.

ಪ್ರತಿಯೊಬ್ಬರಿಗೂ ಶಿಕ್ಷಣದಂತೆ ಕಲಾ ಪ್ರಕಾರಗಳಲ್ಲಿ ತೊಡಗಿಕೊಳ್ಳುವುದು ಮುಖ್ಯವಾಗಿದೆ. ಮನುಷ್ಯನ ವೈಚಾರಿಕತೆ ಮತ್ತು ಸೃಜನಶೀಲತೆಯನ್ನು ವೃದ್ಧಿಸುವುದೇ ಕಲಾ ಪ್ರಕಾರಗಳಾಗಿವೆ. ಹೀಗಾಗಿ ಪ್ರಾಚೀನ ಕಾಲದಿಂದಲೂ ಮನುಷ್ಯ ಕಲಾ ಪ್ರಕಾರಗಳನ್ನೇ ಅಭಿವ್ಯಕ್ತಿಗೊಳಿಸುವ ಮಾಧ್ಯಮವಾಗಿಸಿಕೊಂಡಿದ್ದಾನೆ. ಯಾವ ವ್ಯಕ್ತಿ ಸಾಂಸ್ಕೃತಿಕ ಚಿಂತನೆ, ವೈಚಾರಿಕತೆ ಅಳವಡಿಸಿಕೊಳ್ಳುವುದಿಲ್ಲವೋ ಅಂತಹವರು ನಡೆದಾಡುವ ಶವವಿದ್ದಂತೆ ಎಂದು ವಿಷಾದಿಸಿದರು.



ಪ್ರಸ್ತುತ ಗ್ರಾಮೀಣ ನಾಟಕಗಳನ್ನು ಗ್ರಾಮ್ಯ ಭಾಷೆಯ ಸೊಗಡಿನಲ್ಲಿ ಕಟ್ಟುವುದು ಕಷ್ಟವಾಗಿದೆ. ಸಂಸ್ಕೃತಿಯ ಹೆಸರಿನಲ್ಲಿ ನೆಲಮೂಲ ಸಂಸ್ಕೃತಿಯನ್ನು ಭಿನ್ನವಾಗಿಸಿ ಅಸಾಂಸ್ಕೃತಿಕ ಎಂದು ಬಿಂಬಿಸಲಾಗುತ್ತಿದೆ. ಕೇವಲ ರಾಮಾಯಣ, ಮಹಾಭಾರತ ದಂತಹ ಪೌರಾಣಿಕ, ವೈದಿಕ ಸಂಸ್ಕೃತಿಗೆ ಹೆಚ್ಚಿನ ಮನ್ನಣೆ ದೊರೆತಿದೆ. ವೈದಿಕರ ಪೌರಾಣಿಕ ಕಲ್ಪನೆಯ ಸಾಹಿತ್ಯಕ್ಕೆ ಪರ್ಯಾಯವಾದ ದ್ರಾವಿಡ ಸಂಸ್ಕೃತಿ, ಬುಡಕಟ್ಟಿನ ಆದಿವಾಸಿಗಳ ಸಂಸ್ಕೃತಿಯು ನೆಲಮೂಲದಾಗಿದೆ ಎಂದರು.

ಎಡಪಂಥಿಯ ಚಳವಳಿಗಾರರನ್ನು ಬ್ರಾಹಣರ ವಿರೋಧಿ ಎಂಬ ಹಣೆಪಟ್ಟಿ ಕಟ್ಟಲಾಗಿದೆ. ಆದರೆ, ಎಡಪಂಥೀಯರು ಬ್ರಾಹ್ಮಣ್ಯದ ವಿರೋಧಿಗಳೇ ಹೊರತು ಬ್ರಾಹ್ಮಣ ಸಮುದಾಯದ ವಿರೋಧಿಗಳಲ್ಲ. ದೇಶದಲ್ಲಿ ಎಡಪಂಥೀಯ ಚಳವಳಿಗಳನ್ನು ಹುಟ್ಟು ಹಾಕಿದ ಮೂಲ ವಾರಸುದಾರರು ಬ್ರಾಹ್ಮಣರು. ಜಾತಿವಾದವೇ ಎಡ ಪಂಥೀಯರ ವಿರೋಧಿಯಾಗಿದ್ದು, ಮೊದಲು ಮನುಷ್ಯ ಜಾತಿ ಮತ್ತು ಧರ್ಮ ಬಿಡಬೇಕು. ಇಲ್ಲವಾದರೆ ಆತನಲ್ಲಿ ಬ್ರಾಹ್ಮಣ್ಯ ಉಸಿರಾಡಲಿದೆ ಎಂದರು.

ದೇಶದ್ಯಾಂತ ಭಾರತೀಯ ಜನಕಲಾ ಸಮಿತಿ (ಇಪ್ಟಾ) ಸಂಸ್ಥೆಯು ಸಾಂಸ್ಕೃತಿಕವಾಗಿ ಜನರನ್ನು ಎಚ್ಚರಗೊಳಿಸುತ್ತಿದೆ. ಚಲನ ಚಿತ್ರನಟ–ನಟಿಯರು ಇಪ್ಟಾದಿಂದ ಬಂದ ಸ್ಟಾರ್‌ಗಳಾಗಿದ್ದಾರೆ. ಭಾರತದಲ್ಲಿ ವೈಚಾರಿಕ ಜಗತ್ತು ಸಾಹಿತ್ಯ ರೂಪ ಪಡೆದುಕೊಂಡು ಚಳವಳಿ ದೇಶವ್ಯಾಪಿ ನಡೆಯುತ್ತಿವೆ. ಸ್ವಾತಂತ್ರ್ಯ ಪೂರ್ವ ಆರಂಭವಾದ ಇಪ್ಟಾ ಸಂಸ್ಥೆಯು ಮೊದಲು ಬಂಗಾಳದಲ್ಲಿ ರೂಪಗೊಂಡಿತು. ಇದಕ್ಕೆ ಈಸ್ಟ್ ಇಂಡಿಯಾ ಕಂಪನಿಯೇ ಕಾರಣ. ತದನಂತರದಲ್ಲಿ ಕೇರಳ, ತಮಿಳುನಾಡು, ಕರ್ನಾಟಕ ಹೀಗೆ ದೇಶ ವ್ಯಾಪ್ತಿ ವಿಸ್ತರಿಸಿದೆ ಎಂದು ಹೇಳಿದರು.

ಹಿರಿಯ ರಂಗಕರ್ಮಿ ಹೆಚ್.ಜನಾರ್ದನ್ (ಜನ್ನಿ) ಮಾತನಾಡಿ, ಭಾರತೀಯ ಜನಕಲಾ ಸಮಿತಿ ಎಂಬುದು ದೇಶದ ಮೂಲ ಸಂಸ್ಕೃತಿಯನ್ನು ಪ್ರತಿಪಾದಿಸಿದ ಜನಪರ ಸಾಂಸ್ಕೃತಿಕ ವೇದಿಕೆಯಾಗಿದೆ. ದೇಶದ ಜನರ ಒಳಿತು ಬಯಸುವ ಈ ಸಂಘಟನೆ ಸ್ವಾಭಿಮಾನದ ಸಂಕೇತವಾಗಿದೆ. ಶಿಶುನಾಳ ಶರೀಫರ ಸಾಹಿತ್ಯದ ಕಾಣಿಕೆ ಕನ್ನಡ ಸಾಹಿತ್ಯವನ್ನು ಉತ್ತುಂಗಕ್ಕೆ ಏರಿಸಿದೆ. ಆದರೂ ಕೆಲವು ದುಷ್ಟ ಮನಸ್ಸುಗಳು ಅವರನ್ನು ಧಾರ್ಮಿಕವಾಗಿ ತೇಜೋವಧೆ ಮಾಡಿದ್ದಾರೆ. ಸಾಂಸ್ಕೃತಿಕ ಮೌಲ್ಯಗಳನ್ನು ಧರ್ಮ, ಸಂಸ್ಕೃತಿ, ಮಾನವೀಯತೆ ವಾರಾಟಕ್ಕಿಟ್ಟ ದೇಶ ಎಂದಿಗೂ ಉದ್ಧಾರವಾಗಿಲ್ಲ ಎಂದು ಕಿಡಿಕಾರಿದರು.

ಕಾರ್ಯಕ್ರಮದಲ್ಲಿ ಸಿಪಿಐ ಹಿರಿಯ ಮುಖಂಡ ಹೆಚ್.ಆರ್.ಶೇಷಾದ್ರಿ, ಇಪ್ಟಾ ಸಮಿತಿಯ ರಾಜ್ಯಾಧ್ಯಕ್ಷ ಹೆಚ್.ಬಿ.ರಾಮಕೃಷ್ಣ, ಪ್ರಧಾನ ಕಾರ್ಯದರ್ಶಿ ಎಂ.ಜಿ ಪ್ರಸಾದ್ ಉಪಸ್ಥಿತರಿದ್ದರು.

ಖಾಸಗಿ ಬಸ್‌ಗೆ ಟೆಂಪೋ ಟ್ರಾವಲರ್ ಡಿಕ್ಕಿ: ಇಬ್ಬರ ದುರ್ಮರಣ

ತುಮಕೂರು, ಮೇ 25– ನಿಂತಿದ್ದ ಖಾಸಗಿ ಬಸ್‌ಗೆ ಟೆಂಪೋ ಟ್ರಾವಲರ್ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಮೃತಪಟ್ಟಿರುವ ಘಟನೆ ಕುಣಿಗಲ್ ತಾಲೂಕಿನ ಹುಲಿಯೂರು ದುರ್ಗದ ಡಿ. ಹೊಸಹಳ್ಳಿ ಬಳಿ ನಡೆದಿದೆ. ಮೃತರನ್ನು ರಾಯಚೂರು ಜಿಲ್ಲೆಯ ಸಿಂಧನೂರಿನವರಾದ 75 ವರ್ಷದ ಶಶಿಕಲಾ ಮತ್ತು 30 ವರ್ಷದ ವೀರೇಶ್ ಎಂದು ಗುರುತಿಸಲಾಗಿದೆ. ಇನ್ನು ಅಪಘಾತದಲ್ಲಿ ದಿಲೀಪ್ ಕುಮಾರ್, ಪ್ರಿಯಾ, ಪ್ರತೀಕ್ಷಾ ಮತ್ತು ಆನಂದ್ ಕುಮಾರ್ ಗಾಯಗೊಂಡಿದ್ದು ಅವರನ್ನು ಚುಂಚನಗಿರಿ ಆಸ್ಪತ್ರೆಗೆ ದಾಖಲಿಸಲಾಗಿದೆ ಟೆಂಪೋ ಟ್ರಾವಲರ್‌ನಲ್ಲಿ ಸಿಂಧನೂರಿನಿಂದ ಮೈಸೂರಿಗೆ ಕುಟುಂಬ ಪ್ರವಾಸಕ್ಕೆ ಬಂದಿದ್ದಾಗ ಅಪಘಾತ ಸಂಭವಿಸಿದೆ. ಈ ಸಂಬಂಧ ಹುಲಿಯೂರುದುರ್ಗ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೈಸೂರು ಮಿತ್ರ

ಹಳ್ಳಿಗಳಲ್ಲಿ ಅಕ್ರಮ ಮದ್ಯ ಮಾರಾಟ ತಡೆಗೆ ಕ್ರಮ ಕೈಗೊಳ್ಳಿ

ಪ್ರಗತಿ ಪರಿಶೀಲನಾ ಸಭೆಯಲ್ಲಿ ಶಾಸಕ ದರ್ಶನ್ ಪುಟ್ಟಣ್ಣಯ್ಯ ಸೂಚನೆ



ಪಾಂಡವಪುರ, ಮೇ 25– ಗ್ರಾಮೀಣ ಭಾಗದ ಪೆಟ್ಟಿಗೆ ಅಂಗಡಿಗಳಲ್ಲಿ ನಡೆಯುತ್ತಿರುವ ಅಕ್ರಮ ಮದ್ಯ ಮಾರಾಟ ತಡೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಅಧಿಕಾರಿಗಳಿಗೆ ಸೂಚಿಸಿದರು.

ಪಟ್ಟಣದ ತಾಪಂ ಸಭಾಂಗಣದಲ್ಲಿ ನಡೆದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಹಳ್ಳಿಗಳಲ್ಲಿ ಅಕ್ರಮ ಮದ್ಯ ಮಾರಾಟ ಹೆಚ್ಚಾಗುತ್ತಿದೆ. ಇದರಿಂದ ಜನ ಹೆಚ್ಚು ಮದ್ಯ ಸೇವನೆ ಚಟಕ್ಕೆ ಒಳಗಾಗುತ್ತಿದ್ದಾರೆ. ಹೀಗಾಗಿ ಅಧಿಕಾರಿಗಳು ಈ ಬಗ್ಗೆ ಕ್ರಮ ಕೈಗೊಳ್ಳಬೇಕು ಎಂದರು. ಸರ್ಕಾರಿ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇರುವುದು ಜನ ಸೇವೆಗಾಗಿ. ಹೀಗಾಗಿ ಪ್ರತಿಯೊಬ್ಬರೂ ಭ್ರಷ್ಟಾಚಾರ ರಹಿತವಾಗಿ ಕೆಲಸ ಮಾಡಬೇಕು ಎಂದರು.

ಅಧಿಕಾರಿಗಳು ಕೃಷಿ ಇಲಾಖೆಯಿಂದ ಸಿಗುವ ಸೌಲಭ್ಯಗಳ ಬಗ್ಗೆ ರೈತರಿಗೆ ಮಾಹಿತಿ ನೀಡಬೇಕು. ಜೊತೆಗೆ ವಾತಾವರಣಕ್ಕೆ ಅನುಗುಣವಾಗಿ ಬೆಳೆಗಳ ಬಗ್ಗೆ ರೈತರಿಗೆ ಮಾಹಿತಿ ನೀಡಬೇಕು. ನೀರಿನ ಕೊರತೆ ಇರುವುದರಿಂದ ಕಡಿಮೆ ನೀರು ಬಳಕೆ ಮಾಡಿ, ಹನಿ ನೀರಾವರಿ ಪದ್ಧತಿಯಡಿ ಬೆಳೆಯುವ ಬೆಳೆಗಳ ಬಗ್ಗೆ ರೈತರಿಗೆ ಮಾಹಿತಿ ನೀಡಬೇಕು ಎಂದು ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ ಪ್ರಿಯದರ್ಶಿನಿಗೆ ತಾಕೀತು ಮಾಡಿದರು.

ಆಸ್ಪತ್ರೆ ವೈದ್ಯಾಧಿಕಾರಿ ಡಾ.ಹೆಚ್. ಕುಮಾರ್ ಮಾತನಾಡಿ, ಆಸ್ಪತ್ರೆಯಲ್ಲಿ ವೈದ್ಯರ ಕೊರತೆ ಇದೆ. ನಮ್ಮಲ್ಲಿರುವ ವೈದ್ಯರೇ ಹೆಚ್ಚುವರಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಸ್ಕ್ಯಾನಿಂಗ್ ವೈದ್ಯರಿಲ್ಲ. ತಿಂಗಳಿಗೆ 10 ಸಾವಿರ ಹೊರ ರೋಗಿಗಳು ಆಸ್ಪತ್ರೆಗೆ ಬರುತ್ತಾರೆ ಎಂದು ಮಾಹಿತಿ ನೀಡಿದರು.

ಶಾಸಕ ದರ್ಶನ್ ಪುಟ್ಟಣ್ಣಯ್ಯ ಮಾತನಾಡಿ, ಆಸ್ಪತ್ರೆಗೆ ನಾಳೆಯೇ ಭೇಟಿ ಕೊಡುತ್ತೇನೆ. ಯಾವುದೇ ಕಾರಣಕ್ಕೂ ರೋಗಿಗಳನ್ನು ಖಾಸಗಿ ಆಸ್ಪತ್ರೆಗೆ ಕಳುಹಿಸಬಾರದು. ಆಸ್ಪತ್ರೆಯಲ್ಲಿ ಎಲ್ಲಾ ವೈದ್ಯರು ಸರಿಯಾಗಿ ಕೆಲಸ ಮಾಡಬೇಕು. ಕೆಲ ಸರ್ಕಾರಿ ವೈದ್ಯರು ನಡೆಸುತ್ತಿರುವ ಖಾಸಗಿ ಕ್ಲಿನಿಕ್ ಬಂದ್ ಆಗಬೇಕು ಎಂದು ತಿಳಿಸಿದರು.

ತೋಟಗಾರಿಕೆ ಇಲಾಖೆ ಬಗ್ಗೆ ಅಧಿಕಾರಿ ಸೌಮ್ಯ ಅವರಿಂದ ಮಾಹಿತಿ ಪಡೆದ ಶಾಸಕರು, ಟೊಮೊಟೊ ಬೆಳೆದ ರೈತರು ಸೂಕ್ತ ಬೆಲೆ ಸಿಗದೇ ಬೀದಿಗೆ ಸುರಿಯುತ್ತಿದ್ದಾರೆ. ರೈತರಿಗೆ ಮಾರುಕಟ್ಟೆ ವ್ಯವಸ್ಥೆ ಬಗ್ಗೆ ಸಮರ್ಪಕ ಮಾಹಿತಿ ನೀಡಿ ಎಂದು ಸೂಚಿಸಿದರು.

ಪಾಂಡವಪುರ ತಾಲೂಕಿನಲ್ಲಿ ಸರ್ಕಾರಿ ಹಾಗೂ ಖಾಸಗಿ ಶಾಲಾ ದಾಖಲಾತಿ ಎಷ್ಟಿದೆ ಎಂಬುದನ್ನು ಅಧಿಕಾರಿಗಳು ತಕ್ಷಣ ಸಮೀಕ್ಷೆ ನಡೆಸಿ. ಖಾಸಗಿ ಶಾಲೆಗಳಿಗೆ ದಾಖಲಾಗಿರುವ ವಿದ್ಯಾರ್ಥಿಗಳು ಮರಳಿ ಸರ್ಕಾರಿ ಶಾಲೆಗೆ ದಾಖಲಾಗಲು ಏನೇನು ಸೌಲಭ್ಯ ಕಲ್ಪಿಸಬೇಕು. ಸರ್ಕಾರಿ ಶಾಲೆ ದಾಖಲಾತಿ ಯಾಕೆ ಕಡಿಮೆ ಆಗುತ್ತಿದೆ ಎಂಬ ಬಗ್ಗೆ ಮಾಹಿತಿ ಕಲೆ ಹಾಕಿ ಹಾಗೂ ಶಾಲೆ ಪ್ರಾರಂಭ ದಿನವನ್ನು ಹಬ್ಬದಂತೆ ಆಚರಿಸುವಂತೆ ಶಿಕ್ಷಣ ಇಲಾಖೆ ಪ್ರಭಾರ ಬಿಇಓ ಪ್ರಕಾಶ್ ಅವರಿಗೆ ಸೂಚಿಸಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಹೇಮಾವತಿ ನೀರಾವರಿ ಇಲಾಖೆ, ಪುರಸಭೆ, ಸರ್ಕಾರಿ ಆಸ್ಪತ್ರೆ, ಕುಡಿಯುವ ನೀರು ಸರಬರಾಜು ಇಲಾಖೆ, ಕಾರ್ಮಿಕ ಇಲಾಖೆ, ಸಹಕಾರ ಇಲಾಖೆ, ಪಂಚಾಯತ್ ರಾಜ್ ಇಲಾಖೆ ಸೇರಿದಂತೆ ವಿವಿಧ ಇಲಾಖೆ ಯಲ್ಲಿ ಅತಿ ಹೆಚ್ಚು ಸಹಾಯಕ ಅಧಿಕಾರಿ ಹಾಗೂ ಸಿಬ್ಬಂದಿಗಳ ಕೊರತೆ ಇದೆ. ಆದಷ್ಟೂ ಬೇಗ ನೇಮಕವಾಗಬೇಕಾಗಿದೆ ಎಂದು ಸಭೆಯಲ್ಲಿ ಅಧಿಕಾರಿಗಳು ಶಾಸಕರಿಗೆ ಮಾಹಿತಿ ನೀಡಿದರು.

ಎಸ್ಐ ಕೆ.ಮಂಜುನಾಥ್ ಮಾತನಾಡಿ, ಕ್ರೈಂ ತಡೆಗಟ್ಟಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇನೆ. 2021ರಲ್ಲಿ 560 ಕೇಸ್ ದಾಖಲಾಗಿತ್ತು. ನಂತರ 2022ರಲ್ಲಿ 380 ಕೇಸ್ ದಾಖಲಾಗಿದೆ. ಪ್ರಸ್ತುತ ಇಲ್ಲಿವರೆಗೆ 134 ಕೇಸ್ ದಾಖಲಾಗಿದೆ ಎಂದರು. ಸಭೆಯಲ್ಲಿ ತಹಶೀಲ್ದಾರ್ ಕೆ.ಸಿ.ಸೌಮ್ಯ, ತಾಪಂ ಇಓ ಲೋಕೇಶ್ ಮೂರ್ತಿ ಇತರರಿದ್ದರು.

ನರೇಗಾ ಕಾಮಗಾರಿ ಸ್ಥಳದಲ್ಲಿ ಉಚಿತ ಗ್ರಾಮ ಆರೋಗ್ಯ ತಪಾಸಣಾ ಶಿಬಿರ

ಮಂಡ್ಯ, ಮೇ 25– ನರೇಗಾ ಕೂಲಿಕಾರರು ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವ ಕಡೆಗೆ ಗಮನಹರಿಸಬೇಕು ಎಂದು ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಮಲಿಂಗಯ್ಯ ಅವರು ತಿಳಿಸಿದರು.

ಆರೋಗ್ಯ ಇಲಾಖೆ – ಕೆಹೆಚ್.ಪಿ.ಟಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಕೂಲಿಕಾರರ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ನರೇಗಾ ಕೂಲಿಕಾರರು ಯಾವುದೇ ಆರೋಗ್ಯ ಸಮಸ್ಯೆ ಕಾಣಿಸಿಕೊಂಡಾಗ ನಿರ್ಲಕ್ಷ್ಯ ಮಾಡದೇ ಗ್ರಾಮ ಆರೋಗ್ಯ ಅಭಿಯಾನದ ಮೂಲಕ ತಪಾಸಣೆ ಮಾಡಿಸಿಕೊಳ್ಳಿ ಹಾಗೂ ಚಿಕಿತ್ಸೆ ಪಡೆಯಬೇಕು ಎಂದು ತಿಳಿಸಿದರು. ಕೂಲಿಕಾರರಿಗೆ ಕೆಲಸ ಕೊಡುವುದು ಅಲ್ಲದೇ, ಅವರ ಆರೋಗ್ಯವನ್ನು ಕಾಪಾಡುವುದು ನಮ್ಮ ಕರ್ತವ್ಯವಾಗಿದೆ. ಆ ನಿಟ್ಟಿನಲ್ಲಿ ಗ್ರಾಮ ಆರೋಗ್ಯ ಶಿಬಿರವನ್ನು ಆಯೋಜಿಸಲಾಗಿದೆ. ಪ್ರತಿಯೊಬ್ಬರೂ ಸ್ವಯಂ ಪ್ರೇರಿತರಾಗಿ ತಮ್ಮ ತಮ್ಮ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು.

ವಿಶ್ವೇಶ್ವರಯ್ಯ ಎಡದಂಡೆ ಪಿಕಾಫ್ ನಾಲೆಯಲ್ಲಿ ಹೂಳು ತೆಗೆಯುತ್ತಿರುವ ಪ್ರತಿಯೊಬ್ಬ ಕೂಲಿಕಾರರಿಗೂ ಬಿ.ಪಿ, ಸಕ್ಕರೆ ಕಾಯಿಲೆ, ಹಿಮೋಗ್ಲೋಬಿನ್, ಕ್ಷಯರೋಗ ಇನ್ನಿತರ ಸಣ್ಣಪುಟ್ಟ ಕಾಯಿಲೆಗಳನ್ನು ತಪಾಸಣೆ ಮಾಡಲಾಗುತ್ತಿದೆ ಎಂದರು. ಸಹಾಯಕ ನಿರ್ದೇಶಕರಾದ ದೀಪು ಮಾತನಾಡಿದರು. ಇದೇ ವೇಳೆ ಕಾರ್ಯನಿರ್ವಾಹಕ ಅಧಿಕಾರಿ ರಾಮಲಿಂಗಯ್ಯ ಮತ್ತು ಸಹಾಯಕ ನಿರ್ದೇಶಕ ದೀಪು ಸಹ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಕೂಲಿಕಾರರಿಗೆ ಆತ್ಮಸ್ಥೈರ್ಯ ತುಂಬಿದರು.

ಇದೇ ಸಂದರ್ಭದಲ್ಲಿ ಪಿಡಿಓ ಸಂತೋಷ್, ತಾಲೂಕು ಐಇಸಿ ಸಂಯೋಜಕ ಸುನಿಲ್ ಕುಮಾರ್ ಹೆಚ್, ತಾಲೂಕು ಕೆಹೆಚ್‌ಪಿಟಿ ಸಂಯೋಜಕ ಸಚಿನ್, ಸಿಹೆಚ್‌ಓ ನಿಧಿ ಆಶಾ ಕಾರ್ಯಕರ್ತೆ, ಕೂಲಿಕಾರರು ಮತ್ತು ಗ್ರಾಮ ಪಂಚಾಯತಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಶಾಶ್ವತ ಕೆಲಸ ಮಾಡಿದರೂ ಜನತೆ ನನ್ನ ಕೈ ಹಿಡಿಯಲಿಲ್ಲ

ಆತ್ಮಾವಲೋಕನ ಸಭೆಯಲ್ಲಿ ಮಾಜಿ ಶಾಸಕ ಡಿ.ಸಿ.ತಮ್ಮಣ್ಣ



ಭಾರತೀನಗರ, ಮೇ 25– ಕ್ಷೇತ್ರದ ಜನರ ಅನುಕೂಲಕ್ಕಾಗಿ ಶಾಶ್ವತ ಕೆಲಸ ಮಾಡಿದ್ದೇನೆ. ಆದರೂ ಮತದಾರರು ನನ್ನ ಕೈ ಹಿಡಿಯಲಿಲ್ಲ. ಸೋಲಿನಿಂದ ಯಾರೂ ಧೃತಿಗೆಡಬಾರದು ಎಂದು ಮಾಜಿ ಶಾಸಕ ಡಿ.ಸಿ.ತಮ್ಮಣ್ಣ ತಿಳಿಸಿದರು.

ಇಲ್ಲಿನ ತಮ್ಮ ನಿವಾಸದಲ್ಲಿ ನಡೆದ ಆತ್ಮಾವಲೋಕನ ಸಭೆಯಲ್ಲಿ ಮಾತನಾಡಿದ ಅವರು, ವಾರಕ್ಕೆ 5 ದಿನ ಕ್ಷೇತ್ರದಲ್ಲಿ ಇದ್ದು ಜನರ ಕಷ್ಟ ಸುಖಗಳಿಗೆ ಸ್ಪಂದಿಸಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದ್ದೇನೆ. ಆದರೂ ಸಹ ನಾನು ಸೋಲಬೇಕಾಯಿತು. ಇದು ಹಣ ಬಲದಿಂದ ನಡೆದಿದೆಯೋ ಅಥವಾ ಕಾಂಗ್ರೆಸ್‌ನ ಪ್ರಣಾಳಿಕೆಯಿಂದ ನಡೆದಿದೆಯೋ ಎಂಬುದನ್ನು ನಾವು ಆತ್ಮಾವಲೋಕನ ಮಾಡಿಕೊಳ್ಳಬೇಕಾಗಿದೆ ಎಂದರು.

ಕಾರ್ಯಕರ್ತರು ಈ ಚುನಾವಣೆಯಲ್ಲಿ ಒಗ್ಗಟ್ಟಿನಿಂದ ಕೆಲಸ ಮಾಡಿದರೂ ನಾನು ಅನಿರೀಕ್ಷಿತ ಸೋಲು ಕಂಡಿದ್ದೇನೆ. ಕಾರ್ಯಕರ್ತರು ನನ್ನ ಕುಟುಂಬದ ಸದಸ್ಯರಿದ್ದಂತೆ. ನಾನು ಎಂದಿಗೂ ಅವರನ್ನು ಕೈ ಬಿಡುವುದಿಲ್ಲ ಎಂದರು.

ನಾಲ್ಕು ಬಾರಿ ಗೆದ್ದಿದ್ದೇನೆ. ಮೂರು ಬಾರಿ ಸೋತಿದ್ದೇನೆ. ನೋವು ನಲಿವುಗಳನ್ನು ಸಮಚಿತ್ತದಿಂದ ಸ್ವೀಕರಿಸಿದ್ದೇನೆ. ಇದಕ್ಕೆ ಕಾರಣ ಕ್ಷೇತ್ರದ ಕಾರ್ಯಕರ್ತರು ಕೊಟ್ಟ ಸ್ಫೂರ್ತಿ. ಇದಕ್ಕಾಗಿ ನಾನು ಕಾರ್ಯಕರ್ತರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ಜೆಡಿಎಸ್ ಮುಖಂಡ ಎಸ್.ಗುರುಚರಣ್ ಮಾತನಾಡಿ, ಚುನಾವಣೆಯಲ್ಲಿ ಜೆಡಿಎಸ್ ಕಾರ್ಯಕರ್ತರು ಒಗ್ಗಟ್ಟು ಪ್ರದರ್ಶನ ಮಾಡಿದ್ದು, ಪ್ರಚಾರ ಸೇರಿದಂತೆ ಯಾವುದೇ ವಿಚಾರದಲ್ಲೂ ಕೊರತೆ ಕಂಡು ಬರಲಿಲ್ಲ. ಚುನಾವಣೆ 2 ದಿನ ಇರುವರೆಗೂ ಜೆಡಿಎಸ್ ಅಭ್ಯರ್ಥಿ ಪರ ಜನರ ನಿಲುವಿತ್ತು. ಆದರೆ ಕಡೆಗಳಿಗೆಯಲ್ಲಿ ಹಣ ಕೆಲಸ ಮಾಡಿದೆಯೇ ಎಂಬ ಪ್ರಶ್ನೆ ಕಾಡುತ್ತಿದೆ. ಅಲ್ಲದೆ ಬಿಜೆಪಿ ಅಭ್ಯರ್ಥಿ ಎಸ್.ಪಿ.ಸ್ವಾಮಿ ಅವರಿಂದಲೂ ನಮಗೆ ಸ್ವಲ್ಪ ಮತಗಳ ಕೊರತೆ ಉಂಟಾಗಿರಬಹುದು ಎಂದರು.

ಮುಖಂಡ ಸಂತೋಷ್ ತಮ್ಮಣ್ಣ ಮಾತನಾಡಿ, ಮುಂಬರುವ ಜಿಪಂ, ತಾಪಂ ಚುನಾವಣೆಗೆ ಕಾರ್ಯಕರ್ತರು ಸಿದ್ಧರಾಗಬೇಕಿದೆ. ನಾವು ಅವರಿಗೆ ಬೆನ್ನೆಲುಬಾಗಿ ನಿಲ್ಲುತ್ತೇವೆ. ನಮ್ಮ ತಂದೆ ಕಾರ್ಯ ವೈಖರಿಗಳು ಮುಂದಿನ ದಿನಗಳಲ್ಲಿ ಕ್ಷೇತ್ರದ ಜನರಿಗೆ ಅರ್ಥವಾಗುತ್ತದೆ. ಅಲ್ಲಿಯವರೆಗೆ ನಾವು ತಾಳ್ಮೆಯಿಂದ ಇರಬೇಕೆಂದರು.

ಮುಖಂಡ ಎಚ್.ಎಂ. ಮರಿಮಾದೇಗೌಡ ಮಾತನಾಡಿದರು. ಇದೇ ವೇಳೆ ಡಿಸಿಸಿ ಬ್ಯಾಂಕ್ ನಿರ್ದೇಶಕ ಪಿ.ಸಂದರ್ಶ, ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಶಿವರಾಮು, ತಾಲೂಕು ಜೆಡಿಎಸ್ ಅಧ್ಯಕ್ಷ ಚಿಕ್ಕತಿಮ್ಮೇಗೌಡ, ಮುಖಂಡರಾದ ಚಂದ್ರು, ಎಚ್.ಎಂ.ಮರಿಮಾದೇಗೌಡ, ಯೋಗೇಂದ್ರ, ಪ್ರಚಾರ ಸಮಿತಿ ಅಧ್ಯಕ್ಷ ಗುರುಲಿಂಗಯ್ಯ, ಮುಖಂಡರಾದ ಅರವಿಂದ್, ಹನುಮಂತು, ಕೆ.ಟಿ.ಸುರೇಶ್ ಸೇರಿದಂತೆ ಇತರರಿದ್ದರು.

ತಾಲೂಕು ಕಚೇರಿಗಳಲ್ಲಿ ಕಂಟ್ರೋಲ್ ರೂಂ ಪ್ರಾರಂಭಕ್ಕೆ ಸೂಚನೆ



ಮಂಡ್ಯ, ಮೇ 25– ಮಳೆ, ಗುಡುಗು, ಸಿಡಿಲು ವೇಳೆ ಉಂಟಾಗುವ ತೊಂದರೆಗಳ ಬಗ್ಗೆ ಸಾರ್ವಜನಿಕರು ದೂರು ಸಲ್ಲಿಸಲು ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಕಂಟ್ರೋಲ್ ರೂಂ ಪ್ರಾರಂಭಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಹೆಚ್.ಎನ್.ಗೋಪಾಲಕೃಷ್ಣ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಳೆಯಿಂದ ಎದುರಾಗಬಹುದಾದ ಸಮಸ್ಯೆಗಳನ್ನು ಪಟ್ಟಿ ಮಾಡಿ ಅಗತ್ಯ ಸಿದ್ಧತೆ ಕೈಗೊಳ್ಳಿ. ಅಧಿಕಾರಿಗಳು ಹಾಗೂ ಸಿಬ್ಬಂದಿ ನಿರ್ಲಕ್ಷ್ಯ ವಹಿಸಿದರೆ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಕಳೆದ 5 ವರ್ಷಗಳ ಮಳೆಯಿಂದ ಆಗಿರುವ ತೊಂದರೆಗಳ ಬಗ್ಗೆ ಅವಲೋಕನ ಮಾಡಿ, ಭಾರೀ ಮಳೆಯಾದಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ ಸನ್ನದ್ಧರಾಗಿ. ತಮ್ಮ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಶಾಲೆಗಳು, ಆಸ್ಪತ್ರೆಗಳು, ಅಂಗನವಾಡಿಗಳು ಹಾಗೂ ಇನ್ನಿತರೆ ಕಟ್ಟಡಗಳು, ಸೇತುವೆಗಳು, ವಿದ್ಯುತ್ ಕಂಬಗಳು ಶಿಥಿಲಗೊಂಡಿದ್ದಲ್ಲಿ ಯಾವುದೇ ಹಾನಿಯಾಗದಂತೆ ಮೊದಲೇ ಕ್ರಮ ಕೈಗೊಳ್ಳಿ ಎಂದರು. ನಗರ ಸ್ಥಳೀಯ ಸಂಸ್ಥೆ ಹಾಗೂ ಗ್ರಾಪಂಗಳು ತಮ್ಮ ವ್ಯಾಪ್ತಿಯ ಚರಂಡಿ ಹಾಗೂ ಯುಜಿಡಿಗಳಲ್ಲಿ ನೀರು ಹರಿಯುವಿಕೆಗೆ ತೊಂದರೆಯಾಗದಂತೆ ಕಸ, ಪ್ಲಾಸ್ಟಿಕ್ ವಸ್ತುಗಳನ್ನು ತೆರವುಗೊಳಿಸಿ. ಮಳೆ ಬಂದ ವೇಳೆ ಅವುಗಳನ್ನು ತೆರವುಗೊಳಿಸಲು ಸಾಧ್ಯವಿಲ್ಲ. ಅರಣ್ಯ ಇಲಾಖೆಯವರು ಒಣಗಿದ ಮರದ ಕೊಂಬೆಗಳು, ಮಳೆ ಸಂದರ್ಭ ಬೀಳುವ ಸಾಧ್ಯತೆ ಇರುವ ಮರಗಳನ್ನು ತೆರವುಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಿ. ಅಗ್ನಿಶಾಮಕ ದಳದವರು ತಮ್ಮಲ್ಲಿರುವ ವಿಪತ್ತು ನಿರ್ವಹಣೆ ಸಂದರ್ಭ ಬೇಕಿರುವ ಸಲಕರಣೆಗಳ ಪರಿಶೀಲಿಸಿಕೊಳ್ಳಿ ಎಂದರು.

ಮಳೆ ಕುರಿತಂತೆ ಹವಾಮಾನ ಇಲಾಖೆ ರೆಡ್, ಆರೆಂಜ್ ಹಾಗೂ ಯಲ್ಲೋ ಅಲರ್ಟ್ ಕುರಿತಂತೆ ಮಾಹಿತಿಗಳನ್ನು ನೀಡುತ್ತಿರುತ್ತದೆ. ಅವುಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಿ ಯಾವುದೇ ಅವಘಡಗಳು ಸಂಭವಿಸಿದಂತೆ ನೋಡಿಕೊಳ್ಳಬೇಕು. ಮಳೆಯಿಂದ ಹಾನಿಯಾದ ಸಂದರ್ಭ ಕಂದಾಯ ಇಲಾಖೆ ಅಧಿಕಾರಿಗಳು/ ಸಿಬ್ಬಂದಿಗಳು 24 ಗಂಟೆಯೊಳಗಾಗಿ ಘಟನೆ ನಡೆದ ಸ್ಥಳಕ್ಕೆ ಭೇಟಿ ನೀಡಿ ಪರಿಹಾರ ಕ್ರಮಗಳನ್ನು ಪ್ರಾರಂಭಿಸಿರಬೇಕು ಎಂದು ಎಚ್ಚರಿಕೆ ನೀಡಿದರು.

ಜಿಲ್ಲೆಯಲ್ಲಿ ವಿಪತ್ತು ನಿರ್ವಹಣೆಗೆ ಸಂಬಂಧಿಸಿದಂತೆ ಅನುದಾನದ ಕೊರತೆ ಇಲ್ಲ. ತಹಸೀಲ್ದಾರ್ ಖಾತೆಯಲ್ಲಿ 40 ರಿಂದ 50 ಲಕ್ಷ ಹಾಗೂ ಜಿಲ್ಲಾಧಿಕಾರಿಗಳ ಖಾತೆಯಲ್ಲಿ 2.96 ಕೋಟಿ ರೂ. ಇದೆ. ಈ ಹಿಂದೆ ಉಂಟಾದ ಮಳೆ ಹಾನಿಗೆ ಸಂಬಂಧಿಸಿದಂತೆ ಮೊದಲ ಹಂತದ ಪರಿಹಾರವನ್ನು ಫಲಾನುಭವಿಗಳು ಪಡೆದಿದ್ದಾರೆ. ನಂತರ 2ನೇ ಹಂತದ ಪರಿಹಾರಕ್ಕಾಗಿ ನಿಗದಿತ ಸಮಯಕ್ಕೆ ಬೇಡಿಕೆ ಬಂದಿಲ್ಲ. ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಈ ಕುರಿತಂತೆ ಪರಿಶೀಲಿಸಿ ಅವರಿಗೆ ಯಾವುದೇ ತೊಂದರೆ ಇದ್ದಲ್ಲಿ ಪರಿಹರಿಸುವಂತೆ ತಿಳಿಸಿದರು.

ಏಪ್ರಿಲ್ ಮಾಹೆಯಲ್ಲಿ ಜಿಲ್ಲೆಯಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದೆ. ಮೇ ಮಾಹೆಯಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದರೂ, ಕೆಲವು ಭಾಗಗಳಲ್ಲಿ ಮಳೆಯ ಕೊರತೆ ಇದೆ. ಕೃಷಿ ಇಲಾಖೆ ಅವರು ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಕೊರತೆ ಉಂಟಾಗದಂತೆ ನೋಡಿಕೊಳ್ಳಬೇಕು. ಪಶುಸಂಗೋಪನಾ ಇಲಾಖೆ ಮೇವಿನ ಕೊರತೆ ಉಂಟಾಗದಂತೆ ಇರುವ ದಾಸ್ತಾನು ಪರಿಶೀಲಿಸಿಕೊಳ್ಳಬೇಕು ಎಂದರು.

ಮಾ.1 ರಿಂದ ಇಲ್ಲಿವರೆಗೆ ಇಬ್ಬರು ಮಾನವರು, 2 ದೊಡ್ಡ, 17 ಸಣ್ಣ ಪ್ರಾಣಿ ಪ್ರಾಣಹಾನಿ. 63 ಮನೆ ಭಾಗಶಃ ಹಾನಿ ಹಾಗೂ 41.19 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿರುತ್ತದೆ. 253 ವಿದ್ಯುತ್ ಕಂಬ, 11 ಟ್ರಾನ್ಸ್‌ಫಾರ್ಮರ್‌ಗಳು ದುರಸ್ತಿಯಾಗಿದ್ದು, ಪರಿಹಾರ ಕ್ರಮ ಕೈಗೊಳ್ಳಲಾಗಿದೆ ಎಂದರು.

ಜಿಪಂ ಸಿಇಓ ಶೇಖ್ ತನ್ವೀರ್ ಆಸೀಫ್ ಮಾತನಾಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಹೆಚ್.ಎಲ್ ನಾಗರಾಜ್ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ನಾಗರಾಜು, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಜವರೇಗೌಡ ಸೇರಿದಂತೆ ಇನ್ನಿತರರಿದ್ದರು.

ಆಸಿಡ್ ಎರಚಿ ಸಹೋದರಿಯನ್ನೇ ಹತ್ಯೆ ಮಾಡಿದ ಬಾಲಕಿ!

ಪಟ್ನಾ, ಮೇ 25– ಅಪ್ರಾಪ್ತ ವಯಸ್ಕ ಬಾಲಕಿ ಒಬ್ಬಳು ತನ್ನ ಚಿಕ್ಕಮ್ಮ ಹಾಗೂ ಪ್ರಿಯಕರನ ಸಹಾಯದಿಂದ ತನ್ನ ತಂಗಿಯನ್ನು ಹತ್ಯೆ ಮಾಡಿರುವ ಘಟನೆ ಬಿಹಾರದ ವೈಶಾಲಿ ಜಿಲ್ಲೆಯಲ್ಲಿ ನಡೆದಿದೆ. ಪ್ರಕರಣವನ್ನು ಮರೆಮಾಚಲು ಮೃತ ಬಾಲಕಿಯ ಮುಖವನ್ನು ಆಸಿಡ್‌ನಿಂದ ಸುಟ್ಟು ಕೈ ಬೆರಳುಗಳನ್ನು ಕತ್ತರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರವಿ ರಂಜನ್ ಕುಮಾರ್ ಪ್ರಕರಣ ಸಂಬಂಧ ಮೂವರು ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಲಾಗಿದೆ ಎಂದು ತಿಳಿಸಿದ್ದಾರೆ.

ಯಾರು ಇಲ್ಲದ ವೇಳೆ ಕೃತ್ಯ: ಮೇ 15ರಂದು ಮೃತ ಬಾಲಕಿಯ ಪೋಷಕರು ಕಾರ್ಯಕ್ರಮದ ನಿಮಿತ್ತ ಸಂಬಂಧಿಕರ ಊರಿಗೆ ಹೋಗಿದ್ದ ಸಂದರ್ಭದಲ್ಲಿ 13 ವರ್ಷದ ಅಪ್ರಾಪ್ತ ವಯಸ್ಕ ಬಾಲಕಿ ತನ್ನ ಪ್ರಿಯಕರ(18ವರ್ಷ)ನನ್ನು ಮನೆಗೆ ಕರೆಸಿಕೊಂಡಿದ್ದಾಳೆ. ಈ ವೇಳೆ ಇಬ್ಬರು ಇರುವುದನ್ನು ಬಾಲಕಿಯ ಸಹೋದರಿ(9ವರ್ಷ) ಗಮನಿಸಿದ್ದಾಳೆ.

ತನ್ನ ಪ್ರಿಯಕರನ ಜೊತೆ ಇರುವುದನ್ನು ತನ್ನ ಸಹೋದರಿ ಎಲ್ಲಿ ಪಾಲಕರಿಗೆ ಹೇಳುತ್ತಾಳೋ ಎಂದು ಭಯಗೊಂಡ ಬಾಲಕಿ ಮೊಂಡಾದ ವಸ್ತುವಿನಿಂದ ಆಕೆಯ ಮೇಲೆ ದಾಳಿ ಮಾಡಿ ಹತ್ಯೆ ಮಾಡಿದ್ದಾಳೆ. ಬಳಿಕ ಆಕೆಯ ಮೃತದೇಹವನ್ನು ಮನೆಯ ಒಳಗಡೆ ಒಂದು ಪೆಟ್ಟಿಗೆಯಲ್ಲಿ ಇರಿಸಿದ್ದಾರೆ.

ಸಾಕ್ಷ್ಯ ನಾಶಕ್ಕೆ ಯತ್ನ: ಮೂರು ದಿನ ಕಳೆದ ಬಳಿಕ ದೇಹದಿಂದ ದುರ್ವಾಸನೆ ಬರಲು ಶುರುವಾದಾಗ ಅಪ್ರಾಪ್ತ ವಯಸ್ಕ ಬಾಲಕಿ ತನ್ನ ಚಿಕ್ಕಮ್ಮ ಹಾಗೂ ಪ್ರಿಯಕರನ ಸಹಾಯದಿಂದ ಶವವನ್ನು ದೂರದಲ್ಲಿರುವ ಜಮೀನೊಂದರಲ್ಲಿ ಮುಖದ ಮೇಲೆ ಆಸಿಡ್ ಎರಚಿ ಹಾಗೂ ಆಕೆಯ ಕೈ ಬೆರಳುಗಳನ್ನು ಕತ್ತರಿಸಿ ಎಸೆದಿದ್ದಾರೆ.

ಬಾಲಕಿಯ ಪೋಷಕರು ಕಾರ್ಯಕ್ರಮ ಮುಗಿಸಿಕೊಂಡು ವಾಪಸ್ ಆದ ನಂತರ ಮನೆಯಲ್ಲಿ ತಮ್ಮ ಮಗಳು ಇಲ್ಲದಿರುವುದನ್ನು ಗಮನಿಸಿದ್ದಾರೆ. ಈ ಬಗ್ಗೆ ವಿಚಾರಿಸಿದಾಗ ನೆರೆ ಹೊರೆಯವರು ಗೊತ್ತಿಲ್ಲಾ ಎಂದು ಹೇಳಿದ್ದಾರೆ. ಈ ಬಗ್ಗೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿ ಕಳೆದು ಹೋಗಿರುವ ತಮ್ಮ ಮಗಳನ್ನು ಹುಡುಕಿಕೊಡುವಂತೆ ವಿನಂತಿಸಿದ್ದಾರೆ.

ಲಂಚ ಸ್ವೀಕರಿಸುತ್ತಿದ್ದಾಗ ಮಹಿಳಾ ಪಿಎಸ್ಐ ಲೋಕಾಯುಕ್ತ ಬಲೆಗೆ!

ಬೆಂಗಳೂರು, ಮೇ 25– ಆರೋಪಿಗೆ ಜಾಮೀನು ನೀಡಲು ಲಂಚ ಸ್ವೀಕರಿಸುತ್ತಿದ್ದ ವೇಳೆ ಮಹಿಳಾ ಪೊಲೀಸ್ ಸಬ್‌ಇನ್ ಸ್ಪೆಕ್ಟರ್‌ವೊಬ್ಬರು ಲೋಕಾಯುಕ್ತ ಬಲೆಗೆ ಬಿದ್ದಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಶಿವಾಜಿನಗರ ಮಹಿಳಾ ಪೊಲೀಸ್ ಠಾಣೆಯ ಸವಿತಾ ಲೋಕಾಯುಕ್ತ ಬಲೆಗೆ ಬಿದ್ದ ಮಹಿಳಾ ಪಿಎಸ್ಐ ಎಂಬುದಾಗಿ ತಿಳಿದುಬಂದಿದೆ.

ವಶದಲ್ಲಿದ್ದ ಆರೋಪಿಯೊಬ್ಬನ ಜಾಮೀನು ಸ್ವೀಕರಿಸಲು ಐವತ್ತು ಸಾವಿರ ರೂಪಾಯಿಗೆ ಬೇಡಿಕೆಯಿಟ್ಟಿದ್ದ ಸವಿತಾಗೆ ಆರೋಪಿಯ ಕಡೆಯವರು ಅಷ್ಟು ಹಣ ನೀಡಲು ಸಾಧ್ಯವಿಲ್ಲ ಎಂದಿದ್ದರು. ಅಂತಿಮವಾಗಿ ಹದಿನೈದು ಸಾವಿರಕ್ಕೆ ಬೇಡಿಕೆಯಿಟ್ಟಿದ್ದ ಸವಿತಾ ವಿರುದ್ಧ ಆರೋಪಿ ಕಡೆಯವರಾದ ಅನಂತ್ ಕುಮಾರ್ ದೂರು ನೀಡಿದ್ದರು. ದೂರು ಹಿನ್ನೆಲೆಯಲ್ಲಿ ಸವಿತಾ ಅವರನ್ನು ಬಂಧನಕ್ಕೊಳಪಡಿಸಲು ಲೋಕಾಯುಕ್ತ ಅಧಿಕಾರಿಗಳು ಬಲೆ ಬೀಸಿದ್ದರು. ಇದರಂತೆ ಹಣ ಸ್ವೀಕರಿಸುತ್ತಿದ್ದ ವೇಳೆ ಸವಿತಾ ಅವರನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಮಂಗಳೂರು ಏರ್‌ಪೋರ್ಟ್‌ನಲ್ಲಿ ಟೇಕಾಫ್‌ಗೆ ಸಿದ್ಧವಾಗಿದ್ದ ವಿಮಾನಕ್ಕೆ ಹಕ್ಕಿ ಡಿಕ್ಕಿ: ತಪ್ಪಿದ ಅನಾಹುತ

ಮಂಗಳೂರು, ಮೇ 25– ಟೇಕಾಫ್‌ಗೆ ಸಿದ್ಧವಾಗಿದ್ದ ವಿಮಾನಕ್ಕೆ ಹಕ್ಕಿಯೊಂದು ಡಿಕ್ಕಿ ಹೊಡೆದ ಘಟನೆ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನಡೆದಿದ್ದು, ಪೈಲೆಟ್ ಸಮಯ ಪ್ರಜ್ಞೆಯಿಂದ ಭಾರೀ ಅನಾಹುತ ತಪ್ಪಿದೆ.

ಇಂದು ಬೆಳಗ್ಗೆ 8.30ಕ್ಕೆ ಪ್ರಯಾಣಿಕರ ಸಹಿತ ಮಂಗಳೂರಿನಿಂದ ದುಬೈಗೆ ಹೊರಟಿದ್ದ ಇಂಡಿಗೋ ವಿಮಾನಕ್ಕೆ ಹಕ್ಕಿ ಡಿಕ್ಕಿ ಹೊಡೆದಿದೆ. ಟ್ಯಾಕ್ಸಿ ವೇ ದಾಟಿ ರನ್ ವೇನಲ್ಲಿ ಸಾಗುತ್ತಿದ್ದಾಗ ಈ ಘಟನೆ ಸಂಭವಿಸಿದೆ. ಇಂಡಿಗೋ ವಿಮಾನದ ರೆಕ್ಕೆಯ ಭಾಗಕ್ಕೆ ಹಕ್ಕಿ ಡಿಕ್ಕಿ ಹೊಡೆದಿದೆ. ತಕ್ಷಣವೇ ಇದನ್ನರಿತ ಪೈಲಟ್ ಭಾರೀ ದುರಂತವನ್ನು ತಪ್ಪಿಸುವ ಮೂಲಕ ಪ್ರಯಾಣಿಕರ ಜೀವ ಉಳಿಸಿದ್ದಾರೆ. ಹಕ್ಕಿ ಡಿಕ್ಕಿ ಹೊಡೆದೊಡನೆ ಪೈಲಟ್ ಅಪಾಯದ ಸೂಚನೆ ಅರಿತು ಎಟಿಸಿಗೆ ಮಾಹಿತಿ ನೀಡಿದ್ದಾರೆ. ನಂತರ ಟೇಕಾಫ್ ಕ್ಯಾನ್ಸಲ್ ಮಾಡಿ ರನ್ ವೇನಿಂದ ವಾಪಾಸ್ ಬಂದಿದೆ. ಅಧಿಕಾರಿಗಳು ಪ್ರಯಾಣಿಕರನ್ನು ಇಳಿಸಿ ವಿಮಾನದ ತಪಾಸಣೆ ಮಾಡಿದರು. ನಂತರ ಬೆಂಗಳೂರಿನಿಂದ ಆಗಮಿಸಿದ ಮತ್ತೊಂದು ವಿಮಾನದ ಮೂಲಕ ಪ್ರಯಾಣಿಕರನ್ನು ಕಳುಹಿಸಲಾಗಿದೆ.

ಆಳ್ವಾರ್ ರಕ್ಬರ್ ಖಾನ್ ಹತ್ಯೆ ಪ್ರಕರಣ: 4 ಮಂದಿಗೆ 7 ವರ್ಷ ಜೈಲು ಶಿಕ್ಷೆ

ಆಳ್ವಾರ್, ಮೇ 25– 2018ರಲ್ಲಿ ಹಸು ಕಳ್ಳಸಾಗಣೆ ಆರೋಪದ ಮೇಲೆ ರಕ್ಬರ್ ಖಾನ್ ಅವರನ್ನು ಹತ್ಯೆ ಮಾಡಿದ್ದಕ್ಕಾಗಿ ರಾಜಸ್ಥಾನದ ಅಲ್ವಾರ್ ನ್ಯಾಯಾಲಯ ನಾಲ್ವರಿಗೆ ಏಳು ವರ್ಷಗಳ ಜೈಲು ಶಿಕ್ಷೆ ವಿಧಿಸಿದೆ. ಸಾಕ್ಷ್ಯಾಧಾರಗಳ ಕೊರತೆಯಿಂದಾಗಿ ಪ್ರಕರಣದ ಐದನೇ ಆರೋಪಿಯನ್ನು ಖುಲಾಸೆಗೊಳಿಸಲಾಗಿದೆ.

ಪ್ರಕರಣದ ವಿಚಾರಣೆ ನಡೆಸಿದ ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶರು ಆರೋಪಿಗಳಾದ ಪರಮಜಿತ್ ಸಿಂಗ್, ಧರ್ಮೇಂದ್ರ ಯಾದವ್, ನರೇಶ್ ಶರ್ಮಾ ಮತ್ತು ವಿಜಯ್ ಕುಮಾರ್ ಅವರನ್ನು ಐಪಿಸಿ ಸೆಕ್ಷನ್ 341 ಮತ್ತು 304 (1) (ಅಪರಾಧ ನರಹತ್ಯೆ ಕೊಲೆಗೆ ಸಮನಾಗಿರುವುದಿಲ್ಲ) ಅಡಿಯಲ್ಲಿ ಅಪರಾಧಿಗಳು ಎಂದು ತೀರ್ಪು ನೀಡಿದರು ಎಂದು ಪಬ್ಲಿಕ್ ಪ್ರಾಸಿಕ್ಯೂಟರ್ ಶರ್ಮಾ ಹೇಳಿದರು. ನ್ಯಾಯಾಲಯ ಅವರಿಗೆ ಏಳು ವರ್ಷಗಳ ಜೈಲು ಶಿಕ್ಷೆ ವಿಧಿಸಿದೆ ಮತ್ತು ಸಾಕಷ್ಟು ಸಾಕ್ಷ್ಯಾಧಾರಗಳ ಕೊರತೆಯಿಂದಾಗಿ ನವಲ್ ಕಿಶೋರ್ ಅವರನ್ನು ಖುಲಾಸೆಗೊಳಿಸಲಾಗಿದೆ ಎಂದು ಅವರು ಹೇಳಿದರು.

ಐಪಿಸಿ ಸೆಕ್ಷನ್ 304 (1) ಸೆಕ್ಷನ್ 302 ರ (ಕೊಲೆ) ಭಾಗವಾಗಿದೆ ಅಲ್ಲಿ ಜ್ಞಾನವಿದೆ ಆದರೆ ಕೊಲ್ಲುವ ಉದ್ದೇಶವಿಲ್ಲ ಎಂದು ಅಶೋಕ್ ಶರ್ಮಾ ಹೇಳಿದರು. ಈ ಪ್ರಕರಣದಲ್ಲಿ ಗುಂಪು ಹತ್ಯೆ ಎಂದು ಪರಿಗಣಿಸಲಾಗಿದೆ ಎಂದು ಪಬ್ಲಿಕ್ ಪ್ರಾಸಿಕ್ಯೂಟರ್ ತಿಳಿಸಿದರು.

ಈ ಪ್ರಕರಣದಲ್ಲಿ ಲಿಂಚಿಂಗ್ ಅನ್ನು ಪರಿಗಣಿಸಲಾಗಿದೆ ಎಂದು ಪಬ್ಲಿಕ್ ಪ್ರಾಸಿಕ್ಯೂಟರ್ ಹೇಳಿದರು. ಜುಲೈ 20, 2018 ರಂದು ಆಳ್ವಾರ್ ಜಿಲ್ಲೆಯ ರಾಮಗಢ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಹಸು ಕಳ್ಳಸಾಗಣೆ ಆರೋಪದ ಮೇಲೆ ಗುಂಪೊಂದು ರಕ್ಬರ್ ಖಾನ್ ಮತ್ತು ಅವರ ಸ್ನೇಹಿತ ಅಸ್ಲಂ ಅವರನ್ನು ತೀವ್ರವಾಗಿ ಥಳಿಸಿತು. ಈ ಸಂಬಂಧ 2019 ರಲ್ಲಿ ಪರಮ್‌ಜೀತ್ ಸಿಂಗ್, ನರೇಶ್ ಶರ್ಮಾ, ವಿಜಯ್ ಕುಮಾರ್ ಮತ್ತು ಧರ್ಮೇಂದ್ರ ಯಾದವ್ ವಿರುದ್ಧ ಪೊಲೀಸರು ಚಾರ್ಜ್ ಶೀಟ್ ಸಲ್ಲಿಸಿದ್ದರು.

ಒಂದನೇ ಪುಟದಿಂದ

ಜೂ.1ರಿಂದಲೇ ಹೋರಾಟ

ಯಜಮಾನಿಗೆ ಪ್ರತೀ ತಿಂಗಳು 2,000 ರೂ. ಹಣ, ಎಲ್ಲಾ ಮಹಿಳೆಯರಿಗೆ ಸಾರಿಗೆ ಬಸ್‌ನಲ್ಲಿ ಉಚಿತ ಪ್ರಯಾಣ, ಪ್ರತೀ ವಸತಿ ಗೃಹದ 200 ಯೂನಿಟ್‌ವರೆಗೆ ಉಚಿತ ವಿದ್ಯುತ್ ಪೂರೈಕೆ ಹಾಗೂ ಡಿಪ್ಲೊಮಾ, ಪದವಿ ಪೂರೈಸಿದ ನಿರುದ್ಯೋಗಿಗಳಿಗೆ ಮಾಹೆಯಾನ ಆರ್ಥಿಕ ನೆರವು ಯೋಜನೆಗಳನ್ನು ತಕ್ಷಣ ಜಾರಿಗೆ ತರಬೇಕು. ಮೇ 31 ರವರೆಗೆ ಕಾಯುತ್ತೇವೆ. ಅನುಷ್ಠಾನಗೊಳಿಸದಿದ್ದಲ್ಲಿ ಜೂನ್ 1 ರಿಂದಲೇ ಹೋರಾಟ ಮಾಡುತ್ತೇವೆ ಎಂದರು. ಜೂನ್ 1 ರಿಂದ 200 ಯೂನಿಟ್ ಒಳಗೆ ವಿದ್ಯುತ್ ಬಿಲ್ ಬಂದರೆ ಪಾವತಿಸಬೇಡಿ. ಮೊದಲ ಸಂಪುಟ ಸಭೆಯಲ್ಲೇ ಘೋಷಿಸಿ ಆದೇಶ ಮಾಡುತ್ತೇವೆ ಎಂದಿದ್ದ ಕಾಂಗ್ರೆಸ್ ಈಗ ಜಾರಿಗೊಳಿಸಬೇಕು ಎಂದ ಅವರು, ನಿಮ್ಮ ಮುಖ ನೋಡಿ ಜನರು ಮತ ಹಾಕಿಲ್ಲ. ಗ್ಯಾರಂಟಿ ಕಾರ್ಡ್ ನೋಡಿ ಗೆಲ್ಲಿಸಿದ್ದಾರೆ ನೆನಪಿರಲಿ ಎಂದು ಕಾಂಗ್ರೆಸ್ ಸರ್ಕಾರಕ್ಕೆ ಎಚ್ಚರಿಸಿದರು.

ನಾವು ಸೋತಿರಬಹುದು ಅಷ್ಟೇ, ಆದರೆ ಸತ್ತಿಲ್ಲ. ಕೊಟ್ಟಿರುವ ಭರವಸೆಗಳನ್ನು ಈಡೇರಿಸಿ. ರಾಜಸ್ಥಾನದಲ್ಲೂ ಇದೇ ರೀತಿ ಹೇಳಿ ಈವರೆಗೂ ಜಾರಿ ಮಾಡಿಲ್ಲ. ಸಿದ್ದರಾಮಯ್ಯ ಅಥವಾ ನಾವ್ಯಾರೂ ಆರ್ಥಿಕ ತಜ್ಞರಲ್ಲ ಎಂದ ಪ್ರತಾಪ್ ಸಿಂಹ, ಸಿಎಂ ಕುರ್ಚಿ ಯಾರದೋ ಸ್ವತ್ತಲ್ಲ. ಪೊಲೀಸ್ ವ್ಯವಸ್ಥೆ ಶಾಶ್ವತವಾಗಿರುತ್ತದೆ. ವಿಧಾನಸೌಧದಲ್ಲಿ ಕುಳಿತು ಪೊಲೀಸ್ ಇಲಾಖೆಗೆ ಧಮ್ಕಿ ಹಾಕುತ್ತೀರಾ? ಮೊದಲು ಈ ವರ್ತನೆ ನಿಲ್ಲಿಸಿ ಎಂದರು.

ಪರಿಣಾಮ ಬೀರಲ್ಲ: ರಾಜ್ಯ ವಿಧಾನಸಭಾ ಚುನಾವಣೆ ಫಲಿತಾಂಶವು ಮುಂಬರುವ ಲೋಕಸಭಾ ಚುನಾವಣೆ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ದೇಶಕ್ಕೆ ಎಂತಹ ನಾಯಕರು ಬೇಕೆಂಬುದು ಕನ್ನಡಿಗರಿಗೆ ಗೊತ್ತಿದೆ. ಕಾಂಗ್ರೆಸ್ ಗ್ಯಾರಂಟಿ ಸ್ಕೀಂ ಗಳನ್ನು ಮುಂದಿಟ್ಟು, ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲ್ಲಲು ಸಾಧ್ಯವಿಲ್ಲ ಎಂದು ನುಡಿದರು.

ಹಣ ಬಿಡುಗಡೆಗೆ ತಡೆ: ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುತ್ತಿದ್ದಂತೆಯೇ ನಮ್ಮ ಸರ್ಕಾರದ ಅಭಿವೃದ್ಧಿ ಕಾಮಗಾರಿ ಮಾಡುವುದನ್ನು ತಡೆ ಹಿಡಿದಿದೆ. ಎಷ್ಟು ಪರ್ಸೆಂಟ್ ಕಮಿಷನ್ ವೈಟ್ ಮಾಡುತ್ತಿದ್ದೀರಾ? ಪರ್ಸೆಂಟೇಜ್‌ಗಾಗಿ ನೀವು ಇಂತಹ ಆದೇಶ ಮಾಡಿದ್ದೀರಾ? ಎಂದು ಪ್ರಶ್ನಿಸಿದ ಪ್ರತಾಪ್ ಸಿಂಹ, ಆಡಳಿತ ನಡೆಸುವವರು ಬದಲಾಗುತ್ತಾರೆ. ಆದರೆ ಆಡಳಿತ ವ್ಯವಸ್ಥೆ ಬದಲಾಗುವುದಿಲ್ಲ ಎಂದರು.

ಬಿಜೆಪಿ ಸರ್ಕಾರದ ಮೇಲೆ 40 ಪರ್ಸೆಂಟ್ ಕಮಿಷನ್, ಬಿಟ್ ಕಾಯಿನ್ ಬಗ್ಗೆ ಆರೋಪ ಮಾಡಿದ್ದ ಕಾಂಗ್ರೆಸ್, ಈಗ ಅದೇ ಅಧಿಕಾರಕ್ಕೆ ಬಂದಿದೆಯಲ್ಲ ತನಿಖೆ ಮಾಡಿಸಲಿ. ತಪ್ಪು ಮಾಡಿದವರನ್ನು ಶಿಕ್ಷಿಸಿ. ನಾನೇ ಬಂದು ಕಾಲಿಗೆ ನಮಸ್ಕಾರ ಮಾಡುತ್ತೇನೆ. ಕಮಿಷನ್ ಪಡೆದವರನ್ನು ಜೈಲಿಗೆ ಕಳಿಸಿ. ಈ ಜವಾಬ್ದಾರಿ ನಿರ್ವಹಿಸದಿದ್ದರೆ ನೀವು ಹೇಳಿದೆಲ್ಲಾ ಸುಳ್ಳು ಎಂದಾಗುತ್ತದೆ ಎಂದು ತಿಳಿಸಿದರು.

ಕ್ಷಮೆ ಕೇಳಿದ್ದೇನೆ: ನಮ್ಮ ಕಾರ್ಯಕರ್ತರನ್ನು ಅಪಾಯಕ್ಕೆ ತಳ್ಳಿದ್ದಕ್ಕೆ ನಾನು ಕ್ಷಮೆ ಕೇಳಿದ್ದೇನೆ. ದೇಶ, ಧರ್ಮ ಎಂದು ನಮ್ಮ ಕಾರ್ಯಕರ್ತರು ದುಡಿದಿದ್ದಾರೆ. ಈಗ ಅವರನ್ನು ಟಾರ್ಗೆಟ್ ಮಾಡಲಾಗುತ್ತಿದೆ ಎಂದು ಸಂಸದರು ನುಡಿದರು.

ಪ್ರತಿಪಕ್ಷಗಳ ಬಹಿಷ್ಕಾರ: ಪ್ರಧಾನಿ ನರೇಂದ್ರ ಮೋದಿ ಅವರು, ಸಂಸತ್ ಭವನ ಉದ್ಘಾಟಿಸುತ್ತಾರೆಂಬ ಕಾರಣಕ್ಕಾಗಿ ಕಾರ್ಯಕ್ರಮವನ್ನು ಪ್ರತಿಪಕ್ಷಗಳು ಬಹಿಷ್ಕರಿಸಿವೆ. ಮೋದಿ ಅವರೇ ಭೂಮಿಪೂಜೆ ಮಾಡಿದ್ದರು. ಅವರೇ ಉದ್ಘಾಟಿಸಲಿದ್ದಾರೆ. ಅದರಲ್ಲಿ ತಪ್ಪೇನಿದೆ? ಪರಿಶಿಷ್ಟ ಪಂಗಡದ ದ್ರೌಪದಿ ಮುರ್ಮ ಅವರನ್ನು ರಾಷ್ಟ್ರಪತಿಯನ್ನಾಗಿ ಮಾಡಿದ್ದೇ ಮೋದಿ ಅವರು. ಅವರಿಗೆ ನೀಡಬೇಕಾದ ಎಲ್ಲಾ ಗೌರವವನ್ನು ಕೊಡುತ್ತೇವೆ. ಮುಂದಿನ ದಿನಗಳಲ್ಲಿ ರಾಷ್ಟ್ರಪತಿಗಳು ಸಂಸತ್ ಭವನದಲ್ಲಿ ಭಾಷಣ ಮಾಡಲಿದ್ದಾರೆ ಎಂದು ಪ್ರತಾಪ್ ಸಿಂಹ ತಿಳಿಸಿದರು.

ಮಹಿಷಾ ದಸರಾಗೆ ಬಿಡುವುದಿಲ್ಲ: ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದ ಮಾತ್ರಕ್ಕೆ ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಮಹಿಷಾ ದಸರಾ ಮಾಡಲು ನಾವು ಬಿಡುವುದಿಲ್ಲ. ಯಾವುದೇ ಸರ್ಕಾರವಿರಲಿ ಬೆಟ್ಟದಲ್ಲಿ ಈ ಆಚರಣೆಗೆ ನಾವು ಅವಕಾಶ ಕೊಡುವುದಿಲ್ಲ ಎಂದು ತಿಳಿಸಿದರು.

ಅಭಿವೃದ್ಧಿಗಾಗಿ: ಮೈಸೂರು ಅಭಿವೃದ್ಧಿಗಾಗಿ ನಾನು ಯಾರ ಕೈಕಾಲು ಬೇಕಾದರೂ ಹಿಡಿಯುತ್ತೇನೆ. ಚುನಾವಣೆ ಬಂದಾಗ ರಾಜಕೀಯ ಮಾಡೋಣ, ಉಳಿದ ಸಮಯದಲ್ಲಿ ಅಭಿವೃದ್ಧಿ ಮಾಡೋಣ. ಸಿದ್ದರಾಮಯ್ಯ ನವರನ್ನು ಭೇಟಿ ಮಾಡುತ್ತೇನೆ. ಅಭಿವೃದ್ಧಿ ಪರ ಇರುವವರನ್ನು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರನ್ನಾಗಿ ಮಾಡಿ ಎಂದು ಸಂಸದರು ಸಲಹೆ ನೀಡಿದರು.

ಸ್ಥಾಯಿ ಸಮಿತಿಗಳ ಅಧ್ಯಕ್ಷರ ಆಯ್ಕೆ

ಚುನಾವಣೆ ನಡೆಸದೇ ಇರುವುದು ತೀವ್ರ ಟೀಕೆಗೆ ಗ್ರಾಸವಾಗಿತ್ತು. ವಿರೋಧ ಪಕ್ಷವಾದ ಪಾಲಿಕೆಯ ಕಾಂಗ್ರೆಸ್ ಸದಸ್ಯರ ಪ್ರತಿಭಟನೆಯ ನಡುವೆಯೂ ಅಧ್ಯಕ್ಷರ ಆಯ್ಕೆಯಾಗಿ ನಿಗಧಿಯಾಗಿದ್ದ ಚುನಾವಣೆ ಕೆಲ ಕಾರಣದಿಂದ ಮೂರು (ಫೆ.2, ಮಾ.13 ಹಾಗೂ ಮಾ.23) ಬಾರಿ ಮುಂದೂ ಡಿದ್ದರಿಂದ ಪಾಲಿಕೆ ಸ್ಥಾಯಿ ಸಮಿತಿಗಳ ಅಧ್ಯಕ್ಷರ ಆಯ್ಕೆ ಪ್ರತಿಕ್ರಿಯೆ ಕಗ್ಗಂಟಾಗಿಯೇ ಮುಂದು ವರೆದಿತ್ತು. ರಾಜಕೀಯ ಕಾರಣದಿಂದಾಗಿ ಮೇಯರ್ ಮೂರು ಬಾರಿ ಸಭೆಯನ್ನು ಮುಂದೂ ಡಿದ್ದಾರೆ ಎಂದು ಆರೋಪಿಸಿ ಕಾಂಗ್ರೆಸ್, ಜೆಡಿಎಸ್ ಸದಸ್ಯರು ಪ್ರತಿಭಟನೆ ನಡೆಸಿದ್ದರು. ಸುಸೂತ್ರವಾಗಿ ನಡೆದ ಚುನಾವಣೆ: ಮೇಯರ್ ಶಿವಕುಮಾರ್ ಅಧ್ಯಕ್ಷತೆಯಲ್ಲಿ ನಗರಪಾಲಿಕೆಯ ಹಳೇ ಕೌನ್ಸಿಲ್ ಸಭಾಂಗಣದಲ್ಲಿ ಗುರುವಾರ ಮಧ್ಯಾಹ್ನ ನಡೆದ ಸ್ಥಾಯಿ ಸಮಿತಿಗಳ ಅಧ್ಯಕ್ಷರ ಚುನಾವಣಾ ಪ್ರಕ್ರಿಯೆ ಸುಸೂತ್ರವಾಗಿ ನಡೆಯಿತು. ನಾಲ್ಕು ಸಮಿತಿಗಳಲ್ಲಿ ಮೂರು ಸಮಿತಿಗಳಿಗೆ ಜೆಡಿಎಸ್ ಸದಸ್ಯರು ಆಯ್ಕೆಯಾದರೆ, ಮತ್ತೊಂದು ಸಮಿತಿಯನ್ನು ಕಾಂಗ್ರೆಸ್ ತನ್ನ ತೆಕ್ಕೆಗೆ ಪಡೆದುಕೊಂಡಿತು.

ಎಡವಿದ ಜೆಡಿಎಸ್: ಈ ಹಿಂದೆ ಪಾಲಿಕೆಯ ನೂತನ ಮೇಯರ್ ಹಾಗೂ ಉಪ ಮೇಯರ್ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲ ಪಡೆದು ಮೇಯರ್ ಸ್ಥಾನವನ್ನು ಬಿಜೆಪಿ ಪಡೆದುಕೊಂಡಿದ್ದರೆ, ಉಪಮೇಯರ್ ಚುನಾವಣೆಯಲ್ಲಿ ನಾಮಪತ್ರ ಸಲ್ಲಿಕೆ ವೇಳೆ ಜೆಡಿಎಸ್ ಎಡವಟ್ಟು ಮಾಡಿಕೊಂಡಿದ್ದರಿಂದ ಅಭ್ಯರ್ಥಿಯ ನಾಮಪತ್ರ ತಿರಸ್ಕೃತಗೊಂಡಿತ್ತು. ಇದರಿಂದ ಬಯಸದ ಬಂದ ಭಾಗ್ಯ ಎಂಬಂತೆ ಬಿಜೆಪಿಗೆ ಉಪ ಮೇಯರ್ ಸ್ಥಾನವೂ ಒಲಿದಿತ್ತು. ಎರಡೂ ಸ್ಥಾನವೂ ಬಿಜೆಪಿಗೆ ಒಲಿದಿದ್ದರಿಂದ ಎಲ್ಲಾ ಸ್ಥಾಯಿ ಸಮಿತಿಗಳ ಅಧ್ಯಕ್ಷ ಸ್ಥಾನವನ್ನು ಜೆಡಿಎಸ್‌ಗೆ ನೀಡಲು ಬಿಜೆಪಿ ಸಮ್ಮತಿಸಿತ್ತು. ಆದರೆ ಗುರುವಾರ ನಡೆದ ಚುನಾವಣೆಯಲ್ಲಿ ಜೆಡಿಎಸ್ ಸದಸ್ಯರೊಬ್ಬರ ಗೈರು ಹಾಜರಿಯಿಂದಾಗಿ ಒಂದು ಸ್ಥಾಯಿ ಸಮಿತಿಯನ್ನು ಕಳೆದುಕೊಳ್ಳುವಂತಾಯಿತು.

ಕಾಂಗ್ರೆಸ್‌ಗೆ ಒಲಿದ ಪಟ್ಟಣ ಯೋಜನೆ ಮತ್ತು ಸುಧಾರಣೆಗಾಗಿ ಸ್ಥಾಯಿ ಸಮಿತಿ: ಪಟ್ಟಣ ಯೋಜನೆ ಮತ್ತು ಸುಧಾರಣೆಗಾಗಿ ಸ್ಥಾಯಿ ಸಮಿತಿಯಲ್ಲಿ ಒಟ್ಟು 2 ಕಾಂಗ್ರೆಸ್, ತಲಾ 1 ಬಿಜೆಪಿ, ಬಿಎಸ್‌ಪಿ ಮತ್ತು ಜೆಡಿಎಸ್, 2 ಪಕ್ಷೇತರರ ಸದಸ್ಯರು ಇದ್ದರು. ಅವರಲ್ಲಿ ಜೆಡಿಎಸ್‌ನ ಮಹಮ್ಮದ್ ರಫೀಕ್ ಗೈರು ಹಾಜರಾಗಿದ್ದು ಎಡವಟ್ಟಾಯಿತು. ಬಿಎಸ್‌ಪಿಯ ಪಲ್ಲವಿ ಬೇಗಂ ಕಾಂಗ್ರೆಸ್‌ನ ಬೆಂಬಲಕ್ಕೆ ನಿಂತರು. ಪಕ್ಷೇತರ ಸದಸ್ಯ ಸಮೀವುಲ್ಲಾ ಅಜ್ಜು ಗೈರು ಹಾಜರಾದರು. ಸಂಖ್ಯಾಬಲ ಕಳೆದುಕೊಂಡ ಜೆಡಿಎಸ್ ನಾಮಪತ್ರ ಸಲ್ಲಿಸುವ ಗೋಜಿಗೆ ಹೋಗಲಿಲ್ಲ. ಹಾಗಾಗಿ ಕಾಂಗ್ರೆಸ್‌ನ ಹೆಚ್.ಎಂ. ಶಾಂತಕುಮಾರಿ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಗೊಂಡರು.

ಜೆಡಿಎಸ್‌ಗೆ ಮೂರು: ಉಳಿದ ಮೂರು ಸ್ಥಾಯಿ ಸಮಿತಿ ಜೆಡಿಎಸ್‌ಗೆ ತೆಕ್ಕೆಗೆ ಒಲಿದು ಬಂದವು. ಜೆಡಿಎಸ್ ಹಾಗೂ ಬಿಜೆಪಿ ಮೈತ್ರಿ ಕೂಟಕ್ಕೆ ಹೆಚ್ಚಿನ ಸಂಖ್ಯಾಬಲ ಇದ್ದುದ್ದರಿಂದ ಮೂರು ಸ್ಥಾಯಿ ಸಮಿತಿಗಳಿಗೂ ಅವಿರೋಧವಾಗಿ ನೂತನ ಅಧ್ಯಕ್ಷರನ್ನು ಆಯ್ಕೆ ಮಾಡಲಾಯಿತು. ತೆರಿಗೆ ನಿರ್ಧರಣೆ, ಹಣಕಾಸು ಮತ್ತು ಅಪೀಲುಗಳ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ಜೆಡಿಎಸ್‌ನ ಆರ್.ನಾಗರಾಜ್, ಸಾರ್ವಜನಿಕ ಆರೋಗ್ಯ, ಶಿಕ್ಷಣ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ಸವಿತಾ, ಲೆಕ್ಕಪತ್ರಗಳಿಗಾಗಿ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ವಿ. ರಮೇಶ್ ಅವಿರೋಧವಾಗಿ ಆಯ್ಕೆಯಾದರು.

ಈ ನಾಲ್ಕು ಸ್ಥಾಯಿ ಸಮಿತಿಗಳ ಅಧಿಕಾರಾವಧಿ ದಾಖಲೆಯಲ್ಲಿ 2022ರ ಸೆ.6ರಿಂದ ಆರಂಭ ಗೊಂಡು ಒಂದು ವರ್ಷದ ಅವಧಿಗೆ ಮಾತ್ರ ಸೀಮಿತವಾಗಿದೆ. ಇದರಿಂದ ನೂತನ ಅಧ್ಯಕ್ಷರು 2023ರ ಸೆ.6ರವರೆಗೆ ಮಾತ್ರ ಆಡಳಿತ ನಡೆಸ ಬಹುದಾಗಿದೆ. ಚುನಾವಣೆ ವೇಳೆ ಉಪ ಮೇಯರ್ ಡಾ.ಜಿ.ರೂಪಾ, ಕೌನ್ಸಿಲ್ ಕಾರ್ಯದರ್ಶಿ ರಂಗಸ್ವಾಮಿ ಇದ್ದರು. ಸ್ಥಾಯಿ ಸಮಿತಿಗಳಿಗೆ ಆಯ್ಕೆ ಯಾದ ನೂತನ ಅಧ್ಯಕ್ಷರಿಗೆ ಮೇಯರ್ ಶಿವ ಕುಮಾರ್, ಉಪಮೇಯರ್ ಡಾ.ರೂಪ, ಕೌನ್ಸಿಲ್ ಕಾರ್ಯದರ್ಶಿ ರಂಗಸ್ವಾಮಿ ಅಭಿನಂಧಿಸಿದರು.


ಅದೇನು ಬಿಜೆಪಿ, ಆರೆಸ್ಸೆಸ್ ಕಚೇರಿಯೇ...!

ಅದು ಬಿಜೆಪಿ ಅಥವಾ ಆರೆಸ್ಸೆಸ್ ಕಚೇರಿ ಅಲ್ಲ. ಸಂಸತ್ ಭವನದ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಓರ್ವ ಮಾಜಿ ಪ್ರಧಾನಮಂತ್ರಿಯಾಗಿ, ದೇಶದ ಪ್ರಜೆಯಾಗಿ ಭಾಗಿಯಾಗುತ್ತಿದ್ದೇನೆ ಎಂದು ಅವರು ಸ್ಪಷ್ಟ ಮಾತುಗಳಲ್ಲಿ ಹೇಳಿದರು. ಬಿಜೆಪಿಯನ್ನು ರಾಜಕೀಯವಾಗಿ ವಿರೋಧ ಮಾಡಲಿಕ್ಕೆ ನನ್ನಲ್ಲಿ ಅನೇಕ ಕಾರಣಗಳಿವೆ. ಆದರೆ, ಸಂಸತ್ ಭವನ ಉದ್ಘಾಟನೆ ವಿಷಯದಲ್ಲಿ ರಾಜಕೀಯ ತರುವುದು ನನಗೆ ಇಷ್ಟವಿಲ್ಲ. ನಾನು ಸಂಸತ್ತಿನ ಎರಡು ಸದನಗಳಿಗೆ ಆಯ್ಕೆಯಾಗಿದ್ದೇನೆ. ಅಲ್ಲಿ ಸಾಂವಿಧಾನಿಕ ಚೌಕಟ್ಟಿನಲ್ಲಿ ಕರ್ತವ್ಯ ನಿರ್ವಹಿಸಿದ್ದೇನೆ. ಈಗಲೂ ಸದಸ್ಯನಾಗಿದ್ದೇನೆ. ಸಂವಿಧಾನದ ಮೌಲ್ಯಗಳನ್ನು ಕಾಪಾಡುವ ಕೆಲಸ ಮಾಡಿದ್ದೇನೆ. ಹೀಗಾಗಿ ಸಂವಿಧಾನದ ವಿಷಯದಲ್ಲಿ ನಾನು ರಾಜಕೀಯ ತರಲಾರೆ ಎಂದು ಮಾಜಿ ಪ್ರಧಾನಿಗಳು ಸ್ಪಷ್ಟಪಡಿಸಿದರು. ಅನೇಕ ಪಕ್ಷಗಳು ಸಂಸತ್ ಭವನದ ಉದ್ಘಾಟನೆ ಕಾರ್ಯಕ್ರಮವನ್ನು ಬಹಿಷ್ಕರಿಸಿವೆ. ಓರ್ವ ಮಾಜಿ ಪ್ರಧಾನಿಯಾಗಿ ನೀವು ಹೋಗುತ್ತೀರಾ ಇಲ್ಲವಾ ಎಂದು ಅನೇಕರು ಪ್ರಶ್ನೆ ಮಾಡಿದ್ದಾರೆ. ಹೌದು, ನಾನು ಸಂವಿಧಾನಕ್ಕೆ ಬದ್ಧನಾಗಿದ್ದೇನೆ. ಅದಕ್ಕಾಗಿ ಸಂಸತ್ ಭವನ ಉದ್ಘಾಟನೆಗೆ ಹೋಗುತ್ತೇನೆ ಎಂದು ಅವರಿಗೆ ಹೇಳಲು ಬಯಸುತ್ತೇನೆ ಎಂದು ಅವರು ನುಡಿದರು.

ಪಕ್ಷವನ್ನು ಉಳಿಸುತ್ತೇನೆ: ಪಕ್ಷಕ್ಕಾಗಿ ನನ್ನ ಜೀವ ಸವೆಸಿದ್ದೇನೆ. ನಾನು ಇರುವಷ್ಟು ಕಾಲವೂ ಪಕ್ಷಕ್ಕಾಗಿಯೇ ಬದುಕುತ್ತೇನೆ. ನನ್ನ ಕೊನೆ ಉಸಿರು ಇರುವ ತನಕ ನಾನು ಪಕ್ಷಕ್ಕೇ ಮೀಸಲು ಎಂದು ಗೌಡರು ಭಾವುಕರಾಗಿ ನುಡಿದರು. ಕಳೆದ ವಿಧಾನಸಭೆ ಚುನಾವಣೆಯಲ್ಲಿ ಪಕ್ಷ ಸೋತಿದೆ ಎಂಬುದಕ್ಕೆ ನನಗೆ ಬಹಳ ನೋವಿದೆ. ಅದೇ ನೋವಿನಿಂದ ಕಾಲ ದೂಡಲು ಸಾಧ್ಯವೇ? ಪುಟಿದೆದ್ದು ಪಕ್ಷ ಕಟ್ಟಬೇಕು, ಅಧಿಕಾರಕ್ಕೆ ಬರಲು ಶ್ರಮಿಸಬೇಕು ಎಂದರು.

ಸೋತಿದ್ದಕ್ಕೆ ಪ್ರಾಮಾಣಿಕವಾಗಿ ಕಾರಣಗಳನ್ನು ಹುಡುಕೋಣ. ಅವುಗಳಿಗೆ ಪರಿಹಾರಗಳನ್ನು ಕಂಡು ಹಿಡಿಯೋಣ. 1989ರಲ್ಲಿ ನಮ್ಮ ಪಕ್ಷ ಕೇವಲ ಎರಡು ಕ್ಷೇತ್ರಗಳಲ್ಲಿ ಮಾತ್ರ ಗೆದ್ದಿತ್ತು. ಅದಾದ ಮೇಲೆ ಐದು ವರ್ಷಗಳ ನಂತರ ನಮ್ಮ ಪಕ್ಷ ಪೂರ್ಣ ಬಹುಮತದೊಂದಿಗೆ ಅಧಿಕಾರಕ್ಕೆ ಬಂತು. ನಾನೇ ಮುಖ್ಯಮಂತ್ರಿ ಆದೆ. ಆಮೇಲೆ ಪ್ರಧಾನಿಯೂ ಆದೆ. ಜನರ ಆಶೀರ್ವಾದದಿಂದ ಅದು ಸಾಧ್ಯವಾಯಿತು. ಸೋತಾಗ ನಿರಾಶೆ, ನೋವು ಸಹಜ. ನಾನು ಈ ಎಲ್ಲಾ ಹಂತಗಳನ್ನು ದಾಟಿಕೊಂಡು ಮುಂದೆ ಬಂದಿದ್ದೇನೆ. ಪಕ್ಷವನ್ನು ಕಟ್ಟಿ ಬೆಳೆಸಿದ್ದೇನೆ. ಈ ಪಕ್ಷವನ್ನು ಉಳಿಸುವ ಕೆಲಸ ನಾನು ಮಾಡಿಯೇ ಮಾಡುತ್ತೇನೆ ಎಂದು ಅವರು ಹೇಳಿದರು. ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ, ಪಕ್ಷದ ರಾಜ್ಯಾಧ್ಯಕ್ಷ ಸಿ.ಎಂ.ಇಬ್ರಾಹಿಂ ಸೇರಿದಂತೆ ಪಕ್ಷದ ಎಲ್ಲಾ ಶಾಸಕರು, ವಿಧಾನ ಪರಿಷತ್ ಸದಸ್ಯರು, ಪಕ್ಷದ ತಾಲೂಕು, ಜಿಲ್ಲಾ ಘಟಕಗಳ ಅಧ್ಯಕ್ಷರು ಸಭೆಯಲ್ಲಿ ಹಾಜರಿದ್ದರು.

ನೂತನ ಸಂಸತ್ ಭವನದ ಉದ್ಘಾಟನೆಯಲ್ಲಿ ಭಾಗಿಯಾಗಿ: ಪ್ರತಿಪಕ್ಷಗಳಿಗೆ ಬಿಜೆಪಿ ಮನವಿ



ನವದೆಹಲಿ, ಮೇ 25– ಪ್ರಧಾನಿ ನರೇಂದ್ರ ಮೋದಿ ಅವರ ಒತ್ತಾಸೆಯಂತೆ ನೂತನ ಸಂಸತ್ ಭವನ ನಿರ್ಮಿಸಲಾಗಿದೆ ಎಂಬ ಕಾರಣಕ್ಕೆ ವಿರೋಧ ಪಕ್ಷಗಳು ಅದರ ಉದ್ಘಾಟನೆಯನ್ನು ಬಹಿಷ್ಕರಿಸಲು ನಿರ್ಧರಿಸಿವೆ ಎಂದು ಬಿಜೆಪಿ ಗುರುವಾರ ಆರೋಪಿಸಿದೆ.

ಹೊಸ ಕಟ್ಟಡ ಭಾರತದ ಹೆಮ್ಮೆಯ ಸಂಕೇತವಾಗಿದೆ ಎಂದು ಹೇಳಿರುವ ಬಿಜೆಪಿಯ ಹಿರಿಯ ನಾಯಕ ಮತ್ತು ಮಾಜಿ ಕೇಂದ್ರ ಸಚಿವ ರವಿಶಂಕರ್ ಪ್ರಸಾದ್, ಮೇ 28 ರಂದು 'ಐತಿಹಾಸಿಕ ಉದ್ಘಾಟನೆಯ ದಿನದಂದು ಪ್ರತಿಪಕ್ಷಗಳು ಹೃದಯ ವೈಶಾಲ್ಯತೆ ತೋರಿಸುವ ಮೂಲಕ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು. ನಾವೆಲ್ಲರೂ ರಾಷ್ಟ್ರಪತಿಗಳನ್ನು ಗೌರವಿಸುತ್ತೇವೆ, ಅವರ ಬಗ್ಗೆ ಕಾಂಗ್ರೆಸ್ ಹೇಳಿದ್ದನ್ನು ನೆನಪಿಸಿಕೊಳ್ಳುವ ಮೂಲಕ ರಾಷ್ಟ್ರಪತಿ ಹುದ್ದೆಯನ್ನು ಯಾವುದೇ ವಿವಾದಕ್ಕೆ ಎಳೆಯಲು ಬಯಸುವುದಿಲ್ಲ. ಆದರೆ ಭಾರತದ ಪ್ರಧಾನಿ ಕೂಡ ಸಂಸತ್ತಿನ ಪ್ರಮುಖ ಭಾಗವಾಗಿದ್ದಾರೆ. ಪ್ರಧಾನಿ ಕೂಡ ಸಾಂವಿಧಾನಿಕ ಜವಾಬ್ದಾರಿಯನ್ನು ಹೊಂದಿದ್ದಾರೆ ಎಂದು ಅವರು ಸುದ್ದಿಗಾರರಿಗೆ ತಿಳಿಸಿದರು. ಕಾರ್ಯಕ್ರಮ ಬಹಿಷ್ಕಾರವನ್ನು ಪ್ರತಿಪಕ್ಷಗಳ ಒಗ್ಗಟ್ಟಿನ ವೇದಿಕೆಯಾಗಿ ಬಳಸಬೇಡಿ ಎಂದು ವಿಪಕ್ಷ ನಾಯಕರನ್ನು ಒತ್ತಾಯಿಸಿದ ಪ್ರಸಾದ್, ಹಾಗೆ ಮಾಡಲು ಅವರಿಗೆ ಹೆಚ್ಚಿನ ಅವಕಾಶಗಳಿವೆ ಎಂದರು.

ಮೊಘಲರು ಲಾಲ್ ಕ್ವಿಲಾ, ಜಮಾ ಮಸೀದಿ ಮತ್ತು ಹುಮಾಯೂನ್ ಸಮಾಧಿಯನ್ನು ನಿರ್ಮಿಸಿದರು. ಕುತಾಬ್–ಉದ್–ದೀನ್ ಐಬಕ್ ಕುತಾಬ್ ಮಿನಾರ್ ಅನ್ನು ನಿರ್ಮಿಸಿದರು. ರಾಷ್ಟ್ರಪತಿ ಭವನ ಮತ್ತು ಸಂಸತ್ ಭವನ ಎಂದು ಕರೆಯಲ್ಪಡುವ ನಾರ್ತ್ ಬ್ಲಾಕ್, ಸೌತ್ ಬ್ಲಾಕ್, ವೈಸರಾಯ್ ಹೌಸ್‌ನ್ನು ಬ್ರಿಟಿಷರು ನಿರ್ಮಿಸಿದರು. ನಾವು 75ವರ್ಷಗಳಲ್ಲಿ ಏನನ್ನು ನಿರ್ಮಿಸಿದ್ದೇವೆ ಎಂದು ಕೇಳಿದ ರವಿಶಂಕರ್ ಪ್ರಸಾದ್, ಸ್ವಾತಂತ್ರ್ಯ ಬಂದು 75 ವರ್ಷಗಳ ನಂತರ ಭಾರತಕ್ಕೆ ಭಾರತೀಯರೇ ಏಕೆ ಸಂಸತ್ತನ್ನು ನಿರ್ಮಿಸಬಾರದು ಎಂದರು.

ಹೊಸ ಸಂಸತ್ ಕಟ್ಟಡ ಭಾರತೀಯ ವಾಸ್ತುಶಿಲ್ಪದ ಅನುಕರಣೀಯ ಮಾದರಿ ಮತ್ತು ಇದನ್ನು ಭಾರತೀಯ ಸಂಸ್ಕಾರದ ಪ್ರಕಾರ ನಿರ್ಮಿಸಲಾಗಿದೆ. ಕಾರ್ಯಕ್ರಮಕ್ಕೆ ಬಂದು ಪಾಲ್ಗೊಳ್ಳಿ ಎಂದು ಕಾಂಗ್ರೆಸ್ ನಾಯಕರು ಮತ್ತು ಇತರ ವಿರೋಧ ಪಕ್ಷದ ನಾಯಕರಿಗೆ ಹೇಳುತ್ತೇನೆ. ಸಂಸತ್ ದೇಶದ ಪ್ರಜಾಪ್ರಭುತ್ವದ ಕಿರೀಟವಾಗಿದೆ ಎಂದು ಅವರು ಹೇಳಿದರು.

ನೂತನ ಸಂಸತ್ತು ಭವನ ಉದ್ಘಾಟನೆ, ತಮಿಳುನಾಡಿನ 20 ಮಂದಿ ಅರ್ಚಕರಿಂದ ಧಾರ್ಮಿಕ ವಿಧಿ–ವಿಧಾನ

ನವದೆಹಲಿ, ಮೇ 25– ಇದೇ ಮೇ 28 ರಂದು ಹೊಸ ಸಂಸತ್ ಭವನದ ಉದ್ಘಾಟನೆಗೆ ತಮಿಳುನಾಡಿನಿಂದ 20 ಮಂದಿ ಅರ್ಚಕರನ್ನು ಆಹ್ವಾನಿಸಲಾಗಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

ಬ್ರಿಟಿಷರಿಂದ 1947ರಲ್ಲಿ ಅಧಿಕಾರ ಹಸ್ತಾಂತರದ ಪ್ರತೀಕವಾಗಿದ್ದ ಸೆಂಗೋಲ್‌ನ್ನು ಅಂದು ಸ್ಥಾಪಿಸಲಾಗುವುದು ಎಂದು ಹೇಳಿದರು. ತಮಿಳುನಾಡು, ತೆಲಂಗಾಣ ಮತ್ತು ನಾಗಾಲ್ಯಾಂಡ್ ರಾಜ್ಯಪಾಲರೊಂದಿಗೆ ಚೆನ್ನೈನಲ್ಲಿ ಸುದ್ದಿಗಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ಅಧಿಕಾರ ಹಸ್ತಾಂತರವನ್ನು ಸಂಕೇತಿಸುವ ಮೊದಲ ಪ್ರಧಾನಿ ಜವಾಹರ ಲಾಲ್ ನೆಹರು ಅವರಿಗೆ ಸೆಂಗೋಲ್ ರಾಜದಂಡ ಹಸ್ತಾಂತರಿಸುವ ಸಂಚಿಕೆಯಲ್ಲಿ ತಮಿಳುನಾಡಿಗೆ ದೊಡ್ಡ ಹೆಮ್ಮೆಯ ಭಾಗ ಇದೆ ಎಂದು ಹೇಳಿದರು. 1947 ರಲ್ಲಿ ಬ್ರಿಟಿಷರಿಂದ ಭಾರತದ ಜನತೆಗೆ ಹಸ್ತಾಂತರಿಸುವ ಪ್ರಕ್ರಿಯೆಯನ್ನು ದಿವಂಗತ ಸಿಆರ್ ರಾಜಗೋಪಾಲಾಚಾರಿ ಅವರು ನೆಹರು ಅವರ ಸಮಾಲೋಚನೆಯ ನಂತರ ಶೈವ ಮಠಾಧೀಶರೊಂದಿಗೆ ಚರ್ಚಿಸಿ ತಿರುವಾವಡುತುರೈ ಅಧೀನಂ ಅವರ ಸಲಹೆಯ ಮೇರೆಗೆ ಮಾಡಲಾಗಿತ್ತು ಎಂದರು.



ಮೇ 28ರಂದು ಪ್ರಧಾನಮಂತ್ರಿ ಮೋದಿ ಅವರಿಂದ ಉದ್ಘಾಟನೆ ಸಂದರ್ಭದಲ್ಲಿ ಹೊಸ ಸಂಸತ್ತಿನ ಕಟ್ಟಡದಲ್ಲಿ ಸೆಂಗೋಲ್‌ನ್ನು ಸ್ಥಾಪಿಸಲಾಗುವುದು, ಈ ಕಾರ್ಯಕ್ರಮಕ್ಕೆ ತಿರುವವಾಡುತುರೈ, ಪೇರೂರ್ ಮತ್ತು ಮಧುರೈ ಸೇರಿದಂತೆ ತಮಿಳುನಾಡಿನ 20 ಅರ್ಚಕರನ್ನು ಆಹ್ವಾನಿಸಲಾಗಿದೆ ಎಂದು ಹೇಳಿದರು.

ತಮಿಳಿನಲ್ಲಿ, 'ಆದೀನಂ' ಎಂಬ ಪದವು ಶೈವ ಮಠ ಮತ್ತು ಮಠದ ಮುಖ್ಯಸ್ಥ ಎರಡನ್ನೂ ಸೂಚಿಸುತ್ತದೆ. ಮಠಾಧೀಶರು ಕಾರ್ಯಕ್ರಮಕ್ಕೆ ಹಾಜರಾಗುತ್ತಾರೆ, ತೇವರಂನ್ನು ಪಠಿಸುವ ಓದುವರ್‌ಗಳು (ಶೈವ ಧರ್ಮಗ್ರಂಥಗಳು ಮತ್ತು ಸ್ತೋತ್ರಗಳಲ್ಲಿ ವಿದ್ವಾಂಸರು) ಇರುತ್ತಾರೆ. 1947 ರಲ್ಲಿ ಓತುವರ್ಗಳು ಕೋಲಾರು ಪಥಿಗಂನ್ನು ಪಠಿಸಿದಾಗ ಸೆಂಗೋಲನ್ನು ನೆಹರೂಗೆ ಹಸ್ತಾಂತರಿಸಲಾಯಿತು ಎಂದರು. ಅದೇ ಸೆಂಗೋಲನ್ನು ಲೋಕಸಭೆಯ ಸ್ಪೀಕರ್ ಕುರ್ಚಿಯ ಬಳಿ ಅತ್ಯಂತ ಗೌರವದಿಂದ ಸ್ಥಾಪಿಸಲಾಗುವುದು. ಇದು ನ್ಯಾಯದೊಂದಿಗೆ ಮತ್ತು ಯಾವುದೇ ಪಕ್ಷಪಾತವಿಲ್ಲದೆ ಆಡಳಿತವನ್ನು ಸಂಕೇತಿಸುತ್ತದೆ ಎಂದರು.

ಜಯದೇವ ಹೃದ್ರೋಗ ಆಸ್ಪತ್ರೆಯಲ್ಲಿ ಉಚಿತ ಆಂಜಿಯೋಪ್ಲಾಸ್ಟಿ ಕಾರ್ಯಾಗಾರ



ಮೈಸೂರು, ಮೇ 25– ರಾಜ್ಯದ ಎಲ್ಲಾ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಜೂನ್ 12 ರಿಂದ 18ರ ವರೆಗೆ 200 ಜನ ಬಡರೋಗಿಗಳಿಗೆ ಉಚಿತ ಆಂಜಿಯೋ ಪ್ಲಾಸ್ಟಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಯದೇವ ಹೃದ್ರೋಗ ವಿಜ್ಞಾನ ಸಂಸ್ಥೆಯ ನಿರ್ದೇಶಕ ಪದ್ಮಶ್ರೀ ಡಾ.ಸಿ.ಎನ್. ಮಂಜುನಾಥ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ, ಮೆಡ್ಟ್ರಾನಿಕ್ಸ್ ಅಮೆರಿಕಾ ಹಾಗೂ ಡಾ. ಗೋವಿಂದರಾಜು ಸುಬ್ರಹ್ಮಣಿ ಹಾರ್ಟ್ ಫೌಂಡೇಷನ್ ವಿಸ್ಕಿನ್‌ಸನ್ ಅಮೆರಿಕಾದವರ ಸಹಯೋಗದೊಂದಿಗೆ ಬೆಂಗಳೂರಿನ ಜಯದೇವ ಆಸ್ಪತ್ರೆಯಲ್ಲಿ ಜೂನ್ 12 ರಿಂದ 14 ರವರೆಗೆ, ಮೈಸೂರು ಜಯದೇವ ಆಸ್ಪತ್ರೆಯಲ್ಲಿ ಜೂನ್ 15 ಮತ್ತು 16, ಕಲಬುರಗಿ ಜಯದೇವ ಆಸ್ಪತ್ರೆಯಲ್ಲಿ ಜೂನ್ 17 ಮತ್ತು 18 ರಂದು ಉಚಿತ ಆಂಜಿಯೋಪ್ಲಾಸ್ಟಿ ಕಾರ್ಯಾ ಗಾರವನ್ನು ಬಡರೋಗಿಗಳಿಗೆ ಹಾಗೂ ಬಡತನ ರೇಖೆಗಿಂತ ಕೆಳಗಿರುವ ಹಿರಿಯ ನಾಗರಿಕರಿಗಾಗಿ ಆಯೋಜಿಸಲಾಗಿದೆ. ಪ್ರತಿ ರೋಗಿಗೂ ಉನ್ನತ ಮಟ್ಟದ ಮೆಡಿಕೇಟೆಡ್ ಸ್ಟಂಟ್‌ಗಳನ್ನು ಉಚಿತವಾಗಿ ಅಳವಡಿಸಲಾಗುವುದು. ಈ ಸೌಲಭ್ಯವನ್ನು ಈಗಾಗಲೇ ಆಂಜಿಯೋಗ್ರಾಂ ತಪಾಸಣೆಗೆ ಒಳಪಟ್ಟಿರುವ ರೋಗಿಗಳು ಪಡೆಯಬಹುದು. ಅವಶ್ಯಕತೆ ಇರುವ ರೋಗಿಗಳು ದಾಖಲಾತಿ ಸಂದರ್ಭದಲ್ಲಿ ಬಿಪಿಎಲ್ ಕಾರ್ಡ್ ಅಥವಾ ಕಡಿಮೆ ಆದಾಯ ಪ್ರಮಾಣಪತ್ರವನ್ನು ಹೊಂದಿರಬೇಕು. ಜೂನ್ 8 ರೊಳಗೆ ಬೆಳಗ್ಗೆ 10 ಗಂಟೆಯಿಂದ 4 ಗಂಟೆಯವರೆಗೆ ನೋಂದಾಯಿಸಿಕೊಳ್ಳಬೇಕು.

ಹೆಚ್ಚಿನ ವಿವರಗಳಿಗೆ ಬೆಂಗಳೂರು ಜಯದೇವ ಆಸ್ಪತ್ರೆ, 9480827888 ಅಥವಾ 080–26944874, ಮೈಸೂರು ಜಯದೇವ ಆಸ್ಪತ್ರೆ, 8660105492 ಅಥವಾ 0821–2336255, 2336144, ಕಲಬುರಗಿ ಜಯದೇವ ಆಸ್ಪತ್ರೆ, 9482114611 ಅಥವಾ 08472–230511 ಅನ್ನು ಸಂಪರ್ಕಿಸುವುದು.

ಸಿಎಂ ಜಂಟಿ ಕಾರ್ಯದರ್ಶಿಗಳಾಗಿ ನೇಮಕ



ಮೈಸೂರು, ಮೇ 25–ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ನಿವೃತ್ತ ಅಪರ ನಿರ್ದೇಶಕರಾದ ಎಂ.ರಾಮಯ್ಯ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಜಂಟಿ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಕೆ.ವಿ.ಅಶೋಕ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಎಂ. ರಾಮಯ್ಯರವರು ಈ ಹಿಂದೆಯೂ ಸಹ ಸಿದ್ದರಾಮಯ್ಯರವರ ಜಂಟಿ ಕಾರ್ಯದರ್ಶಿಯಾಗಿ ಕಾರ್ಯ ನಿರ್ವಹಿಸಿದ್ದರು.

ಬಿ.ಶಿವಸ್ವಾಮಿ



ಮೈಸೂರು, ಮೇ 25–ಬಿ.ಶಿವಸ್ವಾಮಿ, ಕೆ.ಎ.ಎಸ್. (ಆಯ್ಕೆ ಶ್ರೇಣಿ) ಅಧಿಕಾರಿ, ಜಂಟಿ ನಿರ್ದೇಶಕರು (ಆಡಳಿತ) ಪೌರಾಡಳಿತ ನಿರ್ದೇಶನಾಲಯ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಜಂಟಿ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಉಮಾದೇವಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಶಿವಸ್ವಾಮಿಯವರು ಮೈಸೂರು ತಾಲೂಕು ಗೋಪಾಲಪುರ ಗ್ರಾಮದವರು.

ಸ್ವಯಂ ಉದ್ಯೋಗ ಮಾಡಲು ಕಾರ್ಯಾಗಾರ



ಮೈಸೂರು, ಮೇ 25– ದತ್ತೋ ಪಂತ್ ತಂಗಡಿ ರಾಷ್ಟ್ರೀಯ ಕಾರ್ಮಿಕ ಶಿಕ್ಷಣ ಅಭಿವೃದ್ಧಿ ಮಂಡಳಿ ವತಿಯಿಂದ ಮೈಸೂರಿನ ರಮ್ಮನಹಳ್ಳಿಯಲ್ಲಿ ಸ್ವಯಂ ಉದ್ಯೋಗ ಮಾಡಲು ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು. ಪ್ರಾದೇಶಿಕ ನಿರ್ದೇಶಕ ಸತೀಶ್ ಕುಮಾರ್ ಅವರು ಕಾರ್ಯಕ್ರಮದ ಉದ್ದೇಶಗಳ ಬಗ್ಗೆ ಮಾಹಿತಿ ನೀಡಿದರು ಹಾಗೂ ಡಿಜಿಟಲ್ ಸಾಕ್ಷರತೆ ಬಗ್ಗೆ ವಿವರಿಸಿದರು. ಮೈಸೂರಿನ ಕೆಆರ್ ಆಸ್ಪತ್ರೆಯ ನಾಗರಾಜು ಅವರು ಆಯುಷ್ಮಾನ್ ಆರೋಗ್ಯ ಕರ್ನಾಟಕ ಕಾರ್ಡ್‌ನಲ್ಲಿ ಸಿಗುವ ಸೌಲಭ್ಯದ ಬಗ್ಗೆ ಅರಿವು ಮೂಡಿಸಿ ವಿವರವಾಗಿ ತಿಳಿಸಿಕೊಟ್ಟರು. ಪಿಎಸ್‌ಐ ಆಸ್ಪತ್ರೆಯ ಹಿರಿಯ ಆಪ್ತ ಸಮಾಲೋಚಕ ಗೋಪಾಲ್ ಅವರು ಎಚ್‌ಐವಿ ಟಿಬಿ ಮತ್ತು ಲೈಂಗಿಕ ಸೋಂಕುಗಳ ಬಗ್ಗೆ ಅರಿವು ಮೂಡಿಸಿದರು. ಕಾರ್ಯಕ್ರಮದಲ್ಲಿ ನೂರಕ್ಕೂ ಹೆಚ್ಚು ಫಲಾನುಭವಿಗಳು ಇದರ ಉಪಯೋಗವನ್ನು ಪಡೆದುಕೊಂಡರು.



ಪರಿವರ್ತನ ರಂಗ ಸಮಾಜ ಹಾಗೂ ನಮನ ಕಲಾ ವೇದಿಕೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 10 ದಿನಗಳ ಅಭಿನಯ ತರಬೇತಿ ಕಾರ್ಯಾಗಾರದ ಮುಕ್ತಾಯ ಸಮಾರಂಭದಲ್ಲಿ ಶಿಬಿರದ ಸಂಚಾಲಕಿ ಯಶಸ್ವಿನಿ ಆರ್., ಪರಿವರ್ತನದ ಅಧ್ಯಕ್ಷ ಎಸ್.ಆರ್.ರಮೇಶ್ ಹಾಗೂ ಖ್ಯಾತ ಟಿ.ವಿ. ನಟ ಶಿವಾಜಿರಾವ್ ಜಾಧವ್ ಅವರು ಹಾಜರಿದ್ದರು

ಹಿಜಾಬ್ ನಿಷೇಧ ಹಿಂಪಡೆಯುವಂತೆ ಅಮ್ನೆಸ್ಟಿ ಇಂಡಿಯಾ ಆಗ್ರಹ

ಬೆಂಗಳೂರು, ಮೇ 25– ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳು ಹಿಜಾಬ್ ಧರಿಸುವುದರ ಮೇಲೆ ಹೇರಲಾಗಿರುವ ನಿಷೇಧ ಹಿಂಪಡೆಯುವಂತೆ ರಾಜ್ಯ ಸರ್ಕಾರಕ್ಕೆ ಆಮ್ನೆಸ್ಟಿ ಇಂಡಿಯಾ ಆಗ್ರಹಿಸಿದೆ. ಈ ಸಂಬಂಧ ಸರಣಿ ಟ್ವೀಟ್ ಮಾಡಿರುವ ಅಮ್ನೆಸ್ಟಿ ಇಂಡಿಯಾ, ರಾಜ್ಯ ಸರ್ಕಾರವು ಮಾನವ ಹಕ್ಕುಗಳಿಗೆ ಆದ್ಯತೆ ನೀಡಬೇಕು. ಅದನ್ನು ಎತ್ತಿಹಿಡಿಯಬೇಕು. ಆದ್ಯತೆಯ ಮೇಲೆ ಸರ್ಕಾರ ಕಾರ್ಯ ನಿರ್ವಹಿಸಬೇಕೆಂದು ಹೇಳಿದೆ. ಅಲ್ಲದೆ, ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳು ಹಿಜಾಬ್ ಧರಿಸುವುದರ ಮೇಲೆ ಹೇರಲಾಗಿರುವ ನಿಷೇಧವನ್ನು ಕೂಡಲೇ ಹಿಂಪಡೆಯುವಂತೆಯೂ ಆಗ್ರಹಿಸಿದೆ. ಹಿಜಾಬ್ ನಿಷೇಧ'ವು ಮುಸ್ಲಿಂ ಹುಡುಗಿಯರ ಅಭಿವ್ಯಕ್ತಿ ಸ್ವಾತಂತ್ರ್ಯ ಮತ್ತು ಧರ್ಮದ ಹಕ್ಕು ಮತ್ತು ಶಿಕ್ಷಣದ ಹಕ್ಕುಗಳ ಕುರಿತು ಆಯ್ಕೆ ಮಾಡಿಕೊಳ್ಳುವಂತೆ ಒತ್ತಾಯಿಸುತ್ತದೆ, ಸಮಾಜದಲ್ಲಿ ಅರ್ಥಪೂರ್ಣವಾಗಿ ಭಾಗವಹಿಸುವ ಸಾಮರ್ಥ್ಯವನ್ನು ಇದು ತಡೆಯುತ್ತದೆ ಎಂದು ತಿಳಿಸಿದೆ.

ಜಾನುವಾರುಗಳ ಸಂರಕ್ಷಣೆ ಕಾಯಿದೆ 2020, ಧಾರ್ಮಿಕ ಸ್ವಾತಂತ್ರ್ಯದ ಕರ್ನಾಟಕ ರಕ್ಷಣೆಯ ಹಕ್ಕು ಮಸೂದೆ 2022 ರಲ್ಲಿನ ತಾರತಮ್ಯದ ನಿಬಂಧನೆಗಳನ್ನು ಪರಿಶೀಲಿಸಬೇಕು ಮತ್ತು ರದ್ದುಗೊಳಿಸಬೇಕು ಎಂದು ಸಂಘಟನೆ ಒತ್ತಾಯಿಸಿದೆ.

ಈ ನಡುವೆ ಅಮ್ನೆಸ್ಟಿ ಇಂಡಿಯಾದ ಆಗ್ರಹ ಕುರಿತು ಪ್ರತಿಕ್ರಿಯೆ ನೀಡಲು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ನಿರಾಕರಿಸಿದ್ದಾರೆ.

ರಾಂಚಿಯಲ್ಲಿ ಭಾರತದ ಅತಿ ದೊಡ್ಡ ಹೈಕೋರ್ಟ್ ಕಟ್ಟಡ; ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟನೆ



ರಾಂಚಿ: ರಾಂಚಿಯಲ್ಲಿನ ದೇಶದ ಅತೀ ದೊಡ್ಡ ಹೈಕೋರ್ಟ್ ಕಟ್ಟಡವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಉದ್ಘಾಟಿಸಿದರು. 165 ಎಕರೆ ಭೂಮಿಯಲ್ಲಿ ಹರಡಿರುವ 550 ಕೋಟಿ ರೂ ವೆಚ್ಚದ ಹೈಕೋರ್ಟ್ ಕಟ್ಟಡವು 25 ಹವಾನಿಯಂತ್ರಿತ ನ್ಯಾಯಾಲಯ ಕೊಠಡಿಗಳನ್ನು ಮತ್ತು 1,200 ವಕೀಲರು ಕುಳಿತುಕೊಳ್ಳುವ ಸಾಮರ್ಥ್ಯದ ಎರಡು ದೊಡ್ಡ ಸಭಾಂಗಣಗಳನ್ನು ಹೊಂದಿದ್ದು, ಅವರಿಗೆ 540 ಚೇಂಬರ್‌ಗಳು ಇವೆ. ಕಟ್ಟಡವು 2000 ಏಗಿಂ ಸೌರ ವಿದ್ಯುತ್ ಸ್ಥಾವರವನ್ನು ಸಹ ಹೊಂದಿದೆ. ಇದು ಇಡೀ ಕ್ಯಾಂಪಸ್‌ನ ಒಟ್ಟು ವಿದ್ಯುತ್ ಅವಶ್ಯಕತೆಯ 60 ಪ್ರತಿಶತವನ್ನು ಪೂರೈಸುತ್ತದೆ.

ಕಟ್ಟಡವನ್ನು ಉದ್ಘಾಟಿಸಿದ ರಾಷ್ಟ್ರಪತಿಗಳು, ಭಾರತದ ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್, ಕಾನೂನು ಮತ್ತು ನ್ಯಾಯಾಂಗ ಸಚಿವ ಅರ್ಜುನ್ ರಾಮ್ ಮೇಘವಾಲ್ ಮತ್ತು ಸರ್ಕಾರವು ನ್ಯಾಯಾಲಯದ ಹೊರತಾಗಿಯೂ ನ್ಯಾಯವನ್ನು ಪಡೆಯದ ಬಡವರಿಗೆ 'ನೈಜ ನ್ಯಾಯ'ವನ್ನು ಖಾತರಿಪಡಿಸುವ ಮಾರ್ಗವನ್ನು ಕಂಡುಕೊಳ್ಳುವಂತೆ ಹೇಳಿದರು.

ಕೌಟುಂಬಿಕ ಸಲಹಾ ಕೇಂದ್ರದ ಸದಸ್ಯೆಯಾಗಿ ಕೆಲಸ ಮಾಡುತ್ತಿದ್ದಾಗ ತಾನು ನೀಡಿದ ಕೌನ್ಸಿಲಿಂಗ್‌ನಿಂದ ಅವರು ನಿಜವಾಗಿಯೂ ಪ್ರಯೋಜನ ಪಡೆದಿದ್ದಾರೆ ಎಂದು ಖಚಿತಪಡಿಸಿಕೊಳ್ಳಲು ಕುಟುಂಬಗಳನ್ನು ಭೇಟಿ ಮಾಡುತ್ತಿದ್ದುದನ್ನು ಅವರು ನೆನಪಿಸಿಕೊಂಡರು. ಸುದೀರ್ಘ ಕಾನೂನು ಹೋರಾಟದ ನಂತರ ನ್ಯಾಯಾಲಯದಿಂದ ನ್ಯಾಯ ಪಡೆಯುವ ಬಡವರು ಬೇರೆ ಯಾವುದೇ ಕಾರಣಕ್ಕೂ ನ್ಯಾಯದಿಂದ ವಂಚಿತರಾಗದಂತೆ ನೋಡಿಕೊಳ್ಳಲು ಇದೇ ರೀತಿಯ ಉಪಕ್ರಮಗಳನ್ನು ಯೋಜಿಸಬಹುದು.



ತಮ್ಮ ಭಾಷಣದ ಸಮಯದಲ್ಲಿ, ರಾಷ್ಟ್ರಪತಿಗಳು ನ್ಯಾಯಾಂಗ ವ್ಯವಸ್ಥೆಯಲ್ಲಿ ಸ್ಥಳೀಯ ಭಾಷೆಗಳನ್ನು ಸೇರಿಸಲು ಒತ್ತಾಯಿಸಿದರು. ಜಾರ್ಖಂಡ್‌ಗೆ ಅದರ ಭಾಷಾ ವೈವಿಧ್ಯತೆಯಿಂದಾಗಿ ಅದು ಹೆಚ್ಚು ಅಗತ್ಯವಿದೆ ಎಂದು ಒತ್ತಿ ಹೇಳಿದರು. ಭಾರತದ ಮುಖ್ಯ ನ್ಯಾಯಮೂರ್ತಿಯವರು ಹಿಂದಿಯಲ್ಲಿ ಭಾಷಣ ಮಾಡಲು ಮುಂದಾಗಿರುವುದನ್ನು ರಾಷ್ಟ್ರಪತಿಗಳು ಶ್ಲಾಘಿಸಿದರು. ಇತರ ನ್ಯಾಯಾಧೀಶರು ಕೂಡ ಇದನ್ನು ಅನುಸರಿಸುವ ಅಗತ್ಯವಿದೆ ಎಂದು ಹೇಳಿದರು.

ಸ್ಪರ್ಧೆಯಲ್ಲಿ ಭಾಗವಹಿಸುವುದು ಮುಖ್ಯ: ಶ್ರೀಧರ್ ಜೈನ್



ಮೈಸೂರು, ಮೇ 25– ನಗರದ ಕೆ.ಆರ್.ಎಸ್ ರಸ್ತೆಯಲ್ಲಿರುವ ಜಿಎಸ್‌ಎಸ್‌ಎಸ್ ಸಿಂಹಸುಬ್ಬ ಮಹಾಲಕ್ಷ್ಮಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಇಂದು ರಾಜ್ಯ ಮಟ್ಟದ ಗೀತಾ ಸಂಹಿತ ಕಾರ್ಯಕ್ರಮ ಪ್ರಾರಂಭವಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿದ್ದ ನಟ ಶ್ರೀಧರ್ ಜೈನ್ ಜ್ಯೋತಿ ಬೆಳಗಿಸಿ ಮಾತನಾಡಿ, ಸ್ಪರ್ಧೆಯಲ್ಲಿ ಭಾಗವಹಿಸುವುದು ಮುಖ್ಯವೇ ಹೊರತು ಬಹುಮಾನವಲ್ಲ. ಸ್ಪರ್ಧೆಯಲ್ಲಿ ಭಾಗವಹಿಸುವುದರಿಂದ ಸಾಧನೆ ಮಾಡಬೇಕೆಂಬ ಛಲ ಹುಟ್ಟಿ ಪೈಪೋಟಿಗಿಳಿದು ಬಹುಮಾನ ಗೆಲ್ಲುವ ಹುಮ್ಮಸ್ಸು ಬರುತ್ತದೆ. ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಮೌಲ್ಯಗಳು ಬೆಳೆಯಬೇಕು, ಮೊಬೈಲ್ ಫೋನ್‌ಗಳಿಗೆ ದಾಸರಾಗಿ ಅವಶ್ಯಕತೆಗೆ ಮೀರಿ ತಂತ್ರಜ್ಞಾನಗಳನ್ನು ಬಳಕೆ ಮಾಡಿಕೊಂಡು ಅಪಾಯದ ಸ್ಥಿತಿಗೆ ಬಂದಿರುವುದು ಬಹಳ ಬೇಸರದ ಸಂಗತಿ ಎಂದರು. ಶಿಸ್ತು ಮತ್ತು ಸಮಯ ವಿದ್ಯಾರ್ಥಿ ಯಶಸ್ಸಿನ ಮೆಟ್ಟಿಲುಗಳಾಗುತ್ತವೆ ಎಂದು ಅಭಿಪ್ರಾಯಿಸಿದರು.

ಮೈಸೂರು ಚಾಪ್ಟರ್ ಆಫ್ ಐಸಿಎಸ್‌ಐ ಸಂಸ್ಥೆಯ ಅಧ್ಯಕ್ಷರಾದ ಡಾ. ವಿಜಯ ರಾವ್ ಮಾತನಾಡಿ, ಶಿಕ್ಷಣದ ಮಹತ್ವ ಹಾಗೂ ನೈತಿಕ ಮೌಲ್ಯಗಳ ಬಗ್ಗೆ ವಿವರಿಸಿದರು. ಜಿಎಸ್‌ಎಸ್‌ಎಸ್ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಡಾ. ಶಿವಕುಮಾರ್ ಉಪಸ್ಥಿತರಿದ್ದರು.

ಕಾಲೇಜಿನ ಪ್ರಾಂಶುಪಾಲರಾದ ಡಾ॥ ರಾಕೇಶ್ ಟಿ.ಎಸ್, ಅಧ್ಯಕ್ಷತೆ ವಹಿಸಿ ಮಾತನಾಡಿ ವಿದ್ಯಾರ್ಥಿಗಳು ತಮ್ಮಲ್ಲಿ ಅಡಗಿರುವ ಪ್ರತಿಭೆಗಳನ್ನು ಹೊರತರಲು ಸಾಂಸ್ಕೃತಿಕ ವೇದಿಕೆಗಳು ಸಹಕಾರಿಯಾಗುತ್ತವೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಆನಂದ್, ಗಣಕವಿಜ್ಞಾನ ವಿಭಾಗದ ಮುಖ್ಯಸ್ಥರಾದ ಶೃತಿ ಡಿ. ಉಪಸ್ಥಿತರಿದ್ದರು. ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಕಂಸಲಪೂಜಾ ಸ್ವಾಗತಿಸಿದರೆ, ಸಿಂಹ ವೈ.ಎನ್. ವಂದಿಸಿದರು, ಪ್ರಾಧ್ಯಾಪಕರಾದ ಶೃತಿ ಎಸ್. ಅತಿಥಿಗಳ ಪರಿಚಯ ಮಾಡಿಕೊಟ್ಟರು. ನಂತರ ವಿವಿಧ ಕಾಲೇಜಿ ನಿಂದ ಬಂದ ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಚಾ.ನಗರದಲ್ಲಿ ಭವಿಷ್ಯ ನಿಧಿ ಸಂಬಂಧ ಕಾರ್ಯಕ್ರಮ

ಮೈಸೂರು, ಮೇ 25– ಕ್ಷೇತ್ರೀಯ ಭವಿಷ್ಯ ನಿಧಿ ಮೈಸೂರು ಪ್ರಾದೇಶಿಕ ಕಚೇರಿ ವತಿಯಿಂದ 'ಭವಿಷ್ಯ ನಿಧಿ ನಿಮ್ಮ ಹತ್ತಿರ' 2.0 ಅಡಿಯಲ್ಲಿ ಜಿಲ್ಲಾ ವ್ಯಾಪ್ತಿಯ ಕಾರ್ಯಕ್ರಮವನ್ನು ಮೇ 29(ಸೋಮವಾರ) ಬೆಳಗ್ಗೆ 9 ಗಂಟೆಯಿಂದ ಚಾಮರಾಜನಗರ ಜಿಲ್ಲೆ ಡಿಸಿ ಕಾಂಪ್ಲೆಕ್ಸ್ ನೆಲಮಾಳಿಗೆ ಕೆಡಿಪಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಪಿಎಫ್ ಸದಸ್ಯರು, ಪಿಂಚಣಿದಾರರು, ಉದ್ಯೋಗದಾತರು, ನಾನಾ ಮಾಹಿತಿಗಾಗಿ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬಹುದು. ಹೆಚ್ಚಿನ ವಿವರಗಳಿಗೆ ಸಾರ್ವಜನಿಕ ಸಂಪರ್ಕ ಅಧಿಕಾರಿಯನ್ನು 0821– 2599200/222 ಮೂಲಕ ಸಂಪರ್ಕಿಸಬಹುದು. ಇಲ್ಲವೆ ಕ್ಷೇತ್ರೀಯ ಭವಿಷ್ಯ ನಿಧಿ ಕಚೇರಿ ಮೈಸೂರಿನ ಸಾಮಾಜಿಕ ಮಾಧ್ಯಮ ವೇದಿಕೆ (@epfomysore) ಇದಕ್ಕೆ ಭೇಟಿ ನೀಡಬಹುದು.

ಬ್ರಾಹ್ಮಣ ವಧು–ವರಾನ್ವೇಷಣಾ ಸಮಾವೇಶ

ಮೈಸೂರು, ಮೇ 25– ಮೈಸೂರಿನ ಸಪ್ತಪದಿ ಫೌಂಡೇಷನ್ ಟ್ರಸ್ಟ್ ಹಾಗೂ ಬೆಂಗಳೂರಿನ ಬ್ರಾಹ್ಮಣ ವಿವಿಧ ಸಂಘಟನೆಗಳ ಸಹಯೋಗದಲ್ಲಿ ರಾಜಾಜಿನಗರದಲ್ಲಿರುವ ಶ್ರೀ ಶಂಕರ ಸೇವಾ ಸಮಿತಿ ಮುಂಭಾಗ ಮೇ 28 ರಂದು ಬೆಳಗ್ಗೆ 9.30ಕ್ಕೆ 48ನೇ ರಾಜ್ಯ ಮಟ್ಟದ ಬ್ರಾಹ್ಮಣ ವಧು–ವರಾನ್ವೇಷಣಾ ಸಮಾವೇಶವನ್ನು ಆಯೋಜಿಸಲಾಗಿದೆ. ಆಸಕ್ತ ವಧುವರರು ಭಾಗವಹಿಸಿ ಕಾರ್ಯಕ್ರಮ ಸದುಪಯೋಗಪಡಿಸಿಕೊಳ್ಳಲು ಕೋರಲಾಗಿದೆ. ಮಾಹಿತಿಗೆ ಮೊ.9449425536, 8217876335 ಸಂಪರ್ಕಿಸಬಹುದು.

ವಿಶೇಷಚೇತನ ವಿದ್ಯಾರ್ಥಿಗಳಿಗೆ ಡಿಪ್ಲೋಮಾಗೆ ಅವಕಾಶ

ಮೈಸೂರು, ಮೇ 25– ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ಎರಡು ವರ್ಷಗಳ ಐಟಿಐ, ಪಿಯುಸಿ ಸೈನ್ಸ್ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ವಿಶೇಷಚೇತನ ವಿದ್ಯಾರ್ಥಿಗಳಿಗೆ ಡಿಪ್ಲೋಮಾ ಕೋರ್ಸ್‌ಗಳಿಗೆ 2023–24ನೇ ಸಾಲಿನಲ್ಲಿ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಹಿಂದಿರುಗಿಸಲು ಜೂ.17 ಕೊನೆ ದಿನ ಆಗಿರುತ್ತದೆ. ಮಾಹಿತಿಗೆ ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್, ದೂ.ಸಂ. 0821–2548315.

ಶಿಕ್ಷಕರು ಪ್ರೀತಿ-ವಿಶ್ವಾಸ, ಶ್ರದ್ಧೆಯಿಂದ ಬೋಧಿಸಿದರೆ ಮಕ್ಕಳ ಜೊತೆಗೆ ದೇಶದ ಅಭಿವೃದ್ಧಿ

ಇನ್ಫೋಸಿಸ್ ಫೌಂಡೇಷನ್ ಸಂಸ್ಥಾಪಕ ನಾರಾಯಣಮೂರ್ತಿ ಅಭಿಮತ





ಸುತ್ತೂರು, ಮೇ 25–ತರ್ಕ ಜಗತ್ತನ್ನು ಬಿಟ್ಟು ನಂಬಿಕೆಯ ಜಗತ್ತಿನಲ್ಲಿ ನಾವು ಬಾಳಬೇಕು ಎಂದು ಇನ್ಫೋಸಿಸ್ ಪ್ರತಿಷ್ಠಾನದ ಸಂಸ್ಥಾಪಕರಾದ ನಾರಾಯಣ ಮೂರ್ತಿಯವರು ತಿಳಿಸಿದರು.

ಅವರು ಶ್ರೀ ಸುತ್ತೂರು ಕ್ಷೇತ್ರಕ್ಕೆ ಮೇ 24ರಂದು ಭೇಟಿ ನೀಡಿದ್ದ ಸಂದರ್ಭದಲ್ಲಿ ಜೆಎಸ್‌ಎಸ್ ಸಂಸ್ಥೆಗಳ ಕನ್ನಡ ಮತ್ತು ಆಂಗ್ಲ ಭಾಷಾ ಶಿಕ್ಷಕರು ಹಾಗೂ ವಿಶ್ವ ಹಿಂದೂ ಪರಿಷತ್‌ನಿಂದ ಏರ್ಪಡಿಸಲಾಗಿದ್ದ ಕಾರ್ಯಾಗಾರದಲ್ಲಿ ಭಾಗವಹಿಸಿದ್ದ ಶಿಕ್ಷಕರನ್ನು ಉದ್ದೇಶಿಸಿ ಮಾತನಾಡಿದರು. ಗುರುವಿನ ಆಶೀರ್ವಾದದಿಂದ ಧೈರ್ಯ, ವಿಶ್ವಾಸ ಮತ್ತು ಶಾಂತಿಯನ್ನು ಪಡೆಯಬೇಕು. ಶಿಕ್ಷಕರು ಮಕ್ಕಳಿಗೆ ಪ್ರೀತಿ, ವಿಶ್ವಾಸ, ಶ್ರದ್ಧೆಯಿಂದ ಬೋಧನೆ ಮಾಡಿದರೆ, ಮಕ್ಕಳ ಶೈಕ್ಷಣಿಕ ಅಭಿವೃದ್ಧಿಯೊಂದಿಗೆ ದೇಶದ ಅಭಿವೃದ್ಧಿಯೂ ಆಗುತ್ತದೆ ಎಂದು ತಿಳಿಸಿದರು.

ಇನ್ಫೋಸಿಸ್ ಪ್ರತಿಷ್ಠಾನದ ಅಧ್ಯಕ್ಷರಾದ ಸುಧಾಮೂರ್ತಿಯವರು, ಜೀವನದಲ್ಲಿ ಏನು ಮಾಡಬೇಕು ಎನ್ನುವುದರ ಬದಲು ಹೇಗೆ ಮಾಡಬೇಕು ಎಂಬುದನ್ನು ಅರಿತಿರಬೇಕು. ದೇಶದ ಪ್ರಗತಿ ಮಾತು, ಶಬ್ದ ಹಾಗೂ ಸಾಹಿತ್ಯದ ಪುಟಗಳಲ್ಲಿ ಇಲ್ಲ. ಅದು ಮಾಡುವ ಕೆಲಸದಲ್ಲಿದೆ. ಶಿಕ್ಷಕರು ಮಾತಿನಲ್ಲಿ ಪ್ರೀತಿ, ಕರುಣೆ, ವಿಶ್ವಾಸ ನಂಬಿಕೆ ಹೊಂದಿದ್ದರೆ ಮಕ್ಕಳಲ್ಲಿ ಕಲಿಕಾ ಮನೋಭಾವ ವೃದ್ಧಿಸುತ್ತದೆ. ಕರ್ನಾಟಕವಲ್ಲದೆ ಆಂಧ್ರಪ್ರದೇಶ, ತಮಿಳುನಾಡು, ಮಹಾರಾಷ್ಟ್ರ, ತೆಲಂಗಾಣ, ಉತ್ತರ ಪ್ರದೇಶ, ಜಾರ್ಖಂಡ್ ಹಾಗೂ ಈಶಾನ್ಯ ರಾಜ್ಯಗಳ ವಿದ್ಯಾರ್ಥಿಗಳನ್ನು ಒಳಗೊಂಡಂತೆ ಸಾವಿರಾರು ವಿದ್ಯಾರ್ಥಿಗಳಿಗೆ ಪೂಜ್ಯರು ಸುತ್ತೂರಿನ ವಸತಿ ಶಾಲೆಯಲ್ಲಿ ಸಂಸ್ಕೃತಿ ಮತ್ತು ಸಂಸ್ಕಾರವನ್ನು ನೀಡುತ್ತಿರುವುದು ಮಾನವೀಯತೆಯ ಶ್ರೇಷ್ಠ ಕೆಲಸವಾಗಿದೆ ಎಂದರು.

ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರು, ಕನ್ನಡ ನಾಡು ಮತ್ತು ದೇಶವನ್ನು ಅಭಿವೃದ್ಧಿ ಮಾಡಬೇಕು ಎಂಬ ಬಯಕೆಯನ್ನು ಹೊಂದಿರುವ ನಾರಾಯಣ ಮೂರ್ತಿ ಮತ್ತು ಸುಧಾ ಮೂರ್ತಿ ದಂಪತಿ ಶಿಕ್ಷಕರಿಗೆ ಕಳಶಪ್ರಾಯದಂತಿದ್ದಾರೆ. ಶಿಕ್ಷಕರಲ್ಲಿ ಶ್ರದ್ಧೆ, ಧೈರ್ಯ, ನಂಬಿಕೆ ಇದ್ದರೆ ಜಗತ್ತನ್ನೇ ಗೆಲ್ಲುವ ಮಕ್ಕಳನ್ನು ಸೃಷ್ಟಿಸಲು ಸಾಧ್ಯ. ಸಂಸ್ಕೃತಿ ಮತ್ತು ಸಂಸ್ಕಾರ ಶ್ರೇಷ್ಠವಾದದ್ದು. ಅದನ್ನು ಪ್ರತಿಯೊಬ್ಬರೂ ಹೊಂದಿರಬೇಕು. ಇಡೀ ಜಗತ್ತನ್ನೇ ಸುತ್ತಿ ನೋಡಿದರು ಭಾರತದಂತಹ ದೇಶ ಮತ್ತೊಂದಿಲ್ಲ, ಇಲ್ಲಿರುವವರೇ ಧನ್ಯರು. ಉತ್ತಮ ಸಂಸ್ಕಾರದಿಂದ ಜಗತ್ತಿಗೆ ಬೇಕಾದದ್ದನ್ನು ಕೊಡಲು ಸಾಧ್ಯ. ವೃತ್ತಿಯಲ್ಲಿ ಪ್ರಾವೀಣ್ಯತೆ ಮತ್ತು ವಿಶ್ವಾಸದಿಂದ ಕೆಲಸ ಮಾಡಬೇಕು ಎಂದು ತಿಳಿಸಿದರು.

ಇದಕ್ಕೂ ಮೊದಲು ನಾರಾಯಣ ಮೂರ್ತಿ ಕುಟುಂಬದವರು ಆದಿಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಕರ್ತೃ ಗದ್ದುಗೆಗೆ ಸಲ್ಲಿಸಿದ ವಿಶೇಷ ಪೂಜೆಯಲ್ಲಿ ಪಾಲ್ಗೊಂಡಿದ್ದರು.

ಕಾರ್ಯಕ್ರಮದಲ್ಲಿ ಸುಧಾಮೂರ್ತಿಯವರ ಸಹೋದರ ಅಮೆರಿಕಾದ ಕ್ಯಾಲಿಪೋರ್ನಿಯಾದಲ್ಲಿ ಖಗೋಳ ವಿಜ್ಞಾನಿಗಳಾಗಿರುವ ಶ್ರೀನಿವಾಸ ಕುಲಕರ್ಣಿ, ವಿಶ್ವ ಹಿಂದೂ ಪರಿಷತ್‌ನ ಕೇಶವಮೂರ್ತಿ ಇತರರು ಉಪಸ್ಥಿತರಿದ್ದರು. ಸಂಯೋಜನಾಧಿಕಾರಿಗಳಾದ ಜಿ.ಎಲ್. ತ್ರಿಪುರಾಂತಕ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು.

ಮೈಸೂರು ಮಿತ್ರ

ಶಾಸಕ ಪೊನ್ನಣ್ಣರಿಗೆ ಸಚಿವ ಸ್ಥಾನ ನೀಡದಿದ್ದರೆ ಪಕ್ಷಾತೀತ ಹೋರಾಟ

ಅಖಿಲ ಕೊಡವ ಸಮಾಜ ನೇತೃತ್ವದ ಸಭೆಯಲ್ಲಿ ನಿರ್ಣಯ ಅಂಗೀಕಾರ

● ಅಗತ್ಯಬಿದ್ದರೆ ಮೂಲ ನಿವಾಸಿಗಳ ಒಗ್ಗೂಡಿಕೆ ● ಕೊಡವ ಜನಾಂಗಕ್ಕೆ ಉತ್ತಮ ಪ್ರತಿನಿಧಿ



ಮಡಿಕೇರಿ, ಮೇ 25– ವಿರಾಜಪೇಟೆ ವಿಧಾನಸಭಾ ಕ್ಷೇತ್ರದಿಂದ ವಿಧಾನಸಭೆಗೆ ಆಯ್ಕೆಯಾಗಿರುವ ಕೊಡವ ಜನಾಂಗದ ಏಕೈಕ ಪ್ರತಿನಿಧಿಯಾಗಿರುವ ಎ.ಎಸ್. ಪೊನ್ನಣ್ಣ ಅವರಿಗೆ ಸಚಿವ ಸ್ಥಾನ ನೀಡಬೇಕು. ಅವರು ಕಿರಿಯ ಶಾಸಕರೆಂದು ಸಚಿವ ಸ್ಥಾನ ನೀಡಲು ಹಿಂದೇಟು ಹಾಕಿದರೆ ಜಿಲ್ಲೆಯಲ್ಲಿ ಪಕ್ಷಭೇದ ಮರೆತು ಬೃಹತ್ ಹೋರಾಟ ಹಮ್ಮಿಕೊಳ್ಳಬೇಕಾಗುತ್ತದೆ. ಅಗತ್ಯವಿದ್ದಲ್ಲಿ ಕೊಡಗಿನ ಮೂಲ ನಿವಾಸಿಗಳನ್ನೂ ಒಂದುಗೂಡಿಸಿ ಪಕ್ಷಾತೀತವಾಗಿ ಪ್ರತಿಭಟನೆ ನಡೆಸಲು ಅಖಿಲ ಕೊಡವ ಸಮಾಜದ ನೇತೃತ್ವದಲ್ಲಿ ನಡೆದ ಜಿಲ್ಲೆಯ ವಿವಿಧ ಕೊಡವ ಸಮಾಜ ಹಾಗೂ ಕೊಡವ ಸಂಘಟನೆಗಳ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಶಾಸಕ ಎ.ಎಸ್ ಪೊನ್ನಣ್ಣ ಅವರಿಗೆ ಸಚಿವ ಸ್ಥಾನ ನೀಡುವ ಅಖಿಲ ಕೊಡವ ಸಮಾಜ ಸಭಾಂಗಣದಲ್ಲಿ ಜಿಲ್ಲೆಯ ವಿವಿಧ ಕೊಡವ ಸಮಾಜ ಹಾಗೂ ಕೊಡವ ಸಂಘ–ಸಂಸ್ಥೆಗಳ ಸಭೆ ನಡೆಸಲಾಯಿತು. ಅಖಿಲ ಕೊಡವ ಸಮಾಜ ಅಧ್ಯಕ್ಷ ಪರದಂಡ ಸುಬ್ರಮಣಿ ಕಾವೇರಪ್ಪ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಶಾಸಕ ಪೊನ್ನಣ್ಣನವರಿಗೆ ಸಚಿವ ಸ್ಥಾನ ನೀಡದಿದ್ದರೆ ಒಗ್ಗಟ್ಟಿನ ಹೋರಾಟ ನಡೆಸಲು ಸಭೆ ತಿರ್ಮಾನಿಸಿ ಸದ್ಯದಲ್ಲಿಯೇ ಮುಖ್ಯಮಂತ್ರಿ ಹಾಗೂ ವರಿಷ್ಠರ ಬಳಿ ನಿಯೋಗ ತೆರಳಲು ಸಭೆ ತೀರ್ಮಾನಿಸಿತು.

ಅಖಿಲ ಕೊಡವ ಸಮಾಜದ ಅಧ್ಯಕ್ಷ ಪರದಂಡ ಸುಬ್ರಮಣಿ ಕಾವೇರಪ್ಪ ಮಾತನಾಡಿ, ಸುದೀರ್ಘ ಅವಧಿಯ ಬಳಿಕ ಕೊಡವ ಜನಾಂಗಕ್ಕೆ ಒಬ್ಬರು ಉತ್ತಮ ಜನಪ್ರತಿನಿಧಿ ಸಿಕ್ಕಿದ್ದಾರೆ. ಜನಾಂಗದ ಹಿತದೃಷ್ಟಿಯಿಂದ ಹಾಗೂ ಜಿಲ್ಲೆಯ ಅಭಿವೃದ್ಧಿಯ ಹಿತದೃಷ್ಟಿಯಿಂದ ಎ.ಎಸ್ ಪೊನ್ನಣ್ಣ ಅವರಿಗೆ ಸಚಿವ ಸ್ಥಾನ ನೀಡಬೇಕಿದೆ ಇದರಲ್ಲಿ ಯಾವುದೇ ರಾಜಕೀಯ ಲೇಪ ಹಾಕದೆ ಪಕ್ಷಾತೀತವಾಗಿ ಎಲ್ಲರೂ ಒಂದಾಗಬೇಕಿದೆ ಎಂದು ಹೇಳಿದರು. ಮಾಜಿ ಎಂ.ಎಲ್.ಸಿ ಅರುಣ್ ಮಾಚಯ್ಯ ಮಾತನಾಡಿ, ವಿರಾಜಪೇಟೆ ಕ್ಷೇತ್ರದಲ್ಲಿ ಕೊಡವ ಜನಾಂಗದ ಪೊನ್ನಣ್ಣ ಶಾಸಕರಾಗಿದ್ದಾರೆ. ಅವರ ಪಕ್ಷ ಯಾವುದೇ ಇದ್ದರು ಇಂದು ಅವರು ಪಕ್ಷಾತೀತರು ಎಂದು ಅಭಿಪ್ರಾಯಪಟ್ಟರು.

ಕೊಡವ ಸಮಾಜಗಳ ಒಕ್ಕೂಟದ ಕಾರ್ಯದರ್ಶಿ ವಾಟೇರಿರ ಪೂವಯ್ಯ ಮಾತನಾಡಿ, ಕೊಡಗಿನ ಗಂಭೀರ ಸಮಸ್ಯೆಗಳು ಪರಿಹಾರ ಕಾಣಬೇಕಾದರೆ ಈಗಿನ ಶಾಸಕರಿಗೆ ಮಂತ್ರಿ ಸ್ಥಾನ ನೀಡಬೇಕು. ನಮ್ಮದೆ ಸಚಿವರು, ನಮ್ಮದೇ ಉಸ್ತುವಾರಿ ಇದ್ದರೆ ಆಡಳಿತ ಸುಗಮವಾಗಿ ಸಾಗುತ್ತದೆ. ಅಖಿಲ ಕೊಡವ ಸಮಾಜ ನೇತೃತ್ವದಲ್ಲಿ ಮುಖ್ಯಮಂತ್ರಿ ಬಳಿ ನಿಯೋಗ ತೆರಳಿ ಬೇಡಿಕೆ ಸಲ್ಲಿಸೋಣ ಎಂದರು.

ಅಖಿಲ ಕೊಡವ ಸಮಾಜ ಯೂತ್ ವಿಂಗ್ ಅಧ್ಯಕ್ಷ ಚಮ್ಮಟೀರ ಪ್ರವೀಣ್ ಉತ್ತಪ್ಪ, ಅಖಿಲ ಕೊಡವ ಸಮಾಜದ ಉಪಾಧ್ಯಕ್ಷ ಅಜ್ಜಿಕುಟ್ಟಿರ ಸುಬ್ರಮಣಿ ಮಾದಯ್ಯ, ಖಜಾಂಚಿ ಮಂಡೇಪಂಡ ಸುಗುಣ ಮುತ್ತಣ್ಣ ಮತ್ತು ಕಾರ್ಯದರ್ಶಿ ಅಮ್ಮಣಿಚಂಡ ರಾಜ ನಂಜಪ್ಪ, ಜಬ್ಬೂಮಿ ಸಂಘಟನೆಯ ಸಂಚಾಲಕ ಚೊಟ್ಟೆಕ್‌ಮಾಡ ರಾಜೀವ್ ಬೋಪಯ್ಯ, ವಿರಾಜಪೇಟೆ ಕೊಡವ ಸಮಾಜದ ಕಾರ್ಯದರ್ಶಿ ಮಾಳೇಟಿರ ಶ್ರೀನಿವಾಸ್, ಹಿರಿಯ ನಾಗರಿಕರ ವೇದಿಕೆ ಅಧ್ಯಕ್ಷ ಮುಲ್ಲೇಂಗಡ ಶಂಕರಿ ಪೊನ್ನಪ್ಪ ಸೇರಿದಂತೆ ಹಲವರು ಮಾತನಾಡಿದರು.

ಪೊಮ್ಮಕ್ಕಡ ಪರಿಷತ್‌ನ ಮೂವೇರ ರೇಖಾ ಪ್ರಕಾಶ್, ಅಪ್ಪುಮಣಿಯಂಡ ತುಳಸಿ, ಮಾಳೇಟೀರ ರತ್ನ ಸುಬ್ಬಯ್ಯ, ಪೊನ್ನಂಪೇಟೆ ಕೊಡವ ಸಮಾಜದ ಗೌರವ ಕಾರ್ಯದರ್ಶಿ ಕೊಟೇರ ಕಿಶನ್ ಉತ್ತಪ್ಪ, ಕುಶಾಲನಗರ ಕೊಡವ ಸಮಾಜ ಅಧ್ಯಕ್ಷ ಮಂಡೇಪಂಡ ಬೋಸ್ ಮೊಣ್ಣಪ್ಪ, ವಿರಾಜಪೇಟೆ ಕೊಡವ ಸಮಾಜ ಅಧ್ಯಕ್ಷ ಕುಂಬೇರ ಮನು ಕುಮಾರ್, ಬೇರಳಿ ನಾಡ್ ತಕ್ಕ ಮಳವಂಡ ಭುವೇಶ್ ದೇವಯ್ಯ, ಕನೆಕ್ಟಿಂಗ್ ಕೊಡವ ಸಂಘಟನೆಯ ಅಪ್ಪಂಡೇರಂಡ ಯಶ್ವಂತ್ ಕಾಳಪ್ಪ, ಕೊಡವ ತಕ್ಕ್ ಎಳ್ತ್‌ಕಾರಡ ಕೂಟದ ಅಮ್ಮಣಿಚಂಡ ಪ್ರವೀಣ್ ಚೆಂಗಪ್ಪ, ತಿಂಗಕೋರ್ ಮೊಟ್ಟ್ ಮಲ್ಲಪನೆರ ವಿನು ಚೆಂಗಪ್ಪ, ಜಬ್ಬೂಮಿ ಸಂಘಟನೆಯ ಕಾರ್ಯದರ್ಶಿ ಅಣ್ಣೀರ ಹರೀಶ್ ಮಾದಪ್ಪ, ಪೊಂಬೊಳ್ಚ ಕೂಟದ ಕೊಟೇರ ಉದಯ್, ಅಮ್ಮತಿ ಕೊಡವ ಸಮಾಜದ ನೆಲ್ಲಚಂಡ ಭೀಮಯ್ಯ, ಚೆಯ್ಯಂಡಾಣೆ ಕೊಡವ ಸಮಾಜದ ಮುಂಡ್ಯೋಳಂಡ ಬಿದ್ದಪ್ಪ, ತೂಕ್ ಬೊಳಕ್ ಕಲೆ ಕ್ರೀಡೆ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಮುಲ್ಲೇಂಗಡ ಮಧೋಶ್ ಪೂವಯ್ಯ, ಕೊಡವಾಮೆ ಕೊಂಡಾಟ ಸಂಘಟನೆಯ ಕಾರ್ಯದರ್ಶಿ ಕುಂಞರ ಗಿರೀಶ್, ಪೂಮಾಲೆ ಮುಂದ್ ಕೊಡವ ಸಂಘದ ಅಜ್ಜಿನಿಕಂಡ ಸುದೀರ್, ವಿಜಯನಗರ ಕೊಡವ ಸಂಘದ ಮೇಕೇರಿರ ರವಿ ಪೂವಯ್ಯ, ಯುಕೋ ಸಂಚಾಲಕ ಕೊಕ್ಕಲೇಮಾಡ ಮಂಜು ಚಿಣ್ಣಪ್ಪ ಕೊಡವ ರೈಡರ್ಸ್ ಕ್ಲಬ್ ಸಂಚಾಲಕ ಅಜ್ಜಿಕುಟ್ಟಿರ ಸುಬ್ಬಯ್ಯ ಸೇರಿದಂತೆ ವಿವಿಧ ಕೊಡವ ಸಮಾಜದ ಪ್ರತಿನಿಧಿಗಳು ಸಂಘ ಸಂಸ್ಥೆಯ ಪ್ರಮುಖರು ಉಪಸ್ಥಿತರಿದ್ದರು.

ಮೇ 29ರಿಂದ ಕೊಡಗಲ್ಲಿ ಶಾಲೆ ಆರಂಭ

ಮಡಿಕೇರಿ, ಮೇ 25– ರಾಜ್ಯ ಪಠ್ಯಕ್ರಮದ ಸರ್ಕಾರಿ, ಅನುದಾನಿತ, ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ತರಗತಿಯು ಮೇ 29 ರಿಂದ ಆರಂಭವಾಗಲಿದ್ದು, ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕರಾದ ಸಿ.ರಂಗಧಾಮಯ್ಯ ತಿಳಿಸಿದ್ದಾರೆ.

ಪ್ರಸಕ್ತ 2023–24 ನೇ ಸಾಲಿನ ಶೈಕ್ಷಣಿಕ ಚಟುವಟಿಕೆಗಳು ಮೇ 29ರಿಂದ ಆರಂಭವಾಗಲಿದ್ದು, ರಾಜ್ಯಾದ್ಯಂತ ಏಕರೂಪ ಯಶಸ್ವಿ ಅನುಷ್ಠಾನಕ್ಕಾಗಿ ವಾರ್ಷಿಕ ಶೈಕ್ಷಣಿಕ ಮಾರ್ಗಸೂಚಿಯನ್ನು ಸರ್ಕಾರ ಸಿದ್ಧಪಡಿಸಿದೆ ಎಂದು ಅವರು ತಿಳಿಸಿದರು. ಪಾಠ ಹಂಚಿಕೆ, ಪಠ್ಯೇತರ ಚಟುವಟಿಕೆಗಳು, ಪರೀಕ್ಷೆ ಮತ್ತು ಮೌಲ್ಯಾಂಕನ ವಿಶ್ಲೇಷಣೆ, ಗುಣಮಟ್ಟದ ಶಿಕ್ಷಣಕ್ಕಾಗಿ ಫಲಿತಾಂಶ ಮುಖಿ ಚಟುವಟಿಕೆಗಳ ನಿರ್ವಹಣೆ ಹಾಗೂ ವಿವಿಧ ಶಾಲಾ ಹಂತದಲ್ಲಿನ ಚಟುವಟಿಕೆಗಳನ್ನು ನಿರ್ವಹಿಸಲು ಸಹಾಯಕವಾಗುವಂತೆ ಸರ್ಕಾರ ಅಗತ್ಯ ಕ್ರಮ ಕೈಗೊಂಡಿದೆ ಎಂದು ಸಿ.ರಂಗಧಾಮಯ್ಯ ಅವರು ಮಾಹಿತಿ ನೀಡಿದ್ದಾರೆ.

ವಿ.ಪೇಟೆ ಸರ್ಕಾರಿ ಕಚೇರಿಗಳಲ್ಲಿ ಮಧ್ಯವರ್ತಿಗಳ ಹಾವಳಿಗೆ ತಡೆ

ಪಾರದರ್ಶಕ ಆಡಳಿತಕ್ಕೆ ಅಗತ್ಯ ಕ್ರಮ: ಶಾಸಕ ಎ.ಎಸ್. ಪೊನ್ನಣ್ಣ

▸ ಅಭಿವೃದ್ಧಿ ಹೆಸರಿನಲ್ಲಿ ಹಣ ಲೂಟಿಗೆ ಅವಕಾಶವಿಲ್ಲ ▸ ಮೊಟ್ಟೆ ಎಸೆತದಿಂದ ಕೊಡಗಿಗೆ ಅವಮಾನ

ಮಡಿಕೇರಿ, ಮೇ 25– ಸರಕಾರಿ ಇಲಾಖೆಗಳಲ್ಲಿ ಮಧ್ಯವರ್ತಿಗಳ ಹಾವಳಿಗೆ ಕಡಿವಾಣ ಹಾಕಿ ಸಾರ್ವಜನಿಕ ಕೆಲಸಗಳು ಪಾರದರ್ಶಕವಾಗಿ ನಡೆಯಬೇಕು. ಆ ನಿಟ್ಟಿನಲ್ಲಿ ಕ್ಷೇತ್ರದಲ್ಲಿರುವ ಸರಕಾರಿ ಕಚೇರಿಗಳಲ್ಲಿ ಬದಲಾವಣೆ ತರಲು ಶ್ರಮಿಸುವುದಾಗಿ ವಿರಾಜಪೇಟೆ ಕ್ಷೇತ್ರ ಶಾಸಕ ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ ಅಭಿಮತ ವ್ಯಕ್ತಪಡಿಸಿದ್ದಾರೆ.



ಅಭಿವೃದ್ಧಿಯ ರಾಜಕಾರಣ: ಕೊಡಗು ಪ್ರೆಸ್‌ಕ್ಲಬ್ ವತಿಯಿಂದ ಮಡಿಕೇರಿ ಪತ್ರಿಕಾ ಭವನದಲ್ಲಿ ನಡೆದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅಭಿವೃದ್ಧಿಯ ಹೆಸರಿನಲ್ಲಿ ಹಣ ಕೊಳ್ಳೆ ಹೊಡೆಯುವಂತಹ ಕಾರ್ಯಕ್ಕೆ ತಾವು ಎಂದಿಗೂ ಅವಕಾಶ ನೀಡುವುದಿಲ್ಲ. ಜನರ ಸಂಪರ್ಕಕ್ಕೆ ಸಿಗದ ಅಧಿಕಾರಿಗಳಿಗೆ ತಕ್ಕ ಶಾಸ್ತಿ ಇದೆ ಎಂದು ಎಚ್ಚರಿಕೆಯ ಸಂದೇಶ ರವಾನಿಸಿದರು.

ಕಳೆದ ಚುನಾವಣೆಯಲ್ಲಿ ಸಂಸದೀಯ ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾರಕವಾಗುವಂತಹ ಭಾಷಾ ಪ್ರಯೋಗ ಆಡಳಿತ ಪಕ್ಷದಿಂದ ನಡೆಯಿತೆಂದು ಬೇಸರ ವ್ಯಕ್ತಪಡಿಸಿದರು. ಆದರೆ ತಾವು ಇಂತಹ ಟೀಕೆಗಳಿಗೆ ಉತ್ತರ ನೀಡದೇ, ಯಾರ ಹೆಸರನ್ನು ಪ್ರಸ್ತಾಪಿಸದೇ, ಅಭಿವೃದ್ಧಿಯ ಆಧಾರದ ಮೇಲೆ ಮತಯಾಚಿಸಿದ್ದೇನೆ ಎಂದು ಹೇಳಿದ ಅವರು, ಮುಂದಿನ ಚುನಾವಣೆಗಳಲ್ಲಾದರೂ ಇಂತಹ ವೈಯಕ್ತಿಕ ಟೀಕೆಗಳನ್ನು ಮಾಡದೇ, ಎದುರಾಳಿಗಳ ಮಾನಸಿಕ ಸ್ಥೈರ್ಯವನ್ನು ಕುಗ್ಗಿಸದೇ, ಮೌಲ್ಯಧಾರಿತ ರಾಜಕಾರಣದೊಂದಿಗೆ ಅಭಿವೃದ್ಧಿಯ ಆಧಾರದಲ್ಲಿ ಮತಯಾಚಿಸುವಂತಹ ವಾತಾವರಣ ಜಿಲ್ಲೆಯಲ್ಲಿ ಸೃಷ್ಟಿಯಾಗಲಿ ಎಂಬ ಆಶಯ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ ಮುಂಗಾರು ಆರಂಭಗೊಳ್ಳಲಿದ್ದು, ಈ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕುರಿತು ಸಭೆ ಕರೆಯುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ. ತಮಗೆ ಸಚಿವ ಸ್ಥಾನ ನೀಡುವಂತೆ ಪಕ್ಷದ ವರಿಷ್ಠರಲ್ಲಿ ಒತ್ತಡ ಹೇರುವುದಿಲ್ಲವೆಂದು ಸ್ಪಷ್ಟಪಡಿಸಿದ ಎ.ಎಸ್. ಪೊನ್ನಣ್ಣ, ಕೊಡಗು ಜಿಲ್ಲೆಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ದೊರಕುತ್ತಿಲ್ಲ. ಈ ಹಿನ್ನೆಲೆಯಲ್ಲಿ ಜಿಲ್ಲೆಗೆ ಸಚಿವ ಸ್ಥಾನ ನೀಡಬೇಕೆಂಬ ಜನರ ನಿರೀಕ್ಷೆಗೆ ತಾವು ಸ್ಪಂದಿಸಿ ಹೇಳಿಕೆ ನೀಡುತ್ತಿರುವುದಾಗಿ ಸ್ಪಷ್ಟಪಡಿಸಿದರು.

ಆರ್ಥಿಕ ಪ್ರಗತಿ ಅಗತ್ಯ: ಕಾಂಗ್ರೆಸ್‌ನ ಗ್ಯಾರಂಟಿ ಕಾರ್ಡ್ ಯೋಜನೆ ಕುರಿತು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದ ಎ.ಎಸ್. ಪೊನ್ನಣ್ಣ, ಸಚಿವ ಸಂಪುಟ ರಚನೆಯಾದ ಬಳಿಕ ಗ್ಯಾರಂಟಿ ಯೋಜನೆಗಳು ಜಾರಿಗೆ ಬರಲಿವೆ. ಎಲ್ಲರೂ ಆರ್ಥಿಕ ಪ್ರಗತಿ ಸಾಧಿಸಬೇಕು ನಾವು ನೀಡುವ ಎರಡು ಸಾವಿರ ರೂಪಾಯಿಗಳಲ್ಲಿ ಜೀವನ ನಿರ್ವಹಣೆ ಅಸಾಧ್ಯ, ಆದರೆ ದುಡಿಯುವ ಹೆಣ್ಣುಮಗಳೊಬ್ಬಳು ಅನಿವಾರ್ಯ ಕಾರಣಗಳಿಂದ ಒಂದು ದಿನ ಕೆಲಸಕ್ಕೆ ಹೋಗಲಾಗದಿದ್ದಲ್ಲಿ ಅಂತಹ ಸಂದರ್ಭದಲ್ಲಿ ಈ ಎರಡು ಸಾವಿರ ರೂಪಾಯಿಗಳು ಆಕೆಯಲ್ಲಿ ಆರ್ಥಿಕ ಭದ್ರತೆಯನ್ನು ಮೂಡಿಸುತ್ತದೆ ಎಂದರು.

ಸಮಸ್ಯೆಗಳಿಗೆ ಸ್ಪಂದಿಸುವೆ: ಸಿದ್ದಾಪುರ ಕಸವಿಲೇವಾರಿ ಸಮಸ್ಯೆ, ಗೋಣಿಕೊಪ್ಪದಲ್ಲಿ ಬಸ್ ನಿಲ್ದಾಣ ನಿರ್ಮಾಣ, ಭಾಗಮಂಡಲ ಮೇಲ್ಸುತುವೆ ಕಾಮಗಾರಿ ಪೂರ್ಣಗೊಳಿಸುವ ಜತೆಗೆ ಪ್ರಕೃತಿ ವಿಕೋಪ ಸಂತ್ರಸ್ಥರಿಗೆ ಮನೆಗಳ ವಿತರಣೆ, ನಿವೇಶನ ರಹಿತರಿಗೆ ನಿವೇಶನ ಒದಗಿಸಲು ಕ್ರಮ ಕೈಗೊಳ್ಳುವುದಾಗಿ ಹೇಳಿದರು. ತಜ್ಞರ ಸಲಹೆ ಪಡೆದು ಮಾನವ ವನ್ಯಜೀವಿ ಸಂಘರ್ಷಕ್ಕೆ ಕಡಿವಾಣ ಸೇರಿದಂತೆ ಜಿಲ್ಲೆಯ ಜನರ ಧ್ವನಿಯಾಗಿ ವಿಧಾನಸಭೆಯಲ್ಲಿ ಕೆಲಸ ಮಾಡುತ್ತೇನೆಂದು ಎ.ಎಸ್.ಪೊನ್ನಣ್ಣ ಹೇಳಿದರು.

ಸಂವಾದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕೊಡಗು ಪ್ರೆಸ್ ಕ್ಲಬ್‌ನ ಬೆಳ್ಳಿ ಮಹೋತ್ಸವ ಆಚರಣಾ ಸಮಿತಿಯ ಅಧ್ಯಕ್ಷ ಡಾ.ಉಳ್ಳಿಯಡ ಪೂವಯ್ಯ ಮಾತನಾಡಿದರು. ವೇದಿಕೆಯಲ್ಲಿ ಬೆಳ್ಳಿ ಮಹೋತ್ಸವ ಆಚರಣಾ ಸಮಿತಿಯ ಗೌರವ ಅಧ್ಯಕ್ಷೆ ಸವಿತಾ ರೈ, ಪ್ರಧಾನ ಕಾರ್ಯದರ್ಶಿ ರೆಜಿತ್ ಕುಮಾರ್ ಗುಹ್ಯ, ಕಾರ್ಯದರ್ಶಿ ಬಾಚರಣಿಯಂಡ ಅನು ಕಾರ್ಯಪ್ಪ ಉಪಸ್ಥಿತರಿದ್ದರು.

ಕೊಡಗಿಗಾದ ಅವಮಾನ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಹಿಂದೆ ಮಾಜಿ ಮುಖ್ಯಮಂತ್ರಿಗಳಾಗಿದ್ದ ಸಂದರ್ಭ ಕೊಡಗಿಗೆ ಆಗಮಿಸಿದ ಸಂದರ್ಭ ಮೊಟ್ಟೆ ಎಸೆತದ ಪ್ರಕರಣ ನಡೆದಿದ್ದು, ಇದು ಕೊಡಗು ಜಿಲ್ಲೆಗೆ ಮಾಡಿದಂತಹ ಅವಮಾನವಾಗಿದೆ. ಇಂತಹ ಪ್ರಕರಣಗಳಿಂದ ಕ್ರಿಮಿನಲ್‌ಗಳನ್ನು ಸೃಷ್ಟಿ ಮಾಡುವಂತಹ ರಾಜಕಾರಣ ಮಾಡಬಾರದೆಂದು ಹೇಳಿದ ಎ.ಎಸ್.ಪೊನ್ನಣ್ಣ, ಪ್ರಜಾಪ್ರಭುತ್ವ ವ್ಯವಸ್ಥೆ ಯಡಿಯಲ್ಲಿ ಮತ್ತೊಬ್ಬರಲ್ಲಿ ಆತಂಕ ಸೃಷ್ಟಿಸುವಂತಹ ಪ್ರತಿಭಟನೆಗಳು ನಡೆಯಬಾರದೆಂದು ಅಭಿಪ್ರಾಯಪಟ್ಟರು. ಡ್ರಗ್ಸ್ ದಂಧೆ ಮಟ್ಟಹಾಕುವ ನಿಟ್ಟಿನಲ್ಲಿ ಮತ್ತು ಕಾನೂನು ಬಾಹಿರ ಕೃತ್ಯಗಳಿಗೆ ಕಡಿವಾಣ ಹಾಕಲು ಈಗಾಗಲೇ ಮುಖ್ಯಮಂತ್ರಿಗಳು ಹಿರಿಯ ಪೊಲೀಸ್ ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಿದ್ದಾರೆ. ಜಿಲ್ಲೆಯಲ್ಲಿಯೂ ಇಂತಹ ಕೃತ್ಯಗಳಿಗೆ ಕಡಿವಾಣ ಹಾಕುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ಸೂಚನೆ ನೀಡಿದ್ದು, ತಪ್ಪಿದ್ದಲ್ಲಿ ಇಂತಹ ಅಧಿಕಾರಿಗಳನ್ನು ಮನೆಗೆ ಕಳುಹಿಸಲಾಗುವುದೆಂದು ಹೇಳಿದರು.

ಆನೆ ದಂತದ ಬಳೆ ಮಾರುತ್ತಿದ್ದವನ ಬಂಧನ

ಮಡಿಕೇರಿ ಸಿಐಡಿ ಪೊಲೀಸ್ ಅರಣ್ಯ ಘಟಕದ ಕಾರ್ಯಾಚರಣೆ

ಮಡಿಕೇರಿ, ಮೇ 25– ಆನೆ ದಂತದಿಂದ ಮಾಡಿರುವ ಅಮೂಲ್ಯ ಹರಳುಗಳನ್ನು ಒಳಗೊಂಡಿರುವ 2 ಕಡಗಗಳನ್ನು(ಕೈ ಬಳೆ ಆಭರಣ) ಮಾರಾಟ ಮಾಡಲು ಯತ್ನಿಸುತ್ತಿದ್ದ ವ್ಯಕ್ತಿಯನ್ನು ಮಡಿಕೇರಿ ಸಿಐಡಿ ಪೊಲೀಸ್ ಅರಣ್ಯ ಘಟಕದ ಅಧಿಕಾರಿಗಳು ಮತ್ತು ಸಿಬ್ಬಂದಿ ಬಂಧಿಸಿದ್ದಾರೆ.



ನಗರದ ಸುದರ್ಶನ ವೃತ್ತದಿಂದ ಸಿದ್ದಾಪುರ ರಸ್ತೆ ಕಡೆಗೆ ತೆರಳುವ ಮಾರ್ಗದ ಪಕ್ಕದಲ್ಲಿರುವ ಬಸ್ ತಂಗುದಾಣದ ಬಳಿ ಕೊಳ್ಳೇಗಾಲ ಮೂಲದ ಪಿ.ಪ್ರದೀಪ್ ಕುಮಾರ್(42) ಎಂಬಾತ ಆನೆ ದಂತದಿಂದ ಮಾಡಿರುವ ಕೈ ಬಳೆ ಮಾದರಿಯ ನೀಲಿ ಮತ್ತು ಹಸಿರು ಬಣ್ಣದ ಅಮೂಲ್ಯ ಹರಳುಗಳನ್ನು ಒಳಗೊಂಡಿದ್ದ 2 ಕಡಗಗಳನ್ನು ಮಾರಾಟ ಮಾಡಲು ಯತ್ನಿಸುತ್ತಿದ್ದ.

ಖಚಿತ ಮಾಹಿತಿ ಆಧರಿಸಿ, ಆರೋಪಿಯನ್ನು ಮಾಲು ಸಹಿತ ಬಂಧಿಸಲಾಗಿದೆ. ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಪ್ರಕರಣದ ಕುರಿತು ತನಿಖೆ ಮುಂದುವರೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಕೆ.ವಿ. ಶರತ್‌ಚಂದ್ರ ಅವರ ನಿರ್ದೇಶನದಂತೆ ಮಡಿಕೇರಿ ಸಿ.ಐ.ಡಿ ಪೊಲೀಸ್ ಅರಣ್ಯ ಘಟಕದ ಪೊಲೀಸ್ ಅಧೀಕ್ಷಕ ಕೆ.ಬಿ. ವಿಶ್ವಾನಾಥ್ ಅವರ ಮಾರ್ಗದರ್ಶನದಲ್ಲಿ ಮಡಿಕೇರಿ ಅರಣ್ಯ ಸಂಚಾರಿ ದಳದ ಪಿ.ಎಸ್.ಐ ಸಿ.ಯು.ಸವಿ, ಸಿಬ್ಬಂದಿಗಳಾದ ಶೇಖರ್, ರಾಘವೇಂದ್ರ, ಯೋಗೇಶ್, ಉಮೇಶ್, ಸ್ವಾಮಿ ಹಾಗೂ ಮಂಜುನಾಥ ಕಾರ್ಯಾಚರಣೆ ನಡೆಸಿದರು.

ಕಾಳಿಂಗ ಸರ್ಪ ಸೆರೆ



ನಾಪೋಕ್ಲು, ಮೇ 25– ಬಿ. ಶೆಟ್ಟಿಗೇರಿ ಗ್ರಾಮದ ಚೇರಂಡ ರಕ್ಷಿತ ದೇವಯ್ಯ ಅವರ ಮನೆಯ ಬಳಿ ಅಡ್ಡಾಡುತ್ತಿದ್ದ 12 ಅಡಿ ಉದ್ದದ ಕಾಳಿಂಗ ಸರ್ಪವನ್ನು ಪೊನ್ನೀರ ಸ್ನೇಕ್ ಗಗನ್ ಸೆರೆ ಹಿಡಿದಿದ್ದಾರೆ. ಮನೆಯ ಸಮೀಪ ಸರ್ಪವೊಂದು ಕೆಲವು ದಿನಗಳಿಂದ ಓಡಾಡುತ್ತಿರುವ ಬಗ್ಗೆ ಮಾಹಿತಿ ನೀಡಿದ ಮೇರೆಗೆ ಖ್ಯಾತ ಉರಗ ತಜ್ಞ ಪೊನ್ನೀರ ಸ್ನೇಕ್ ಗಗನ್ ಸ್ಥಳಕ್ಕೆ ಆಗಮಿಸಿ ಸರ್ಪವನ್ನು ಸೆರೆ ಹಿಡಿದಿದ್ದು, ಕುಟಿಯಲ ಅರಣ್ಯಕ್ಕೆ ಬಿಟ್ಟಿದ್ದಾರೆ. ಪೊನ್ನೀರ ಸ್ನೇಕ್ ಗಗನ್ ಈಗಾಗಲೇ 67 ಕಾಳಿಂಗ ಸರ್ಪ ಸೇರಿದಂತೆ 8 ಸಾವಿರಕ್ಕೂ ಅಧಿಕ ವಿವಿಧ ಜಾತಿಯ ಹಾವುಗಳನ್ನು ಸೆರೆ ಹಿಡಿದಿದ್ದು, ಸುರಕ್ಷಿತವಾಗಿ ಅರಣ್ಯಕ್ಕೆ ಬಿಡುವಲ್ಲಿ ಯಶಸ್ವಿಯಾಗಿದ್ದಾರೆ.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಚಾಮರಾಜನಗರ, ಮೇ 25– ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಚಾಮರಾಜನಗರ, ಹರದನಹಳ್ಳಿ ಮತ್ತು ಸಂತೇಮರಹಳ್ಳಿ ಉಪವಿಭಾಗಗಳ ವ್ಯಾಪ್ತಿಯಲ್ಲಿ ಒಂದನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಮೇ 27 ರಂದು ಹಮ್ಮಿಕೊಂಡಿರುವುದರಿಂದ ಅಂದು ಬೆಳಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ದೊಡ್ಡರಾಯಪೇಟೆ ವ್ಯಾಪ್ತಿಯ ಚಾಮರಾಜನಗರ ಟೌನ್–1, ಕೋಡಿಮೋಳೆ, ರಾಮಸಮುದ್ರ ಮಾದಾಪುರ, ಕಾಗಲವಾಡಿ, ಸೋಮವಾರಪೇಟೆ(ಟೌನ್–2), ಹರದನಹಳ್ಳಿ, ಬೇಡರಪುರ, ಟಿ.ಕೆ ಮೋಳೆ, ಶಿವಪುರ, ಗೂಳಿಪುರ ಎನ್.ಜೆ.ವೈ, ಸಂತೇಮರಹಳ್ಳಿ ವ್ಯಾಪ್ತಿಯ ಹೊನ್ನೂರು, ಕುದೇರು, ಉಮ್ಮತ್ತೂರು, ಸಂತೇಮರಹಳ್ಳಿ, ಕೆಂಪನಪುರ, ನವಿಲೂರು, ದುಗ್ಗಟ್ಟಿ, ಆಲ್ದೂರು, ಅಂಬಳೆ, ಮಂಗಲ ವಾಟರ್ ಸಪ್ಲೈ, ಚುಂಗಡಿಪುರ, ಅವಿತ್ ಗ್ರೀನ್ ಸೋಲಾರ್, ಮೂಡಲ ಅಗ್ರಹಾರ ಹಾಗೂ ಅಟ್ಟುಗೂಳಿಪುರ ವ್ಯಾಪ್ತಿಯ ಸಿದ್ದಯ್ಯನಪುರ, ಹೊಂಗಲವಾಡಿ, ಕೋಳಿಪಾಳ್ಯ, ಬಂಧಿಗೌಡನಹಳ್ಳಿ, ಅಟ್ಟುಗೂಳಿಪುರ, ಹೊನ್ನಳ್ಳಿ ವ್ಯಾಪ್ತಿಯ ಕೊತ್ತಲವಾಡಿ, ಅರಕಲವಾಡಿ, ಯರಗನಹಳ್ಳಿ, ಸುವರ್ಣನಗರ, ಫ್ಯಾಕ್ಟರಿ, ಬಿಸಿಲವಾಡಿ, ಪಣಜನೂರು, ಡೊಳ್ಳಿಪುರ, ಚನ್ನಪನಪುರ, ಅಮಚವಾಡಿ, ಮಾದಲವಾಡಿ ಮತ್ತು ಅರಕಲವಾಡಿ ವ್ಯಾಪ್ತಿಯ ಕಿಲಗೆರೆ, ಮಾದಲ ವಾಡಿ, ಯನಗುಂಬ, ಯರಗನಹಳ್ಳಿ, ಅಚ್ಚಟ್ಟಿಪುರ, ಯಾನಗಳ್ಳಿ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಡಾ. ಬಿ.ಆರ್. ಅಂಬೇಡ್ಕರ್‌ಗೆ ಅಪಮಾನ ಮಾಡಿದ ಆರೋಪ

ಸಿಮ್ಸ್ ಡೀನ್ ವಜಾಕ್ಕೆ ಆಗ್ರಹಿಸಿ ಚಾ.ನಗರದಲ್ಲಿ ಭಾರೀ ಪ್ರತಿಭಟನೆ

ಚಾಮರಾಜನಗರ, ಮೇ 25– ಡಾ.ಬಿ.ಆರ್. ಅಂಬೇಡ್ಕರ್ ಅವರನ್ನು ನಿಂದಿಸಿರುವ ಆರೋಪ ಹೊತ್ತಿರುವ ಚಾಮರಾಜನಗರ ಜಿಲ್ಲಾ ವೈದ್ಯಕೀಯ ಶಿಕ್ಷಣ ಸಂಸ್ಥೆ (ಸಿಮ್ಸ್) ಡೀನ್ ಮತ್ತು ನಿರ್ದೇಶಕ ಡಾ.ಜಿ.ಎಂ. ಸಂಜೀವ್ ಅವರನ್ನು ಕೂಡಲೇ ಹುದ್ದೆಯಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿ ನಗರದಲ್ಲಿ ಗುರುವಾರ ಸಾವಿರಾರು ಮಂದಿ ಅಂಬೇಡ್ಕರ್ ಅನುಯಾಯಿಗಳು, ದಲಿತ ಪರ ಸಂಘಟನೆಗಳ ಮುಖಂಡರು, ಕಾರ್ಯಕರ್ತರು ಬೃಹತ್ ಪ್ರತಿಭಟನೆ ನಡೆಸಿದರು.



ನಗರದ ಡಾ.ಬಿ.ಆರ್. ಅಂಬೇಡ್ಕರ್ ಸಮುದಾಯ ಭವನದ ಮುಂಭಾಗ ಜಿಲ್ಲೆ ಹಾಗೂ ಹೊರ ಜಿಲ್ಲೆಗಳ ಅಂಬೇಡ್ಕರ್ ಅನುಯಾಯಿಗಳು, ದಲಿತಪರ ಸಂಘಟನೆಗಳು, ಬಿಎಸ್‌ಪಿ, ಡಾ.ಬಿ.ಆರ್. ಅಂಬೇಡ್ಕರ್ ಅನುಯಾಯಿಗಳ ಮಹಾ ಒಕ್ಕೂಟ, ಛಲವಾದಿ ಮಹಾಸಭಾ, ಕಾಂಗ್ರೆಸ್ ಎಸ್‌ಸಿ ಮೋರ್ಚಾ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಕಾರ್ಯಕರ್ತರು ಸಮಾವೇಶಗೊಂಡು ಸಿಮ್ಸ್ ಡೀನ್ ಡಾ.ಸಂಜೀವ್ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಸಾವಿರಾರು ಮಂದಿ ಭಾಗಿ: ನಗರದಲ್ಲಿ ನಡೆದ ಪ್ರತಿಭಟನೆಯಲ್ಲಿ ಸಾವಿರಾರು ಮಂದಿ ಪಾಲ್ಗೊಂಡು ಬೆಂಬಲ ಸೂಚಿಸಿದರು. ಅಂಬೇಡ್ಕರ್ ಭವನದಿಂದ ಆರಂಭಗೊಂಡ ಪ್ರತಿಭಟನಾ ಮೆರವಣಿಗೆಯು ಪ್ರವಾಸಿ ಮಂದಿರ, ಸುಲ್ತಾನ್ ಷರೀಫ್ ವೃತ್ತ, ಗುಂಡ್ಲುಪೇಟೆ ವೃತ್ತ, ದೊಡ್ಡಂಗಡಿ ಬೀದಿ, ಚಿಕ್ಕಂಗಡಿ ಬೀದಿ, ಸಂತೇಮರಹಳ್ಳಿ ವೃತ್ತ, ಡಿವೀಯೇಷನ್ ರಸ್ತೆ ಭುವನೇಶ್ವರಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಆಕ್ರೋಶ ವ್ಯಕ್ತಪಡಿಸಿದರು. ನಂತರ ಅಲ್ಲಿಂದ ಬಿ. ರಾಚಯ್ಯ ಜೋಡಿ ರಸ್ತೆಯ ಮೂಲಕ ಜಿಲ್ಲಾಡಳಿತ ಭವನಕ್ಕೆ ಆಗಮಿಸಿ, ಕೆಲಕಾಲ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು.

ಪ್ರತಿಭಟನಾ ಮೆರವಣಿಗೆಯೂ ಸಂಪೂರ್ಣ ನೀಲಿಮಯವಾಗಿತ್ತು. ಅಂಬೇಡ್ಕರ್ ಭಾವಚಿತ್ರವಿರುವ ಧ್ವಜಗಳು ರಸ್ತೆಯುದ್ದಕ್ಕೂ ರಾರಾಜಿಸಿದವು. ವಿವಿಧ ಸಂಘಟನೆಗಳ ಕಾರ್ಯಕರ್ತರು ಪ್ರತಿಭಟನೆಗೆ ಬೆಂಬಲ ಸೂಚಿಸಿ, ಪಾಲ್ಗೊಂಡಿದ್ದರು.

ಡೀನ್ ವಿರುದ್ಧ ಆಕ್ರೋಶ: ಡಾ.ಸಂಜೀವ್ ವಿರುದ್ಧ ಶೀಘ್ರವೇ ಉನ್ನತ ಮಟ್ಟದ ತನಿಖೆ ನಡೆಸಿ, ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಅಲ್ಲದೇ ಡಾ. ಮಾರುತಿ ಸೇರಿದಂತೆ ಇತರರ ಮೇಲೆ ದಾಖಲಾಗಿರುವ ದೂರನ್ನು ಸರ್ಕಾರ ಕೂಡಲೇ ವಜಾಗೊಳಿಸಬೇಕು ಎಂದು ಆಗ್ರಹಿಸಿದರು.

ಡಾ.ಸಂಜೀವ್ ಜೊತೆ ಶಾಮೀಲಾಗಿರುವ ಅಧಿಕಾರಿಗಳನ್ನು ಕೂಡಲೇ ವರ್ಗಾವಣೆ ಮಾಡಬೇಕು. ಸಿಮ್ಸ್ ಆಸ್ಪತ್ರೆಯನ್ನು ರಮಾಬಾಯಿ ಅಂಬೇಡ್ಕರ್ ಆಸ್ಪತ್ರೆ ಎಂದು ನಾಮಕರಣ ಮಾಡಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯ ಪ್ರತಿ ತಾಲೂಕಿನಲ್ಲಿಯೂ ಅಂಬೇಡ್ಕರ್ ಅಧ್ಯಯನ ಕೇಂದ್ರಗಳನ್ನು ತೆರೆಯಲು ಯೋಜನೆ ರೂಪಿಸಬೇಕು. ನ್ಯಾಯಾಲಯಗಳಲ್ಲಿ ಎಸ್‌ಸಿ, ಎಸ್‌ಟಿ ವರ್ಗದವರ ಮೇಲಿನ ದೌರ್ಜನ್ಯಗಳ ಪ್ರಕರಣಗಳಲ್ಲಿ ಶಿಕ್ಷೆ ವಿಧಿಸುವಲ್ಲಿ ವಿಫಲವಾಗಿರುವ ಪ್ರಕರಣಗಳಲ್ಲಿ ನ್ಯೂನತೆಗೆ ಕಾರಣಗಳೇನು? ಪ್ರಕರಣ ಏಕೆ? ದುರ್ಬಲವಾಯಿತು ಎಂಬುದರ ಬಗ್ಗೆ ಮೇಲುಸ್ತುವಾರಿ ಸಮಿತಿ ನೇಮಿಸಿ ನ್ಯಾಯ ಕೊಡಿಸಬೇಕು. ದೌರ್ಜನ್ಯ ತಡೆಗೆ ಶಕ್ತಿ ತುಂಬುವಂತೆ ಮಾಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಬಿಎಸ್‌ಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹ.ರಾ. ಮಹೇಶ್, ಜಿಲ್ಲಾಧ್ಯಕ್ಷ ನಾಗಯ್ಯ, ಮುಖಂಡರಾದ ಪ್ರಸನ್ನಕುಮಾರ್, ಸಿ.ಎಂ. ಕೃಷ್ಣಮೂರ್ತಿ, ಅಯ್ಯನಪುರ ಶಿವಕುಮಾರ್, ಮಹೇಶ್ ಕುದರ್, ನಿಜಧ್ವನಿ ಗೋವಿಂದರಾಜು, ಬ.ಮ. ಕೃಷ್ಣಮೂರ್ತಿ, ಬ್ಯಾಡಮೂಡ್ಲು ಬಸವಣ್ಣ, ನಲ್ಲೂರು ಸೋಮೇಶ್ವರ, ಆರ್. ಮಹದೇವು, ಅಬ್ರಾರ ಅಹಮದ್, ಆರಿಫ್, ಕೆ.ಎಂ. ನಾಗರಾಜು, ಅಣಗಳ್ಳಿ ಬಸವರಾಜು, ದೊಡ್ಡಿಂದುವಾಡಿ ಸಿದ್ದರಾಜು, ಶಿವಣ್ಣ, ಗಣೇಶ ಪ್ರಸಾದ್, ನಾರಾಯಣ್ ಸೇರಿ ಸಾವಿರಾರು ಮಂದಿ ಪಾಲ್ಗೊಂಡಿದ್ದರು.

ಸಿಮ್ಸ್ ಡೀನ್ ವಿರುದ್ಧ ತನಿಖೆಗೆ ಸಮಿತಿ

ಚಾಮರಾಜನಗರ, ಮೇ 25– ಡಾ.ಬಿ.ಆರ್. ಅಂಬೇಡ್ಕರ್ ಅವರನ್ನು ನಿಂದಿಸಿರುವ ಆರೋಪ ಹೊತ್ತಿರುವ ಚಾಮರಾಜನಗರ ಜಿಲ್ಲಾ ವೈದ್ಯಕೀಯ ಶಿಕ್ಷಣ ಸಂಸ್ಥೆ (ಸಿಮ್ಸ್) ಡೀನ್ ಮತ್ತು ನಿರ್ದೇಶಕ ಡಾ.ಜಿ.ಎಂ. ಸಂಜೀವ್ ವಿರುದ್ಧ ತನಿಖೆ ನಡೆಸಲು ಸಮಿತಿ ರಚಿಸಿ, ವೈದ್ಯಕೀಯ ಶಿಕ್ಷಣ ಇಲಾಖೆ ಆದೇಶಿಸಿದೆ.



ಡಾ.ಜಿ.ಎಂ. ಸಂಜೀವ್

ಕಳೆದ ಮೂರು ವರ್ಷಗಳಿಂದ ಸಿಮ್ಸ್‌ನ ಡೀನ್ ಆಗಿ ಕರ್ತವ್ಯ ನಿರ್ವಹಿಸುತ್ತಿರುವ ಡಾ.ಜಿ.ಎಂ. ಸಂಜೀವ್ ಇತ್ತೀಚೆಗೆ ಅಂಬೇಡ್ಕರ್ ಅವರನ್ನು ನಿಂದಿಸಿದ್ದಾರೆ ಎಂಬ ಆರೋಪ ಕೇಳಿ ಬಂದು, ಅವರ ವಿರುದ್ಧ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಈ ಹಿನ್ನಲೆಯಲ್ಲಿ ಡೀನ್ ವಿರುದ್ಧ ಸ್ಥಳೀಯ ಶಾಸಕ ಸಿ. ಪುಟ್ಟರಂಗಶೆಟ್ಟಿ ಅವರು ಬುಧವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು, ಡೀನ್‌ರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಬೇಕು ಎಂದು ಮನವಿ ಮಾಡಿದ್ದರು.

ಇದಕ್ಕೆ ಸ್ಪಂದಿಸಿದ್ದ ಮುಖ್ಯಮಂತ್ರಿಗಳು, ಆರೋಪಗಳ ಬಗ್ಗೆ ಪರಿಶೀಲಿಸಿ ವರದಿ ನೀಡುವಂತೆ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ವಂದಿತ ಶರ್ಮಾ ಅವರಿಗೆ ಸೂಚಿಸಿದ್ದರು.

ಸಿಎಂ ಸೂಚನೆ ಹಿನ್ನೆಲೆಯಲ್ಲಿ ಮುಖ್ಯ ಕಾರ್ಯದರ್ಶಿಯವರು ತನಿಖೆಗೆ ಕ್ರಮ ವಹಿಸುವಂತೆ ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ನವೀನ್ ರಾಜ್ ಸಿಂಗ್ ಅವರಿಗೆ ಸೂಚಿಸಿದ್ದು, ಅವರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕ ಡಾ.ರವಿ ಮತ್ತು ಮುಖ್ಯ ಆಡಳಿತಾಧಿಕಾರಿ ಕೆ.ಎ. ಉಮಾ ಅವರನ್ನೊಳಗೊಂಡ ತನಿಖಾ ಸಮಿತಿ ರಚಿಸಿದ್ದಾರೆ. ಸಮಿತಿಯು ಚಾಮರಾಜನಗರ ಜಿಲ್ಲಾಧಿಕಾರಿ ಹಾಗೂ ಪೊಲೀಸ್ ವರಿಷ್ಠಾಧಿಕಾರಿ ಅವರೊಂದಿಗೆ ಸಿಮ್ಸ್‌ಗೆ ತಕ್ಷಣವೇ ಭೇಟಿ ನೀಡಿ ಪರಿಶೀಲಿಸಿ, ಕೂಡಲೇ ವರದಿ ನೀಡಬೇಕು ಎಂದು ನವೀನ್ ರಾಜ್ ಸಿಂಗ್ ಆದೇಶದಲ್ಲಿ ಹೇಳಿದ್ದಾರೆ.

ಎಲ್ಲಾ ಸಂಪತ್ತುಗಳಿದ್ದರೂ ಮನುಷ್ಯ ಅತೃಪ್ತ: ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳು

ಪಡಗೂರು ಅಡವಿ ಮಠದಲ್ಲಿ ಶಿವಲಿಂಗೇಂದ್ರ ಸ್ವಾಮೀಜಿಗೆ ಗುರುವಂದನೆ



ಗುಂಡ್ಲುಪೇಟೆ, ಮೇ 25– ಮನುಷ್ಯನಿಗೆ ಎಲ್ಲಾ ರೀತಿಯ ಸಂಪತ್ತುಗಳಿದ್ದರೂ ಅತೃಪ್ತನಾಗಿದ್ದು, ಸಮಾಧಾನ, ಶಾಂತಿ ಎಂಬ ಸಂಪತ್ತುಗಳ ಅಗತ್ಯ ಹೆಚ್ಚಾಗಿದೆ ಎಂದು ಶ್ರೀ ಸಿದ್ದಗಂಗಾ ಮಠದ ಸಿದ್ದಲಿಂಗ ಮಹಾಸ್ವಾಮಿಗಳು ಹೇಳಿದರು.

ತಾಲೂಕಿನ ಪಡಗೂರು ಅಡವಿ ಮಠದ ಆವರಣದಲ್ಲಿ ಮಠಾಧ್ಯಕ್ಷರಾದ ಶಿವಲಿಂಗೇಂದ್ರ ಸ್ವಾಮೀಜಿಯವರಿಗೆ 60 ವರ್ಷ ತುಂಬಿದ ಅಂಗವಾಗಿ ಗ್ರಾಮಸ್ಥರು ಹಾಗೂ ಭಕ್ತರು ಆಯೋಜಿಸಿದ್ದ ಗುರುವಂದನೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಠಗಳು ಮರಗಳಿದ್ದಂತೆ, ಬಸವಳಿದವರಿಗೆ ಶಾಂತಿ ಹಾಗೂ ಸಮಾಧಾನ ನೀಡುವ ಕೇಂದ್ರಗಳಾಗಿವೆ. ಮಠ ಮಾನ್ಯಗಳಿಂದ ಶಿಕ್ಷಣ ಕ್ಷೇತ್ರಕ್ಕೆ ದೊಡ್ಡ ಕೊಡುಗೆ ನೀಡಿದ್ದುದರಿಂದ ಸಮಾಜದಲ್ಲಿ ಉತ್ತಮ ಜೀವನ ಸಾಧ್ಯವಾಗಿದೆ. ರಾಜ್ಯದಲ್ಲಿ ಶಾಂತಿ ನೆಮ್ಮದಿ, ಪ್ರೀತಿ ವಿಶ್ವಾಸದಿಂದ ಬದುಕುತ್ತಿದ್ದರೆ ಮಠಮಾನ್ಯಗಳ ಕೊಡುಗೆ ಅಪಾರವಾಗಿದೆ. ಶಿವಲಿಂಗೇಂದ್ರಸ್ವಾಮಿಗಳು ತಮ್ಮ ಜೀವನವನ್ನು ಧಾರ್ಮಿಕ ಕಾರ್ಯಗಳು, ಶಿಕ್ಷಣ, ವಿದ್ಯಾರ್ಥಿನಿಲಯಗಳು, ವೃದ್ಧಾಶ್ರಮ ಮುಂತಾದ ಸಮಾಜಮುಖಿ ಸೇವೆಗೆ ತೊಡಗಿಸಿಕೊಂಡಿದ್ದರಿಂದ ಅವರಿಗೆ 60 ವರ್ಷ ತುಂಬಿದ ಹಿನ್ನೆಲೆಯಲ್ಲಿ ಅವರ ಸೇವೆಯನ್ನು ಗುರ್ತಿಸಿದ ಭಕ್ತರು ಆಯೋಜಿಸಿರುವ ಕಾರ್ಯಕ್ರಮ ಅಭಿನಂದನೀಯ ಎಂದರು.

ಮೈಸೂರು ರಾಜವಂಶಸ್ಥರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಮೈಸೂರು ಅರಸರಿಗೂ ಜಿಲ್ಲೆ ಹಾಗೂ ತಾಲೂಕಿಗೆ ನಿಕಟವಾದ ಸಂಬಂಧವಿದೆ. ಮುಮ್ಮಡಿ ಕೃಷ್ಣರಾಜ ಒಡೆಯರ್ ತಮ್ಮ ತಂದೆಯ ಸ್ಮರಣಾರ್ಥ ಚಾಮರಾಜನಗರದಲ್ಲಿ ಚಾಮರಾಜೇಶ್ವರ ದೇವಾಲಯ ನಿರ್ಮಿಸಿದರು. ಅವಕಾಶ ಸಿಕ್ಕಾಗ ಹಿಮವದ್ ಗೋಪಾಲಸ್ವಾಮಿ ಬೆಟ್ಟ ಹಾಗೂ ಬಂಡೀಪುರಕ್ಕೆ ಬರುತ್ತಿದ್ದೇನೆ. ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿರುವ ಶ್ರೀಗಳಿಗೆ 60 ಸಂವತ್ಸರ ಪೂರ್ಣಗೊಂಡ ಹಿನ್ನೆಲೆಯಲ್ಲಿ ಗ್ರಾಮಸ್ಥರು ಹಾಗೂ ಭಕ್ತರು ಗುರುವಂದರೆ ಕಾರ್ಯಕ್ರಮ ಆಯೋಜಿಸಿ ಗೌರವಿಸುತ್ತಿರುವುದು ಅಭಿನಂದನಾರ್ಹ ಎಂದು ಹೇಳಿದರು.

ಸುತ್ತೂರು ಮಠಾಧ್ಯಕ್ಷರಾದ ಶಿವರಾತ್ರಿ ದೇಶೀಕೇಂದ್ರಸ್ವಾಮೀಜಿ ಆಶೀರ್ವಚನ ನೀಡಿ, ಬ್ರಹ್ಮಾಂಡದಲ್ಲಿ ಜಗತ್ತಿನಲ್ಲಿ ಎಲ್ಲ ಜೀವಿಗಳಿಗಿಂತ ಆಲೋಚಿಸುವ ಶಕ್ತಿಯಿರುವುದರಿಂದ ಉಳಿದೆಲ್ಲಾ ಜೀವಿಗಳಿಗಿಂತ ಮನುಷ್ಯ ಉತ್ತಮ ಬದುಕು ನಡೆಸುತ್ತಿದ್ದಾನೆ. ಈಗ ಸಿಕ್ಕಿರುವ ಬದುಕನ್ನು ರಾಗ ದ್ವೇಷಗಳಿಗೆ ತೊಡಗಿಸದೆ ಸಾತ್ವಿಕ ಜೀವನ ನಡೆಸಬೇಕಾಗಿದೆ. ಭಾರತೀಯ ಪರಂಪರೆಯಲ್ಲಿ ಮಠಮಾನ್ಯಗಳು, ಋಷಿ ಮುನಿಗಳು ಸಾಧುಸಂತರು ಪರಂಪರೆ ಪಾಲನೆಯಲ್ಲಿ ತೊಡಗಿದ್ದಾರೆ. ಮಠಮಾನ್ಯಗಳು ತಮ್ಮ ಪೂಜೆಯ ಫಲವನ್ನು ಸಮಾಜದ ಸುಖ ಶಾಂತಿಗಾಗಿ ಧಾರೆ ಎರೆಯುತ್ತಿವೆ. ಕಳೆದ 36 ವರ್ಷಗಳಿಂದ ಮಠಾಧಿಪತಿಯಾಗಿರುವ ಶಿವಲಿಂಗೇಂದ್ರಶ್ರೀಗಳು ಆಧ್ಯಾತ್ಮಿಕ ವಿಷಯಗಳ ಅಧ್ಯಯನದ ಜತೆಗೆ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಗೋಶಾಲೆ, ವೃದ್ಧಾಪ್ಯದಲ್ಲಿ ಶಾಂತಿ ಬಯಸುವ ಹಿರಿಯ ಜೀವಿಗಳಿಗೆ ಆಶ್ರಯ ನೀಡುವ ಸಲುವಾಗಿ ಹಿರಿಯರಮನೆ ನಡೆಸುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಮಾತನಾಡಿ, ಪಡಗೂರು ಮಠ ಹಾಗೂ ಶ್ರೀಗಳು ಇನ್ನೂ ಹೆಚ್ಚಿನ ಕಾಲ ಸಮಾಜಕ್ಕೆ ಸೇವೆ ಸಲ್ಲಿಸುವಂತಾಗಬೇಕು. ಮಠದ ಸಮಾಜಮುಖಿ ಕಾರ್ಯಗಳಿಗೆ ಯಾವಾಗಲೂ ನನ್ನ ಸಹಕಾರವಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮೈಸೂರು ನೀಲ ಕಂಠಸ್ವಾಮಿ ಮಠದ ಸಿದ್ದಮಲ್ಲಸ್ವಾಮಿ ಗಳು, ವಾಟಾಳು ಮಠದ ಸಿದ್ದಲಿಂಗಶಿವಾ ಚಾರ್ಯಸ್ವಾಮೀಜಿ ಸೇರಿದಂತೆ ಹಲವಾರು ಮಠಾಧೀಶರು ಮತ್ತು ಸಹಸ್ರಾರು ಭಕ್ತರು ಪ್ರಸಾದ ಸೇವಿಸಿದರು.

ಮಹದೇಶ್ವರ ಕಾಲೋನಿಯಲ್ಲಿ ಅದ್ಧೂರಿ ಶ್ರೀ ಭಗೀರಥರ ಜಯಂತಿ ಆಚರಣೆ



ಚಾಮರಾಜನಗರ, ಮೇ 25– ತಾಲೂಕಿನ ಅಮಚವಾಡಿ ಗ್ರಾ.ಪಂ. ವ್ಯಾಪ್ತಿಯ ಮಹದೇಶ್ವರ ಕಾಲೋನಿಯಲ್ಲಿ ಉಪ್ಪಾರ ಸಮುದಾಯದ ವತಿಯಿಂದ ಅದ್ದೂರಿಯಾಗಿ ಶ್ರೀ ಭಗೀರಥ ಮಹರ್ಷಿ ಜಯಂತಿ ಆಚರಿಸಲಾಯಿತು.

ಗ್ರಾಮದ ಶ್ರೀಸಿದ್ದಪ್ಪಾಜಿ ದೇವಸ್ಥಾನದ ಮುಂಭಾಗದಲ್ಲಿ ಆರಂಭವಾದ ಮೆರವಣಿಗೆಗೆ ಯಜಮಾನರು ಶ್ರೀಭಗೀರಥರ ಭಾವಚಿತ್ರಕ್ಕೆ ಪೂಜೆ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಮಾಡಿ ಚಾಲನೆ ನೀಡಿದರು. ಗ್ರಾಮದ ಪ್ರಮುಖ ಬೀದಿ ಮೆರವಣಿಗೆ ನಡೆಯಿತು.

ಶ್ರೀಭಗೀರಥ ಮಹರ್ಷಿ ಜಯಂತಿ ಅಂಗವಾಗಿ ಗ್ರಾಮವನ್ನು ಹಸಿರು ತೋರಣಗಳಿಂದ ಶೃಂಗರಿಸಲಾಗಿತ್ತು. ಮೆರವಣಿಗೆ ಹಾದು ಹೋಗುವ ರಸ್ತೆ ಮೇಲೆ ಬಣ್ಣಬಣ್ಣದ ಚಿತ್ತಾರಗಳು ಬಿಟ್ಟು ಸ್ವಾಗತಿಸಲಾಯಿತು. ಮೆರವಣಿಗೆಯಲ್ಲಿ ಯುವಕರ ತಂಡ ಶ್ರೀ ಭಗೀರಥ ಮಹರ್ಷಿ ಪರ ಜೈಕಾರ ಕೂಗಿ ಸಂಭ್ರಮಿಸಿದರು. ಮೆರವಣಿಗೆಯಲ್ಲಿ ಯಜಮಾನರಾದ ಮಹದೇವಶೆಟ್ಟಿ, ಮುಖಂಡರಾದ ಬಸವಶೆಟ್ಟಿ, ಅಂಗಡಿ ಮಹದೇವಶೆಟ್ಟಿ, ಕಾಳಶೆಟ್ಟಿ, ಭಗೀರಥ ಯುವಕರ ಸಂಘದ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

ಒಂದನೇ ಪುಟದಿಂದ

ಏನು ಬೇಕಾದರೂ ಆಗಬಹುದು

ಮಾರ್ಮಿಕವಾಗಿ ನುಡಿದಿದ್ದಾರೆ. ನಗರದ ಅರಮನೆ ಮೈದಾನದಲ್ಲಿ ಇಂದು ನಡೆದ ಜೆಡಿಎಸ್ ಆತ್ಮಾವಲೋಕನ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕುಮಾರಸ್ವಾಮಿ ಈ ಸರ್ಕಾರದಲ್ಲಿ ವಿಶ್ವಾಸದ ಕೊರತೆ ಇದೆ. ಹೀಗಾಗಿ ಬಹಳ ದಿನ ಉಳಿಯುವುದು ಕಷ್ಟ. ಲೋಕಸಭಾ ಚುನಾವಣೆಯ ನಂತರ ರಾಜ್ಯ ರಾಜಕೀಯದ ಚಿತ್ರಣವೇ ಬದಲಾಗುತ್ತದೆ ಎಂದು ತಿಳಿಸಿದ್ದಾರೆ. ಕಾಂಗ್ರೆಸ್ಸಿನ ಕುತಂತ್ರ ರಾಜಕಾರಣದಿಂದ ನಾವು ಈ ಚುನಾವಣೆ ಸೋಲಬೇಕಾಯಿತು. ಮಲ್ಲಿಕಾರ್ಜುನ ಖರ್ಗೆ ಅವರನ್ನು ಮುಂದೆ ಬಿಟ್ಟು ನಮ್ಮ ಮತಗಳನ್ನು ಒಡೆಯಲಾಗಿದೆ. ಬಿಜೆಪಿ ಜೊತೆ ಕೈ ಜೋಡಿಸಲಿದ್ದಾರೆ ಎಂದು ಸುಳ್ಳು ಸುದ್ದಿಯನ್ನು ಕಾಂಗ್ರೆಸ್ ಹರಡಿದ್ದರಿಂದ ನಾವು ಸೋತಿದ್ದೇವೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು. ರಾಜ್ಯದ ಜನತೆ ಪ್ರಥಮ ಬಾರಿಗೆ ಇಂತಹ ಫಲಿತಾಂಶವನ್ನು ಜೆಡಿಎಸ್‌ಗೆ ಕೊಟ್ಟಿದೆ. ಇದನ್ನು ನಾವು ನಿರೀಕ್ಷೆ ಮಾಡಿರಲಿಲ್ಲ ಎಂದರು. ಈ ಫಲಿತಾಂಶದಿಂದ ಯಾರೂ ಧೃತಿಗೆಡಬೇಕಿಲ್ಲ. ನಾವು ನಮ್ಮ ಹೋರಾಟದಿಂದ ಹಿಮ್ಮುಖರಾಗಬಾರದು. ಇದು ಶಾಶ್ವತ ಫಲಿತಾಂಶ ಅಲ್ಲ. ನಮ್ಮನ್ನು ನಾವು ವಿಮರ್ಶೆ ಮಾಡಿಕೊಂಡು ಮುಂದಿನ ಹೆಜ್ಜೆಗಳನ್ನು ಇಡೋಣ ಎಂದು ಧೈರ್ಯ ತುಂಬಿದರು. ಅತ್ಯಂತ ಶ್ರಮವಹಿಸಿ ದುಡಿದಿದ್ದೀರಿ. ನಮ್ಮ ನಿರೀಕ್ಷೆ ಸುಳ್ಳಾಗಿದೆ. ಚುನಾವಣೆ ಸಮಯದಲ್ಲಿ ನಾನು ಕೆಲವು ಅಭ್ಯರ್ಥಿಗಳನ್ನು ಕೈಹಿಡಿದು ನಡೆಸುವಲ್ಲಿ ವಿಫಲನಾದೆ. ಎ–ಕೆಟಗರಿ ಅಭ್ಯರ್ಥಿಗಳಿಗಷ್ಟೇ ಒತ್ತು ನೀಡಿದೆ. ದಯವಿಟ್ಟು ನನ್ನನ್ನು ಕ್ಷಮಿಸಿ" ಎಂದು ಕುಮಾರಸ್ವಾಮಿ ಕ್ಷಮೆ ಕೇಳಿದರು. ಕೆಲವು ಕ್ಷೇತ್ರಗಳಲ್ಲಿ ನಮ್ಮ ಅಭ್ಯರ್ಥಿಗಳು ಮೈಮರೆತರು. ಇನ್ನೂ ಕೆಲವು ಕ್ಷೇತ್ರಗಳಲ್ಲಿ ನಾವು ಆರ್ಥಿಕವಾಗಿ ಹಿನ್ನಡೆ ಅನುಭವಿಸಿದ್ದೇವೆ. ಇನ್ನಾದರೂ ನಾವು ಎಚ್ಚೆತ್ತುಕೊಳ್ಳೋಣ. ಹಣದಿಂದ ಚುನಾವಣೆ ಎದುರಿಸುವುದು ಬೇಡ. ಜನರ ಮನಸ್ಸನ್ನು ಬದಲಿಸಿ ಚುನಾವಣೆಗೆ ನಿಲ್ಲೋಣ ಎಂದು ಪ್ರೇರಣೆ ನೀಡಿದರು.

ಪಕ್ಷದ ಜಿಲ್ಲಾ ಘಟಕಗಳು ಬಹಳ ನಿಷ್ಕ್ರಿಯವಾಗಿವೆ. 224 ಕ್ಷೇತ್ರಗಳಲ್ಲಿ ನಾನೇ ಅಭ್ಯರ್ಥಿಗಳನ್ನು ಹುಡುಕಲು ಸಾಧ್ಯವಿಲ್ಲ. ಇನ್ನಾದರೂ ಎಚ್ಚೆತ್ತುಕೊಂಡು ಪ್ರತಿ ಸಮುದಾಯದಿಂದ ಫೇಸ್ ವ್ಯಾಲ್ಯೂ ಇರುವ ಮುಖಂಡರನ್ನು ಹುಟ್ಟುಹಾಕಿ. ನಿಮ್ಮ ಜೊತೆ ನಾನು ಇರುತ್ತೇನೆ ಎಂದು ಕುಮಾರಸ್ವಾಮಿ ಭರವಸೆ ನೀಡಿದರು. ಪಕ್ಷಕ್ಕೆ ಜೀವ ತುಂಬುವ ಕಡೆ ಯೋಚಿಸಿ. ಕಾಂಗ್ರೆಸ್‌ನವರು ತಮ್ಮ ಗ್ಯಾರಂಟಿ ಯೋಜನೆಗಳಿಗೆ ನೀತಿ ನಿಯಮ ರೂಪಿಸುತ್ತಿದ್ದಾರೆ. ಜನರಿಗೆ ಈ ಬಗ್ಗೆ ಮನವರಿಕೆ ಮಾಡಿಸಿ. ನಿಮ್ಮ ನಿಮ್ಮ ಕ್ಷೇತ್ರದಲ್ಲಿ ಅಭಿಯಾನ ಮಾಡಿ ಜಾಗೃತಿ ಮೂಡಿಸಿ ಎಂದು ಕರೆ ನೀಡಿದರು. ಜೆಡಿಎಸ್ ಪಕ್ಷಕ್ಕೆ ದೇವೇಗೌಡರ ಕುಟುಂಬದ ಹಣೆಪಟ್ಟಿಯನ್ನು ಕಾಂಗ್ರೆಸ್ ಕಟ್ಟಿದೆ. ಇದನ್ನು ಅಳಿಸಿಹಾಕಿ ಪಕ್ಷ ಕಟ್ಟೋಣ. ಎಲ್ಲರೂ ಮುಂದೆ ಬನ್ನಿ. ಪಕ್ಷ ಬಲಪಡಿಸೋಣ ಎಂದರು.

ಯಾರನ್ನಾದರೂ ಹಾಳು ಮಾಡಬೇಕು ಅಂದ್ರೆ ಅವರನ್ನು ಅಭ್ಯರ್ಥಿ ಮಾಡಿದರೆ ಸಾಕು ಎನ್ನುವ ಅನುಭವ ಈ ಚುನಾವಣೆಯಲ್ಲಿ ನನಗೆ ಆಗಿದೆ. ಮುಂದಿನ ಬಾರಿ ಅಭ್ಯರ್ಥಿಯಾಗಿ ನಿಲ್ಲಿ ಎನ್ನುವ ಧೈರ್ಯ ನನಗಿಲ್ಲ. ಹಣ ಪಡೆದ ಮತದಾರರು ಯಾವ ರೀತಿ ತೀರ್ಮಾನ ಮಾಡುತ್ತಾರೆ ಎಂಬ ಚಿತ್ರಣ ನಿಮ್ಮ ಎದುರೇ ಇದೆ. ಹಣ ಖರ್ಚು ಮಾಡಿ ಮುಂದಿನ ಚುನಾವಣೆ ಎದುರಿಸುವುದು ಬೇಡ ಎಂದರು.

ಕೆಲವು ಜಿಲ್ಲೆಗಳಲ್ಲಿ ನಮ್ಮ ನಾಯಕರು ಮ್ಯಾಚ್ ಫಿಕ್ಸಿಂಗ್ ಮಾಡಿಕೊಂಡರು. ಇದು ಪಕ್ಷ ಕಟ್ಟುವ ನಡೆಯಲ್ಲ. ದಯವಿಟ್ಟು ಅಂತಹವರು ಇದ್ದರೆ ಮುಂದಿನ ದಾರಿ ಬಗ್ಗೆ ಯೋಚಿಸಿ. ನಮಗೆ ಪಕ್ಷ ನಿಷ್ಠರು ಬೇಕು ಎಂದರು.

ಸುಳ್ಳು ಗ್ಯಾರಂಟಿಗಳ ವಿರುದ್ಧ ಹೋರಾಟ

ಸಿದ್ದರಾಮಯ್ಯ ಹೇಳಿದ್ದೇನು, ಡಿಕೆಶಿ ಹೇಳಿದ್ದೇನು, ಖರ್ಗೆ ಹೇಳಿದ್ದೇನು, ಇದನ್ನೇ ನಾವು ಜನರ ಮುಂದೆ ಇಡಬೇಕು. ಈ ಬಗ್ಗೆಯೇ ಆಂದೋಲನವನ್ನೇ ಮಾಡಬೇಕು. ಜನರ ಜತೆ ನಿಲ್ಲಬೇಕು ಎಂದು ಕರೆ ನೀಡಿದರು. ಕಾಂಗ್ರೆಸ್ ಪಕ್ಷ ವ್ಯವಸ್ಥಿತವಾಗಿ ಅಪಪ್ರಚಾರ ನಡೆಸಿತು. ಸುಳ್ಳು ಗ್ಯಾರಂಟಿಗಳು ಹಾಗೂ ಕೂಪನ್‌ಗಳನ್ನು ಕೊಟ್ಟು ಜನರಿಗೆ ವಂಚಿಸಿ ಅಧಿಕಾರಕ್ಕೆ ಬಂದಿದೆ ಕಾಂಗ್ರೆಸ್ ಕುತಂತ್ರದಿಂದ ಗೆದ್ದಿದೆ. ಬಿಜೆಪಿಯಿಂದ ನಲುಗಿದ ಒಂದು ಸಮಾಜದ ಪರವಾಗಿ ನಾವು ದನಿ ಎತ್ತಿದೆವು. ಅಚಲವಾಗಿ ಬೆಂಬಲ ಕೊಟ್ಟೆವು. ಹೆಜ್ಜೆ ಹೆಜ್ಜೆಗೂ ಅವರಿಗೆ ಬಿಜೆಪಿ ಸರಕಾರ ತೊಂದರೆ ಕೊಟ್ಟಾಗ ಧೈರ್ಯವಾಗಿ ನಿಂತೆವು. ಆದರೆ ಅವರು ನಮ್ಮ ಪಕ್ಷದ ಪರವಾಗಿ ನಿಲ್ಲದೆ ಹೋದರು ಎಂದು ಕುಮಾರಸ್ವಾಮಿ ನೊಂದು ನುಡಿದರು. ಆರ್ಥಿಕ ಸಮಸ್ಯೆಗಳೂ ನಮ್ಮ ಸೋಲಿಗೆ ಕಾರಣ, ಅಭ್ಯರ್ಥಿಗಳ ಖರ್ಚಿಗೆ ನಾವು ಹಣ ಕೊಡಲಿಲ್ಲ. ಬಿಜೆಪಿ ಕಾಂಗ್ರೆಸ್ ಪಕ್ಷಗಳಿಗೆ ಸರಿ ಸಮವಾಗಿ ಖರ್ಚು ಮಾಡಲು ನಮ್ಮಿಂದ ಆಗಲಿಲ್ಲ. ಕೇವಲ 600 ಮತಗಳಲ್ಲಿ ಸೋತ ಕುಮಟಾ ಕ್ಷೇತ್ರದ ಸೂರಜ್ ನಾಯಕ್ ಸೋನಿ ಅವರ ಸೋಲು ನನಗೆ ಅತೀವ ನೋವು ಉಂಟು ಮಾಡಿದೆ ಎಂದರು.

ಸಂಪುಟ ವಿಸ್ತರಣೆ

ತಾವು ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಶುಕ್ರವಾರ ಸಂಜೆಯೇ ಬೆಂಗಳೂರಿಗೆ ಹಿಂತಿರುಗುವುದಾಗಿ ಹೇಳಿದರಲ್ಲದೆ, ಪಕ್ಷದ ವರಿಷ್ಠರು ನಾಳೆ ಸಂಜೆಯೊಳಗೆ ಅನುಮತಿ ನೀಡಿದರೆ ಶನಿವಾರ ಅಥವಾ ಭಾನುವಾರ ಸಂಪುಟ ವಿಸ್ತರಣೆ ಆಗಲಿದೆ ಎಂದರು. ಮಂತ್ರಿಮಂಡಲಕ್ಕೆ ಹೊಸದಾಗಿ ಎಷ್ಟು ಮಂದಿಯನ್ನು ಸೇರ್ಪಡೆಗೊಳಿಸಲಾಗುತ್ತಿದೆ ಎಂಬ ಪ್ರಶ್ನೆಗೆ ಉತ್ತರಿಸಲು ಮುಖ್ಯಮಂತ್ರಿಗಳು ನಿರಾಕರಿಸಿದರು.

ಬುಧವಾರ ಮಧ್ಯಾಹ್ನವೇ ದೆಹಲಿಗೆ ತೆರಳಿದ್ದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಅಂದು ಸಂಜೆಯೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಮಂತ್ರಿಮಂಡಲ ವಿಸ್ತರಣೆ ಸಂಬಂಧ ಚರ್ಚೆ ನಡೆಸಿದ್ದಾರೆ. ಇಂದು ಬೆಳಗ್ಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್, ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರೊಟ್ಟಿಗೆ ಮೊದಲಿಗೆ ಚರ್ಚೆ ನಡೆಸಿದ ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿ, ನಂತರ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳೊಂದಿಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಚರ್ಚಿಸಿದರು. ನಾಳೆ ಬೆಳಗ್ಗೆ 10 ಗಂಟೆಗೆ ಮುಖ್ಯಮಂತ್ರಿಗಳು ಎಐಸಿಸಿ ನಾಯಕ ರಾಹುಲ್ ಗಾಂಧಿಯವರನ್ನು ಭೇಟಿ ಮಾಡಿದ ನಂತರ ಖರ್ಗೆ ಅವರನ್ನೂ ಕೂಡ ಭೇಟಿ ಮಾಡಿ ಸಂಭವನೀಯ ಸಚಿವರ ಪಟ್ಟಿಗೆ ಒಪ್ಪಿಗೆ ಪಡೆಯಲಿದ್ದಾರೆ. ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಮಂತ್ರಿಮಂಡಲದಲ್ಲಿ ತಮ್ಮ ಬೆಂಬಲಿಗರಿಗೆ ಸ್ಥಾನ ಕೊಡಿಸುವ ನಿಟ್ಟಿನಲ್ಲಿ ಪೈಪೋಟಿ ನಡೆಸಿದ್ದಾರೆ. ನಾಳೆ ಖರ್ಗೆ ಅವರನ್ನು ಭೇಟಿ ಮಾಡಿದಾಗ ಸಚಿವರ ಪಟ್ಟಿಗೆ ಗ್ರೀನ್ ಸಿಗ್ನಲ್ ದೊರೆಯಲಿದೆ. ಹಾಲಿ ಸಿದ್ಧಪಡಿಸಿರುವ ಪಟ್ಟಿಯನ್ನೇ ಯಥಾವತ್ತಾಗಿ ಖರ್ಗೆ ಅವರು ಒಪ್ಪಬಹುದು. ಅಥವಾ ಪಟ್ಟಿಯಲ್ಲಿ ಕೆಲ ಬದಲಾವಣೆಗಳು ಆಗಬಹುದು ಎಂದು ಹೇಳಲಾಗಿದೆ. ಈಗ 22 ಮಂದಿ ಸಂಭವನೀಯ ಸಚಿವರ ಪಟ್ಟಿ ಸಿದ್ಧವಾಗಿದ್ದು, ಮುಖ್ಯಮಂತ್ರಿಗಳು 20 ಮಂದಿಯನ್ನು ಸಂಪುಟಕ್ಕೆ ಸೇರಿಸಿಕೊಂಡು 4 ಸ್ಥಾನಗಳನ್ನು ಉಳಿಸಿಕೊಳ್ಳಲು ನಿರ್ಧರಿಸಿದ್ದಾರೆ ಎನ್ನಲಾಗಿದೆ.

20 ನೂತನ ಸಚಿವರಲ್ಲಿ ಒಕ್ಕಲಿಗ ಮತ್ತು ಲಿಂಗಾಯತರಿಗೆ ತಲಾ 5 ಮತ್ತು 6 ಸ್ಥಾನಗಳು, ಪರಿಶಿಷ್ಟರಿಗೆ 2, ಬೋವಿ, ಲಂಬಾಣಿ ಹಾಗೂ ಮುಸ್ಲೀಮರಿಗೆ ತಲಾ ಒಂದು ಸ್ಥಾನ ನೀಡಿ ಉಳಿದವುಗಳನ್ನು ಹಿಂದುಳಿದ ವರ್ಗದವರಿಗೆ ನೀಡುವ ನಿಟ್ಟಿನಲ್ಲಿ ಸಂಭವನೀಯ ಸಚಿವರ ಬಗ್ಗೆ ಸಿದ್ಧವಾಗಿದೆ.

22 ಸಂಭವನೀಯ ಸಚಿವರಿವರು...

ಸಂಪುಟಕ್ಕೆ ಸೇರ್ಪಡೆ ಮಾಡಿಕೊಳ್ಳಲು ಗ್ರೀನ್ ಸಿಗ್ನಲ್ ನೀಡಿದೆ ಎಂದು ಹೇಳಲಾಗಿದೆ. ಸಂಭವನೀಯ ಪಟ್ಟಿಯಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಆಪ್ತರಾದ ಡಾ. ಹೆಚ್.ಸಿ.ಮಹದೇವಪ್ಪ, ಪಿರಿಯಾಪಟ್ಟಣ ಶಾಸಕ ಕೆ.ವೆಂಕಟೇಶ್, ಚಾಮರಾಜನಗರ ಶಾಸಕ ಪುಟ್ಟರಂಗ ಶೆಟ್ಟಿ ನಾಗಮಂಗಲ ಶಾಸಕ ಎನ್.ಚೆಲುವರಾಯಸ್ವಾಮಿ, ಮಳವಳ್ಳಿಯ ನರೇಂದ್ರಸ್ವಾಮಿ ಸ್ಥಾನ ಪಡೆದಿದ್ದಾರೆ. ಅಲ್ಲದೇ ಈಶ್ವರ ಖಂಡ್ರೆ, ಲಕ್ಷ್ಮೀ ಹೆಬ್ಬಾಳ್ಕರ್, ಶಿವಾನಂದ ಪಾಟೀಲ್, ಶರಣ ಬಸಪ್ಪ ದರ್ಶನಾಪುರ್, ಬಸವರಾಜ ರಾಯರೆಡ್ಡಿ, ಎಸ್.ಎಸ್.ಮಲ್ಲಿಕಾರ್ಜುನ, ಭೈರತಿ ಸುರೇಶ್, ಕೃಷ್ಣಬೈರೇಗೌಡ, ರಹೀಂ ಖಾನ್, ಅಜಯ್ ಸಿಂಗ್, ಹೆಚ್.ಕೆ.ಪಾಟೀಲ್, ಚಿಂತಾಮಣಿ ಶಾಸಕ ಸುಧಾಕರ್, ಹಿರಿಯೂರು ಶಾಸಕ ಸುಧಾಕರ್, ಮಧು ಬಂಗಾರಪ್ಪ, ಶಿವರಾಜ್ ತಂಗಡಗಿ, ಮಾಂಕಾಳ ವೈದ್ಯ, ಮಧುಗಿರಿಯ ರಾಜಣ್ಣ ಅಥವಾ ಬಳ್ಳಾರಿ ಗ್ರಾಮಾಂತರ ಶಾಸಕ ನಾಗೇಂದ್ರ ಉಗ್ರಪ್ಪ ಲಮಾಣಿ ಮತ್ತು ವಿಧಾನ ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಅವರುಗಳು ಸಂಪುಟ ವಿಸ್ತರಣೆ ವೇಳೆ ಸಚಿವರಾಗುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

ಶೀಘ್ರವೇ ಅನುಮೋದನೆ

ಈ ಸರ್ಕಲ್‌ನಲ್ಲಿ ಫ್ಲೈ ಓವರ್ ನಿರ್ಮಿಸುವ ಸಂಬಂಧ ಪ್ರಸ್ತಾ ವನೆ ಸಲ್ಲಿಸಿದ್ದು, ಸರ್ಕಾರದ ಅನುಮೋದನೆ ಹಂತದಲ್ಲಿದೆ. ನಾವೂ ಅದರ ಹಿಂದೆ ಬಿದ್ದಿದ್ದು, ಇಷ್ಟರಲ್ಲೇ ಅನುಮೋದನೆ ದೊರೆಯಲಿದೆ. ನಂತರ ಪ್ರಾಧಿಕಾರದಿಂದ ಈ ಯೋಜನೆಯ ಕಾಮಗಾರಿ ಕೈಗೆತ್ತಿಕೊಳ್ಳ ಲಾಗುವುದು ಎಂದು ತಿಳಿಸಿದರು. ಫ್ಲೈ ಓವರ್ ನಿರ್ಮಿಸುವವರೆಗೆ ಸಂಚಾರ ಸಮಸ್ಯೆ ನಿವಾರಿಸಲು ಮಣಿಪಾಲ್ ಆಸ್ಪತ್ರೆ ಜಂಕ್ಷನ್‌ನಲ್ಲಿದ್ದ ನಾಲ್ಕು ಸಿಗ್ನಲ್ ಲೈಟ್ ಕಂಬಗಳನ್ನು ಬದಿಗೆ ಸ್ಥಳಾಂತರಿಸಿ, ಅಲ್ಲಿನ ಮೀಡಿ ಯನ್‌ಗಳನ್ನು ಕಡಿತಗೊಳಿಸಿರುವುದರಿಂದ ಈಗ ಜಂಕ್ಷನ್ ವಿಶಾಲವಾಗಿದ್ದು, ನಾಲ್ಕು ಕಡೆಯಿಂದ ವಾಹನಗಳು ಸರಾಗವಾಗಿ ಚಲಿಸುತ್ತಿವೆ. ಇದು ತಾತ್ಕಾಲಿಕ ವ್ಯವಸ್ಥೆಯಾಗಿದೆ ಎಂದು ಪ್ರತಾಪ್ ಸಿಂಹ ತಿಳಿಸಿದರು.

ಮೈಸೂರು–ಬೆಂಗಳೂರು ಹೆದ್ದಾರಿ, ರಿಂಗ್ ರಸ್ತೆಯ ಸರ್ವಿಸ್ ರಸ್ತೆ ಹಾಗೂ ಮೈಸೂರು ಕಡೆಯಿಂದ ಬರುವ ವಾಹನಗಳು ಕೆಂಪೇಗೌಡ ಸರ್ಕಲ್‌ನಲ್ಲಿ ಎಡಕ್ಕೆ ಸರಾಗವಾಗಿ ತಿರುಗಲು (ಫ್ರೀ ಲೆಫ್ಟ್) ಅನುಕೂಲ ವಾಗುವಂತೆ ಮತ್ತಷ್ಟು ವಿಶಾಲಗೊಳಿಸಲು ಸಂಚಾರ ಪೊಲೀಸರು ಹಾಗೂ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ತಿಳಿಸಿದರು. ಉಳಿದಂತೆ ಸಿಗ್ನಲ್‌ಲೈಟ್ ಕಂಬಗಳನ್ನು ಸ್ಥಳಾಂತರಿಸಿರುವುದು ಹಾಗೂ ವಿಭಜಕ ಕಡಿತಗೊಳಿಸಿರುವುದರಿಂದ ಅಲ್ಲಲ್ಲಿ ಉಂಟಾ ಗಿರುವ ಗುಂಡಿಗಳ ಮುಚ್ಚಿ ಡಾಂಬರ್ ಹಾಕಿ, ಸರ್ಕಲ್ ಅನ್ನು ವ್ಯವಸ್ಥಿತವಾಗಿ ನಿರ್ವಹಣೆ ಮಾಡುವಂತೆಯೂ ಹೇಳಿದ್ದೇನೆ ಅದರಿಂದ ವಾಹನಗಳು ಅಡೆತಡೆಯಿಲ್ಲದೆ ಸಂಚರಿಸಬಹುದಾಗಿದೆ ಎಂದು ಸಂಸದರು ನುಡಿದರು. ಈ ಹಿಂದೆ ಕೆಂಪೇಗೌಡ ಸರ್ಕಲ್‌ನಲ್ಲಿ ವಾಹನ ದಟ್ಟಣೆ ಉಂಟಾಗುವುದನ್ನು ತಪ್ಪಿಸುವ ಸಲುವಾಗಿ ಗ್ರೇಡ್ ಸಪರೇಟರ್ ನಿರ್ಮಿಸಲು ಉದ್ದೇಶಿಸಿ, 2019ರಲ್ಲಿ ಪ್ರಸ್ತಾವನೆಯನ್ನು ಸಹ ಸಲ್ಲಿಸಲಾಗಿತ್ತು. ಮೈಸೂರು –ಬೆಂಗಳೂರು ಎಕ್ಸ್‌ಪ್ರೆಸ್ ವೇ ಪೂರ್ಣಗೊಂಡು ಸಂಚಾರಕ್ಕೆ ಮುಕ್ತವಾದರೂ ಮಣಿ ಪಾಲ್ ಆಸ್ಪತ್ರೆ ಜಂಕ್ಷನ್‌ನಲ್ಲಿ ಫ್ಲೈ ಓವರ್ ನಿರ್ಮಿ ಸುವ ಪ್ರಸ್ತಾವನೆಗೆ ಇನ್ನು ಅನುಮೋದನೆ ಸಿಕ್ಕಿಲ್ಲ. ಸಂಸದರು ಸ್ಥಳ ಪರಿಶೀಲಿಸಿದ ಸಂದರ್ಭ ಸಂಚಾರ ವಿಭಾಗದ ಎಸಿಪಿ ಪರಶುರಾಮಪ್ಪ ಸಿದ್ದಾರ್ಥ ಸಂಚಾರ ಠಾಣೆ ಇನ್ಸ್‌ಪೆಕ್ಟರ್ ಯೋಗೇಶ್, ಎನ್.ಆರ್. ಠಾಣೆ ಇನ್ಸ್‌ಪೆಕ್ಟರ್ ಲಕ್ಷ್ಮೀಕಾಂತ ತಳವಾರ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

ಜನರ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಿ

ಮೈಸೂರು ಜಿಪಂ ಸಿಇಒ ಕೆ.ಎಂ.ಗಾಯತ್ರಿ ಸಲಹೆ





ಮೈಸೂರು, ಮೇ 25 – ಯಾವುದೇ ರೀತಿಯ ಗೊಂದಲ ಮತ್ತು ತಾರತಮ್ಯವಿಲ್ಲದೇ ಗ್ರಾಮದ ಜನರ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಜನಪ್ರತಿನಿಧಿಗಳು ಒಗ್ಗಟ್ಟಿನಿಂದ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ.ಗಾಯಿತ್ರಿ ಸಲಹೆ ನೀಡಿದರು.

ಹುಣಸೂರು ತಾಲೂಕಿನ ಬನ್ನಿಕುಪ್ಪೆ ಗ್ರಾಮ ಪಂಚಾಯಿತಿಗೆ ಗುರುವಾರ ಭೇಟಿ ನೀಡಿದ ಬಳಿಕ ಸದಸ್ಯರೊಂದಿಗೆ ಏರ್ಪಡಿಸಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಗ್ರಾಮದಲ್ಲಿ ನೀರು ಪೂರೈಕೆ ಮತ್ತಿತರ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಜೊತೆಗೆ ಜನಪ್ರತಿನಿಧಿಗಳು ಉತ್ತಮ ಬಾಂಧವ್ಯ ಇಟ್ಟುಕೊಳ್ಳುವುದರ ಜೊತೆಗೆ ಗ್ರಾಮದ ಜನರ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಕಾರ್ಯನಿರ್ವಹಿಸಬೇಕು ಎಂದರು.

ಗ್ರಾಮದಲ್ಲಿ ಜೆಜೆಎಂ ಯೋಜನೆಯಡಿ ಪ್ರತಿ ಮನೆಗಳಿಗೆ ಸಮರ್ಪಕವಾಗಿ ನೀರು ಸರಬರಾಜು ಮಾಡುವುದರೊಂದಿಗೆ ಪ್ರತಿನಿತ್ಯ ಸ್ವಚ್ಛತೆಯನ್ನು ಕಾಪಾಡಬೇಕು. ನಿಗದಿತ ಸಮಯಕ್ಕೆ ಕರ ವಸೂಲಾತಿ ಸೇರಿದಂತೆ ಪಂಚಾಯಿತಿ ಕೆಲಸಗಳು ಸಮಯಕ್ಕೆ ಸರಿಯಾಗಿ ಸಾಗಬೇಕು. ಬದು ನಿರ್ಮಾಣ, ನೀರು ನಿರ್ವಹಣೆ, ನರೇಗಾ ಯೋಜನೆಯಿಂದ ಅನುಷ್ಠಾನಗೊಳ್ಳುವ ವೈಯಕ್ತಿಕ ಮತ್ತು ಸಮುದಾಯ ಕಾಮಗಾರಿಗಳ ಬಗ್ಗೆ, ಚರಂಡಿ ಸ್ವಚ್ಛತೆ, ಸಮುದಾಯ ಶೌಚಾಲಯ ಅಗತ್ಯತೆಗಳ ಕುರಿತು ಹಾಗೂ ಕಸ ಸಂಗ್ರಹಣೆ ಮತ್ತು ವಿಲೇವಾರಿ ಸೇರಿದಂತೆ ಇನ್ನಿತರೆ ವಿಚಾರಗಳ ಬಗ್ಗೆ ಚರ್ಚಿಸಿದರು.

ಪಂಚಾಯಿತಿ ವ್ಯಾಪ್ತಿಯಲ್ಲಿರುವ ಸರ್ಕಾರಿ ಆಸ್ಪತ್ರೆ, ಸಮುದಾಯ ಶೌಚಾಲಯ ಕಾಮಗಾರಿ, ಗ್ರಂಥಾಲಯ, ನರೇಗಾದಿಂದ ಅನುಷ್ಠಾನಗೊಂಡಿರುವ ಘನತ್ಯಾಜ್ಯ ವಿಲೇವಾರಿ ಘಟಕ, ಬನ್ನಮ್ಮನ ಕೆರೆ ಕಾಮಗಾರಿ, ಜೆಜೆಎಂ ಯೋಜನೆಯಡಿ ಪ್ರತಿ ಮನೆಗಳ ಮುಂದೆ ಅಳವಡಿಸಲಾಗುತ್ತಿರುವ ಪೈಪ್‌ಲೈನ್ ಕಾಮಗಾರಿಗಳ ಸ್ಥಿತಿಗತಿಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಈ ವೇಳೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮನು. ಬಿ.ಕೆ, ನರೇಗಾ ಸಹಾಯಕ ನಿರ್ದೇಶಕ ಹೆಚ್.ಡಿ.ಲೋಕೇಶ್, ಎಇಇ ಖಲೀಂ, ತಾಂತ್ರಿಕ ಸಂಯೋಜಕರು, ಸಹಾಯಕ ತಾಂತ್ರಿಕ ಅಭಿಯಂತರರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರಾಘವೇಂದ್ರ ಪ್ರಸನ್ನ, ಕಾರ್ಯದರ್ಶಿ ವೇದಮೂರ್ತಿ ಸೇರಿದಂತೆ ಪಂಚಾಯಿತಿ ಸದಸ್ಯರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಇಂದಿನಿಂದ 28ರವರೆಗೆ ವಿದ್ಯುತ್‌ಉತ್ಸವ



ಮೈಸೂರು,ಮೇ 25(ಪಿಎಂ)– ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಿನ ವಾರ್ಷಿಕ ಉತ್ಸವ 'ವಿದ್ಯುತ್–2023' ಮೇ 26ರಿಂದ 28ರವರೆಗೆ ನಡೆಯಲಿದೆ ಎಂದು ಕಾಲೇಜಿನ ವಿದ್ಯಾರ್ಥಿ ಕ್ಷೇಮಪಾಲನ ಡೀನ್ ಡಾ.ಟಿ.ಪಿ.ಸುರೇಖಾ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವಿದ್ಯುತ್ ಉತ್ಸವವು ಕಾಲೇಜಿನ ವಿದ್ಯಾರ್ಥಿಗಳೇ ಸಂಘಟಿಸುವ ವಾರ್ಷಿಕ ಕಾರ್ಯಕ್ರಮ. ಮೇ 26ರಂದು ಬೆಳಗ್ಗೆ 10ಕ್ಕೆ ಕಾಲೇಜಿನ ಬಿ.ಸಿ.ಲಿಂಗಯ್ಯ ಹಾಲ್‌ನಲ್ಲಿ ಉತ್ಸವದ ಉದ್ಘಾಟನಾ ಸಮಾರಂಭ ಹಮ್ಮಿಕೊಂಡಿದ್ದು, ಮುಕ್ತ ವಿವಿ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಉತ್ಸವಕ್ಕೆ ಚಾಲನೆ ನೀಡಲಿದ್ದಾರೆ ಎಂದರು.

ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪ ಗೌಡ, ಕಾರ್ಯದರ್ಶಿ ಪಿ.ವಿಶ್ವನಾಥ್, ಖಜಾಂಚಿ ಶ್ರೀಶೈಲ ರಾಮಣ್ಣವರ್, ಕಾಲೇಜಿನ ಡಾ.ಬಿ.ಸದಾಶಿವೇಗೌಡ ಮತ್ತು ಕಾಲೇಜಿನ ಸಾಂಸ್ಕೃತಿಕ ಸಮಿತಿ ಅಧ್ಯಕ್ಷ ಡಾ.ಬಿ.ಜಗದೀಶ್ ಪಾಲ್ಗೊಳ್ಳಲಿದ್ದಾರೆ. ಕಾಲೇಜಿನ ಆವರಣದಲ್ಲಿ ನಡೆಯುವ ಉತ್ಸವದಲ್ಲಿ ಶ್ವಾನ ಪ್ರದರ್ಶನ, ಆಟೋ ಎಕ್ಸ್‌ಪೋ, ಸಾಹಸ ಪ್ರದರ್ಶನ, ರಂಗೋಲಿ, ನೃತ್ಯ, ಹಾಡು, ಮೆಹಂದಿ, ಬೆಂಕಿ ಇಲ್ಲದೇ ಅಡುಗೆ, ಬಾಕ್ಸ್ ಕ್ರಿಕೆಟ್, ರ್‍ಯಾಂಪ್ ವಾಕ್ ಮೊದಲಾದ ಸ್ಪರ್ಧೆಗಳು ನಡೆಯಲಿದ್ದು, ವಿವಿಧ ಕಾಲೇಜು ಹಾಗೂ ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳು ಭಾಗವಹಿಸಲು ಅವಕಾಶವಿದೆ. ಹೆಚ್ಚಿನ ವಿವರಗಳಿಗೆ ಮೊ.ಸಂ. 95354 63850 ಸಂಪರ್ಕಿಸಬಹುದು ಎಂದು ವಿವರಿಸಿದರು.

ಮೇ 26ರಂದು ಸಂಜೆ 7ಕ್ಕೆ ಸ್ಯಾಂಡಲ್‌ವುಡ್ ನೈಟ್ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದ್ದು, ಇದೇ ವೇಳೆ ಐಶ್ವರ್ಯ ರಂಗರಾಜನ್ ಅವರ ಬ್ಯಾಂಡ್ ಸಂಗೀತ ಆಯೋಜಿಸಲಾಗಿದೆ. ಮೇ 27ರಂದು ಸಂಜೆ 7ಕ್ಕೆ ಹಮ್ಮಿಕೊಂಡಿರುವ ಬಾಲಿವುಡ್ ನೈಟ್‌ನಲ್ಲಿ ಭಾರತೀಯ ಪಾಪ್ ಗಾಯಕಿ ಧ್ವನಿ ಭಾನುಶಾಲಿ ಪಾಲ್ಗೊಳ್ಳಲಿದ್ದಾರೆ. ಮೇ 28ರಂದು ಸಂಜೆ 7ಕ್ಕೆ ಡಿಜೆ ಶೋ ನಡೆಯಲಿದೆ ಎಂದು ಹೇಳಿದರು. ಕಾಲೇಜಿನ ಸಾಂಸ್ಕೃತಿಕ ಸಮಿತಿ ಅಧ್ಯಕ್ಷ ಡಾ.ಬಿ. ಜಗದೀಶ್, ಅಧ್ಯಾಪಕ ಹೆಚ್.ಎಸ್. ಪುನೀತ್, ಕಾಲೇಜಿನ ವಿದ್ಯಾರ್ಥಿಗಳಾದ ಲಕ್ಷ್ ದೇಚಮ್ಮ, ಅನಿಶ್ ಕ್ಲಿಂಟನ್, ಧನಂಜಯ್, ಅಧಿತಿ ಗೋಷ್ಠಿಯಲ್ಲಿದ್ದರು.

28ರಂದು ಕರ್ನಾಟಕ ಸಾಂಸ್ಕೃತಿಕ–ಸಾಹಿತ್ಯ ಪರಿಷತ್ತು ಉದ್ಘಾಟನೆ



ಮೈಸೂರು,ಮೇ 25 (ಪಿಎಂ)– ಕರ್ನಾಟಕ ಸಾಂಸ್ಕೃತಿಕ ಹಾಗೂ ಸಾಹಿತ್ಯ ಪರಿಷತ್ತು ಉದ್ಘಾಟನೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಮೇ 28ರಂದು ಹಮ್ಮಿಕೊಳ್ಳಲಾಗಿದೆ ಎಂದು ಪರಿಷತ್ತಿನ ಮಹಿಳಾ ರಾಜ್ಯಾಧ್ಯಕ್ಷೆ ಸವಿತಾ ಶಾಸ್ತ್ರಿ ತಿಳಿಸಿದರು.


ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನ ಪುರಭವನದಲ್ಲಿ ಅಂದು ಬೆಳಗ್ಗೆ 10.30ಕ್ಕೆ ಪರಿಷತ್ತಿನ ಉದ್ಘಾಟನಾ ಸಮಾರಂಭ ನಡೆಯಲಿದೆ. ಮೇಲುಕೋಟೆ ವಂಗೀಪುರ ನಂಬಿಮಠದ ಇಳೈಆಳ್ವಾರ್ ಸ್ವಾಮೀಜಿ ಸಾನ್ನಿಧ್ಯದಲ್ಲಿ ವಿಪ್ರ ಮುಖಂಡ ಡಾ.ರಘುರಾಮ್ ವಾಜಪೇಯಿ ಉದ್ಘಾಟಿಸಲಿದ್ದಾರೆ ಎಂದರು.

ಇದೇ ವೇಳೆ 'ಶ್ರೇಷ್ಠ ಕಲಾ ಸೇವಾರತ್ನ ರಾಜ್ಯ ಪ್ರಶಸ್ತಿ, ಶ್ರೇಷ್ಠ ನಾಗರಿಕ ಸೇವಾರತ್ನ ರಾಜ್ಯ ಪ್ರಶಸ್ತಿ'ಗಳನ್ನು ಸಾಧಕರಿಗೆ ಪ್ರದಾನ ಮಾಡಲಾಗುವುದು. ಹುತಾತ್ಮ ವೀರಯೋಧರ ತಾಯಂದಿರು, ಮಹಿಳಾ ಪೌರಕಾರ್ಮಿಕರು, ಕಲಾವಿದರು, ತೃತೀಯಲಿಂಗಿಗಳಿಗೆ ಇದೇ ವೇಳೆ ಸನ್ಮಾನಿಸಲಾಗುವುದು. ಇದೇ ಸಂದರ್ಭದಲ್ಲಿ ಕವಿಗೋಷ್ಠಿ, ಗಾಯನ ನೃತ್ಯ, ಮಿಮಿಕ್ರಿ ಸೇರಿದಂತೆ ವಿವಿಧ ಮನರಂಜನಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಜೊತೆಗೆ ಪುರಭವನದ ಆವರಣದಲ್ಲಿ ಅಂದು ಬೆಳಗ್ಗೆ 10.30ರಿಂದ ಮಧ್ಯಾಹ್ನ 2ರವರೆಗೆ ಅನ್ನಪೂರ್ಣ ಕಣ್ಣಿನ ಆಸ್ಪತ್ರೆ ವತಿಯಿಂದ ಕಣ್ಣಿನ ಉಚಿತ ತಪಾಸಣೆ ಶಿಬಿರ ನಡೆಯಲಿದೆ ಎಂದು ತಿಳಿಸಿದರು. ಪರಿಷತ್ತಿನ ಖಜಾಂಚಿ ತೇಜಸ್ ಪೃಥ್ವಿರಾಜ್, ಜಿಲ್ಲಾಧ್ಯಕ್ಷೆ ಸಮಾ ಪಂಚವಳ್ಳಿ, ಅನ್ನಪೂರ್ಣ ಕಣ್ಣಿನ ಆಸ್ಪತ್ರೆ ಶಾಹಿದ್, ಪವನ್ ಗೋಷ್ಠಿಯಲ್ಲಿದ್ದರು.

ಮೇ 31, ವಿಶ್ವ ತಂಬಾಕು ರಹಿತ ದಿನಾಚರಣೆ

ಮೈಸೂರು, ಮೇ 25 – ಮೇ 31 ರಂದು ಪ್ರತಿ ವರ್ಷ ವಿಶ್ವ ತಂಬಾಕು ರಹಿತ ದಿನವನ್ನು ಆಚರಣೆ ಮಾಡುತ್ತಿದ್ದು, ಈ ವರ್ಷ 'ನಮಗೆ ಆಹಾರ ಬೇಕು, ತಂಬಾಕು ಅಲ್ಲ' ಎಂಬ ಅಜೆಂಡಾದೊಂದಿಗೆ ವಿಶ್ವ ಸಂಸ್ಥೆಯು ವಿಶ್ವ ತಂಬಾಕು ರಹಿತ ದಿನವನ್ನು ಆಚರಿಸುತ್ತಿದೆ.



2023ರ ಜಾಗತಿಕ ಅಭಿಯಾನವು ತಂಬಾಕು ರೈತರಿಗೆ ಪರ್ಯಾಯ ಬೆಳೆ ಉತ್ಪಾದನೆ ಮತ್ತು ಮಾರುಕಟ್ಟೆ ಅವಶ್ಯಕತೆ ಬಗ್ಗೆ ಅರಿವು ಮೂಡಿಸಲು ಮತ್ತು ಸಮರ್ಥ ಪೌಷ್ಟಿಕ ಬೆಳೆಗಳನ್ನು ಬೆಳೆಯಲು ಪ್ರೋತ್ಸಾಹಿಸುವ ಗುರಿಯನ್ನು ಹೊಂದಿದ್ದು, ವಿಶ್ವ ಆರೋಗ್ಯ ಸಂಸ್ಥೆಯು ತಂಬಾಕು ಸೇವನೆಯ ಅಪಾಯಗಳು ಮತ್ತು ಜಗತ್ತನ್ನು ನಾವು ಹೇಗೆ ತಂಬಾಕು ಮುಕ್ತಗೊಳಿಸಬಹುದು ಎಂಬುದರ ಕುರಿತು ಜಾಗೃತಿ ಮೂಡಿಸುವ ಗುರಿ ಹೊಂದಿದೆ.

ತಂಬಾಕು ಸೇವನೆಯ ದುಷ್ಪರಿಣಾಮಗಳು: ಬಾಯಿಯ ಕ್ಯಾನ್ಸರ್, ನಾಲಿಗೆ ಧ್ವನಿ ಪೆಟ್ಟಿಗೆ ಮತ್ತು ಗಂಟಲ ಕುಳಿ, ಅನ್ನನಾಳ ಹೊಟ್ಟೆ ಪಿತ್ತಕೋಶ ಮೂತ್ರಕೋಶದ ಕಾಯಿಲೆಗಳು, ಗರ್ಭಕಂಠ ಮತ್ತು ಶ್ವಾಸಕೋಶದ ಕ್ಯಾನ್ಸರ್‌ಗಳು, ಪುರುಷರಲ್ಲಿ ಫಲವತ್ತತೆ ಮತ್ತು ಲೈಂಗಿಕ ದುರ್ಬಲತೆ ಕಡಿಮೆಯಾಗುವುದು, ಹೃದಯ ನಾಳ ಕಾಯಿಲೆಗಳು ಮತ್ತು ದೀರ್ಘಕಾಲದ ಪ್ರತಿರೋಧದ ಶ್ವಾಸಕೋಶದ ಕಾಯಿಲೆಗಳು ಉಂಟಾಗುವುದು.

ವಯಸ್ಕರಲ್ಲಿ ಪರೋಕ್ಷ ಧೂಮಪಾನವು ಹೃದಯ ಕಾಯಿಲೆ, ಶ್ವಾಸಕೋಶದ ಕ್ಯಾನ್ಸರ್ ಸೇರಿದಂತೆ ಗಂಭೀರ ಹೃದಯ ಮತ್ತು ಉಸಿರಾಟದ ಕಾಯಿಲೆಗಳಿಗೆ ಕಾರಣವಾಗುತ್ತದೆ. ಶಿಶುಗಳಲ್ಲಿ ಇದು ಹಠಾತ್ ಸಾವಿನ ಪ್ರಮಾಣದ ಅಪಾಯವನ್ನು ಹೆಚ್ಚಿಸುತ್ತದೆ. ಗರ್ಭಿಣಿ ಮಹಿಳೆಯರಲ್ಲಿ ಗರ್ಭಧಾರಣೆಯ ತೊಂದರೆಗಳು ಮತ್ತು ಕಡಿಮೆ ಜನನ ತೂಕವನ್ನು ಉಂಟು ಮಾಡುತ್ತದೆ. ಅರ್ಧದಷ್ಟು ಮಕ್ಕಳು ನಿಯಮಿತವಾಗಿ ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಹೊಗೆಯಿಂದ ಕಲುಷಿತವಾದ ಗಾಳಿಯನ್ನು ಉಸಿರಾಡುತ್ತಿದ್ದು, ವರ್ಷಕ್ಕೆ 1.2 ದಶಲಕ್ಷಕ್ಕೂ ಹೆಚ್ಚು ಅಕಾಲಿಕ ಮರಣಗಳಿಗೆ ಕಾರಣವಾಗುತ್ತಿದೆ. ಪರೋಕ್ಷ ಧೂಮಪಾನದಿಂದ ಪ್ರತಿ ವರ್ಷ 65,000 ಮಕ್ಕಳು ಹೊಗೆಯಿಂದ ಸಾಯುತ್ತಿದ್ದಾರೆ.

ಈ ಭೀತಿಯನ್ನು ತಡೆಗಟ್ಟಲು ನಗರಾಭಿವೃದ್ಧಿ ಇಲಾಖೆಯು ರೆಸ್ಟೋರೆಂಟ್‌ಗಳನ್ನು ತಂಬಾಕು ಮುಕ್ತವಾಗಿಡಲು ಘೋಷಣೆ ಮಾಡಿದೆ. ಧೂಮಪಾನ ಮಾಡದೆ ಇರುವವರ ಹಿತಾಸಕ್ತಿ ಕಾಪಾಡಲು 30 ಅಥವಾ ಅದಕ್ಕಿಂತ ಹೆಚ್ಚಿನ ಆಸನ ಸಾಮರ್ಥ್ಯವಿರುವ ರೆಸ್ಟೋರೆಂಟ್‌ಗಳಲ್ಲಿ ಗೊತ್ತುಪಡಿಸಿದ ಧೂಮಪಾನ ಪ್ರದೇಶವನ್ನು ಸ್ಥಾಪಿಸಬೇಕು. (Designated Smoking Area) ಡಿ.ಎಸ್.ಎ ಗಳು ಕೋಟ್ಪಾ ಕಾಯ್ದೆ–2003ರಲ್ಲಿ ಉಲ್ಲೇಖಿಸಿರುವಂತೆ ಅಗತ್ಯ ಮತ್ತು ಕಡ್ಡಾಯ ನಿಬಂಧನೆಗಳನ್ನು ಅನುಸರಿಸಬೇಕಾಗುತ್ತದೆ. ಜಿಲ್ಲಾ ಮಟ್ಟದಲ್ಲಿ ಡಿಎಸ್‌ಎಗಳನ್ನು ಸ್ಥಾಪಿಸುವಲ್ಲಿ ಅಗತ್ಯ ಬೆಂಬಲವನ್ನು ಒದಗಿಸುವ ಮತ್ತು ಪರಿಶೀಲಿಸುವ ಹಕ್ಕನ್ನು (Data) ಜಿಲ್ಲಾ ತಂಬಾಕು ನಿಷೇಧ ಕೋಶ ಹೊಂದಿರುತ್ತದೆ. ತಂಬಾಕು ಸೇವನೆಯಿಂದ ಸಂಭವಿಸಬಹುದಾದ ಕಾಯಿಲೆಗಳನ್ನು ತಡೆಗಟ್ಟಲು ತಂಬಾಕು ಸೇವನೆಯನ್ನು ನಿಷೇಧಿಸುವಂತೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಪರಿಚಿತ ಶವ ಪತ್ತೆ

ಮೈಸೂರು, ಮೇ 25– ಮೇ 18ರಂದು ಗಿರಿಬೆಟ್ಟದ ಕೆರೆಯ ಕೋಡಿಯ ದಡದ ನೀರಿನಲ್ಲಿ ಅಪರಿಚಿತ ಗಂಡಸಿನ ಶವ ಪತ್ತೆಯಾಗಿದ್ದು, ವರುಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಮೃತದೇಹದ ಎರಡು ಕೈ, ಕಾಲುಗಳನ್ನು ಹಗ್ಗದಿಂದ ಕಟ್ಟಿ ಕೊಕ್ಕಡೆಯಾಗಿ ಮಲಗಿಸಿ ಒಂದು ಕಲ್ಲು ಕಂಬದ ಮೇಲೆ ಇಟ್ಟು ಕಂಬ ಸೇರಿದಂತೆ ಕಬ್ಬಿಣದ ಜಾಲರಿಯನ್ನು ಸುತ್ತಿ ಹಗ್ಗ ಮತ್ತು ತಂತಿಯಿಂದ ಕಟ್ಟಿರುತ್ತಾರೆ. ದೇಹವು ನೀರಿನಲ್ಲಿ ಸಂಪೂರ್ಣ ಕೊಳೆತಿದ್ದು, ನಾಲಿಗೆ ಹೊರ ಚಾಚಿದುತಿದೆ ಬಲಕಣ್ಣು ಇದ್ದು ಎಡಭಾಗದ ಕಣ್ಣನ್ನು ಜಲಚರ ಪ್ರಾಣಿಗಳು ತಿಂದಿರುವಂತೆ ಕಂಡು ಬಂದಿರುತ್ತದೆ ವಾರಸುದಾರರ ಬಗ್ಗೆ ಮಾಹಿತಿ ಕಂಡು ಬಂದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ದೂ.ಸಂ. 0821–2520040, ಜಿಲ್ಲಾ ಕಂಟ್ರೋಲ್ ರೂಂ.0821–2444800 ಹಾಗೂ ವರುಣ ಪೊಲೀಸ್ ಠಾಣೆ ದೂ.ಸಂ. 0821–2594411 (9480805052) ಅನ್ನು ಸಂಪರ್ಕಿಸಬಹುದು ಎಂದು ವರುಣ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಾ.ಹೆಚ್.ಸಿ.ಮಹದೇವಪ್ಪಗೆ ಸಚಿವ ಸ್ಥಾನ: ಕರ್ನಾಟಕ ವೀರಕೇಸರಿ ಪಡೆ ಒತ್ತಾಯ



ಮೈಸೂರು,ಮೇ 25(ಪಿಎಂ)– ದಲಿತ ಸಮುದಾಯದ ಶ್ರೇಯೋಭಿವೃದ್ಧಿ ದೃಷ್ಟಿಯಲ್ಲಿ ಮಾಜಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಕರ್ನಾಟಕ ವೀರಕೇಸರಿ ಪಡೆಯ ಟಿ.ನರಸೀಪುರ ಘಟಕ ಒತ್ತಾಯಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ವೀರಕೇಸರಿ ಪಡೆಯ ಟಿ.ನರಸೀಪುರ ತಾಲೂಕು ಗೌರವಾಧ್ಯಕ್ಷ ಕೆ.ಮಲ್ಲು, ಹಳೇ ಮೈಸೂರು ಭಾಗದ ದಲಿತ ಸಮುದಾಯದ ಹಿರಿಯ ರಾಜಕಾರಣಿ ಡಾ.ಹೆಚ್.ಸಿ.ಮಹದೇವಪ್ಪ ಪಕ್ಷ ಸಂಘಟನೆಗೆ ಶ್ರಮಿಸಿದ್ದಾರೆ ಎಂದರು.

ಈ ಹಿಂದೆ ಆರೋಗ್ಯ ಸಚಿವರಾಗಿ ಹಲವು ಜನಪರ ಕಾರ್ಯಗಳನ್ನು ಮಾಡಿದ್ದಾರೆ. 2013ರ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಅವಧಿಯಲ್ಲಿ ಲೋಕೋಪಯೋಗಿ ಸಚಿವರಾಗಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ. ಹಾಗಾಗಿ ಅವರಿಗೆ ಸಚಿವ ಸ್ಥಾನ ನೀಡಲು ಕಾಂಗ್ರೆಸ್ ಹೈಕಮಾಂಡ್ ತೀರ್ಮಾನ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಮುಖ್ಯಮಂತ್ರಿ ಸ್ಥಾನ ಈಗಾಗಲೇ ಭರ್ತಿಯಾಗಿದೆ. ಖಾಲಿ ಇದ್ದರೆ ಅದನ್ನೇ ಅವರಿಗೆ ನೀಡಲು ಕೋರುತ್ತಿದ್ದೆವು ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ವೀರಕೇಸರಿ ಪಡೆ ಅಧ್ಯಕ್ಷ ಮಧುವನ ಚಂದ್ರು, ಟಿ.ನರಸೀಪುರ ಘಟಕದ ಅಧ್ಯಕ್ಷ ಬೂದಳ್ಳಿ ಸಿದ್ದರಾಜು, ಬಿ.ಶೆಟ್ಟಹಳ್ಳಿ ಗ್ರಾಪಂ ಅಧ್ಯಕ್ಷ ನಾಗರಾಜು, ಮುಖಂಡರಾದ ಸುಂದರ್‌ನಾಯಕ್, ಅಬ್ದುಲ್ ಅತೀಕ್, ಮಹೇಶ್ ಅತ್ತಳ್ಳಿ, ಮೂಗೂರು ಎಂ.ಎನ್.ಜಗದೀಶ್ ಗೋಷ್ಠಿಯಲ್ಲಿದ್ದರು.

ಕುನೋ ರಾಷ್ಟ್ರೀಯ ಉದ್ಯಾನವನದಲ್ಲಿ ಮತ್ತೆ 2 ಚೀತಾ ಮರಿಗಳ ಸಾವು!

ಭೋಪಾಲ್, ಮೇ 25– ಮಧ್ಯಪ್ರದೇಶದ ಕುನೋ ರಾಷ್ಟ್ರೀಯ ಉದ್ಯಾನವನದಲ್ಲಿರುವ ಚೀತಾ ಜ್ವಾಲಾಳ ಎರಡು ಮರಿಗಳು ಸಾವನ್ನಪ್ಪಿವೆ. ಜ್ವಾಲಾ ಮಾ.24 ರಂದು ನಾಲ್ಕು ಮರಿಗಳಿಗೆ ಜನ್ಮ ನೀಡಿತ್ತು. ನಾಲ್ಕು ಮರಿಗಳ ಪೈಕಿ ಇತ್ತೀಚೆಗೆ ಒಂದು ಮರಿ ಸಾವನ್ನಪ್ಪಿತ್ತು. ಇಂದು 2 ಮರಿಗಳು ಸಾವನ್ನಪ್ಪಿದ್ದು, ಮತ್ತೊಂದು ಚೀತಾ ಮರಿಯ ಆರೋಗ್ಯ ಸ್ಥಿತಿ ಗಂಭೀರವಾಗಿದೆ ಎಂದು ರಾಷ್ಟ್ರೀಯ ಉದ್ಯಾನವನದ ಮೂಲಗಳು ತಿಳಿಸಿವೆ.

ಕುಪ್ಪಣ್ಣ ಪಾರ್ಕ್‌ನಲ್ಲಿ ಇಂದಿನಿಂದ 28ವರೆಗೆ ಮಾವು ಮೇಳ

ಮೈಸೂರು,ಮೇ 25(ಎಂಟಿವೈ)– ನೈಸರ್ಗಿಕ ಪದ್ಧತಿಯಲ್ಲಿ ಮಾಗಿಸಿದ ಹಾಗೂ ನೇರವಾಗಿ ರೈತರಿಂದ ವಿವಿಧ ತಳಿಯ ರುಚಿಕರವಾದ ಮಾವಿನಹಣ್ಣನ್ನು ಪೂರೈಸುವುದಕ್ಕಾಗಿ ಮೈಸೂರಿನ ಕುಪ್ಪಣ್ಣ ಪಾರ್ಕ್‌ನಲ್ಲಿ ಮೇ 26 ರಿಂದ 28ರವರೆಗೆ 'ಮಾವಿನ ಮೇಳ' ಆಯೋಜಿಸಲಾಗಿದೆ ಎಂದು ತೋಟಗಾರಿಕಾ ಇಲಾಖೆ ಉಪನಿರ್ದೇಶಕ ಕೆ.ರುದ್ರೇಶ್ ತಿಳಿಸಿದ್ದಾರೆ.

ಮೈಸೂರಿನ ಕರ್ಜನ್ ಪಾರ್ಕ್‌ನಲ್ಲಿರುವ ತೋಟಗಾರಿಕಾ ಇಲಾಖೆಯ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತೋಟಗಾರಿಕಾ ಇಲಾಖೆ ವತಿಯಿಂದ ಪ್ರತಿ ವರ್ಷ ಮಾವಿನ ಮೇಳ ಆಯೋಜಿಸುತ್ತಾ ಬಂದಿದ್ದು, ಈ ಬಾರಿ ವಿಧಾನಸಭಾ ಚುನಾವಣೆ ಇದ್ದ ಹಿನ್ನೆಲೆಯಲ್ಲಿ ಈಗ ಮೇಳ ನಡೆಸಲಾಗುತ್ತಿದೆ. ಚುನಾವಣಾ ನೀತಿ ಸಂಹಿತೆ ಮುಗಿದ ಬಳಿಕ ಮಾವು ಬೆಳೆಗಾರರ ಸಭೆ ಕರೆದು ಮಾವು ಮೇಳದ ಬಗ್ಗೆ ಚರ್ಚಿಸಿ ಸಹಕಾರ ಕೋರಲಾಗಿತ್ತು. ಇದರಿಂದ ಮೇಳದಲ್ಲಿ 20 ಮಾವು ಬೆಳೆಗಾರರು ಪಾಲ್ಗೊಳ್ಳುತ್ತಿದ್ದಾರೆ ಎಂದರು.

ರೈತರು ಬೆಳೆದ ಮಾವಿನ ಹಣ್ಣನ್ನು ನೈಸರ್ಗಿಕವಾಗಿ ಮಾಗಿಸಿದ ಬಳಿಕವಷ್ಟೇ ಮೇಳದಲ್ಲಿ ಮಾರಾಟ ಮಾಡಲಿದ್ದಾರೆ. ಯಾವುದೇ ರಾಸಾಯನಿಕ ವಸ್ತುಗಳನ್ನು ಬಳಸಿ ಮಾಗಿಸಿದ ಹಣ್ಣುಗಳನ್ನು ಮೇಳದಲ್ಲಿ ಮಾರಾಟ ಮಾಡಲು ಅವಕಾಶ ನೀಡುವುದಿಲ್ಲ ನೈಸರ್ಗಿಕ ಪದ್ಧತಿಯಲ್ಲಿ ಹಣ್ಣುಗಳನ್ನು ಮಾಗಿಸುವುದಕ್ಕೆ ಸಂಬಂಧಿಸಿದಂತೆ ತರಬೇತಿ ನೀಡಲಾಗಿದೆ. ಆದ್ದರಿಂದ ತೋಟಗಾರಿಕಾ ಇಲಾಖೆ ವತಿಯಿಂದ ಆಯೋಜಿಸುವ ಮಾವಿನ ಮೇಳದಲ್ಲಿ ದೊರೆಯುವ ಮಾವಿನಹಣ್ಣು ಆರೋಗ್ಯಕ್ಕೆ ಪೂರಕವಾಗಿರುತ್ತದೆ. ಅದರಿಂದಾಗಿಯೇ ಪ್ರತಿವರ್ಷವೂ ಹೆಚ್ಚು ಪ್ರಮಾಣದ ಮಾವಿನಹಣ್ಣು ಮಾರಾಟವಾಗಲಿದೆ ಎಂದು ತಿಳಿಸಿದರು.



ಜಿಲ್ಲೆಯಲ್ಲಿ ಬೆಳೆಯುವ ಅನೇಕ ತೋಟಗಾರಿಕೆ ಬೆಳೆಗಳಲ್ಲಿ ಮಾವು ಒಂದು ಪ್ರಮುಖ ತೋಟಗಾರಿಕೆ ಬೆಳೆಯಾಗಿದ್ದು, ಅಂದಾಜು 7600 ಎಕರೆ ವಿಸ್ತೀರ್ಣದಲ್ಲಿ ಬೆಳೆಯಾಗುತ್ತಿದ್ದು, ವಾರ್ಷಿಕ ಉತ್ಪಾದನೆ ಸರಾಸರಿ 30 ರಿಂದ 35 ಸಾವಿರ ಟನ್‌ಗಳಾಗಿದೆ. ಹೀಗಾಗಿ ಮಾವು ಬೆಳೆಯುವ ರೈತರಿಗೆ ಹಾಗೂ ಮಾವು ಸವಿಯುವ ಗ್ರಾಹಕರ ನಡುವೆ ಸಂಪರ್ಕ ಕಲ್ಪಿಸಿ ರೈತರಿಗೆ ಉತ್ತಮ ಮಾರುಕಟ್ಟೆ ಕಲ್ಪಿಸಲು ಹಾಗೂ ಗ್ರಾಹಕರಿಗೆ ಉತ್ತಮ ಬೆಲೆಯಲ್ಲಿ, ಮಾವು ದೊರಕಿಸಿಕೊಡುವ ದೃಷ್ಟಿಯಿಂದ ಈ ಮಾವು ಮೇಳ ಆಯೋಜಿಸಲಾಗಿದೆ ಎಂದು ಹೇಳಿದರು.

ಈ ಮೇಳದಲ್ಲಿ 24 ಮಳಿಗೆಗಳನ್ನು ತೆರೆಯಲಾಗುತ್ತದೆ. ಮೈಸೂರು, ಮಂಡ್ಯ, ರಾಮನಗರ, ಕನಕಪುರ ಜಿಲ್ಲೆಗಳಿಂದ ರೈತರು ಭಾಗವಹಿಸಲಿದ್ದಾರೆ. ಮೇಳದಲ್ಲಿ ರತ್ನಗಿರಿ, ಅಲ್ಫಾನ್ಸೋ, ಬಾದಾಮಿ, ರಸಪುರಿ, ಮಲಗೋವಾ, ತೋತಾಪುರಿ, ಮಲ್ಲಿಕಾ, ಸೆಂದೂರ, ನೀಲಂ, ದಶೇರಿ ಸೇರಿದಂತೆ ವಿವಿಧ ತಳಿಯ ಮಾವಿನಹಣ್ಣುಗಳನ್ನು ಮಾರಾಟ ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ತೋಟಗಾರಿಕಾ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಶಶಿಧರ್, ಸಹಾಯಕ ನಿರ್ದೇಶಕರಾದ ಅಶ್ವಿನಿ, ಸಬೀನಾ ಇದ್ದರು.

ಸ್ತಬ್ಧ ಭ್ರಮೆಯ ಸುತ್ತ ಹಾರರ್ ಚಿತ್ರ



ಭ್ರಮೆ ಮತ್ತು ರಿಯಾಲಿಟಿ ನಡುವೆ ನಡೆಯುವ, ಹಾರರ್ ಹಿನ್ನೆಲೆಯ ಕಥಾ ಹಂದರ ಹೊಂದಿರುವ ಚಿತ್ರವೇ ಸ್ತಬ್ಧ, ಈ ಚಿತ್ರದ ಆಡಿಯೋ, ಟ್ರೈಲರ್ ಬಿಡುಗಡೆ ಸಮಾರಂಭ ಇತೀಚೆಗೆ ನೆರವೇರಿತು, ಡಾ.ಡಿ.ವಿ. ವಿದ್ಯಾಸಾಗರ್ ಅವರು ನಿರ್ಮಿಸಿರುವ ಈ ಚಿತ್ರಕ್ಕೆ ಲಾಲಿ ರಾಘವ ಆಕ್ಷನ್‌ಕಟ್ ಹೇಳಿದ್ದಾರೆ. ಪಿವಿಆರ್ ಸ್ವಾಮಿ ಅವರ ಛಾಯಾಗ್ರಹಣ, ಆರವ್ ರಿಶಿಕ್ ಅವರ ಸಂಗೀತ ಸಂಯೋಜನೆ ಈ ಚಿತ್ರಕ್ಕಿದೆ, ರಾಘವೇಂದ್ರ ರಾಜ್‌ಕುಮಾರ್, ಪ್ರತಾಪ್, ಹರ್ಷಿಕಾ ಪೂಣಚ್ಚ ಚಿತ್ರದ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ.

ನಾಯಕ ಪ್ರತಾಪ್ ಮಾತನಾಡುತ್ತಾ ನಿರ್ಮಾಪಕರ ಬಳಿ ಈ ಕಥೆ ಹೇಳಿದಾಗ ತುಂಬಾ ಇಷ್ಟಪಟ್ಟು ನಿರ್ಮಾಣಕ್ಕೆ ಮುಂದಾದರು. ಅವತ್ತಿಂದ ಸಿನಿಮಾಗೆ ಏನು ಬೇಕೋ ಅದನ್ನೆಲ್ಲ ಕೊಟ್ಟಿದ್ದಾರೆ. ರಾಗಣ್ಣ ಅವರು ನಮಗೆ ತುಂಬಾನೇ ಸಪೋರ್ಟ್ ಮಾಡಿದರು. ಒಬ್ಬರಿಂದ ಸಿನಿಮಾ ಆಗಲ್ಲ, ಎಲ್ಲರ ಸಪೋರ್ಟ್‌ನಿಂದ ಒಳ್ಳೆಯ ಸಿನಿಮಾ ನಿರ್ಮಾಣವಾಗುತ್ತದೆ, ನಿರ್ದೇಶಕರು ಹಾಗೂ ನನ್ನದು 16 ವರ್ಷಗಳ ಜರ್ನಿ, ಈಗ ಒಂದು ಸಿನಿಮಾ ಮಾಡಿದ್ದೇವೆ, ಬೆಂಗಳೂರು, ಮಂಗಳೂರು, ಉಡುಪಿ ಸುತ್ತಮುತ್ತ 45 ದಿನಗಳ ಕಾಲ ಚಿತ್ರೀಕರಿಸಿದ್ದೇವೆ. ಭ್ರಮೆಯ ಸುತ್ತಲೂ ನಡೆಯುವ ಕಥೆಯಿದು. ನಮ್ಮ ಮನದಲ್ಲಿ ಉಂಟಾಗುವ ಭ್ರಮೆಯನ್ನು ಬೇಸ್ ಮಾಡಿಕೊಂಡು ಹೆಣೆದಂಥ ಕಥೆಯಿದು. ಚಿತ್ರದಲ್ಲಿ ಎರಡು ಹಾಡುಗಳಿದ್ದು, ಜೂನ್ 9ಕ್ಕೆ ರಿಲೀಸ್ ಮಾಡುತ್ತಿದ್ದೇವೆ ಎಂದು ಹೇಳಿದರು, ನಿರ್ದೇಶಕ ಲಾಲಿ ರಾಘವ ಮಾತನಾಡಿ, ನಿರ್ಮಾಪಕರು ನನ್ನ ಸಹೋದರನ ಸ್ನೇಹಿತರು, ಎಲ್ಲರ ಸಹಕಾರದಿಂದ ಈ ಚಿತ್ರ ಆಗಿದೆ. ಪ್ರತಾಪ್, ಹರ್ಷಿಕಾ ಅದ್ಭುತವಾಗಿ ಅಭಿನಯಿಸಿದ್ದಾರೆ ಎಂದು ಹೇಳಿದರು.

ನಂತರ ನಿರ್ಮಾಪಕ ಡಾ.ವಿದ್ಯಾಸಾಗರ್ ಮಾತನಾಡಿ, ನಾನು ಹಣ ಗಳಿಸಬೇಕೆಂದು ಈ ಸಿನಿಮಾ ಮಾಡಿಲ್ಲ, ಇಲ್ಲಿರುವ ಆರ್ಟಿಸ್ಟ್, ಟೆಕ್ನೀಷಿಯನ್ ಎಲ್ಲರ ಶ್ರಮಕ್ಕೆ ಒಂದು ಬೆಲೆ ಸಿಗಬೇಕು ಎಂಬುದಷ್ಟೇ ನನ್ನ ಆಶಯ ಎಂದರು, ನಾಯಕಿ ಹರ್ಷಿಕಾ ಪೂಣಚ್ಚ ಮಾತನಾಡುತ್ತಾ ಚಿತ್ರದಲ್ಲಿ ನಾನು ಇಂದುಮತಿ ಪಾತ್ರದಲ್ಲಿ ಕಾಣಿಸಿಕೊಂಡಿದ್ದೇನೆ, ಈ ಪಾತ್ರಕ್ಕೆ ಎರಡು ಶೇಡ್ ಇರುತ್ತದೆ. ಒಂದರಲ್ಲಿ ಮುದ್ದಾದ ಹುಡುಗಿಯಾಗಿ ಕಾಣಿಸಿದರೆ, ಮತ್ತೊಂದಕ್ಕೆ ಹಾರರ್ ಟಚ್ ಇರುತ್ತದೆ. ಅಭಿನಯಕ್ಕೆ ಹೆಚ್ಚು ಅವಕಾಶವಿರೋ ಪಾತ್ರವಿದು. ಇಲ್ಯೂಷನ್ ಮೇಲೆ ನಡೆಯುವ ಕಥೆ. ನಾನು ಈ ಸಿನಿಮಾ ಒಪ್ಪಿಕೊಳ್ಳಲು ಎರಡು ಕಾರಣಗಳಿವೆ. ಒಂದು ಚಿತ್ರದ ಕಥೆ, ಇನ್ನೊಂದು ರಾಘಣ್ಣ ಅವರ ಜೊತೆ ನಟಿಸುವ ಅವಕಾಶ. ನಾನು ಈಗಾಗಲೇ ಶಿವಣ್ಣ ಪುನೀತ್ ರಾಜ್‌ಕುಮಾರ್ ಇಬ್ಬರ ಜೊತೆಗೂ ಆಕ್ಟ್ ಮಾಡಿದ್ದೇನೆ. ಈ ಚಿತ್ರದ ಮೂಲಕ ರಾಘಣ್ಣ ಅವರ ಜೊತೆಗೂ ಅಭಿನಯಿಸುವ ಅವಕಾಶ ಸಿಕ್ಕಿತು, ಅವರ ನನ್ನ ತಂದೆಯ ಪಾತ್ರ ಮಾಡಿದ್ದಾರೆ ಎಂದು ಹೇಳಿದರು.

ಮಾಧ್ಯಮಗಳ ಶಕ್ತಿ 'ದಿಗ್ವಿಜಯ'

ಅರವತ್ತಕ್ಕೂ ಹೆಚ್ಚು ಚಿತ್ರಗಳಿಗೆ ಸಂಕಲನಕಾರರಾಗಿ ಕೆಲಸ ಮಾಡಿರುವ ಹಾಗೂ ಸೀಯು, ಫ್ಲಾಪ್ ಡೈರೆಕ್ಟರ್, ಕರ್ತ ಚಿತ್ರಗಳನ್ನು ನಿರ್ದೇಶಿಸಿರುವ ದುರ್ಗಾ ಪಿ.ಎಸ್. ಅವರ ನಿರ್ದೇಶನದ ಮತ್ತೊಂದು ಚಿತ್ರ ದಿಗ್ವಿಜಯ. ವರದಿಗಾರ ಮನಸು ಮಾಡಿದ್ರೆ ಸಮಾಜದ ಎಷ್ಟೇ ದೊಡ್ಡ ಸಮಸ್ಯೆಯನ್ನಾದರೂ ಬಗೆಹರಿಸಬಹುದು ಎಂದು ಈ ಚಿತ್ರದಲ್ಲಿ ಹೇಳಲಾಗಿದೆ. ವರದಿಗಾರನೊಬ್ಬ ಹುಚ್ಚನನ್ನು ಇಟ್ಟುಕೊಂಡು ಕೇವಲ 3 ದಿನದಲ್ಲಿ ರಾಜ್ಯದ ಎಲ್ಲಾ ರೈತರ ಸಾಲವನ್ನು ಮನ್ನಾ ಮಾಡಿಸುತ್ತಾನೆ. ಅದು ಹೇಗೆ ಎನ್ನುವುದೇ ಈ ಚಿತ್ರದ ಕಥೆ. ನಾಯಕನ ತಂದೆ-ತಾಯಿ ಕೂಡ ರೈತರೇ ಆಗಿದ್ದು, ಅವರೂ ಸಾಲಬಾಧೆಯಿಂದಲೇ ಆತ್ಮಹತ್ಯೆ ಮಾಡಿಕೊಂಡಿರುತ್ತಾರೆ. ಬೆಳೆನಷ್ಟ ಅನುಭವಿಸಿ, ತಂದೆ ತಾಯಿ ವಿಷ ಸೇವಿಸಿದ ಶಾಕ್ ನಿಂದ ನಾಯಕನ ಗೆಳೆಯ ಹುಚ್ಚನಾಗಿರುತ್ತಾನೆ.

ಜೆ.ಪಿ. ಎಂಟರ್‌ಟೈನ್‌ಮೆಂಟ್ ನಿರ್ಮಾಣದ ಈ ಚಿತ್ರಕ್ಕೆ ಸೆನ್ಸಾರ್ ಮಂಡಳಿಯಿಂದ ಯಾವುದೇ ಕಟ್ ಇಲ್ಲದ ಯು ಸರ್ಟಿಫಿಕೇಟ್ ದೊರೆತಿದೆ. ಗೋವಾ ಫಿಲಂ ಫೆಸ್ಟಿವಲ್‌ನಲ್ಲಿ ಈ ಚಿತ್ರಕ್ಕೆ 2 ಅವಾರ್ಡ್ ಬಂದಿದೆ. ಜೂನ್ ತಿಂಗಳಲ್ಲಿ ಬಿಡುಗಡೆಯಾಗಲಿರುವ ಈ ಚಿತ್ರವನ್ನು ಜಯಪ್ರಭು ಆರ್.ಲಿಂಗಾಯತ್. ಅರುಣ್ ಸುಖಧರ್. ಹರೀಶ್ ಆರ್.ಸಿ. ಅವರು ನಿರ್ಮಾಣ ಮಾಡಿದ್ದಾರೆ. ಕಥೆ-ಚಿತ್ರಕಥೆ-ಸಂಭಾಷಣೆ -ಸಾಹಿತ್ಯ - ಸಂಕಲನ ಮತ್ತು ನಿರ್ದೇಶನ ದುರ್ಗಾ ಪಿ.ಎಸ್. ಅವರದು.

ಜಯಪ್ರಭು ಆರ್.ಲಿಂಗಾಯತ್ ನಾಯಕನಾಗಿ ನಟಿಸಿದ್ದು ಸ್ನೇಹ ನಾಯಕಿ ಪಾತ್ರ ನಿರ್ವಹಿಸಿದ್ದಾರೆ. ಸುಚೇಂದ್ರ ಪ್ರಸಾದ್. ಪಟ್ರೆಬ ನಾಗರಾಜ್. ಹೊನ್ನವಳ್ಳಿ ಕೃಷ್ಣ. ಹೊನ್ನವಳ್ಳಿ ಶ್ರೀಕಾಂತ್. ಕಿಲ್ಲರ್ ವೆಂಕಟೇಶ್. ಶಿವಕುಮಾರ್ ಆರಾಧ್ಯ ಉಳಿದ ಪಾತ್ರಗಳಲ್ಲಿದ್ದಾರೆ. ಬೆಂಗಳೂರು, ಮಂಡ್ಯ, ಮಂಗಳೂರು ಸುತ್ತಮುತ್ತ 30 ದಿನಗಳ ಕಾಲ ಚಿತ್ರೀಕರಣ ನೆಡೆಸಲಾಗಿದೆ. ಚಿತ್ರದಲ್ಲಿ 4 ಫೈಟ್ 5 ಹಾಡುಗಳಿದ್ದು ಹರ್ಷ ಸಂಗೀತ ನೀಡಿದ್ದಾರೆ. ಛಾಯಾಗ್ರಹಣ ವಿನಸ್ ಮೂರ್ತಿ ಅವರದು.





'ಸ್ಟಾರ್' ನೈಜ ಘಟನೆಯಾಧಾರಿತ ಚಿತ್ರ

ಯುವ ಪ್ರತಿಭೆ ಶರತ್ ನಾಯಕನಾಗಿ, ನಿರ್ಮಾಣ ಮಾಡುತ್ತಿರುವ ಚಿತ್ರ 'ಸ್ಟಾರ್'. ಈ ಚಿತ್ರಕ್ಕೆ ಅನು ಹಾಗೂ ಮಂಜು ವಿಜಯಸೂರ್ಯ ಆಕ್ಷನ್ ಕಟ್ ಹೇಳುತ್ತಿದ್ದಾರೆ.

ಇತ್ತೀಚೆಗೆ ನಡೆದ ಮುಹೂರ್ತದ ಸಂದರ್ಭದಲ್ಲಿ ನಾಯಕ ಶರತ್ ಮಾತನಾಡಿ, ಈ ಹಿಂದೆ ನಾನು 'ಪ್ಯಾಟಿ ಮಂದಿ ಕಾಡಿಗ್ ಬಂದ್ರು' ಶೋನಲ್ಲಿ ಭಾಗವಹಿಸಿದ್ದೆ. ಇದೊಂದು ರೌಡಿಸಂ ಬೇಸ್ ಸಬ್ಜೆಕ್ಟ್, ಕ್ಲೈಮ್ಯಾಕ್ಸ್ ನೋಡಿ ಹೊರಬರುವಾಗ ಎಂಥವರ ಕಣ್ಣಲ್ಲಾದರೂ ನೀರು ಬರುತ್ತದೆ. ಚಿತ್ರದಲ್ಲಿ ಒಂದಷ್ಟು ನೈಜ ಘಟನೆಗಳನ್ನು ಹೇಳಿದರೂ, ಯಾರ ಹೆಸರನ್ನೂ ಸಹ ಬಳಸಿಕೊಳ್ಳುವುದಿಲ್ಲ ಎಂದರು. ನಂತರ ನಿರ್ದೇಶಕ ವಿಜಯಸೂರ್ಯ ಮಾತನಾಡಿ, ನಮ್ಮ ಚಿತ್ರದ ಟೈಟಲ್ಲೇ ಕಥೆ ಹೇಳುತ್ತದೆ. ಇದು ಅಂಡರ್ ವರ್ಲ್ಡ್ ಸಬ್ಜೆಕ್ಟ್, ಹೀರೋಗೆ ನಾಯಕಿ ಹೇಗೆ ಬೆಂಬಲವಾಗಿ ನಿಲ್ತಾರೆ ಅಂತ ಹೇಳಿದ್ದೇವೆ. ನ್ಯಾಚುರಲ್ ಫೈಟ್ಸ್ ಚಿತ್ರದಲ್ಲಿರುತ್ತವೆ. ಇದೊಂದು ಲೋಕಲ್ ಸಬ್ಜೆಕ್ಟ್ ಆಗಿರುವುದರಿಂದ ಹೆಚ್ಚು ಭಾಗದ ಶೂಟಿಂಗ್ ಬೆಂಗಳೂರಿನಲ್ಲೇ ಮಾಡುತ್ತೇವೆ. ಹೊಡೆದಾಟಕ್ಕಿಂತ ಹೆಚ್ಚಾಗಿ ಥ್ರಿಲ್ಲರ್ ಮೇಲೆ ಹೆಚ್ಚು ಫೋಕಸ್ ಮಾಡಿದ್ದೇವೆ. ಕ್ಯೂರಿಯಾಸಿಟಿ ಕ್ರಿಯೇಟ್ ಮಾಡಿಕೊಂಡು ಹೋಗುವ ಕಂಟೆಂಟ್ ಎಂದು ಹೇಳಿದರು. ಚಿತ್ರದ ನಾಯಕಿ ರಜತ ರಕ್ಷ ಮಾತನಾಡಿ, ಈ ಹಿಂದೆ 3 ಚಿತ್ರಗಳಲ್ಲಿ ನಟಿಸಿದ್ದೆ. ನಾಯಕಿಯಾಗಿ ಮೊದಲ ಚಿತ್ರ. ನಾಯಕನಿಗೆ ಸಪೋರ್ಟ್ ಆಗಿರುವಂಥ ಪಾತ್ರ ಎಂದು ಹೇಳಿದರು. ಛಾಯಾಗ್ರಾಹಕ ಪ್ರವೀಣ್ ಎಂ.ಪ್ರಭು ಮಾತನಾಡಿ, ರಿಯಾಲಿಸ್ಟಿಕ್ ಆಗಿ ಸಿನಿಮಾವನ್ನು ಶೂಟ್ ಮಾಡೋಣ ಅಂತ ಪ್ಲಾನ್ ಮಾಡಿಕೊಂಡಿದ್ದೇವೆ ಎಂದರು. ಚಿತ್ರದಲ್ಲಿ ನಾಲ್ಕು ಹಾಡುಗಳಿದ್ದು, ವಿಕಾಸ್ ವಸಿಷ್ಠ ಸಂಗೀತ ನೀಡುತ್ತಿದ್ದಾರೆ,

ಸಿನಿಪದಬಂಧ-475

ಉಮ್ಮತ್ತೂರು ಇಂದುಶೇಖರ್
ಮೊ.9880820462

1						2		3		
				4						
5		6						7		8
				9						
		10					11			
12										
					13				14	
	15				16					
								17		
18					19					

ಹೆಸರು ________

ವಿಳಾಸ ________

____

ದೂರವಾಣಿ ಸಂಖ್ಯೆ ________

ಎಡದಿಂದ ಬಲಕ್ಕೆ

1. ಬೇಟೆ ಆಡುತಿದೆ...ಭಯವ ತುಂಬಿದೆ...ಭಯವ ತುಂಬಿದೆ...!? 4
2. 'ವಿಷ್ಣು'ವಿನ ಧ್ಯೇಯ ಜನಸೇವೆಯೇ ಜನಾರ್ಧನ ಸೇವೆ 5
4. ರವಿಚಂದ್ರನ್ ಯುದ್ಧದ ಕೊನೆ ಹಳ್ಳಿ ಇರಿಸಿಕೊಂಡಿದ್ದಾನೆ 3
5. ಚಿತ್ರ ನಿರ್ಮಿಸಲು ಈತನೇ 'ಬಂಡವಾಳ' 4
7. ಮಿನುಗುತಾರೆ ಬರೀ ನೆನಪು ! 3
9. ಅರ್ಜುನ್ ಸರ್ಜಾ - ಖುಷ್ಬೂವಿನ ಪ್ರೀತಿಯ ಜ್ವಾಲೆ 3
10. ಕಗ್ಗತ್ತಲು ಆವರಿಸಿಕೊಂಡಿರುವ ಬೆಟ್ಟ 4
11. ಹೆಸರಿನಲ್ಲಿ ಹಳೆಯ ಕಾಲದವಳಾದರೂ ಈ ನಟಿ ಹೊಸಬಳೇ ! 4
12. ಪ್ರಾಣಿಯೊಂದರ ಮಧ್ಯೆ ಬಾರಿಸದ ಚರ್ಮವಾದ್ಯ 3
14. ಮಂಜಿನ 'ಪರದೆ' 2
15. ವಿಶ್ವಾಸ್ ಭಾರದ್ವಜ್ ಅವರ ಪ್ರಾಚೀನ ಆಟ 3
16. ಕನ್ನಡದ ನರ್ಸ್ ಮಧ್ಯೆ ರಕ್ತ ಸಂಬಂಧಿ ಇದ್ದಾನೆ 3
17. ರಾಗಿಣಿ ದ್ವಿವೇದಿ "ಗೋಲ್ಡಿ" 3
18. ಅಂಬ್ಯೋಂಬ್ಯೋಪ್ಯೋ ಎನ್.ಎಸ್.ರಾವ್‌ನ ನಗು 4
19. ಸ್ಟಾರ್ ಉಪೇಂದ್ರನ ವಾಸ್ತವ 3

ಮೇಲಿನಿಂದ ಕೆಳಕ್ಕೆ

1. ತಾಯಿಯ ಮಡಿಲಲ್ಲಿ ಎನ್ನುವರ್ಥದ ರಮೇಶ್ ಚಿತ್ರ ಸ್ವಲ್ಪ ಹತ್ತಿರವಷ್ಟೇ ! 8
2. ಸಪ್ತ ಋಷಿಗಳಲ್ಲಿ ಒಬ್ಬ, ರೇಣುಕಾ ದೇವಿಯ ಪತಿಯೂ ಹೌದು! 4
3. ವಿಷ್ಣುವರ್ಧನ್ - ಭವಾನಿ ಅಭಿನಯದ ಸರ್ಪ ಸ್ತ್ರೀ 4
6. ವಾತ್ಸಲ್ಯದ 'ಹಾದಿ' 2
8. ಸ್ವರ್ಗಕ್ಕೆ ದಾರಿ ತೋರಿದಾಕೆ ಕೋಪಗೊಂಡರೆ ಊರ ದೇವಿ 8
9. ರಾಜ್‌ಕುಮಾರ್ - ಜಯಂತಿ ಅಭಿನಯಕ್ಕೆ ಎಂ. ಆರ್. ವಿಠಲ್ ನಿರ್ದೇಶಕ 4
10. ಶಂಕರ್ ನಾಗ್‌ನ ಕಪ್ಪನೆಯ ಹಾವು 4
11. ಇದು ಏಳು ಹೆಜ್ಜೆಗಳ ಅನುಬಂಧ 4
13. ಬಿ.ಸಿ. ಪಾಟೀಲ್ ಅಭಿನಯದ ಪುಂಡಾಟಿಕೆ 4
15. ಜಗ್ಗೇಶ್ ಊರಿನ ಮುಖ್ಯಸ್ಥ 3

ವಿಜೇತರು: ಶ್ರೀಮತಿ ಹೆಚ್.ಆರ್.ಮೀನಾಕ್ಷಿ, MIG-477, ಶಾರದಾದೇವಿ ನಗರ, ಮೈಸೂರು-570022

ಸಿನಿ ಪದಬಂಧ 474ರ ಸರಿ ಉತ್ತರ

ಎ	ಮ	ರ್ಜ	ನ್ಸಿ			ವೀ	ರ	ಸಂ	ಕ	ಲ್ಪ
ಲ್ಲ				ಮ	ತ್ಸ	ರ		ಧ್ಯಾ		
ರ	ವಿ	ವ	ರ್ಮ			ಧೀ		ರಾ	ರ್ಟ್	ಬ
ಮ		ಪ್ರ		ಕುಂ	ಬಾ	ರ		ಗ		ದು
ನೆ				ಭ						ಕು
ದೋ		ಕೂ	ಲಿ	ರಾ	ಜ		ನಾ	ನೇ	ರಾ	ಜ
ಸೆ	ರ	ಗು		ಶಿ			ನು			ಟ
ನೂ		ಕೋ			ಶ		ನಾ		ಕಾ	ಕಾ
	ನ	ಳಿ	ನಿ		ಶಿ	ವ	ನೇ			ಬಂ
	ರೇಂ				ಕ			ಚಾ	ಮುಂ	ಡಿ
ಇಂ	ದ್ರ	ಜಿ	ತ್		ಲಾ	ಕ	ಪ್			

ವಿಜಯ್ ಸೇತುಪತಿ ಜೋಡಿಯಾಗಿ ರುಕ್ಮಿಣಿ ವಸಂತ್

ಮಗಳು ಜಾನಕಿ ಸೀರಿಯಲ್‌ನಲ್ಲಿ ಜಾನಕಿಯಾಗಿ ಹೆಂಗಳೆಯರ ಮನಗೆದ್ದ ರುಕ್ಮಿಣಿ ವಸಂತ್ ನಂತರ ಶ್ರೀನಿ ನಿರ್ದೇಶನದ ಬೀರಬಲ್ ಜೊತೆ ನಾಯಕಿಯಾಗಿ ಚಿತ್ರರಂಗಕ್ಕೂ ಎಂಟ್ರಿಕೊಟ್ಟರು. ಮೊದಲ ಹಂತದಲ್ಲೇ ಸೂಪರ್‌ಸ್ಟಾರ್‌ಗಳ ಜೊತೆ ತೆರೆ ಹಂಚಿಕೊಳ್ಳುವ ಅವಕಾಶ ಪಡೆದ ರುಕ್ಮಿಣಿ ಕೈಯ್ಯಲ್ಲೀಗ ಸಾಕಷ್ಟು ಸಿನಿಮಾಗಳಿವೆ ಇದೀಗ ಅವರು ತಮಿಳಿನ ಸ್ಟಾರ್ ನಟ ವಿಜಯ್ ಸೇತುಪತಿ ಜೋಡಿಯಾಗಿ ನಟಿಸುತ್ತಿದ್ದಾರೆ.

ಗಣೇಶ್ ಜೊತೆ ಬಾನದಾರಿಯಲಿ, ರಕ್ಷಿತ್‌ಶೆಟ್ಟಿ ಜೊತೆಗೆ ಸಪ್ತ ಸಾಗರದಾಚೆ ಎಲ್ಲೋ ಚಿತ್ರಗಳಲ್ಲಿ ನಟಿಸಿರುವ ರುಕ್ಮಿಣಿ ವಸಂತ್ ಇದೀಗ ಈ ಸಿನಿಮಾಗಳು ತೆರೆಗೆ ಬರುವ ಮುನ್ನವೇ ತಮಿಳಿನಲ್ಲಿ ಸ್ಟಾರ್ ನಟನ ಚಿತ್ರದಲ್ಲಿ ನಾಯಕಿಯಾಗುವ ಅವಕಾಶ ತಮ್ಮದಾಗಿಸಿಕೊಂಡಿದ್ದಾರೆ. ಆರ್ಮುಗ ಕುಮಾರ್ ಅವರ ನಿರ್ದೇಶನದ ಈ ಹೊಸ ಚಿತ್ರದಲ್ಲಿ ವಿಜಯ್-ರುಕ್ಮಿಣಿ ಜೋಡಿಯಾಗಿ ನಟಿಸುತ್ತಿದ್ದಾರೆ. ಈ ಚಿತ್ರದ ಮುಹೂರ್ತ ಸಮಾರಂಭ ಮಲೇಷಿಯಾದಲ್ಲಿ ನಡೆದಿದೆ. ಸದ್ಯದಲ್ಲಿಯೇ ಸಿನಿಮಾದ ಶೂಟಿಂಗ್ ಸಹ ಮಲೇಷಿಯಾದಲ್ಲೇ ಶುರುವಾಗಲಿದೆ. ಒಂದು ವಿಭಿನ್ನ ಕಥೆಯ ಮೂಲಕ ವಿಜಯ್-ರುಕ್ಮಿಣಿ ವಸಂತ್ ತಮಿಳು ಪ್ರೇಕ್ಷಕರ ಮುಂದೆ ಬರುತ್ತಿದ್ದಾರೆ. ಈ ಮೂಲಕ ಕಾಲಿವುಡ್ ಅಂಗಳಕ್ಕೆ ಮತ್ತೊಬ್ಬ ಕನ್ನಡ ನಟಿಯ ಎಂಟ್ರಿಯಾದಂತಾಗಿದೆ.

ಮುಂಗಾರು ಮಳೆ ಅನಾಹುತ ತಡೆಗೆ ಮುಂಜಾಗ್ರತಾ ಕ್ರಮ ಕೈಗೊಳ್ಳಿ

ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಸೂಚನೆ

ನಂಜನಗೂಡು, ಮೇ 25– ಮುಂಗಾರು ಮಳೆ ಪ್ರಾರಂಭವಾಗುತ್ತಿದ್ದು, ಸಂಭವಿಸಬಹುದಾದ ಅನಾಹುತ ತಡೆಗೆ ಅಧಿಕಾರಿಗಳು ಎಲ್ಲಾ ರೀತಿಯ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಸೂಚನೆ ನೀಡಿದರು.

ನಗರದ ತಾಲೂಕು ಕಚೇರಿಯಲ್ಲಿ ನಡೆದ ತಾಲೂಕು ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಮುಂಗಾರು ಮಳೆ ಆರಂಭವಾಗುತ್ತಿರುವುದರಿಂದ ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಚರಂಡಿಗಳನ್ನು ಸ್ವಚ್ಛಗೊಳಿಸಿ ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡಬೇಕು. ದುರಸ್ತಿ ಕಾಮಗಾರಿಗಳನ್ನು ಆದಷ್ಟು ಬೇಗ ಮುಗಿಸಬೇಕು. ಡಾಂಬರ್ ರಸ್ತೆ ಹಾಗೂ ಗುಂಡಿಗಳಲ್ಲಿ ನೀರು ನಿಲ್ಲದಂತೆ ಅಧಿಕಾರಿಗಳು ಎಚ್ಚರ ವಹಿಸಬೇಕು ಎಂದು ತಾಪಂ ಇಓ ಹಾಗೂ ತಹಸೀಲ್ದಾರ್‌ಗೆ ತಿಳಿಸಿದರು.

ಅಧಿಕಾರಿಗಳು ಯಾವುದೇ ಸಬೂಬು ಮತ್ತು ಹಾರಿಕೆ ಉತ್ತರಗಳನ್ನು ನೀಡದೆ ನೀರು ನುಗ್ಗುವ ತಗ್ಗು ಪ್ರದೇಶಗಳಿಗೆ ಆಯಾಯ ಗ್ರಾಪಂ ಸದಸ್ಯರು ಹಾಗೂ ಮುಖಂಡರೊಂದಿಗೆ ಭೇಟಿ ನೀಡಿ ಸಮಸ್ಯೆ ಬಗೆಹರಿಸಲು ಮುಂದಾಗಬೇಕು ಎಂದರು.

ವಾಡಿಕೆ ಮಳೆಗಿಂತ ಹೆಚ್ಚು ಮಳೆ ಬಂದು ನದಿ ಪಾತ್ರದಲ್ಲಿರುವ ಮನೆಗಳಿಗೆ ಅನಾಹುತವಾದರೆ ಕಾಳಜಿ ಕೇಂದ್ರಗಳನ್ನು ಸ್ಥಾಪಿಸಿ ಅವರಿಗೆ ಎಲ್ಲಾ ರೀತಿಯ ಸಹಕಾರ ನೀಡಬೇಕು ಎಂದರು.

ಹುಲ್ಲಹಳ್ಳಿ ರಸ್ತೆಯ ಬಲಭಾಗದಲ್ಲಿರುವ ಆದರ್ಶ ಶಾಲೆ ವಸತಿ ನಿಲಯ ಶೋಚನೀಯ ಸ್ಥಿತಿಯಲ್ಲಿದ್ದು, ಅದು ಬಳಕೆಯಾಗುತ್ತಿದೆಯೋ ಇಲ್ಲವೋ ಎಂಬುದನ್ನು ಶಿಕ್ಷಣ ಅಧಿಕಾರಿಗಳು ಪರಿಶೀಲಿಸಬೇಕು. ಜೊತೆಗೆ ಅದಕ್ಕೆ ಸಂಬಂಧಪಟ್ಟಂತೆ ತುರ್ತು ಅಗತ್ಯ ಕ್ರಮ ಕೈಗೊಂಡು ಅದನ್ನು ಉಪಯೋಗಕ್ಕೆ ಬರುವಂತೆ ನೋಡಿಕೊಳ್ಳುವ ಜವಾಬ್ದಾರಿ ಅಧಿಕಾರಿಗಳದ್ದು ಎಂದು ತಿಳಿಸಿದರು.



ಅರಣ್ಯ ಇಲಾಖೆ ಉಪಯೋಗಕ್ಕೆ ಬಾರದ ಮತ್ತು ಅಪಾಯದಲ್ಲಿರುವ ಮರಗಳನ್ನು ತಕ್ಷಣ ತೆರವುಗೊಳಿಸುವ ಮೂಲಕ ಅನಾಹುತ ತಪ್ಪಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಇದೇ ವೇಳೆ ಸಭೆಯಲ್ಲಿ ಕೃಷಿ, ತೋಟಗಾರಿಕೆ, ಚೆಸ್ಕಾಂ, ಕಂದಾಯ, ಅಂಗನವಾಡಿ, ಶಿಕ್ಷಣ, ನೀರಾವರಿ, ಲೋಕೋಪಯೋಗಿ, ಆರೋಗ್ಯ, ಪೊಲೀಸ್, ಅಗ್ನಿಶಾಮಕ, ಅರಣ್ಯ, ನಗರಸಭೆ ಅಧಿಕಾರಿಗಳ ಕಾರ್ಯ ವೈಖರಿ ಚರ್ಚಿಸಿದ ಜಿಲ್ಲಾಧಿಕಾರಿಗಳು, ಆಯಾಯ ಇಲಾಖೆಗಳ ಪ್ರಗತಿ ಮತ್ತು ಕುಂದುಕೊರತೆಗಳ ಬಗ್ಗೆ ಮುಖ್ಯಸ್ಥರಿಂದ ಸಂಪೂರ್ಣ ಮಾಹಿತಿ ಪಡೆದರು.

ಶಾಸಕ ದರ್ಶನ್ ಧ್ರುವನಾರಾಯಣ್ ಮಾತನಾಡಿ, ಜಿಲ್ಲಾಧಿಕಾರಿಗಳು ಮುಂಗಾರು ಮಳೆ ಅನಾಹುತಗಳ ಬಗ್ಗೆ ತಾಲೂಕಿನಲ್ಲಿ ಯಾವ ರೀತಿ ಮುಂಜಾಗ್ರತಾ ಕ್ರಮ ಅನುಸರಿಸಬೇಕು ಎಂಬ ಬಗ್ಗೆ ಅಧಿಕಾರಿಗಳಾದ ನಿಮಗೆ ತಿಳಿಸಿದ್ದು, ಈ ನಿಟ್ಟಿನಲ್ಲಿ ತಾವು ವಿಶೇಷ ಕಾಳಜಿ ವಹಿಸಬೇಕೆಂದು ಕೋರಿದ ಅವರು ತುರ್ತು ನಿರ್ವಹಣೆಗಾಗಿ ಸಹಾಯವಾಣಿ ತೆರೆಯಬೇಕು ಎಂದರು.

> ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮುಂಬರುವ ಮುಂಗಾರು ಮಳೆ ಅನಾಹುತಗಳನ್ನು ತಡೆಯಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದು, ಅದರಂತೆ ತುರ್ತು ಅಭಿವೃದ್ಧಿ ಕೆಲಸಗಳಿಗಾಗಿ 8 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ಅಧಿಕಾರಿಗಳು ದೂರದ ಊರುಗಳಿಂದ ಪ್ರಯಾಣ ಮಾಡುವುದನ್ನು ಬಿಟ್ಟು ಸ್ಥಳದಲ್ಲೇ ಉಳಿದು ಕೆಲಸ ಕಾರ್ಯಗಳ ಬಗ್ಗೆ ಗಮನ ಹರಿಸಬೇಕು.
> – ಡಾ.ಕೆ.ವಿ.ರಾಜೇಂದ್ರ, ಜಿಲ್ಲಾಧಿಕಾರಿ.

ಮುಂಬರುವ ದಿನಗಳಲ್ಲಿ ಎಂತಹ ಪರಿಸ್ಥಿತಿ ಎದುರಾದರೂ ಅದನ್ನು ನಿಭಾಯಿಸಲು ಅಧಿಕಾರಿಗಳು ಸನ್ನದ್ಧರಾಗಿರಬೇಕು. ಈ ನಿಟ್ಟಿನಲ್ಲಿ ನಾವು ಕೂಡ ನಿಮಗೆ ಸಹಕರಿಸುತ್ತೇವೆ. ಹೀಗಾಗಿ ಒಟ್ಟಾಗಿ ಸಮಸ್ಯೆಗಳನ್ನು ಎದುರಿಸಿ ಕ್ಷೇತ್ರವನ್ನು ಮಾದರಿಯಾಗಿಸುವ ಜೊತೆಗೆ ಸಾರ್ವಜನಿರು, ರೈತರು, ಬಡವರು, ಕೂಲಿ ಕಾರ್ಮಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಎಚ್ಚರಿಕೆ ವಹಿಸೋಣ ಎಂದರು.

ಸಭೆಯಲ್ಲಿ ತಹಸೀಲ್ದಾರ್ ಶಿವಕುಮಾರ್, ಇಓ ಶ್ರೀನಿವಾಸ್, ಶ್ರೀಕಂಠೇಶ್ವರ ದೇವಾಲಯದ ಇಓ ಜಗದೀಶ್, ಡಿವೈಎಸ್ಪಿ ಗೋವಿಂದರಾಜು, ಸಿಪಿಐ ಶಿವನಂಜಶೆಟ್ಟಿ ಹಾಗೂ ಎಲ್ಲಾ ಇಲಾಖಾಧಿಕಾರಿಗಳು ಭಾಗವಹಿಸಿದ್ದರು.

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1 ದಿ ಕೇರಳ ಸ್ಟೋರಿ (ಹಿಂ): ಬೆ.10.25ಕ್ಕೆ, ಮ.1.20ಕ್ಕೆ, ಸಂ.4.05ಕ್ಕೆ, ರಾ.7ಕ್ಕೆ, ರಾ.9.50ಕ್ಕೆ.

ಸ್ಕ್ರೀನ್ 2 ಡೇರ್‌ಡೆವಿಲ್ ಮುಸ್ತಫಾ (ಕ): ಬೆ.10.05ಕ್ಕೆ, ಸಂ.6.50ಕ್ಕೆ, ಗಾರ್ಡಿಯನ್ಸ್ ಆಫ್ ಗ್ಯಾಲಕ್ಸಿ ವಾಲ್ಯೂಂ 3 (3ಡಿ)(ಇಂ): ಮ.1.10ಕ್ಕೆ, ಜೆರ್ಸಿ ನಂಬರ್ 10 (ಕ): ಸಂ.4.05ಕ್ಕೆ, ರಾಘವೇಂದ್ರ ಸ್ಟೋರ್ಸ್ (ಕ): ರಾ.10ಕ್ಕೆ.

ಸ್ಕ್ರೀನ್ 3 ಇವಿಲ್ ಡೆಡ್ ರೈಸ್ (ಇಂ): ಬೆ.11ಕ್ಕೆ, ಪಿಚ್ಚೈಕಾರನ್2 (ತ): ಮ.1.20ಕ್ಕೆ, ಸಂ.4.25ಕ್ಕೆ, ರಾಘವೇಂದ್ರ ಸ್ಟೋರ್ಸ್ (ಕ): ರಾ.7.30ಕ್ಕೆ, ಚಾರ್ಲ್ಸ್ ಎಂಟರ್‌ಪ್ರೈಸಸ್ (ಮ): ಸಂ.9.55ಕ್ಕೆ.

ಸ್ಕ್ರೀನ್ 4 ಫಾಸ್ಟ್ X (3ಡಿ)(ಇಂ): ಬೆ.10.45ಕ್ಕೆ, ಮ.1.35ಕ್ಕೆ, ಸಂ.4.25ಕ್ಕೆ, ರಾ.7.15ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1 ಫಾಸ್ಟ್ X (3ಡಿ)(ಇಂ): ಬೆ.10.30, ಮ.1.30ಕ್ಕೆ, ಸಂ.4.30ಕ್ಕೆ, ರಾ.7.30ಕ್ಕೆ, ರಾ.10.30ಕ್ಕೆ.

ಸ್ಕ್ರೀನ್ 2 ದಿ ಕೇರಳ ಸ್ಟೋರಿ (ಹಿಂ): ಬೆ.10ಕ್ಕೆ, ಮ.12.55ಕ್ಕೆ, ಮ.3.50ಕ್ಕೆ, ಸಂ.6.45ಕ್ಕೆ, ರಾ.9.40ಕ್ಕೆ.

ಸ್ಕ್ರೀನ್ 3 ದಿ ಕೇರಳ ಸ್ಟೋರಿ (ಹಿಂ): ಬೆ.11ಕ್ಕೆ, ಮ.1.55ಕ್ಕೆ, ಸಂ.4.50ಕ್ಕೆ, ರಾ.10.30ಕ್ಕೆ, ಅನುರಾಗಂ (ಮ): ರಾ.7.45ಕ್ಕೆ.

ಸ್ಕ್ರೀನ್ 4 ಫಾಸ್ಟ್ X (3ಡಿ)(ಇಂ): ಬೆ.9.30ಕ್ಕೆ, ಪಿಚ್ಚೈಕಾರನ್ 2(ತ): ಮ.12.20ಕ್ಕೆ, ರಾ.10.05ಕ್ಕೆ, ಡೇರ್‌ಡೆವಿಲ್ ಮುಸ್ತಫಾ (ಕ): ಸಂ.6.50ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಮಂಡಲ (ಕ): ಮ.2.15ಕ್ಕೆ, 1 ರಾಬರಿ ಕಥೆ (ಕ): ಸಂ.4.50ಕ್ಕೆ, ಚೌಕಾಬಾರ (ಕ): ರಾ.7.50ಕ್ಕೆ, ಕ್ರಿಡ್ 3 (ಇಂ): ಬೆ.11.35ಕ್ಕೆ, ತು ಜೂಥಿ ಮೇನ್ ಮಕ್ಕರ್ (ಹಿಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, ತು ಜೂಥಿ ಮೇನ್ ಮಕ್ಕರ್ (ಹಿಂ): ಬೆ.9.30ಕ್ಕೆ, ಬೆ.11ಕ್ಕೆ, ಮ.1ಕ್ಕೆ, ಮ.2.30ಕ್ಕೆ, ಸಂ.4.30ಕ್ಕೆ, ಸಂ.6ಕ್ಕೆ, ರಾ.8ಕ್ಕೆ, ರಾ.9.30ಕ್ಕೆ, ತುರಮುಖಂ (ಮ): ರಾ.10.30ಕ್ಕೆ, ಅಜಿಲನ್ ಕಿಂಗ್ ಆಫ್ ದಿ ಓಷನ್ (ತ): ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ, ಸ್ಕ್ರೀಮ್ 6 (ಇಂ): ಮ.2.45ಕ್ಕೆ, ರಾ.7.45ಕ್ಕೆ, 65 (ಇಂ): ಮ.12.30ಕ್ಕೆ, ಸಂ.5.30ಕ್ಕೆ, ರಾ.10.30ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪದ್ಮ ಚಿತ್ರಮಂದಿರ	(ದೂ: 2521923)
ರಾಘವೇಂದ್ರ ಸ್ಟೋರ್ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಸೈರನ್ (ಕ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	(ದೂ: 2520009)
ಡೇ ಅಂಡ್ ಸಮ್‌ಒನ್ (ತೆ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಏಲಿಯನ್ಸ್ –2042 (ಹಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಅಂತ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಸ್ಟಡಿ (ತೆ)	4 ಪ್ರದರ್ಶನಗಳು
ರಾಜ್‌ಕಮಲ್	
ಕೇರಳ ಸ್ಟೋರಿ (ಹಿಂ)	4 ಪ್ರದರ್ಶನಗಳು
ಸಂಗಂ	
ಅಂತ (ಕ)	2 ಪ್ರದರ್ಶನಗಳು
ಲಿಡೋ	
ಪಿಎಸ್–2 (ತ)	4 ಪ್ರದರ್ಶನಗಳು
ತಿಬ್ಬಾದೇವಿ	
ಕಸ್ಟಡಿ (ತೆ)	4 ಪ್ರದರ್ಶನಗಳು
ಪ್ರಭಾ	
ಸುಮನ್ (ಕ)	4 ಪ್ರದರ್ಶನಗಳು

ಡಾ.ಮಹದೇವಪ್ಪಗೆ ಸಚಿವ ಸ್ಥಾನ ನೀಡಲು ಒತ್ತಾಯ

ತಿ.ನರಸೀಪುರ, ಮೇ 25– ಮೈಸೂರು ಜಿಲ್ಲೆ ಹಾಗೂ ರಾಜ್ಯದ ದಲಿತರ ದನಿಯಾಗಿರುವ, ಪ್ರಸಕ್ತ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವಿಗೆ ತಮ್ಮದೇ ಆದ ಕೊಡುಗೆ ನೀಡಿರುವ ಶಾಸಕ ಡಾ.ಹೆಚ್.ಸಿ. ಮಹದೇವಪ್ಪನವರಿಗೆ ಸಚಿವ ಸ್ಥಾನ ನೀಡುವ ಮೂಲಕ ಸಲಿತ ಸಮುದಾಯಕ್ಕೆ ನ್ಯಾಯ ದೊರಕಿಸಿಕೊಡಬೇಕು ಎಂದು ಪುರಸಭೆ ಮಾಜಿ ಅಧ್ಯಕ್ಷ ಎಸ್.ಮದನ್ ರಾಜ್ ಒತ್ತಾಯಿಸಿದರು.



ಪಟ್ಟಣದ ಚಿಕ್ಕಮ್ಮತಾಯಿ ಯಾತ್ರಿ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರು ಜಿಲ್ಲೆ ಅಲ್ಲದೇ ರಾಜ್ಯದ ದಲಿತ ಸಮುದಾಯದ ಪ್ರಭಾವಿ ನಾಯಕರಾಗಿರುವ, 6 ಬಾರಿ ಶಾಸಕರಾಗಿ ಆಯ್ಕೆಯಾಗಿ 3 ಬಾರಿ ಸಚಿವರಾಗಿ ಕೆಲಸ ಮಾಡಿ ಅಪಾರ ಅನುಭವ ಹೊಂದಿರುವ ಡಾ.ಹೆಚ್.ಸಿ. ಮಹದೇವಪ್ಪ ಅವರಿಗೆ ಕಾಂಗ್ರೆಸ್ ಹೈಕಮಾಂಡ್ ಸಚಿವ ಸ್ಥಾನ ನೀಡಿ, ಪ್ರಮುಖ ಖಾತೆ ನೀಡಬೇಕೆಂದು ಒತ್ತಾಯಿಸಿದರು. ಜೊತೆಗೆ ಮೈಸೂರು ಜಿಲ್ಲೆಯ ಉಸ್ತುವಾರಿ ಸಹ ನೀಡಬೇಕೆಂದು ಮನವಿ ಮಾಡಿದರು.

ರಾಜ್ಯದಲ್ಲಿ ಈಗಾಗಲೇ ಕಾಂಗ್ರೆಸ್ ಪಕ್ಷ ಬಹುಮತದೊಂದಿಗೆ ಅಧಿಕಾರಕ್ಕೆ ಬಂದಿದೆ. ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದಾರೆ. 8 ಮಂದಿಯನ್ನು ಕ್ಯಾಬಿನೆಟ್ ಸಚಿವರನ್ನಾಗಿ ಮಾಡಲಾಗಿದೆ. ನ್ಯಾಯಯುತವಾಗಿ ಮೊದಲ ಹಂತದಲ್ಲೇ ಸಿದ್ದರಾಮಯ್ಯ ಆಪ್ತರಾಗಿರುವ ಮಹದೇವಪ್ಪರಿಗೆ ಸಚಿವ ಸ್ಥಾನ ನೀಡಬೇಕಿತ್ತಾದರೂ, ಅವರಿಗೆ ಸಚಿವ ಸ್ಥಾನ ದೊರಕಿಲ್ಲ. ಮೈಸೂರು ಜಿಲ್ಲೆಯಲ್ಲಿ ಕಾಂಗ್ರೆಸ್ ಶಾಸಕರ ಗೆಲುವಿನಲ್ಲಿ ಮಹದೇವಪ್ಪರ ಕೊಡುಗೆ ಇದೆ. ಇಂದು ಪ.ಜಾತಿ ಮತ್ತು ವರ್ಗದ ಸಮತೋಲನದ ರಾಜಕಾರಣಿ ಇದ್ದರೇ ಅದು ಮಹದೇವಪ್ಪ. ಹೀಗಾಗಿ ಮಹದೇವಪ್ಪನವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಮನವಿ ಮಾಡಿದರು.

ಕ್ಷೇತ್ರದ ಜನತೆ ಪ್ರಜಾಪ್ರಭುತ್ವದ ಆಶಯಕ್ಕೆ ಪೂರಕವಾಗಿದ್ದಾರೆ

ಮಾಜಿ ಶಾಸಕಿ ಜೆ.ಸುನೀತಾ ವೀರಪ್ಪಗೌಡ

ಬನ್ನೂರು, ಮೇ 25– ಕ್ಷೇತ್ರದ ಜನತೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸುವ ಮೂಲಕ ಪ್ರಜಾಪ್ರಭುತ್ವದ ಆಶಯಕ್ಕೆ ಪೂರಕವಾಗಿದ್ದಾರೆ ಎಂದು ಮಾಜಿ ಶಾಸಕಿ ಜೆ.ಸುನೀತಾ ವೀರಪ್ಪಗೌಡ ತಿಳಿಸಿದರು.



ತಾಲೂಕಿನ ಬನ್ನೂರಿನ ತಮ್ಮ ನಿವಾಸದಲ್ಲಿ ಎಪಿಎಂಸಿ ಮಾಜಿ ಅಧ್ಯಕ್ಷ ಕಗ್ಗಲಿಪುರ ಎಂ.ರಾಜಣ್ಣ ಅವರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಅಭಿವೃದ್ಧಿಗೆ ಒತ್ತು ನೀಡುವ ಧೀಮಂತ ನಾಯಕ ಡಾ.ಹೆಚ್.ಸಿ. ಮಹದೇವಪ್ಪ ಅವರನ್ನು ಗೆಲ್ಲಿಸುವ ಮೂಲಕ ಜನರು ಉತ್ತಮ ನಿರ್ಧಾರ ತೆಗೆದುಕೊಂಡಿದ್ದಾರೆ. ಮುಂದಿನ ದಿನಗಳಲ್ಲಿ ಕ್ಷೇತ್ರದಲ್ಲಿ ಅಭಿವೃದ್ಧಿ ಪರ್ವ ಆರಂಭವಾಗುವುದರಲ್ಲಿ ಯಾವುದೇ ಸಂಶಯವಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸಿದ್ದರಾಮಯ್ಯ ರಾಜ್ಯದ ಮುಖ್ಯಮಂತ್ರಿಯಾಗಿದ್ದು, ಮಹದೇವಪ್ಪ ಪ್ರಮುಖ ಖಾತೆ ಸಚಿವರಾಗುವುದರಿಂದ ಕ್ಷೇತ್ರ ಹಿಂದೆಂದೂ ಕಾಣದಂತಹ ಅಭಿವೃದ್ಧಿ ಕಾಣಲಿದೆ ಎಂದರು.

ರಾಜ್ಯದಲ್ಲಿ ಅಧಿಕಾರದಲ್ಲಿದ್ದ 40% ಭ್ರಷ್ಟ ಬಿಜೆಪಿ ಸರ್ಕಾರವನ್ನು ಕಾಂಗ್ರೆಸ್ ಪಕ್ಷಕ್ಕೆ ಬಹುಮತ ನೀಡುವ ಮೂಲಕ ರಾಜ್ಯದ ಜನತೆ ಕಿತ್ತೊಗೆದಿದ್ದಾರೆ. ಹೀಗಾಗಿ ಚುನಾವಣಾ ಪೂರ್ವದಲ್ಲಿ ನೀಡಿದ್ದ ಭರವಸೆಗಳನ್ನು ಈಡೇರಿಸಲಾಗುವುದು. ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಕಳೆದ ಅವಧಿಯಲ್ಲಿ ನೀಡಿದ್ದ ಜನಪರ ಸರ್ಕಾರವನ್ನು ಈ ಬಾರಿಯೂ ನೀಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಚುನಾವಣೆಯಲ್ಲಿ ಕಾಂಗ್ರೆಸ್ ಗೆಲ್ಲಲು ಅತೀ ಹೆಚ್ಚಿನ ಪ್ರಮಾಣದಲ್ಲಿ ಬನ್ನೂರು ಮತದಾರರು ಸೇರಿದಂತೆ ಕ್ಷೇತ್ರದ ಎಲ್ಲಾ ಮತದಾರರು ಕಾಣಿಕೆ ನೀಡಿದ್ದಾರೆ. ಹೀಗಾಗಿ ಪಕ್ಷದ ಕಾರ್ಯಕರ್ತರು, ಮುಖಂಡರು ಸೇರಿದಂತೆ ಕ್ಷೇತ್ರದ ಮತದಾರರಿಗೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದರು. ಈ ವೇಳೆ ಮಾಜಿ ಜಿಪಂ ಸದಸ್ಯ ಹೊನ್ನನಾಯಕ, ಉಕ್ಕಲಗೆರ ಗ್ರಾಪಂ ಸದಸ್ಯ ಬೂದಹಳ್ಳಿ ಮಹದೇವ್, ರಾಜು, ಮಹೇಶ್ ಇದ್ದರು.

ಸಿದ್ದರಾಮಯ್ಯ ಮುಖ್ಯಮಂತ್ರಿಯಾದ ಹಿನ್ನೆಲೆ

ಹೊಸಕೋಟೆ ಗ್ರಾಮದಲ್ಲಿ ಸಿಹಿ ಹಂಚಿ ಸಂಭ್ರಮಾಚರಣೆ

ನಂಜನಗೂಡು, ಮೇ 25– ಸಿದ್ದರಾಮಯ್ಯನವರು ವರುಣ ಕ್ಷೇತ್ರದಿಂದ ಜಯಗಳಿಸಿ ಮುಖ್ಯಮಂತ್ರಿಯಾದ ಹಿನ್ನೆಲೆಯಲ್ಲಿ ತಾಲೂಕಿನ ಹೊಸಕೋಟೆ ಗ್ರಾಪಂ ಕಾಂಗ್ರೆಸ್ ಮುಖಂಡರು ಪಟಾಕಿ ಸಿಡಿಸಿ, ಮನೆ–ಮನೆಗೆ ಸಿಹಿ ಹಂಚಿ ವಿಜಯೋತ್ಸವ ಆಚರಿಸಿದರು.



ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಜಿಪಂ ಮಾಜಿ ಅಧ್ಯಕ್ಷ ಬಿ.ಎಂ. ರಾಮು, 2008ರಲ್ಲಿ ಸಿದ್ದರಾಮಯ್ಯರವರು ಪ್ರಥಮ ಬಾರಿಗೆ ಈ ಕ್ಷೇತ್ರದಿಂದ ಸ್ಪರ್ಧಿಸಿ ವಿರೋಧ ಪಕ್ಷದ ನಾಯಕರಾಗಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಲು ಶ್ರಮಿಸಿದರು. 2013ರಲ್ಲಿ ಮತ್ತೆ ಕ್ಷೇತ್ರದಿಂದ ಸ್ಪರ್ಧಿಸಿ ನಾಡಿನ ಮುಖ್ಯಮಂತ್ರಿಯಾಗಿ ಆಯ್ಕೆಯಾದರು. 2018ರಲ್ಲಿ ಅವರ ಸುಪುತ್ರ ಡಾ.ಯತಿಂದ್ರ ಸಿದ್ದರಾಮಯ್ಯ ಅವರನ್ನು 58 ಸಾವಿರಕ್ಕೂ ಅಧಿಕ ಮತಗಳಿಂದ ಗೆಲ್ಲಿಸಿದ ಕೀರ್ತಿ ವರುಣ ಕ್ಷೇತ್ರದ ಜನತೆಗೆ ಸಲ್ಲುತ್ತದೆ. 2023ರ ಚುನಾವಣೆಯಲ್ಲಿ ವಿರೋಧ ಪಕ್ಷಗಳು ಸಿದ್ದರಾಮಯ್ಯ ಅವರನ್ನು ಸೋಲಿಸಬೇಕೆಂಬ ಉದ್ದೇಶದೊಂದಿಗೆ ಮಾಜಿ ಸಚಿವ ಸೋಮಣ್ಣ ಅವರನ್ನು ಸ್ಪರ್ಧೆಗಿಳಿಸಿ ಜೆಡಿಎಸ್ ಪಕ್ಷದೊಂದಿಗೆ ತಂತ್ರ ರೂಪಿಸಿದರು. ಆದರೆ ವರುಣ ಕ್ಷೇತ್ರದ ಜನತೆ ಪ್ರಬುದ್ಧರಾಗಿ ಯಾವುದೇ ಆಸೆ ಆಮಿಷಗಳಿಗೆ ಬಲಿಯಾಗದೆ ಹೆಚ್ಚಿನ ಮತ ನೀಡಿ ಸಿದ್ದರಾಮಯ್ಯನವರು ಎರಡನೇ ಬಾರಿಗೆ ಮುಖ್ಯಮಂತ್ರಿಗಳಾಗಿ ಆಯ್ಕೆಯಾಗಲು ನೆರವಾಗಿದ್ದಾರೆ. ವರುಣ ಕ್ಷೇತ್ರದ ಜನತೆ ಪ್ರೀತಿ, ಅಭಿಮಾನಕ್ಕೆ ಕಾಂಗ್ರೆಸ್ ಪಕ್ಷ ಮತ್ತು ಸಿದ್ದರಾಮಯ್ಯ ಆಭಾರಿಯಾಗಿದ್ದಾರೆ ಎಂದರು.

ಸಿದ್ದರಾಮಯ್ಯ ನಾಡು ಕಂಡ ಪ್ರಬುದ್ಧ ರಾಜಕಾರಣಿ. 2013ರಲ್ಲಿ ಬಡವರ, ರೈತರ, ಕಾರ್ಮಿಕರ, ಮಹಿಳೆಯರ ಪರ ಅನೇಕ ಯೋಜನೆಗಳನ್ನು ಜಾರಿಗೊಳಿಸಿ, ಕೊಟ್ಟಿದ್ದ 165 ಭರವಸೆಗಳನ್ನು ಈಡೇರಿಸಿ ಜನರ ನಂಬಿಕೆಗಳಿಸಿದ್ದಾರೆ. ಈಗ ಕೊಟ್ಟಿರುವ 5 ಗ್ಯಾರಂಟಿಗಳನ್ನು ಈಡೇರಿಸಿ ಬಡವರ ಪರ ನಿಲ್ಲಲಿದ್ದಾರೆ ಎಂದರು.

ಹೊಸಕೋಟೆ ಗ್ರಾಮಸ್ಥರು ಸಿದ್ದರಾಮಯ್ಯನವರಿಗೆ ಅಭಿನಂದನೆ ಸಲ್ಲಿಸಲು ದಿನಾಂಕ ನಿಗದಿಪಡಿಸುವಂತೆ ಒತ್ತಾಯಿಸಿದ್ದಾರೆ. ನಿಮ್ಮೆಲ್ಲರ ಪ್ರೀತಿಪೂರ್ವಕ ಆಮಂತ್ರಣವನ್ನು ಸಿದ್ದರಾಮಯ್ಯ ಅವರಿಗೆ ತಿಳಿಸಿ ದಿನಾಂಕ ನಿಗದಿಪಡಿಸಿ ಕರೆತರಲಾಗುವುದು ಎಂದರು. ಇದೇ ವೇಳೆ ತಾಪಂ ಮಾಜಿ ಅಧ್ಯಕ್ಷ ರಂಗಸ್ವಾಮಿ ನಾಯಕ, ಹೇಮಂತ್, ಚೆನ್ನೇಗೌಡ, ಸುಂದರ, ಮಹದೇವಸ್ವಾಮಿ, ಮಹೇಶ್, ಸೇರಿದಂತೆ ನೂರಾರು ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

ಇಂದು ಮಾರಮ್ಮನ ದೇವಾಲಯ ಲೋಕಾರ್ಪಣೆ



ಹಿರೀಕ್ಯಾತನಹಳ್ಳಿ, ಮೇ 25– ಹುಣಸೂರು ತಾಲೂಕಿನ ಹಿರೀಕ್ಯಾತನಹಳ್ಳಿಯಲ್ಲಿ ಮೇ 26ರಂದು ಮಾರಮ್ಮನ ದೇವಸ್ಥಾನ ಲೋಕಾರ್ಪಣೆಗೊಳ್ಳಲಿದೆ.

ಶುಕ್ರವಾರ ಮುಂಜಾನೆ 4.30ಕ್ಕೆ ಗಂಗಾ ಪೂಜೆ ನೆರವೇರಿಸಿ ನಂತರ ಕಳಸಗಳೊಂದಿಗೆ ಮೆರವಣಿಗೆ ನಡೆಸಿದ ಬಳಿಕ ಬ್ರಾಹ್ಮಿ ಮುಹೂರ್ತದಲ್ಲಿ ತೀರ್ಥ ಸಂಗ್ರಹಣೆ, ಗ್ರಾಮ ಪ್ರದಕ್ಷಣೆ, ತಾಯಿ ವಿಗ್ರಹ ಶುದ್ಧಿ, ಗೋಪೂಜೆ, ಬಲಿ ಪುಣ್ಯಹ, ನವಗ್ರಹ ಪೂಜೆ, ಹೋಮ, ಗ್ರಾಮ ದೇವತಾರಾಧನೆ, ವಿಗ್ರಹ ಪ್ರತಿಷ್ಠಾಪನೆ, ನಾಡಿ ಸಂಧಾನ, ಅಂತ್ಯಬಲಿ, ದೇವಿಗೆ ಕುಂಕುಮಾರ್ಚನೆ, ಮಹಾ ನೈವೇದ್ಯ, ಮಹಾ ಮಂಗಳಾರತಿ ನೆರವೇರಲಿದೆ. ಈ ಎಲ್ಲಾ ಪೂಜಾ ಕಾರ್ಯಗಳು ಮೈಲಾಂಬೂರು ಚಂದ್ರ ಆರಾಧ್ಯ, ರಾವಂದೂರು ರಘು ಆರಾಧ್ಯ ನೇತೃತ್ವದಲ್ಲಿ ನಡೆಯಲಿದ್ದು, ಬೆಳಗ್ಗೆ 9ರಿಂದ 10 ಗಂಟೆವರೆಗೆ ಮಹಾ ನೈವೇದ್ಯ, ಮಹಾ ಮಂಗಳಾರತಿ ನಡೆಯಲಿದೆ. ಮಧ್ಯಾಹ್ನ 12ಗಂಟೆಗೆ ಪ್ರಸಾದ ವಿನಿಯೋಗ ನಡೆಯಲಿದೆ ಎಂದು ದೇವಾಲಯ ಮೂಲಗಳು ತಿಳಿಸಿವೆ.

ಇಂದು ಗೊರಹಳ್ಳಿ ದೊಡ್ಡಮ್ಮ ತಾಯಿ ರಥೋತ್ಸವ

ಬೆಟ್ಟದಪುರ, ಮೇ 25– ಬೆಟ್ಟದಪುರ ಸಮೀಪದ ಗೊರಹಳ್ಳಿ ಗ್ರಾಮದಲ್ಲಿ ಶುಕ್ರವಾರ ರಾತ್ರಿ ದೊಡ್ಡಮ್ಮ ತಾಯಿ ರಥೋತ್ಸವ ನಡೆಯಲಿದೆ.



ಗ್ರಾಮದ ಎಲ್ಲಾ ಸಮುದಾಯದ ಜನಾಂಗದವರು ಒಟ್ಟಾಗಿ ಸೇರಿ ದೊಡ್ಡಮ್ಮ ತಾಯಿ ಹಬ್ಬವನ್ನು ಆಚರಣೆ ಮಾಡುತ್ತಿದ್ದಾರೆ. ಶುಕ್ರವಾರ ಬೆಳಗ್ಗೆ ರಥದ ಮೇಲೆ ಕಳಸ ಪ್ರತಿಷ್ಠಾಪನೆ ನಡೆಯಲಿದೆ. ದೊಡ್ಡಮ್ಮ ತಾಯಿ ಉತ್ಸವ ಮೂರ್ತಿಯನ್ನು ವಿಶೇಷವಾಗಿ ಅಲಂಕಾರ ಮಾಡಿ ಪಲ್ಲಕ್ಕಿ ಮೇಲೆ ಕೂರಿಸಿ ತೇರಿನ ಸುತ್ತ ಮೂರು ಪ್ರದಕ್ಷಿಣೆ ಹಾಕಿದ ಬಳಿಕ, ರಥದ ಮೇಲೆ ಮೂರ್ತಿಯನ್ನು ಪ್ರತಿಷ್ಠಾಪನೆ ಮಾಡಲಾಗುವುದು. ಸುಮಾರು ಒಂದು ಕಿಮೀ ದೂರದವರೆಗೆ ನೂರಾರು ಭಕ್ತಾದಿಗಳ ಸಮ್ಮುಖದಲ್ಲಿ ರಥೋತ್ಸವ ನಡೆಯಲಿದೆ.

ರಥೋತ್ಸವದ ಸಂದರ್ಭದಲ್ಲಿ ವಿವಿಧ ಪಟಾಕಿಗಳನ್ನು ಸಿಡಿಸುವುದು, ಡೊಳ್ಳು ಕುಣಿತದ ಮೂಲಕ ದೇವಿಯನ್ನು ಭಕ್ತಾದಿಗಳು ಆರಾಧಿಸಲಿದ್ದಾರೆ. ಬಳಿಕ ಶ್ರೀ ದೊಡ್ಡಮ್ಮತಾಯಿ ದೇವಸ್ಥಾನದ ಸಮೀಪಕ್ಕೆ ರಥವು ಆಗಮಿಸಿದ ನಂತರ ವಿಶೇಷ ಪೂಜೆ ನಡೆಯುತ್ತವೆ. ಇದೇ ವೇಳೆ ಭಕ್ತಾದಿಗಳು ಕೊಂಡ ಹಾಯುವ ಮತ್ತು ದೇವಿಗೆ ಎಡೆ ಇಡುವ ಮೂಲಕ ಹಬ್ಬ ಆಚರಣೆ ಮಾಡಿ ಸಂಭ್ರಮಿಸುತ್ತಾರೆ.

ಶ್ರೀರಾಮ ಸಕ್ಕರೆ ಕಾರ್ಖಾನೆಯಲ್ಲಿ ಜುಲೈನಿಂದ ಕಬ್ಬು ಅರೆಯುವಿಕೆ



ಚುಂಚನಕಟ್ಟೆ, ಮೇ 25– ಇಲ್ಲಿನ ಶ್ರೀರಾಮ ಸಕ್ಕರೆ ಕಾರ್ಖಾನೆಯಲ್ಲಿ ಜುಲೈನಿಂದ ಕಬ್ಬು ಅರೆಯುವ ಕಾರ್ಯ ಆರಂಭಿಸಲಾಗುವುದು ಎಂದು ನಿರಾಣಿ ಶುಗರ್ಸ್ ಮಾಲೀಕರೂ ಆದ ಮಾಜಿ ಸಚಿವ ಮುರುಗೇಶ್ ನಿರಾಣಿ ತಿಳಿಸಿದರು.

ಸಾಲಿಗ್ರಾಮ ತಾಲೂಕಿನ ಚುಂಚನಕಟ್ಟೆ ಶ್ರೀರಾಮ ಸಕ್ಕರೆ ಕಾರ್ಖಾನೆಗೆ ಭೇಟಿ ನೀಡಿ ಪರಿಶೀಲಿಸಿ ಮಾತನಾಡಿದ ಅವರು, ಕಳೆದ ಬಾರಿ ನಾಟಿ ಮಾಡಿದ ಬೆಳೆ ಕಟಾವಿಗೆ ಬರಲು ತಡವಾಗಿದೆ. ಬೆಳವಣಿಗೆ ಹಂತ ಪರಿಶೀಲಿಸಿರುವ ಅಧಿಕಾರಿಗಳು ಕಬ್ಬು ಅರೆಯುವಿಕೆಯನ್ನು ಒಂದು ತಿಂಗಳು ತಡವಾಗಿ ಆರಂಭಿಸಬೇಕು ಎಂದು ವರದಿ ನೀಡಿದ್ದಾರೆ. ಕಾರ್ಖಾನೆ ಯಂತ್ರೋಪಕರಣಗಳ ಬದಲಾವಣೆ ಕಾರ್ಯ ಚುರುಕಾಗಿ ನಡೆಯುತ್ತಿದ್ದು, ಎಲ್ಲಾ ಒಂದು ತಿಂಗಳೊಳಗಾಗಿ ಮುಗಿದು ಕಾರ್ಯಾರಂಭವಾಗಲಿದೆ ಎಂದರು.

ಪ್ರಸ್ತುತ ಕಾರ್ಖಾನೆ ವ್ಯಾಪ್ತಿಯಲ್ಲಿ 2 ಲಕ್ಷ ಟನ್ ಕಬ್ಬು ಬೆಳೆದಿದೆ. ಆದರೆ ಈ ಬಾರಿ ಕಾರ್ಖಾನೆ 3 ಲಕ್ಷ ಟನ್ ಕಬ್ಬು ಅರೆಯುವ ಗುರಿ ಹೊಂದಿದ್ದು, ಅದನ್ನು ಪೂರೈಸಲಾಗುವುದು. ಕಾರ್ಖಾನೆ ಅನುಭವಿ ಕಾರ್ಮಿಕರನ್ನು ಹೊಂದಿದ್ದು, ಇನ್ನೆರಡು ವರ್ಷಗಳಲ್ಲಿ ಕಬ್ಬು ಅರೆಯುವ ಸಾಮರ್ಥ್ಯವನ್ನು 5 ಲಕ್ಷ ಟನ್‌ಗೆ ಏರಿಸಲಾಗುವುದು. ಕಾರ್ಖಾನೆ ವ್ಯಾಪ್ತಿಯಲ್ಲಿಯೇ ಕಬ್ಬು ಬೆಳೆಯುವ ಪ್ರದೇಶ ಹೆಚ್ಚಿಸಿ, ರೈತರು ಭರವಸೆಯಿಂದ ಕಬ್ಬು ಬೆಳೆಯುವ ಸಾಮರ್ಥ್ಯ ತುಂಬಲು ಪ್ರಯತ್ನಿಸಲಾಗುವುದು ಎಂದರು. ಈ ವೇಳೆ ಕಾರ್ಖಾನೆ ಉಸ್ತುವಾರಿ ಶಿವಾನಂದ ಯರಗಟ್ಟಿ, ವಿಭಾಗೀಯ ಮುಖ್ಯಸ್ಥ ಮಧುಕೃಪ, ಮಾನವ ಸಂಪನ್ಮೂಲ ಅಧಿಕಾರಿ ಅಮಿತ್, ಉತ್ಪಾದನಾ ವಿಭಾಗದ ಗುಪ್ತೆ, ತಾಂತ್ರಿಕ ಅಧಿಕಾರಿ ವಟ್ನಾಳ್, ಕೃಷಿ ಅಧಿಕಾರಿ ರವಿಚಂದ್ರ, ಪಾಂಡವಪುರ ಶ್ರೀನಿವಾಸ್ ಸೇರಿದಂತೆ ಮತ್ತಿತರರಿದ್ದರು.

ಮೈಸೂರು ಬೇಸಿಗೆ ಕಾಲದ ರೇಸುಗಳು

1ನೇ ದಿನ, ಶುಕ್ರವಾರ 26-5-2023

ಇಂದಿನ ರೇಸಿಗೆ ನಮ್ಮ ಆಯ್ಕೆ

(ಮೊದಲನೇ ರೇಸ್ ಮಧ್ಯಾಹ್ನ 2.00 ಗಂಟೆಗೆ)

I. ಬಲಮುರಿ ಪ್ಲೇಟ್–1400 ಮೀ. ರೇಟೆಡ್ 00 ರಿಂದ 25. ಮ.2.00ಕ್ಕೆ
1. ರೂಮರ್ ಲೇಡಿ 2. ಸೂಪರ್ ಸೆಕ್ಸಿ 3. ನಾಟಿ ಸೋ ನಾಟಿ

II. ಪ್ರಿನ್ಸ್ ರೀಜೆಂಟ್ ಪ್ಲೇಟ್–1200 ಮೀ. ರೇಟೆಡ್ 20 ರಿಂದ 45. ಮ.2.30ಕ್ಕೆ
1. ವಿಂಡ್ ಪವರ್ 2. ಒಕರೆ 3. ಡಿ ಕರ್ಣ

III. ಒಬ್ಲಿ ಗಾಡೋ ಪ್ಲೇಟ್– 1400 ಮೀ. ರೇಟೆಡ್ 20 ರಿಂದ 45. ಮ.3.00ಕ್ಕೆ
1 ಸರ್ವೋತ್ತಮ್ 2. ಡಿ ರೋಮನ್ ರೀಜನ್ 3. ಕೊಯೋಟ್ ಗರ್ಲ್

IV. ಕೋಲಾರ್ ಪ್ಲೇಟ್– 1400 ಮೀ. ರೇಟೆಡ್ 40 ರಿಂದ 65. ಮ.3.30ಕ್ಕೆ
1. ಹಿರೋಯಿಸಮ್ 2. ಅಕ್ವೀಲಾ ಡಿ ಒರೋ 3. ಅಮೇಝೋನಿಯ

V. ಸ್ಟಾರ್ ಸುಪ್ರೀಂ ಟ್ರೋಫಿ–1400 ಮೀ. ರೇಟೆಡ್ 60 ಮತ್ತು ಮೇಲ್ಪರ್ಗ. ಮ.4.00ಕ್ಕೆ
1. ಪ್ರಿನ್ಸ್ ಕಾರ್ಪೋರೇಟ್ 2. ಫನ್ ಅಂಡ್ ಲಾಫರ್ 3. ಕೋಸ್ಟಲ್ ಕ್ರೂಸಿ

VI. ರೆಡ್ ಸ್ಪ್ಯಾಟಿ ಪ್ಲೇಟ್–1200 ಮೀ. ರೇಟೆಡ್ 40 ರಿಂದ 65. ಸಂ.4.30ಕ್ಕೆ
1. ಸ್ಪಾರ್ಕಲ್ಸ್ 2. ಟ್ರೇಸ್ ಬುಲೆಟ್ 3. ಮೂನ್ ಲೈಟ್ ಕ್ವೀನ್

VII. ಒಬ್ಲಿ ಗಾಡೋ ಪ್ಲೇಟ್– 1400 ಮೀ. ರೇಟೆಡ್ 20 ರಿಂದ 45. ಸಂ.5.00ಕ್ಕೆ
1. ಸಮಯ್ ಬಲವಾನ್ 2. ಫ್ಲಾಮಿಂಗೊ ಡ್ಯಾನ್ಸರ್ 3. ಸ್ಟೆಪ್ ಆಫ್ ಗರ್ಲ್

ದಿನದ ಅತ್ಯುತ್ತಮ........	: ಪ್ರಿನ್ಸ್ ಕಾರ್ಪೋರೇಟ್
ಡಬ್ಬಲ್........	: ಸರ್ವೋತ್ತಮ್, ಹಿರೋಯಿಸಮ್
ಜಾಕ್‌ಪಾಟ್........	: 2, 3, 4, 5 ಮತ್ತು 6
I ಟ್ರಿಬಲ್........	: 2, 3 ಮತ್ತು 4
II ಟ್ರಿಬಲ್........	: 5, 6 ಮತ್ತು 7
ಎಕ್ಸ್‌ಆಕ್ಟ್........	: 1 ರಿಂದ 7

ಟಿಪ್‌ಸ್ಟರ್ ಪಿಜೆಸಿ

ಸಂಪುಟ ರಚನೆ ಬಳಿಕ ಗ್ಯಾರಂಟಿ ಯೋಜನೆಗಳು ಜಾರಿ



ಭೇರ್ಯ, ಮೇ 25– ಸಚಿವ ಸಂಪುಟ ರಚನೆ ಬಳಿಕ ಕಾಂಗ್ರೆಸ್ ಪಕ್ಷ ಚುನಾವಣಾ ಪೂರ್ವದಲ್ಲಿ ನೀಡಿದ್ದ ಭರವಸೆಯಂತೆ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲಿದೆ ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ಇಲ್ಲಿಗೆ ಸಮೀಪದ ಮುಂಜನಹಳ್ಳಿ ಗ್ರಾಪಂ ವ್ಯಾಪ್ತಿಯ ಅರಕೆರೆ ಗ್ರಾಮದ ಬಸವೇಶ್ವರ ದೇವಾಲಯದ ಬಳಿ ಮತದಾರರಿಗೆ ಕೃತಜ್ಞತೆ ಸಮರ್ಪಣಾ

ಕೃತಜ್ಞತೆ ಸಮರ್ಪಣಾ ಯಾತ್ರೆಗೆ ಚಾಲನೆ ನೀಡಿದ ಶಾಸಕ ಡಿ.ರವಿಶಂಕರ್

ಯಾತ್ರೆಗೆ ಚಾಲನೆ ನೀಡಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮೊದಲ ಸಚಿವ ಸಂಪುಟ ಸಭೆಯಲ್ಲಿ ಐದು ಗ್ಯಾರಂಟಿ ಯೋಜನೆಗಳಿಗೆ ತಾತ್ವಿಕ ಒಪ್ಪಿಗೆ ನೀಡಿದ್ದಾರೆ ಎಂದರು.

ಜೂ.1 ರಿಂದ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಜೊತೆಗೆ ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ ಘೋಷಿಸಿರುವ ಭರವಸೆಗಳನ್ನು ಈಡೇರಿಸಲು ಬದ್ಧವಾಗಿದೆ ಎಂದ ಅವರು ಜನಾಶೀರ್ವಾದ ಯಾತ್ರೆ ವೇಳೆ ಗ್ರಾಮಗಳಲ್ಲಿರುವ ಸಮಸ್ಯೆಗಳು ನನ್ನ ಅರಿವಿಗೆ ಬಂದಿದೆ. ಕಾರ್ಯಕರ್ತರು ಮತ್ತು ಮುಖಂಡರು ತಮ್ಮ ಗ್ರಾಮಗಳಲ್ಲಿ ಆಗಬೇಕಾದ ಕೆಲಸಗಳ ಬಗ್ಗೆ ಮಾಹಿತಿ ನೀಡಿದರೆ ಆದ್ಯತೆ ಮೇರೆಗೆ ಅನುದಾನ ಬಿಡುಗಡೆ ಮಾಡಿಸಲಾಗುತ್ತದೆ ಎಂದರು.

ಸಾಲಿಗ್ರಾಮ, ಕೆ.ಆರ್.ನಗರ ಅವಳಿ ತಾಲೂಕುಗಳ ಸರ್ವ ಜನಾಂಗದವರು ಮತ ನೀಡಿದ ಕಾರಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾದ ನಾನು 1,04,502 ಮತ ಪಡೆಯಲು ಸಾಧ್ಯವಾಯಿತು. ರಾಷ್ಟ್ರಕವಿ ಕುವೆಂಪು ಹೇಳಿರುವಂತೆ ಸರ್ವ ಜನಾಂಗದ ಶಾಂತಿಯ ತೋಟ ನಿರ್ಮಿಸಲು ಕ್ಷೇತ್ರದ ಶಾಸಕನಾಗಿ ಪ್ರಯತ್ನ ಮಾಡುತ್ತೇನೆ ಎಂದರು.

ಮತದಾರರಿಗೆ ಕೃತಜ್ಞತೆ ಸಲ್ಲಿಸುವ ಯಾತ್ರೆ ಮುಗಿದ ನಂತರ ದಿನಕ್ಕೆ 3 ಗಂಟೆಗಳ ಕಾಲ ಅಧಿಕಾರಿಗಳೊಂದಿಗೆ ಗ್ರಾಮಗಳಿಗೆ ತೆರಳಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ ಪರಿಹಾರ ಕಲ್ಪಿಸಲಾಗುವುದು ಎಂದು ಮಾಹಿತಿ ನೀಡಿದರು.

ಈ ವೇಳೆ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಸಿ.ಪಿ.ರಮೇಶ್, ತಾಪಂ ಮಾಜಿ ಅಧ್ಯಕ್ಷ ಹೆಚ್.ಟಿ.ಮಂಜುನಾಥ್, ಮಾಜಿ ಸದಸ್ಯ ಎ.ಟಿ.ಗೋವಿಂದೇಗೌಡ, ಪುರಸಭೆ ಮಾಜಿ ಅಧ್ಯಕ್ಷರಾದ ನರಸಿಂಹರಾಜು, ಗೀತಾ, ಮುಖಂಡರಾದ ನಾಗೇಂದ್ರ, ವೈ.ಎಸ್.ಜಯಂತ್, ಶ್ರೀನಿವಾಸ್, ರಾಮಾಚಾರಿ, ಪ್ರಕಾಶ್, ಪುಟ್ಟಚಾರಿ, ಕುಮಾರ್, ಮಹೇಶ್, ಬಿ.ಹೆಚ್.ಮಹದೇವ್, ಬಿ.ಟಿ. ಮೋಹನ್, ಮಂಜಪ್ಪ, ನಾಗರಾಜ ನಾಯಕ, ಸುಧಾಕರ್, ಜೆ.ಶಿವಣ್ಣ, ಅನಂತು, ಗುರುಶಂಕರ್, ನಾಗೇಂದ್ರ ನಾಯಕ, ಚಂದ್ರಹಾಸ, ಮಹದೇವ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಎಂ.ಎಸ್. ಮಹದೇವ್, ಉದಯಶಂಕರ್, ವಕ್ತಾರ ಸೈಯದ್ ಜಾಬೀರ್, ಮಾಧ್ಯಮ ಸಂಚಾಲಕ ನವೀನ್ ಮತ್ತಿತರರಿದ್ದರು.

ಸಾಲಬಾಧೆ: ರೈತ ಆತ್ಮಹತ್ಯೆ

ಹುಣಸೂರು, ಮೇ 25– ಸಾಲಬಾಧೆ ತಾಳಲಾರದೇ ರೈತರೊಬ್ಬರು ವಿಷಸೇವಿಸಿ ಆತ್ಮಹತ್ಯೆ ಮಾಡಿರುವ ಘಟನೆ ತಾಲೂಕಿನ ಬಿಳಿಕೆರೆ ಹೋಬಳಿ ಶ್ಯಾನುಭೋಗನಹಳ್ಳಿ ಗ್ರಾಮದಲ್ಲಿ ನಡೆದಿದೆ. ಗ್ರಾಮದ ನಿವಾಸಿ ಸುರೇಶ್(58) ಆತ್ಮಹತ್ಯೆ ಮಾಡಿಕೊಂಡವರು. ಈತ ತಮ್ಮ 1.5 ಎಕರೆ ಜಮೀನಿನಲ್ಲಿ ವ್ಯವಸಾಯ ಮಾಡಲು ಹುಣಸೂರಿನ ಐಓಬಿ ಬ್ಯಾಂಕ್‌ನಲ್ಲಿ ಲಕ್ಷ ರೂ. ವಿಎಸ್‌ಎಸ್‌ಎನ್ ಬ್ಯಾಂಕ್‌ನಲ್ಲಿ ಲಕ್ಷ ರೂ ಸೇರಿದಂತೆ ಮತ್ತಿತರ ಹಣಕಾಸು ಸಂಸ್ಥೆ ಹಾಗೂ ಕೈ ಸಾಲ 5 ಲಕ್ಷ ಸೇರಿದಂತೆ ಒಟ್ಟು 7 ಲಕ್ಷ ರೂ. ಸಾಲ ಮಾಡಿಕೊಂಡಿದ್ದರು. ಆದರೆ ಮಾಡಿದ ಸಾಲ ತೀರಿಸಲು ಸಾಧ್ಯವಾಗದ ಹಿನ್ನೆಲೆಯಲ್ಲಿ ತೀವ್ರ ಮನನೊಂದಿದ್ದ ಸುರೇಶ್ ಮನೆಯಲ್ಲಿ ಯಾರೂ ಇಲ್ಲದ ವೇಳೆ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಬಿಳಿಕೆರೆ ಠಾಣೆ ಪೊಲೀಸರು ಪರಿಶೀಲನೆ ನಡೆಸಿ, ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಬಿ.ಬಿ. ಪುಟ್ಟಮಲ್ಲಪ್ಪ ನಿಧನ



ಬೆಟ್ಟದಪುರ, ಮೇ 25– ಮೂಲತಃ ಗ್ರಾಮದ ನಿವಾಸಿ ಬೆಂಗಳೂರಿನಲ್ಲಿ ವಾಸವಿದ್ದ ಬಿ.ಬಿ.ಪುಟ್ಟಮಲ್ಲಪ್ಪ(85) ಗುರುವಾರ ನಿಧನರಾದರು.

ಮೃತರು ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಬೆಂಗಳೂರಿನಲ್ಲಿ ಶುಕ್ರವಾರ ಮಧ್ಯಾಹ್ನ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಅಡುಗೆಯವರು ಬೇಕಾಗಿದ್ದಾರೆ

ಮೂರು ಜನರಿರುವ ಕುಟುಂಬವೊಂದಕ್ಕೆ ಮಹಿಳಾ ಅಡುಗೆಯವರು ಬೇಕಾಗಿದ್ದಾರೆ ಆಸಕ್ತರು ಕೂಡಲೇ ಸಂಪರ್ಕಿಸಿ:

ಮೊ: **9448061101**

ಬೇಕಾಗಿದ್ದಾರೆ

ಥೆರಪಿಸ್ಟ್

ಮೈಸೂರಿನ ಪ್ರಸಿದ್ಧ ಆಯುರ್ವೇದ ಕೇಂದ್ರಕ್ಕೆ ಥೆರಪಿಸ್ಟ್ ಬೇಕಾಗಿದ್ದಾರೆ

ಕರೆ ಮಾಡಿ **73539 94139**
93421 04203



S.V.E.I. SCHOOL

1ನೇ ಮೈನ್, 4ನೇ ಹಂತ ವಿಜಯನಗರ (ಬೆಳವಾಡಿ), ಮೈಸೂರು - 570018

ಡ್ರೈವರ್ ಬೇಕಾಗಿದ್ದಾರೆ

HPV ಲೈಸೆನ್ಸ್ ಹಾಗೂ 5 years Experience ಹೊಂದಿರಬೇಕು.

ಉತ್ತಮ ಸ್ಥಿತಿ ಹಾಗೂ ಶೋರೂಮ್ ನಿರ್ವಹಣೆ ಹೊಂದಿರುವ 56+2 ಆಸನಗಳುಳ್ಳ Eicher (20.15) ಶಾಲಾ ವಾಹನಗಳು ಮಾರಾಟಕ್ಕಿದೆ.

7899571827/ 9845814048

ಸಂಪರ್ಕಿಸುವ ಸಮಯ :
(ಬೆಳಗ್ಗೆ 10.00 ರಿಂದ ಸಂಜೆ 4.00 ಗಂಟೆ)

HOTEL FOR SALE

RUNNING MULTI CUISINE RESTAURANT FOR SALE

Near Bogadi
Ring Road Signal,
Harsha Bar Road, Mysore

86604 19249

ರತ್ನ ಪ್ಯಾರಾ ಮೆಡಿಕಲ್ ಕಾಲೇಜ್

ನ್ಯೂ ಸಯ್ಯಾಜಿ ರಾವ್ ರಸ್ತೆ, ಕೆ.ಆರ್. ಆಸ್ಪತ್ರೆ ಹತ್ತಿರ, ಮೈಸೂರು

ಪ್ರವೇಶ ತೆರೆದಿದೆ

ಡಿಪ್ಲೋಮಾ ಇನ್ ಮೆಡಿಕಲ್ ಲ್ಯಾಬ್ ಟೆಕ್ನಾಲಜಿ (DMLT)
SSLC / PUC Pass / Fail
ಬ್ಯಾಚುಲರ್ಸ್ ಇನ್ ಮೆಡಿಕಲ್ ಲ್ಯಾಬ್ ಟೆಕ್ನಾಲಜಿ (B.Voc)

9886654463

SITE FOR SALE

- PAMA ENCLAVE
- 40 X 60 (EAST)
- BANNUR ROAD
- NEAR VIDYA VIKAS COLLEGE & VASANTHNAGAR

CONTACT
9019028896

WANTED

B.A / M.A, B.Ed
(Hindi Teacher for High School)
Diploma / B.Sc Computer
(Computer Teacher)

WALK- IN INTERVIEW

Between 11-00 AM to 1-00PM
on Tuesday 30th May 2023

SRI GNANESHWARI VIDYASAMSTHE

P-1, 8th Main, Hebbal 1st stage, Mysuru-16

PH: 0821-2302072

Email:
srignaneshwari.vidyasamsthe@gmail.com

100% NEEM PLYWOOD & FACTORY FINISHED DOORS

@ DEPOT RATES

NeemBOND PLATINUM
10 YEARS WARRANTY

9901291267, 9845426862

BUILDING CONSTRUCTION

Starts from
1695 Rs./sq.ft.

Call: 76767-68868

MUDA APPROVED SITES FOR SALE

20x30, 30x40 & 30x50

Behind Chamundi Hill, Adjacent to Ring Road, Lalithadripura & near JSS 2nd Stage, Mysuru

9980270076, 9900466811

ಶ್ರೀ ವಿನಾಯಕ ಎಜುಕೇಷನ್ ಟ್ರಸ್ಟ್ (ರಿ)

ಕೆ. ಬೆಟ್ಟಹಳ್ಳಿ ಅಂಚೆ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ

ಶಿಕ್ಷಕರು ಬೇಕಾಗಿದ್ದಾರೆ

ವಿನಾಯಕ ಆಂಗ್ಲ ಮಾಧ್ಯಮ ಶಾಲೆಗೆ ಆಂಗ್ಲ ಮಾಧ್ಯಮದಲ್ಲಿ ಬೋಧಿಸಲು ಅನುಭವವುಳ್ಳ ಶಿಕ್ಷಕರು ಬೇಕಾಗಿದ್ದಾರೆ.

ಕ್ರ. ಸಂ.	ಹುದ್ದೆಗಳ ವಿವರ	ವಿದ್ಯಾರ್ಹತೆ	ಹುದ್ದೆಗಳ ಸಂಖ್ಯೆ
01	ಕನ್ನಡ	ಬಿಎ ಬಿಇಡಿ/ಡಿಇಡಿ	01
02	ಇಂಗ್ಲೀಷ್	ಬಿಎ ಬಿಇಡಿ/ಡಿಇಡಿ	01
03	ಹಿಂದಿ	ಬಿಎ ಬಿಇಡಿ/ಡಿಇಡಿ	01
04	ಸಮಾಜ ವಿಜ್ಞಾನ	ಬಿಎ ಬಿಇಡಿ/ಡಿಇಡಿ	01
05	ವಿಜ್ಞಾನ	ಬಿ.ಎಸ್ಸಿ ಬಿಇಡಿ/ಡಿಇಡಿ	01
06	ಗಣಿತ	ಬಿ.ಎಸ್ಸಿ ಬಿಇಡಿ/ಡಿಇಡಿ	01
07	ದೈಹಿಕ ಶಿಕ್ಷಣ	ಬಿಎ ಬಿಪಿಇಡಿ	01

ಮೇಲಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸ ಬಯಸುವವರು ಒಂದು ವಾರದೊಳಗೆ vinayakahps91@gmail.com ಇ-ಮೇಲ್ ಐಡಿಗೆ ತಮ್ಮ ಸ್ವವಿವರವನ್ನು ಸಲ್ಲಿಸುವುದು ಹಾಗೂ ಒಂದು ಪ್ರತಿಯನ್ನು ಕಛೇರಿಗೆ ಸಲ್ಲಿಸುವುದು.
ಸಂಪರ್ಕಿಸಬೇಕಾದ ಮೊಬೈಲ್ ನಂ. **9164127036, 9480072785**

ಸಹಿ/– ಕಾರ್ಯದರ್ಶಿ
ವಿನಾಯಕ ಎಜುಕೇಷನ್ ಟ್ರಸ್ಟ್ (ರಿ) ಕೆ.ಬೆಟ್ಟಹಳ್ಳಿ, ಪಾಂಡವಪುರ ತಾ.

ದಾಸ್‌ತಿ ಪ್ಯಾರಾ ಮೆಡಿಕಲ್ ಕಾಲೇಜ್

#ಎಲ್.46/4.ಎಂ.ಜಿ.ಟವರ್ಸ್, 2ನೇ ಮಹಡಿ, (ಕೆ.ಹೆಚ್.ಬಿ. ಕಾಂಪ್ಲೆಕ್ಸ್ ಹಿಂಭಾಗ) 1ನೇ ಹಂತ, ಕುವೆಂಪುನಗರ, ಮೈಸೂರು – 570023
(ಕರ್ನಾಟಕ ಸರ್ಕಾರದಿಂದ ಮಾನ್ಯತೆ ಪಡೆದಿದೆ)

ಈ ಸಂಸ್ಥೆಯಲ್ಲಿ ಪರಿಣಿತ ವೈದ್ಯರು ಮತ್ತು ತಾಂತ್ರಿಕ ತಜ್ಞರಿಂದ ಬೋಧನೆ.

" ಪ್ರವೇಶ ತೆರೆದಿದೆ, ತ್ವರೆಮಾಡಿ "

1. ಡಿಪ್ಲೋಮಾ – ಇನ್–ಮೆಡಿಕಲ್ ಹೆಲ್ತ್ ಇನ್ಸ್‌ಪೆಕ್ಟರ್ (DMHI)
(ನಗರಸಭೆ/ನಗರಪಾಲಿಕೆ/ಸರ್ಕಾರಿ ಉದ್ಯೋಗಕ್ಕೆ ಅವಕಾಶ)
2. ಡಿಪ್ಲೋಮಾ–ಇನ್–ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ (DMLT)
(ಸರ್ಕಾರಿ/ಖಾಸಗಿ ಆಸ್ಪತ್ರೆಗಳಲ್ಲಿ ಉದ್ಯೋಗಕ್ಕೆ ಅವಕಾಶ)

ಎಸ್.ಎಸ್.ಎಲ್.ಸಿ ಪಾಸಾದವರಿಗೆ 3 ವರ್ಷ ಮತ್ತು
ಪಿಯುಸಿ(ಪಿ.ಸಿ.ಎಂ.ಬಿ) ಪಾಸಾದವರಿಗೆ 2 ವರ್ಷ ಅವಧಿ

ಸಂಪರ್ಕಿಸಿ: **8904403905**, **9731507047**

ಶ್ರೀ ವಿನಾಯಕ ಎಜುಕೇಷನ್ ಟ್ರಸ್ಟ್ (ರಿ)

ಕೆ. ಬೆಟ್ಟಹಳ್ಳಿ ಅಂಚೆ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ,

ವಿನಾಯಕ ಪದವಿ ಪೂರ್ವ ಕಾಲೇಜು

ಬೇಕಾಗಿದ್ದಾರೆ

ಕ್ರ. ಸಂ.	ಹುದ್ದೆಗಳ ವಿವರ	ವಿದ್ಯಾರ್ಹತೆ	ಹುದ್ದೆಗಳ ಸಂಖ್ಯೆ
01	ಕನ್ನಡ	ಎಂಎ ಬಿಇಡಿ	01
02	ಇಂಗ್ಲೀಷ್	ಎಂಎ ಬಿಇಡಿ	01
03	ಭೌತಶಾಸ್ತ್ರ	ಎಂಎಸ್ಸಿ ಬಿಇಡಿ	01
04	ರಸಾಯನ ಶಾಸ್ತ್ರ	ಎಂಎಸ್ಸಿ ಬಿಇಡಿ	01
05	ಜೀವ ಶಾಸ್ತ್ರ	ಎಂಎಸ್ಸಿ ಬಿಇಡಿ	01
06	ಗಣಿತ	ಎಂಎಸ್ಸಿ ಬಿಇಡಿ	01
07	ಗಣಕ ವಿಜ್ಞಾನ	ಎಂಎಸ್ಸಿ ಬಿಇಡಿ	01
08	ಲೆಕ್ಕಶಾಸ್ತ್ರ	ಎಂಕಾಂ ಬಿಇಡಿ	01
09	ವಾಣಿಜ್ಯಶಾಸ್ತ್ರ	ಎಂಕಾಂ ಬಿಇಡಿ	01
10	ಅರ್ಥಶಾಸ್ತ್ರ	ಎಂಎ ಬಿಇಡಿ	01

ವಾಹನ ಚಾಲಕರು ಬೇಕಾಗಿದ್ದಾರೆ

ಮೇಲಿನ ಶಾಲೆಗೆ ವಾಹನ ಚಾಲಕರು ತಮ್ಮ ಭಾರಿ ವಾಹನ ಚಾಲನಾ ಪರವಾನಗಿ ಮತ್ತು ವಿಳಾಸ ಇತರೆ ದಾಖಲೆಗಳೊಂದಿಗೆ ಕಛೇರಿಗೆ ಅರ್ಜಿ ಸಲ್ಲಿಸುವುದು. ಹುದ್ದೆಗಳ ಸಂಖ್ಯೆ –06

ಮೇಲಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸ ಬಯಸುವವರು ಒಂದು ವಾರದೊಳಗೆ vinayakahps91@gmail.com ಇ-ಮೇಲ್ ಐಡಿಗೆ ತಮ್ಮ ಸ್ವವಿವರವನ್ನು ಸಲ್ಲಿಸುವುದು ಹಾಗೂ ಒಂದು ಪ್ರತಿಯನ್ನು ಕಛೇರಿಗೆ ಸಲ್ಲಿಸುವುದು.
ಸಂಪರ್ಕಿಸಬೇಕಾದ ಮೊಬೈಲ್ ನಂ. **9164127036, 9480072785**

ಸಹಿ/– ಕಾರ್ಯದರ್ಶಿ
ವಿನಾಯಕ ಎಜುಕೇಷನ್ ಟ್ರಸ್ಟ್ (ರಿ) ಕೆ.ಬೆಟ್ಟಹಳ್ಳಿ, ಪಾಂಡವಪುರ ತಾ.









STG Pre-University College

Chinakurali,Pandavapura Taluk,Mandya district - 571455

FACULTY RECRUITMENT 2023

Looking for young and talented individuals capable of teaching **PU+KCET/JEE/ NEET** as faculty in science stream **(PCMB / PCMC)**

POSITIONS	SUBJECT	NO OF POSTS	QUALIFICATION & EXPERIENCE
LECTURER	Mathematics	5	M.Sc, B.Ed candidate with 5+ years of PU Teaching experience.
	Biology	1	
	English	2	
	kannada	1	
	Computer science	1	
JEE / NEET FACULTY	Physics	1	B Tech / M Tech from NITs, IITs candidate with 5+ years of PU Teaching experience with 5 years of KCET/JEE/NEET teaching.
	Chemistry	1	
warden/ Junior Lecturer	MALE	6	M.Sc in Physics, chemistry, Botany, Zoology
	FEMALE	2	
Patrolling Officer	MALE	1	Ex-Army person to supervise the hostel/college discipline

Wardens and Patrolling officer shall be provided food & accomadation at the campus

SALARY BEST IN THE INDUSTRY

Kindly email your resume to info@stgpublicschool.com with a passport size photograph within 5 days of publishing this advertisement

FOR QUERIES CALL - 9108481695